ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಡಿಸೆಂಬರ್ 12 ಮಂಗಳವಾರ 2023

ಸಂಪುಟ: 44 | ಸಂಚಿಕೆ: 235 | ಪುಟಗಳು: 12

₹4


ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ: Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ/ಜಾಹೀರಾತಿಗಾಗಿ– ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

ಜಮ್ಮು-ಕಾಶ್ಮೀರಕ್ಕೆ ವಿಶೇಷ ಸ್ಥಾನಮಾನದ 370ನೇ ವಿಧಿ ರದ್ದು

ಕೇಂದ್ರದ ನಿರ್ಧಾರ ಎತ್ತಿಹಿಡಿದ ಸುಪ್ರೀಂಕೋರ್ಟ್

●ಮುಖ್ಯ ನ್ಯಾಯಮೂರ್ತಿ ಡಿ.ವೈ.ಚಂದ್ರಚೂಡ್ ನೇತೃತ್ವದ ಐವರು ನ್ಯಾಯಾಧೀಶರ ಪೀಠ ಮಹತ್ವದ ತೀರ್ಪು ●ಸೆ.30ರೊಳಗೆ ಜಮ್ಮು–ಕಾಶ್ಮೀರ ಚುನಾವಣೆ ನಡೆಸಲು ಆದೇಶ





ನ್ಯಾಯಮೂರ್ತಿ ಎಸ್.ಕೆ.ಕೌಲ್ | ನ್ಯಾಯಮೂರ್ತಿ ಬಿ.ಆರ್.ಗವಾಯ್ | ಮುಖ್ಯ ನ್ಯಾಯಮೂರ್ತಿ ಡಿ.ವೈ.ಚಂದ್ರಚೂಡ್ | ನ್ಯಾಯಮೂರ್ತಿ ಸಂಜೀವ್ ಖನ್ನಾ | ನ್ಯಾಯಮೂರ್ತಿ ಸೂರ್ಯಕಾಂತ್

ನವದೆಹಲಿ, ಡಿ.11– ಜಮ್ಮು ಮತ್ತು ಕಾಶ್ಮೀರಕ್ಕೆ 370ನೇ ವಿಧಿಯಿಂದ ನೀಡಲಾದ ವಿಶೇಷ ಸ್ಥಾನಮಾನವನ್ನು ರದ್ದುಗೊಳಿಸುವ ಮತ್ತು ಹಿಂದಿನ ರಾಜ್ಯವನ್ನು ಎರಡು ಕೇಂದ್ರಾಡಳಿತ ಪ್ರದೇಶಗಳಾಗಿ (UTs) ವಿಭಜಿಸುವ ಕೇಂದ್ರದ ಆಗಸ್ಟ್ 5, 2019ರ ನಿರ್ಧಾರವನ್ನು ಸುಪ್ರೀಂ ಕೋರ್ಟ್ ಸೋಮವಾರ ಎತ್ತಿಹಿಡಿದಿದೆ.

ಭಾರತದ ಮುಖ್ಯ ನ್ಯಾಯಮೂರ್ತಿ ಡಿ.ವೈ. ಚಂದ್ರಚೂಡ್ ನೇತೃತ್ವದ ಸುಪ್ರೀಂ ಕೋರ್ಟ್‌ನ ಐವರು ನ್ಯಾಯಾಧೀಶರ ಪೀಠವು ಸೋಮವಾರ ತೀರ್ಪು ಪ್ರಕಟಿಸಿತು. 370ನೇ ವಿಧಿಯನ್ನು ರದ್ದುಗೊಳಿಸುವ ನಿರ್ಧಾರ 'ದುರುದ್ದೇಶಪೂರಿತ' ಎಂಬುದನ್ನು ಒಪ್ಪಲು ಸಾಧ್ಯವಿಲ್ಲ ಎಂದು ನ್ಯಾಯಮೂರ್ತಿಗಳು ತಿಳಿಸಿದರು.

ಹಿಂದಿನ ಜಮ್ಮು ಮತ್ತು ಕಾಶ್ಮೀರ ರಾಜ್ಯಕ್ಕೆ ವಿಶೇಷ ಸ್ಥಾನಮಾನವನ್ನು ನೀಡಿದ್ದ 370 ನೇ ವಿಧಿಯ ನಿಬಂಧನೆಗಳನ್ನು ಕೇಂದ್ರವು ರದ್ದುಗೊಳಿಸಿರುವುದನ್ನು ಪ್ರಶ್ನಿಸಿ ಸಲ್ಲಿಕೆಯಾಗಿದ್ದ 23 ಅರ್ಜಿಗಳ ಸಂಬಂಧ ಐವರು ನ್ಯಾಯಾಧೀಶರನ್ನೊಳಗೊಂಡ ಸುಪ್ರೀಂಕೋರ್ಟ್ ಸಾಂವಿಧಾನಿಕ ಪೀಠವು ತನ್ನ ಮಹತ್ವದ ತೀರ್ಪನ್ನು ಸೋಮವಾರ ಪ್ರಕಟಿಸಿತು. ರಾಷ್ಟ್ರಪತಿ ಆಳ್ವಿಕೆ ಸಮಯದಲ್ಲಿ ಕೇಂದ್ರದಿಂದ ಯಾವುದೇ ಬದಲಾಯಿಸಲಾಗದ ಕ್ರಮ ಕೈಗೊಳ್ಳಲು ಸಾಧ್ಯವಿಲ್ಲ ಎಂಬ ಅರ್ಜಿದಾರರ ವಾದವನ್ನೂ ಈ ಸಂದರ್ಭದಲ್ಲಿ ಸಿಜೆಐ ತಿರಸ್ಕರಿಸಿದರು. 'ರಾಷ್ಟ್ರಪತಿ ಆಳ್ವಿಕೆ ಸಂದರ್ಭದಲ್ಲಿ ರಾಜ್ಯದ ಪರವಾಗಿ ಕೇಂದ್ರವು ತೆಗೆದುಕೊಳ್ಳುವ ಪ್ರತಿಯೊಂದು ನಿರ್ಧಾರವನ್ನು ಪ್ರಶ್ನಿಸಲು ಸಾಧ್ಯವಿಲ್ಲ' ಎಂದು ಸಿಜೆಐ ಚಂದ್ರಚೂಡ್ ತಮ್ಮ ತೀರ್ಪಿನಲ್ಲಿ ಸ್ಪಷ್ಟಪಡಿಸಿದ್ದಾರೆ.


370ನೇ ವಿಧಿಯು ತಾತ್ಕಾಲಿಕ ನಿಬಂಧನೆಯಾಗಿದೆ ಎಂದು ಬಣ್ಣಿಸಿದರು. 'ಜಮ್ಮು ಮತ್ತು ಕಾಶ್ಮೀರ ಸಂವಿಧಾನ ಸಭೆಯ ವಿಸರ್ಜನೆಯ ನಂತರವೂ ಆರ್ಟಿಕಲ್ 370 ಅಸ್ತಿತ್ವದಲ್ಲಿಲ್ಲ ಎಂದು ಅಧಿಸೂಚನೆಯನ್ನು ಹೊರಡಿಸಲು ಆರ್ಟಿಕಲ್ 370 (3)ರ ಅಡಿಯಲ್ಲಿ ರಾಷ್ಟ್ರಪತಿಗಳ ಅಧಿಕಾರವು ಅಸ್ತಿತ್ವದಲ್ಲಿದೆ' ಎಂದು ಮುಖ್ಯ ನ್ಯಾಯಮೂರ್ತಿಗಳು ಹೇಳಿದರು, ಸಂವಿಧಾನ ಸಭೆಯ ಶಿಫಾರಸು ರಾಷ್ಟ್ರಪತಿಗಳ ಮೇಲೆ ಬದ್ಧವಾಗಿಲ್ಲ. ಜಮ್ಮು ಮತ್ತು ಕಾಶ್ಮೀರ ಸಂವಿಧಾನ ಸಭೆಯು ತಾತ್ಕಾಲಿಕ ಸಂಸ್ಥೆಯಾಗಿದೆ ಎಂದು ಅವರು ಹೇಳಿದರು.

ಕೇಂದ್ರಾಡಳಿತ ಪ್ರದೇಶವಾದ ಜಮ್ಮು ಮತ್ತು ಕಾಶ್ಮೀರವನ್ನು ರಾಜ್ಯವನ್ನಾಗಿ ಆದಷ್ಟು ಬೇಗ ಮರುಸ್ಥಾಪನೆ ಮಾಡಬೇಕೆಂದು ಸೂಚಿಸಿದರು. ಜಮ್ಮು–ಕಾಶ್ಮೀರ ರಾಜ್ಯವು ಸಾರ್ವಭೌಮತ್ವದ ಯಾವುದೇ ಅಂಶವನ್ನು ಉಳಿಸಿಕೊಂಡಿಲ್ಲ. ಇದು ಆಂತರಿಕ ಸಾರ್ವಭೌಮತ್ವವನ್ನು ಹೊಂದಿಲ್ಲ. '370ನೇ ವಿಧಿ ಅಸಮ್ಮತ ಸಂಯುಕ್ತ ವ್ಯವಸ್ಥೆಯ ಲಕ್ಷಣವಾಗಿದೆ ಮತ್ತು ಸಾರ್ವಭೌಮತ್ವವಲ್ಲ'.

ಸೆಪ್ಟೆಂಬರ್ 30, 2024ರೊಳಗೆ ಚುನಾವಣೆ ನಡೆಸಿ: ಆದಷ್ಟು ಬೇಗ ಚುನಾವಣೆ ನಡೆಸುವಂತೆ ಭಾರತದ ಚುನಾವಣಾ ಆಯೋಗಕ್ಕೆ ಇದೇ ಸಂದರ್ಭದಲ್ಲಿ ಸಿಜೆಐ ಆದೇಶಿಸಿದರು. ಸೆಪ್ಟೆಂಬರ್ 30ರೊಳಗೆ ಜಮ್ಮು–ಕಾಶ್ಮೀರ ಅಸೆಂಬ್ಲಿಗೆ ಚುನಾವಣೆಗಳನ್ನು ನಡೆಸಲು ಭಾರತದ ಚುನಾವಣಾ ಆಯೋಗ ಕ್ರಮ ಕೈಗೊಳ್ಳಬೇಕು. ರಾಜ್ಯತ್ವದ ಮರುಸ್ಥಾಪನೆಯು ಸಾಧ್ಯವಾದಷ್ಟು ಬೇಗ ನಡೆಯಬೇಕು ಎಂದರು.

ಸಿಜೆಐ ಚಂದ್ರಚೂಡ್ ಆರಂಭದಲ್ಲಿ ಈ ವಿಷಯದ ಬಗ್ಗೆ ಐದು ನ್ಯಾಯಾಧೀಶರ ಪೀಠದಿಂದ ಮೂರು ತೀರ್ಪುಗಳಿವೆ ಎಂದು ಹೇಳಿದರು. ಪೀಠದ ಇತರ ಸದಸ್ಯರು ನ್ಯಾಯಮೂರ್ತಿಗಳು–ಸಂಜಯ್ ಕಿಶನ್ ಕೌಲ್, ಸಂಜೀವ್ ಖನ್ನಾ, ಬಿ.ಆರ್. ಗವಾಯಿ ಮತ್ತು ಸೂರ್ಯ ಕಾಂತ್.

ಸುಪ್ರೀಂ ಕೋರ್ಟ್ ತೀರ್ಪು ಭರವಸೆಯ ಬೆಳಕು: ಪ್ರಧಾನಿ ಮೋದಿ



ನವದೆಹಲಿ, ಡಿ.11– ಆರ್ಟಿಕಲ್ 370ನೇ ವಿಧಿಯ ರದ್ದತಿಯನ್ನು ಎತ್ತಿಹಿಡಿದ ಸುಪ್ರೀಂ ಕೋರ್ಟ್ ತೀರ್ಪು ಐತಿಹಾಸಿಕ ಎಂದು ಪ್ರಧಾನಿ ನರೇಂದ್ರ ಮೋದಿ ಬಣ್ಣಿಸಿದ್ದಾರೆ.

'370 ನೇ ವಿಧಿಯ ರದ್ದತಿ ಕುರಿತು ಇಂದಿನ ಸುಪ್ರೀಂ ಕೋರ್ಟ್ ತೀರ್ಪು ಐತಿಹಾಸಿಕವಾಗಿದೆ. ಆಗಸ್ಟ್ 5, 2019ರಂದು ಭಾರತದ ಸಂಸತ್ತು ತೆಗೆದುಕೊಂಡ ನಿರ್ಧಾರವನ್ನು ಸಾಂವಿಧಾನಿಕವಾಗಿ ಎತ್ತಿಹಿಡಿಯುತ್ತದೆ; ಇದು ಜಮ್ಮು–ಕಾಶ್ಮೀರ ಮತ್ತು ಲಡಾಖ್‌ನ ನಮ್ಮ ಸಹೋದರಿಯರು ಮತ್ತು ಸಹೋದರರಿಗೆ ಭರವಸೆ, ಪ್ರಗತಿ ಮತ್ತು ಏಕತೆಯ ಪ್ರತಿಧ್ವನಿಸುವ ಘೋಷಣೆಯಾಗಿದೆ' ಎಂದು ಹೇಳಿದ್ದಾರೆ. 'ನ್ಯಾಯಾಲಯವು ತನ್ನ ಆಳವಾದ ಬುದ್ಧಿವಂತಿಕೆ ಪ್ರದರ್ಶಿಸಿ ತೀರ್ಪು ನೀಡಿದ್ದು, ಭಾರತೀಯರಾದ ನಾವು ಎಲ್ಲಕ್ಕಿಂತ ಹೆಚ್ಚಾಗಿ ಪ್ರೀತಿಸುವ ಮತ್ತು ಏಕತೆಯ ಸಾರವನ್ನು ಬಲಪಡಿಸುವ ರೀತಿ ತೀರ್ಪು ನೀಡಿದೆ. ಜಮ್ಮು, ಕಾಶ್ಮೀರ ಮತ್ತು ಲಡಾಖ್‌ನ ಜನರಿಗೆ ನಿಮ್ಮ ಕನಸುಗಳನ್ನು ಈಡೇರಿಸುವ ನಮ್ಮ ಬದ್ಧತೆ ಎಂದು ನಾನು ಭರವಸೆ ನೀಡಲು ಬಯಸುತ್ತೇನೆ' ಎಂದು ಹೇಳಿದ್ದಾರೆ. ಪ್ರಗತಿಯ ಫಲಗಳು ನಿಮ್ಮನ್ನು ತಲುಪುವುದು ಮಾತ್ರವಲ್ಲದೆ 370ನೇ ವಿಧಿಯ ಕಾರಣದಿಂದಾಗಿ ಅನುಭವಿಸಿದ ನಮ್ಮ ಸಮಾಜದ ಅತ್ಯಂತ ದುರ್ಬಲ ಮತ್ತು ಅಂಚಿನಲ್ಲಿರುವ ವರ್ಗಗಳಿಗೆ ಅದರ ಪ್ರಯೋಜನಗಳನ್ನು ವಿಸ್ತರಿಸುವುದನ್ನು ನಾವು ಈ ಸಂದರ್ಭದಲ್ಲಿ ನೀಡುವುದಾಗಿ ▶ 9ನೇ ಪುಟಕ್ಕೆ

ದೂರದೃಷ್ಟಿಯ ನಿರ್ಧಾರ: ಅಮಿತ್ ಶಾ

ತೀರ್ಪಿನ ಪ್ರಮುಖ ಅಂಶಗಳು

- ಲಡಾಖ್ ಕೇಂದ್ರಾಡಳಿತ ಪ್ರದೇಶವನ್ನು ಜಮ್ಮು ಮತ್ತು ಕಾಶ್ಮೀರದಿಂದ ಬೇರ್ಪಡಿಸುವ ನಿರ್ಧಾರದ ಸಿಂಧುತ್ವವನ್ನು ನಾವು ಎತ್ತಿಹಿಡಿಯುತ್ತೇವೆ
- ಸಂವಿಧಾನದ 370 ನೇ ವಿಧಿಯನ್ನು ರದ್ದುಗೊಳಿಸಿ ಸಾಂವಿಧಾನಿಕ ಆದೇಶವನ್ನು ಹೊರಡಿಸಲು ನಾವು ರಾಷ್ಟ್ರಪತಿಗಳ ಅಧಿಕಾರವನ್ನು ಚಲಾಯಿಸುತ್ತೇವೆ
- ಜಮ್ಮು–ಕಾಶ್ಮೀರ ದೇಶದ ಇತರ ರಾಜ್ಯಗಳಿಗಿಂತ ಭಿನ್ನವಾದ ಆಂತರಿಕ ಸಾರ್ವಭೌಮತ್ವವನ್ನು ಹೊಂದಿಲ್ಲ.
- ಜಮ್ಮು–ಕಾಶ್ಮೀರ ಭಾರತದ ಅವಿಭಾಜ್ಯ ಅಂಗವಾಗಿದೆ. ಇದು ಸಂವಿಧಾನದ 1 ಮತ್ತು 370 ನೇ ವಿಧಿಗಳಿಂದ ಸ್ಪಷ್ಟವಾಗಿದೆ
- ಒಕ್ಕೂಟದ ಒಪ್ಪಿಗೆಯನ್ನು ಕೋರಿ ನಾವು ರಾಷ್ಟ್ರಪತಿಗಳನ್ನು ಹೊಂದಿದ್ದೇವೆ ಮತ್ತು ರಾಜ್ಯವು ಮಾನ್ಯವಾಗಿಲ್ಲ, ಭಾರತೀಯ ಸಂವಿಧಾನದ ಎಲ್ಲಾ ನಿಬಂಧನೆಗಳನ್ನು ಜಮ್ಮು–ಕಾಶ್ಮೀರಕ್ಕೆ ಸಹ ಅನ್ವಯಿಸಬಹುದು
- ಜಮ್ಮು–ಕಾಶ್ಮೀರದ ಸಂವಿಧಾನ ಸಭೆಯು ಅಸ್ತಿತ್ವದಲ್ಲಿಲ್ಲದ ನಂತರ, 370ನೇ ವಿಧಿಯನ್ನು ಪರಿಚಯಿಸಿದ ವಿಶೇಷ ಷರತ್ತು ಅಸ್ತಿತ್ವದಲ್ಲಿಲ್ಲ
- ಜೆ–ಕೆ ಸಂವಿಧಾನ ಸಭೆಯ ಶಿಫಾರಸು ಭಾರತದ ರಾಷ್ಟ್ರಪತಿಗಳಿಗೆ ಬದ್ಧವಾಗಿಲ್ಲ: ಸಿಜೆಐ
- 16 ದಿನಗಳ ವಿಚಾರಣೆಯ ನಂತರ ಸುಪ್ರೀಂ ಕೋರ್ಟ್ ಸೆಪ್ಟೆಂಬರ್ 5ರಂದು ತನ್ನ ತೀರ್ಪನ್ನು ಕಾಯ್ದಿರಿಸಿತ್ತು.

ಮಧ್ಯಪ್ರದೇಶಕ್ಕೆ ಒಬಿಸಿಯ ಡಾ.ಮೋಹನ್ ಯಾದವ್ ಮುಖ್ಯಮಂತ್ರಿ




ಭೋಪಾಲ್, ಡಿ.11– ಮಧ್ಯಪ್ರದೇಶ ಮುಖ್ಯಮಂತ್ರಿಯನ್ನಾಗಿ ಡಾ. ಮೋಹನ್ ಯಾದವ್ ಅವರನ್ನು ಆಯ್ಕೆ ಮಾಡಲಾಗಿದೆ. 58ರ ಹರೆಯದ ಡಾ. ಮೋಹನ್ ಯಾದವ್ ಅವರು ಉಜ್ಜಯಿನಿ ದಕ್ಷಿಣ ಕ್ಷೇತ್ರದಿಂದ ವಿಧಾನಸಭೆಯ ಸದಸ್ಯರಾಗಿದ್ದಾರೆ.2013ರಿಂದ ಮೂರು ಬಾರಿ ಶಾಸಕರಾಗಿ ಆಯ್ಕೆಯಾಗಿದ್ದಾರೆ.2020ರಿಂದ ಶಿವರಾಜ್ ಸಿಂಗ್ ಚೌಹಾಣ್ ನೇತೃತ್ವದ ಸರಕಾರದಲ್ಲಿ ಕ್ಯಾಬಿನೆಟ್ ಮಂತ್ರಿಯಾಗಿ ಕೆಲಸ ಮಾಡಿದ ಅನುಭವ ಹೊಂದಿದ್ದಾರೆ.

ನೂತನವಾಗಿ ಆಯ್ಕೆಯಾದ ಬಿಜೆಪಿ ಶಾಸಕರು ಸೋಮವಾರ ಸಭೆ ನಡೆಸಿ ಶಾಸಕಾಂಗ ಪಕ್ಷದ ನಾಯಕನನ್ನು ಆಯ್ಕೆ ಮಾಡಿದರು. ನ.17ರಂದು ನಡೆದ ಚುನಾವಣೆಯಲ್ಲಿ 230 ಸದಸ್ಯ ಬಲದ ವಿಧಾನ ಸಭೆಯಲ್ಲಿ ಬಿಜೆಪಿ 163 ಸ್ಥಾನಗಳನ್ನು ಗೆಲ್ಲುವ ಮೂಲಕ ಮಧ್ಯಪ್ರದೇಶದಲ್ಲಿ ಅಧಿಕಾರವನ್ನು ಉಳಿಸಿಕೊಂಡಿತ್ತು. ಕಾಂಗ್ರೆಸ್ 66 ಸ್ಥಾನಗಳೊಂದಿಗೆ ಎರಡನೇ ಸ್ಥಾನದಲ್ಲಿದೆ. ಚುನಾವಣೆಗೂ ಮುನ್ನ ಬಿಜೆಪಿ ಯಾರನ್ನೂ ಮುಖ್ಯಮಂತ್ರಿಯ ಅಭ್ಯರ್ಥಿಯನ್ನಾಗಿ ಬಿಂಬಿಸಿರಲಿಲ್ಲ. ಶಿವರಾಜ್ ಸಿಂಗ್ ಚೌಹಾಣ್ ಅವರು ಮುಖ್ಯಮಂತ್ರಿಯಾಗಿದ್ದರೂ ಇಡೀ ಚುನಾವಣೆಯ ಪ್ರಚಾರವು ಪ್ರಧಾನಿ ಮೋದಿಯವರ ನಾಯಕತ್ವದ ಮೇಲೆ ಆಧಾರಿತವಾಗಿತ್ತು.

ನಮ್ಮದೇ ನಿಜವಾದ ಜೆಡಿಎಸ್; ಉಚ್ಚಾಟಿತ ನಾಯಕರ ಘೋಷಣೆ


ರಾಷ್ಟ್ರೀಯ ಅಧ್ಯಕ್ಷ ಹೆಚ್.ಡಿ.ದೇವೇಗೌಡರ ಉಚ್ಚಾಟನೆ; ಸಿ.ಕೆ.ನಾಣು ಆ ಸ್ಥಾನಕ್ಕೆ ನಿಯೋಜನೆ



ಬೆಂಗಳೂರು, ಡಿ.11(ಕೆಎಂಶಿ)– ಉಚ್ಚಾಟನೆಗೊಂಡ ನಾಯಕರು ಇಂದು ಪರ್ಯಾಯ ಸಭೆ ನಡೆಸಿ 'ಜೆಡಿಎಸ್' ನಮ್ಮದೇ ಎಂದಿದ್ದಾರೆ.

ಜೆಡಿಎಸ್ ರಾಜ್ಯಾಧ್ಯಕ್ಷ ಸ್ಥಾನದಿಂದ ಉಚ್ಚಾಟನೆಗೊಂಡಿರುವ ಸಿ.ಎಂ. ಇಬ್ರಾಹಿಂ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಈ ನಿರ್ಣಯ ಕೈಗೊಂಡಿರುವುದಲ್ಲದೆ, ರಾಷ್ಟ್ರೀಯ ಅಧ್ಯಕ್ಷ ಎಚ್.ಡಿ. ದೇವೇಗೌಡರನ್ನು ಉಚ್ಚಾಟಿಸಿ, ಆ ಹುದ್ದೆಗೆ ಸಿ.ಕೆ. ನಾಣು ಅವರನ್ನು ನೇಮಿಸಲಾಗಿದೆ.

ಸಭೆಯಲ್ಲಿ ಇತ್ತೀಚಿನ ಬೆಳವಣಿಗೆಗಳ ಬಗ್ಗೆ ಚರ್ಚೆ ನಡೆಸಿ, ಒಂದು ಸಾಲಿನ ನಿರ್ಣಯ ಅಂಗೀಕರಿಸಿ, ತೆಲಂಗಾಣ ಜೆಡಿಎಸ್ ಅಧ್ಯಕ್ಷ ಸೂರಿ ಮಾಡಿದ ಘೋಷಣೆಗೆ ಸಭೆ ಸರ್ವಸಮ್ಮತಿ ವ್ಯಕ್ತಪಡಿಸಿತು. ಕಳೆದ ಶನಿವಾರ ವಷ್ಟೇ ದೇವೇಗೌಡರು ತುರ್ತು ರಾಷ್ಟ್ರೀಯ ಕಾರ್ಯಕಾರಿಣಿ ಸಭೆ ಕರೆದು, ನಾಣು ಮತ್ತು ಇಬ್ರಾಹಿಂ ಅವರನ್ನು ಉಚ್ಚಾಟನೆ ಮಾಡಿದ್ದರು.



ಇದಕ್ಕೆ ಬಗ್ಗದ ಉಚ್ಚಾಟಿತ ನಾಯಕರು ತಮ್ಮದೇ ನಿಜವಾದ ಜೆಡಿಎಸ್ ಎಂದು ಹೇಳಿಕೊಂಡು, ಹೊಸ ಪದಾಧಿಕಾರಿಗಳನ್ನೂ ನೇಮಕ ಮಾಡಿಕೊಂಡಿದ್ದಾರೆ.

ದೇವೇಗೌಡರು ಪಕ್ಷವನ್ನು ಕೋಮುವಾದಿ ಬಿಜೆಪಿ ನೇತೃತ್ವದ ಎನ್‌ಡಿಎ ಕೂಟದೊಂದಿಗೆ ಮೈತ್ರಿ ಮಾಡಿಕೊಂಡಿರುವುದಕ್ಕೆ ಈ ನಿರ್ಣಯ ಎಂದಿದ್ದಾರೆ. ಘೋಷಿತ ಅಧ್ಯಕ್ಷ ನಾಣು, ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಜಾತ್ಯತೀತ ಜನತಾ ದಳ ಸಿದ್ಧಾಂತದ ಮೇಲೆ ನಿಂತಿರುವ ಪಕ್ಷ. ಅದು ಮಹಾತ್ಮ ಗಾಂಧೀಜಿಯವರ ತತ್ವಗಳನ್ನು ಪಾಲಿಸುವ ಪಕ್ಷ. ಆದರೆ, ಗಾಂಧೀಜಿಯನ್ನು ವಿರೋಧಿಸುವವರೊಂದಿಗೆ ಜೆಡಿಎಸ್ ಸಖ್ಯ ಬೆಳೆಸಿರುವುದು ಸರಿಯೇ? ಗೌಡರು ಪಕ್ಷದಲ್ಲಿನ ಇತರರ ಅಭಿಪ್ರಾಯಕ್ಕೆ ಮನ್ನಣೆ ಕೊಡದೆ ಬಿಜೆಪಿಯೊಂದಿಗೆ ಹೆಜ್ಜೆ ಹಾಕಿದ್ದಾರೆ. ಇದನ್ನು ಪ್ರಶ್ನಿಸುವ ಅಧಿಕಾರ ನಾನೂ ಸೇರಿದಂತೆ ಇತರರಿಗೂ ಇದೆ. ಚುನಾವಣೆ ಗೆಲ್ಲುವ ಏಕೈಕ ಉದ್ದೇಶದಿಂದ ▶ 9ನೇ ಪುಟಕ್ಕೆ

ಪಡಿತರ ಅಕ್ರಮ ತಡೆಗೆ ಎಲ್ಲಾ ಅಗತ್ಯ ಕ್ರಮ



ಬೆಳಗಾವಿ, ಡಿ.11(ಕೆಎಂಶಿ)–ಸಾರ್ವಜನಿಕ ವಿತರಣಾ ಪದ್ಧತಿಯಲ್ಲಿ ವಿತರಿಸುವ ಪಡಿತರ ಅಕ್ರಮ ತಡೆಗೆ ಸಂಪೂರ್ಣ ಪ್ರಯತ್ನ ಮಾಡಲಾಗುತ್ತಿದೆ ಎಂದು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನ ಶಾಸ್ತ್ರ ಇಲಾಖೆ ಸಚಿವ ಕೆ.ಹೆಚ್. ಮುನಿಯಪ್ಪ ವಿಧಾನಪರಿಷತ್‌ನಲ್ಲಿಂದು ತಿಳಿಸಿದರು.

ಪ್ರಶ್ನೋತ್ತರ ವೇಳೆಯಲ್ಲಿ ಭಾರತಿ ಶೆಟ್ಟಿ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಸಾರ್ವಜನಿಕ ವಿತರಣಾ ಪದ್ಧತಿಯಡಿ ವಿತರಿಸುವ ಪಡಿತರ ಅಕ್ರಮ ಸಾಗಾಣಿಕೆ ಕಂಡು ಬಂದಲ್ಲಿ ಕೂಡಲೇ ದಾಳಿ ನಡೆಸಿ, ಅಗತ್ಯ ವಸ್ತುಗಳ ಕಾಯ್ದೆ 1955 ರಡಿ ಪ್ರಕರಣ ದಾಖಲಿಸಿ, ಅಕ್ರಮ ಪಡಿತರ ದಾಸ್ತಾನು ಮುಟ್ಟುಗೋಲು ಹಾಕಿಕೊಂಡು, ಜಿಲ್ಲಾಧಿಕಾರಿಗಳ ▶ 9ನೇ ಪುಟಕ್ಕೆ

ಕಾಡಾನೆ ಹಾವಳಿ ತಡೆಗೆ ರೈಲ್ವೆ ಕಂಬಿಯ ಬ್ಯಾರಿಕೇಡ್ ನಿರ್ಮಾಣ

●ವಿಧಾನಪರಿಷತ್‌ನಲ್ಲಿ ಅರಣ್ಯ ಸಚಿವ ಈಶ್ವರ ಖಂಡ್ರೆ ಮಾಹಿತಿ ●ಉದ್ದೇಶಿತ 640 ಕಿಲೋ ಮೀಟರ್‌ನಲ್ಲಿ ಈಗಾಗಲೇ 312 ಕಿಮೀ ಈಗಾಗಲೇ ಅಳವಡಿಸಲಾಗಿದೆ ●ಅರಣ್ಯದಲ್ಲಿ ಆನೆಗಳಿಗೆ ಅಗತ್ಯ ಮೇವಿನ ಹುಲ್ಲು ಬೆಳವಣಿಗೆಗೆ ಲಂಟಾನ, ಯುಪಟೋರಿಯಂ ಕಳೆಗಿಡ ಅಡ್ಡಿ ●ಇವುಗಳ ತೆರವಿಗೆ ಅವಕಾಶ; ಆನೆಗಳಿಂದ ಪ್ರಾಣಹಾನಿ ತಡೆಗೆ ಎಲ್ಲಾ ಎಚ್ಚರಿಕಾ ಕ್ರಮ



ಬೆಳಗಾವಿ, ಡಿ.11(ಕೆಎಂಶಿ)–ಆನೆ ಮತ್ತು ಮಾನವ ಸಂಘರ್ಷ ತಪ್ಪಿಸಲು 200 ಕೋಟಿ ರೂ ವೆಚ್ಚದಲ್ಲಿ ರೈಲ್ವೆ ಕಂಬಿಯ ಬ್ಯಾರಿಕೇಡ್ ನಿರ್ಮಾಣ ಕಾರ್ಯ ಕೈಗೊಳ್ಳಲಾಗುತ್ತಿದೆ ಎಂದು ಅರಣ್ಯ ಸಚಿವ ಈಶ್ವರ ಖಂಡ್ರೆ ವಿಧಾನ ಪರಿಷತ್‌ನಲ್ಲಿಂದು ತಿಳಿಸಿದರು.

ಪ್ರಶ್ನೋತ್ತರ ವೇಳೆಯಲ್ಲಿ ಕೆ.ಹರೀಶ್ ಕುಮಾರ್ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಆನೆಗಳು ಜನವಸತಿ ಪ್ರದೇಶಕ್ಕೆ ಬರುವುದನ್ನು ತಡೆಯಲು 640 ಕಿಮೀ ರೈಲ್ವೆ ಬ್ಯಾರಿಕೇಡ್ ಅಳವಡಿಸುವ ಕಾರ್ಯ ಪ್ರಗತಿಯಲ್ಲಿದ್ದು, ಈಗಾಗಲೇ 312 ಕಿಮೀ ಬ್ಯಾರಿಕೇಡ್ ಅಳವಡಿಸಲಾಗಿದ್ದು, ಒಟ್ಟು 200 ಕೋಟಿ ರೂ. ವೆಚ್ಚದಲ್ಲಿ ರೈಲ್ವೆ ಕಂಬಿಗಳ ಬ್ಯಾರಿಕೇಡ್ ಅಳವಡಿಸುವ ಕಾರ್ಯ ನಡೆಯುತ್ತಿದೆ. ಆನೆ ಹಾವಳಿಯಿಂದ ಬೆಳೆ ಹಾನಿಗೊಳಗಾದ ರೈತರಿಗೆ ಶೇ.90 ರಷ್ಟು ಪ್ರಕರಣಗಳಲ್ಲಿ ಪರಿಹಾರ ವಿತರಿಸಲಾಗಿದ್ದು, ಮಾನವ ಜೀವಹಾನಿಗೆ ಹೆಚ್ಚಿನ ಪರಿಹಾರ ನೀಡಲಾಗುವುದು ಎಂದರು.

ರಾಜ್ಯದ ದಟ್ಟ ಅರಣ್ಯ ವ್ಯಾಪ್ತಿಯಲ್ಲಿ ಹೊಂದಿಕೊಂಡಿರುವ ರಾಷ್ಟ್ರೀಯ ಹೆದ್ದಾರಿಗಳ ಇಕ್ಕೆಲಗಳಲ್ಲಿ ಕಾಡಾನೆ ಹಾವಳಿಯನ್ನು ತಡೆಯುವ ನಿಟ್ಟಿನಲ್ಲಿ ಹೆದ್ದಾರಿ ಪಕ್ಕದಲ್ಲಿ ಆನೆಗಳ ಇರುವಿಕೆಯ ಬಗ್ಗೆ ಎಚ್ಚರಿಕಾ ಫಲಕಗಳನ್ನು ಅಳವಡಿಸಲಾಗಿದೆ. ಕಾಡಾನೆ ಹಾವಳಿ ಹೆಚ್ಚಳವಾಗಿರುವ ಹಾಸನ, ಕೊಡಗು, ಚಿಕ್ಕಮಗಳೂರು, ಮೈಸೂರು ಮತ್ತು ಕೊಡಗು, ಚಾಮರಾಜನಗರ, ರಾಮನಗರ ಹಾಗೂ ಬೆಂಗಳೂರು ಜಿಲ್ಲೆಗಳಲ್ಲಿ ಪ್ರತಿ ಜಿಲ್ಲೆಗೊಂದರಂತೆ ಅಧಿಕಾರಿ/ಸಿಬ್ಬಂದಿಗಳನ್ನು ಒಳಗೊಂಡ ಆನೆ ಕಾರ್ಯಪಡೆಯನ್ನು ರಚಿಸಲಾಗಿದೆ.

ವನ್ಯಪ್ರಾಣಿಗಳಿಗಾಗಿ ಅರಣ್ಯ ಪ್ರದೇಶಗಳ ಒಳಗೆ ನೀರಿನ ಲಭ್ಯತೆ ಹೆಚ್ಚಿಸಲು ರಕ್ಷಿತಾರಣ್ಯಗಳಲ್ಲಿ ಕೆರೆಗಳ ನಿರ್ಮಾಣ ಹಾಗೂ ಪುನಶ್ಚೇತನಗೊಳಿಸಿ ವನ್ಯಪ್ರಾಣಿಗಳ ಆವಾಸ ಸ್ಥಾನವನ್ನು ಅಭಿವೃದ್ಧಿಗೊಳಿಸಲಾಗುತ್ತಿದೆ. ಇದರಿಂದ ಕಾಡಾನೆ ಹಾಗೂ ಇತರ ವನ್ಯಪ್ರಾಣಿಗಳು ಕಾಡಿನಿಂದ ಹೊರಗೆ ಬಾರದಂತೆ ತಡೆಯಲಾಗುತ್ತಿದೆ. ಅರಣ್ಯ ಪ್ರದೇಶಗಳಲ್ಲಿ ಹುಲ್ಲುಗಾವಲು ಸಂರಕ್ಷಣೆ ಹಾಗೂ ಅಭಿವೃದ್ಧಿಗೊಳಿಸಲು ಹೆಚ್ಚಿನ ಅರಣ್ಯ ಪ್ರದೇಶಗಳಲ್ಲಿ ದಟ್ಟವಾಗಿ ಬೆಳೆದ ಲಂಟಾನ ಮತ್ತು ಯುಪಟೋರಿಯಂ ಕಳೆಗಳಿಂದಾಗಿ ಹುಲ್ಲಿನ ಬೆಳವಣಿಗೆಗೆ ತೀವ್ರ ಅಡಚಣೆಯಾಗಿ ಅರಣ್ಯದಲ್ಲಿ ಹುಲ್ಲಿನ ಲಭ್ಯತೆ ಗಣನೀಯವಾಗಿ ಕಡಿಮೆಯಾಗಿರುವುದರಿಂದ ಹುಲ್ಲು ಬೆಳೆಯುವ ಪ್ರದೇಶಗಳಲ್ಲಿ ಬೆಳೆದಿರುವ ಲಂಟಾನ ಮತ್ತು ಯುಪಟೋರಿಯಂ ಕಳೆಗಳನ್ನು ▶ 9ನೇ ಪುಟಕ್ಕೆ



ಜ್ಞಾನವ್ಯಾಪಿ ಸರ್ವೆ ವರದಿ ಸಲ್ಲಿಕೆಗೆ ಮತ್ತೊಂದು ವಾರ ಕಾಲಾವಕಾಶ

ವಾರಣಾಸಿ,ಡಿ.11–ಜ್ಞಾನವ್ಯಾಪಿ ಸರ್ವೆ ವರದಿ ಸಲ್ಲಿಸಲು ಭಾರತೀಯ ಪುರಾತತ್ವ ಇಲಾಖೆಗೆ ವಾರಣಾಸಿ ಕೋರ್ಟ್ ಮತ್ತೊಂದು ವಾರ ಕಾಲಾವಕಾಶ ನೀಡಿದೆ.

ಹಿಂದೂ ಪರ ವಕೀಲ ಮದನ್ ಮೋಹನ್ ಯಾದವ್, ಪ್ರಕರಣದ ವಿಚಾರಣೆ ವೇಳೆ ಜಿಲ್ಲಾ ನ್ಯಾಯಾಧೀಶ ಎ.ಕೆ. ವಿಶ್ವೇಶ್ ಅವರು ಸಮೀಕ್ಷೆ ಪೂರ್ಣಗೊಳಿಸಿ ವರದಿ ಸಲ್ಲಿಸಲು ಎಎಸ್‌ಐಗೆ ಹೆಚ್ಚುವರಿ ವಾರದ ಕಾಲಾವಕಾಶ ನೀಡಿದೆ ಎಂದರು.


ಈ ಪ್ರಕರಣದ ಮುಂದಿನ ವಿಚಾರಣೆಯನ್ನು ಡಿ.18ಕ್ಕೆ ನ್ಯಾಯಾಲಯ ನಿಗದಿಪಡಿಸಿದೆ. ಹಿಂದೂ ಪರ ವಾದ ಮಂಡಿಸಿದ ವಕೀಲ ಮದನ್ ಮೋಹನ್ ಯಾದವ್, ಎಎಸ್‌ಐ ತನ್ನ ಅರ್ಜಿಯಲ್ಲಿ ತನ್ನ ಅಧಿಕೃತ ಪುರಾತತ್ವಶಾಸ್ತ್ರಜ್ಞ, ಅವಿನಾಶ್ ಮೊಹಾಂತಿ ಅವರ ಅನಾರೋಗ್ಯ ರಕ್ತದೊತ್ತಡದ ಹಠಾತ್ ಹೆಚ್ಚಳ ಮತ್ತು ಸೋಮವಾರ ವರದಿಯನ್ನು ಸಲ್ಲಿಸಲು ನ್ಯಾಯಾಲಯಕ್ಕೆ ಹಾಜರಾಗಲು ಅಸಮರ್ಥತೆಯನ್ನು ಉಲ್ಲೇಖಿಸಿದೆ ಎಂದು ಹೇಳಿದರು.

ಸಮೀಕ್ಷಾ ವರದಿ ಸಲ್ಲಿಸಲು ಎಎಸ್‌ಐಗೆ ನ್ಯಾಯಾಲಯ ಕಾಲಾವಕಾಶ ನೀಡಿದ್ದು ಇದು 6ನೇ ಬಾರಿ. ಈ ಹಿಂದೆ ನ್ಯಾಯಾಲಯವು ಎಎಸ್‌ಐಗೆ ಸೆಪ್ಟೆಂಬರ್ 6, ಅಕ್ಟೋಬರ್ 5, ನವೆಂಬರ್ 2, ನವೆಂಬರ್ 17 ಮತ್ತು ನವೆಂಬರ್ 30ರಂದು ಕಾಲಾವಕಾಶ ನೀಡಿತ್ತು. ಕಳೆದ ಬಾರಿ ನವೆಂಬರ್ 30ರಂದು ಜಿಲ್ಲಾ ನ್ಯಾಯಾಲಯವು ಡಿಸೆಂಬರ್ 11ರೊಳಗೆ ಜ್ಞಾನವಾಪಿ ಸಂಕೀರ್ಣದ ಸಮೀಕ್ಷಾ ವರದಿ ಸಲ್ಲಿಸುವಂತೆ ಎಎಸ್‌ಐಗೆ ಸೂಚಿಸಿತ್ತು. ವಿವಿಧ ತಜ್ಞರು ನೀಡಿದ ಮಾಹಿತಿಯನ್ನು ಸಮ್ಮಿಲನಗೊಳಿಸಲು ಹೆಚ್ಚಿನ ಸಮಯ ಬೇಕಾಗುತ್ತದೆ ಎಂದು ಎಎಸ್‌ಐ ತನ್ನ ಅರ್ಜಿಯಲ್ಲಿ ಹೇಳಿತ್ತು.

ಪುರಾತತ್ವಶಾಸ್ತ್ರಜ್ಞರು, ಎಪಿಗ್ರಾಫಿಸ್ಟ್‌ಗಳು, ಸರ್ವೇಯರ್‌ಗಳು, ಜಿಯೋಫಿಸಿಕ್ಸ್ ತಜ್ಞರು ಮುಂತಾದವರು ಸಂಗ್ರಹಿಸಿದ ವಿವಿಧ ರೀತಿಯ ಡೇಟಾವನ್ನು ಸಂಗ್ರಹಿಸಲು ಅದರ ತಜ್ಞರು ಕೆಲಸ ಮಾಡುತ್ತಿದ್ದಾರೆ ಎಂದು ಅರ್ಜಿಯಲ್ಲಿ ತಿಳಿಸಿದೆ.

ಎಎಸ್‌ಐ ನವೆಂಬರ್ 2ರಂದು ನ್ಯಾಯಾಲಯಕ್ಕೆ ಸಮೀಕ್ಷೆಯನ್ನು 'ಮುಗಿಸಿದ್ದೇವೆ' ಆದರೆ ಸಮೀಕ್ಷೆ ಕಾರ್ಯದಲ್ಲಿ ಬಳಸಲಾದ ಸಲಕರಣೆಗಳ ವಿವರಗಳೊಂದಿಗೆ ವರದಿಯನ್ನು ಸಂಗ್ರಹಿಸಲು ಇನ್ನೂ ಸ್ವಲ್ಪ ಸಮಯ ತೆಗೆದುಕೊಳ್ಳಬಹುದು ಎಂದರು. ಇದಾದ ನಂತರ, ದಾಖಲೆಗಳನ್ನು ಸಲ್ಲಿಸಲು ನ್ಯಾಯಾಲಯವು ನ.17ರವರೆಗೆ ಹೆಚ್ಚುವರಿ ಸಮಯ ನೀಡಿತ್ತು. ಆದರೆ ತಾಂತ್ರಿಕ ವರದಿ ಲಭ್ಯವಾಗದ ಕಾರಣ ಎಎಸ್‌ಐ ವಕೀಲರು ಮತ್ತೆ 15 ದಿನ ಕಾಲಾವಕಾಶ ಕೋರಿದ್ದರು.

ಇಂದು ವಿವಿಧೆಡೆ ವಿದ್ಯುತ್ ವ್ಯತ್ಯಯ



ಮೈಸೂರು,ಡಿ.11–ವಿ.ವಿ.ಮೊಹಲ್ಲಾ ವಿಭಾಗ ವ್ಯಾಪ್ತಿಯಲ್ಲಿ ನಿರ್ವಹಣಾ ಕಾಮಗಾರಿ ನಿಮಿತ್ತ ಡಿ.12ರಂದು ಬೆಳಗ್ಗೆ 10 ಗಂಟೆಯಿಂದ ಸಂಜೆ 6ರವರೆಗೆ ಸರಸ್ವತಿಪುರಂ 1ರಿಂದ 5ನೇ ಮೇನ್, ನ್ಯೂಕಾಂತರಾಜ ಅರಸ್ ರಸ್ತೆ, ಕೆ.ಜಿ.ಕೊಪ್ಪಲು ಮುಖ್ಯರಸ್ತೆ, ಯುನಿವರ್ಸಿಟಿ ಕ್ವಾರ್ಟ್ರಸ್, ಮುಸ್ಲಿಂ ಹಾಸ್ಟೆಲ್, ವಿಶ್ವಮಾನವ ಜೋಡಿರಸ್ತೆ ಮುರುಗನ್ ಮೆಡಿಕಲ್ಸ್‌ಯಿಂದ ಕುಕ್ಕರಹಳ್ಳಿ ಕೆರೆ ರಸ್ತೆಯವರೆಗೆ, ಸರಸ್ವತಿಪುರಂ 5ರಿಂದ 16ನೇ ಮೇನ್, ಪಡುವಾರಹಳ್ಳಿ, ಡಿ.ಸಿ ರೆಸಿಡೆನ್ಸಿ, ರಿಜನಲ್ ಕಮಿಷನರ್ ಆಫೀಸ್, ಸಿಎಫ್‌ಟಿಆರ್‌ಐ ಕ್ಯಾಂಪಸ್, ವಾಲ್ಮೀಕಿರಸ್ತೆ, ಜಡ್ಜ್ ಕ್ವಾರ್ಟ್ರಸ್, ಒಂಟಿಕೊಪ್ಪಲು, ಹುಣಸೂರು ಮುಖ್ಯ ರಸ್ತೆ, ವಾಗ್ದೇವಿನಗರ, ಜೆ.ಸಿ ಕಾಲೇಜು ಸುತ್ತಮುತ್ತ, ಚಾಮರಾಜ ಮೊಹಲ್ಲಾ, ಜಿಲ್ಲಾ ಪಂಚಾಯತ್ ಕಚೇರಿ, ಕೋರ್ಟ್, ಅರಸು ರಸ್ತೆ ಜಿಲ್ಲಾಧಿಕಾರಿ ಕಚೇರಿ, ಮಹಾರಾಜ ಮತ್ತು ಯುವರಾಜ ಕಾಲೇಜು ಸುತ್ತಮುತ್ತ, ಶಿವರಾಂಪೇಟೆ, ದಿವಾನ್ಸ್ ರಸ್ತೆ, ಧನ್ವಂತರಿ ರಸ್ತೆ, ಜೆ.ಕೆ.ಗ್ರೌಂಡ್ ಸುತ್ತಮುತ್ತಲಿನ ಪ್ರದೇಶ, ಮೆಟ್ರೋ ಪೋಲ್ ವ್ಯಾಪ್ತಿ, ಜೆಎಲ್‌ಬಿ ರಸ್ತೆ, ಜಯಲಕ್ಷ್ಮಿ ವಿಲಾಸ್, ನ್ಯಾಯಾಲಯದ ಆವರಣ, ಏರ್‌ಲೈನ್ಸ್ ಹೋಟೆಲ್ ರಸ್ತೆ, ಮಹಾರಾಜ ಹಾಸ್ಟೆಲ್ ಏರಿಯಾ, ಗೀತಾ ರಸ್ತೆ, ರಾಮಸ್ವಾಮಿ ವೃತ್ತ ಹಾಗೂ ಸುತ್ತಮುತ್ತ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಸೆಸ್ಕ್ ಪ್ರಕಟಣೆ ತಿಳಿಸಿದೆ.

ಸಿರಿಧಾನ್ಯಗಳ ಮೇಳಕ್ಕೆ ಜಿಲ್ಲಾ ರೈತರು ಭಾಗಿ



ಮೈಸೂರು, ಡಿ. 11– ಬೆಂಗಳೂರಿನ ಕನಕಪುರ ರಸ್ತೆಯಲ್ಲಿರುವ ಆರ್ಟ್ ಆಫ್ ಲಿವಿಂಗ್‌ನಲ್ಲಿ ನಡೆಯುತ್ತಿರುವ ಅಂತರರಾಷ್ಟ್ರೀಯ ಸಿರಿಧಾನ್ಯ ಸಾವಯವ ಹಾಗೂ ನೈಸರ್ಗಿಕ ಕೃಷಿ ಕುರಿತ ವಿಚಾರ ಸಂಕಿರಣ ಮತ್ತು ಸಿರಿಧಾನ್ಯಗಳ ಮೇಳಕ್ಕೆ ಮೈಸೂರು ಜಿಲ್ಲೆಯ ಸುತ್ತಮುತ್ತಲ ಸಾವಿರಕ್ಕೂ ಹೆಚ್ಚು ರೈತರು ಭಾಗಿಯಾಗುತ್ತಿದ್ದು, ಇವರಿಗೆ ಚಾಮುಂಡಿಪುರಂ ವೃತ್ತದಲ್ಲಿ ಮೈಸೂರು ಆರ್ಟ್ ಆಫ್ ಲಿವಿಂಗ್ ವ್ಯಕ್ತಿ ವಿಕಸನ ಕೇಂದ್ರದ ವತಿಯಿಂದ ಶುಭ ಕೋರಲಾಯಿತು. ಈ ವೇಳೆ ನಾಗರಹೊಳೆ ಕುರಿ & ಮೇಕೆ ರೈತ ಉತ್ಪಾದಕರ ಕಂಪನಿ ಅಧ್ಯಕ್ಷ ಯಶ್ವಂತ್, ಉಪಾಧ್ಯಕ್ಷ ಶಿವಶಂಕರ್, ಸಿಇಓ ಕಾವ್ಯ, ಕಾರ್ಯದರ್ಶಿ ರವಿ, ವೆಂಕಟೇಶ್ ಅಪೂರ್ವ ಸುರೇಶ್, ಕೆ.ಆರ್.ಬ್ಯಾಂಕ್ ಉಪಾಧ್ಯಕ್ಷ ಬಸವರಾಜ್ ಬಸಪ್ಪ, ಆನಂದ್, ದೂರ ರಾಜಣ್ಣ, ಶ್ರೀಕಾಂತ್ ಕಶ್ಯಪ್, ನಾಗರಹೊಳೆ ಕುರಿ & ಮೇಕೆ ರೈತ ಉತ್ಪಾದಕರ ಕಂಪನಿಯ ನಿರ್ದೇಶಕ ಮಂಡಳಿ ಹಾಗೂ ಇನ್ನಿತರ ರೈತ ಮುಖಂಡರು ಹಾಜರಿದ್ದರು.

ಅಂತರರಾಷ್ಟ್ರೀಯ ಚದುರಂಗ ಸ್ಪರ್ಧೆಗೆ ಮೈಸೂರಿನ ಧಾತ್ರಿ



ಮೈಸೂರು,ಡಿ.11– ಅಂತರರಾಷ್ಟ್ರೀಯ ಮಟ್ಟದ ಓಲ್ಡ್ ಚೆಸ್ ಚಾಂಪಿಯನ್ ಶಿಪ್ ಚದುರಂಗ ಸ್ಪರ್ಧೆಯಲ್ಲಿ ಭಾಗವಹಿಸಲು ದುಬೈಗೆ ತೆರಳುತ್ತಿರುವ ಮೈಸೂರಿನ ಟಿ.ಕೆ.ಬಡಾವಣೆ ನಿವಾಸಿಗಳಾದ ಉಮೇಶ್ ಮತ್ತು ಬೃಂದಾ ದಂಪತಿ ಪುತ್ರಿ ಧಾತ್ರಿ ಅವರಿಗೆ ಮೈಸೂರು ರಕ್ಷಣಾ ವೇದಿಕೆ ವತಿಯಿಂದ ಅಭಿನಂದಿಸಿ, ಶುಭ ಕೋರಲಾಯಿತು. ಧಾತ್ರಿ ಪ್ರಥಮ PUC ಓದುತ್ತಿದ್ದು, ಚದುರಂಗದಲ್ಲಿ ರಾಜ್ಯ ಹಾಗೂ ರಾಷ್ಟ್ರ ಮಟ್ಟದ ಅನೇಕ ಸ್ಪರ್ಧೆಗಳಲ್ಲಿ ಭಾಗವಹಿಸಿ, ವಿಜೇತರಾಗಿದ್ದಾರೆ. ಈಗ ಅಂತಾರಾಷ್ಟ್ರೀಯ ಸ್ಪರ್ಧೆಯಲ್ಲಿ ಭಾಗವಹಿಸುತ್ತಿದ್ದಾರೆ. ವೇದಿಕೆ ಕಾರ್ಯದರ್ಶಿ ರಾಕೇಶ್‌ಭಟ್, ಪ್ರತಾಪ್, ಶ್ರೀನಿವಾಸ್ ಪ್ರಸಾದ್, ಲೋಹಿತ್ ಶರ್ಮಾ ಇದ್ದರು.

ಹೆಣ್ಣು ಭ್ರೂಣಹತ್ಯೆ ಒಂದು ಚಿಂತನೆ ಕಾರ್ಯಕ್ರಮ

ಮೈಸೂರು, ಡಿ. 11– ಮೈಸೂರಿನ ಶ್ರೀ ಬಸವೇಶ್ವರ ಸಾಂಸ್ಕೃತಿಕ ಪ್ರತಿಷ್ಠಾನವು ಡಿಸೆಂಬರ್ 17ರಂದು ಸಂಜೆ 4.30 ಗಂಟೆಗೆ ನಮನ ಕಲಾ ಮಂಟಪದಲ್ಲಿ ಹೆಣ್ಣು ಭ್ರೂಣಹತ್ಯೆ ಒಂದು ಚಿಂತನೆ ಕಾರ್ಯಕ್ರಮ ಏರ್ಪಡಿಸಲಾಗಿದೆ. ಡಾ.ಕೆ. ಲೀಲಾ ಪ್ರಕಾಶ್ ಅವರು ಸಾಮಾಜಿಕ, ಕೌಟುಂಬಿಕ, ಶೈಕ್ಷಣಿಕ ಜವಾಬ್ದಾರಿಗಳ ಕುರಿತು ಮಾತನಾಡಲಿದ್ದಾರೆ. ಕಾರ್ಯಕ್ರಮದಲ್ಲಿ 5ರಿಂದ 15 ವರ್ಷದೊಳಗಿನ ಬಾಲಕಿಯರಿಗೆ 'ಬಾಲಕಿಶೋರಿ' ಸಾಧನ ಪ್ರಶಸ್ತಿ ಪ್ರದಾನ ಮಾಡಲಾಗುವುದು. ಹೆಚ್ಚಿನ ಮಾಹಿತಿಗೆ ಮೊ. 9686205346 ಸಂಪರ್ಕಿಸಬಹುದು.

ವೃದ್ಧೆ ನಾಪತ್ತೆ



ಮೈಸೂರು, ಡಿ. 11– ವೃದ್ಧೆಯೋರ್ವರು ನಾಪತ್ತೆಯಾಗಿರುವ ಬಗ್ಗೆ ಮೇಟಗಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ನಾಗಮ್ಮ (75) ನಾಪತ್ತೆಯಾದ ಮಹಿಳೆ. ಇವರು ಡಿಸೆಂಬರ್ 9ರಂದು ಬೆಳಗ್ಗೆ 5.30ರಿಂದ ಕಾಣುತ್ತಿಲ್ಲವೆಂದು ಸುರೇಶ್ ದೂರು ನೀಡಿದ್ದಾರೆ. ಇವರ ಬಗ್ಗೆ ಮಾಹಿತಿ ತಿಳಿದಲ್ಲಿ ದೂ. 0821–2418339, 21418315, 21418115 ಸಂಪರ್ಕಿಸಲು ಕೋರಲಾಗಿದೆ.

ನಿಧನ

ನಂಜುಂಡಸ್ವಾಮಿ



ಮೂಗೂರು, ಡಿ.11– ಮೂಗೂರು ಗ್ರಾಮದ ಅಂಗಡಿ ಬೀದಿಯ ನಿವಾಸಿ ನಂಜುಂಡಸ್ವಾಮಿ (75) ಸೋಮವಾರ ಮುಂಜಾನೆ ವಯೋಸಹಜವಾಗಿ ನಿಧನ ಹೊಂದಿದರು. ಸಿದ್ದಗಂಗಶ್ರೀ ಅವರ ಅಭಿಮಾನಿಯಾದ ಇವರು ಸಿದ್ದಗಂಗಾ ಮಠದಲ್ಲಿ ಕೆಲವು ವರ್ಷಗಳ ಕಾಲ ಸೇವೆ ಸಲ್ಲಿಸಿದರು. ಮೃತರು ಪತ್ನಿ, ಇಬ್ಬರು ಪುತ್ರರು, ಇಬ್ಬರು ಪುತ್ರಿಯರು, ಅಪಾರ ಬಂಧು–ವರ್ಗ ಅಗಲಿದ್ದಾರೆ. ಅಂತ್ಯಕ್ರಿಯೆ ಮೂಗೂರಿನ ವೀರಶೈವ ರುದ್ರಭೂಮಿಯಲ್ಲಿ ಸೋಮವಾರ ಮಧ್ಯಾಹ್ನ 3 ಗಂಟೆಯಲ್ಲಿ ನಡೆಯಿತು.

ಮೈಸೂರಲ್ಲಿ ಅಪರಾಧ ತಡೆ ಮಾಸಾಚರಣೆಗೆ ಚಾಲನೆ



ನೂರಾರು ವಿದ್ಯಾರ್ಥಿಗಳಿಂದ ಜಾಗೃತಿ ಜಾಥಾ



ಕೆ.ಆರ್.ಸರ್ಕಲ್, ಡಿ.ದೇವರಾಜ ಅರಸು ರಸ್ತೆ ಮೂಲಕ ಸಾಗಿದ ಜಾಥಾ, ಮಹಾರಾಜ ಪಿಯು ಕಾಲೇಜಿನಲ್ಲಿ ಅಂತ್ಯಗೊಂಡಿತು. ವಿದ್ಯಾವಿಕಾಸ, ಜೆಎಸ್‌ಎಸ್‌ಎಸ್ ಬಂಟ್ವಾಳ ಮಾಧವ ಶೆಣೈ ಶಾಲೆ, ಫರೂಖಿಯಾ, ಮಹರ್ಷಿ ಶಿಕ್ಷಣ ಸಂಸ್ಥೆ ಸೇರಿದಂತೆ ಹಲವು ಕಾಲೇಜುಗಳ 500ಕ್ಕೂ ಹೆಚ್ಚು ವಿದ್ಯಾರ್ಥಿಗಳು ಪಾಲ್ಗೊಂಡು ಅಪರಾಧ ತಡೆಗಟ್ಟುವ ಸಂಬಂಧ ಕರಪತ್ರಗಳನ್ನು ವಿತರಿಸುವ ಮೂಲಕ ಜನರಿಗೆ ಅರಿವು ಮೂಡಿಸಿದರು.

ಮೈಸೂರು, ಡಿ. 11(ಆರ್‌ಕೆ)– ಮೈಸೂರು ನಗರ ಪೊಲೀಸ್ ಘಟಕದಿಂದ ಅಪರಾಧ ತಡೆ ಮಾಸಾಚರಣೆ ಕಾರ್ಯಕ್ರಮ ಆರಂಭವಾಗಿದೆ.

ಅರಮನೆ ಉತ್ತರ ದ್ವಾರದ ಶ್ರೀ ಕೋಟೆ ಆಂಜನೇಯಸ್ವಾಮಿ ದೇವಸ್ಥಾನದ ಬಳಿ ಇಂದು ಆಯೋಜಿಸಿದ್ದ ಕಾರ್ಯಕ್ರಮವನ್ನು ಬಲೂನುಗಳನ್ನು ಹಾರಿಬಿಡುವ ಮೂಲಕ ಜಿಲ್ಲಾಧಿಕಾರಿ ಡಾ.ಕೆ.ವಿ. ರಾಜೇಂದ್ರ ಉದ್ಘಾಟಿಸಿದರು. ಅಪರಾಧ ತಡೆ ಮತ್ತು ಪತ್ತೆ ಕಾರ್ಯದಲ್ಲಿ ಸಾರ್ವಜನಿಕರು ಭಾಗಿದಾರರಾಗುವ ಬಗ್ಗೆ ಹಾಗೂ ಜನರ ಸುರಕ್ಷತೆ ದೃಷ್ಟಿಯಿಂದ ಕೈಗೊಳ್ಳಬೇಕಾದ ಕ್ರಮದ ಕುರಿತಂತೆ ಪೊಲೀಸ್ ಘಟಕದಿಂದ ಸಿದ್ಧಗೊಳಿಸಿರುವ ಮಾಹಿತಿ ಕರಪತ್ರವನ್ನು ಇದೇ ಸಂದರ್ಭ ಜಿಲ್ಲಾಧಿಕಾರಿಗಳು ಬಿಡುಗಡೆ ಮಾಡಿದರು.

ನಂತರ ಮಾತನಾಡಿದ ಅವರು, ಜನ, ಸಮಾಜದ ರಕ್ಷಣೆಗಾಗಿ ಪೊಲೀಸರೊಂದಿಗೆ ನಾವೆಲ್ಲಾ ಕೈಜೋಡಿಸಿ ಕಾನೂನು–ಸುವ್ಯವಸ್ಥೆ ಕಾಪಾಡುವ ಮೂಲಕ ಸಮಾಜದಲ್ಲಿ ಶಾಂತಿ ನೆಲೆಸಲು ಪೊಲೀಸರು ದುಡಿಯುತ್ತಿದ್ದಾರೆ. ಅಪರಾಧ ತಡೆ ಮತ್ತು ಪತ್ತೆ ಕಾರ್ಯದ ಬಗ್ಗೆ ಅರಿವು ಮೂಡಿಸುವ ಮಾಸಾಚರಣೆಯ ಉದ್ದೇಶ ಸಫಲವಾಗಬೇಕು ಎಂದರು.

ಮನೆ ಕಟ್ಟುವಾಗ ಸೌಂದರ್ಯಕ್ಕೆ ಆದ್ಯತೆಗಿಂತ ಭದ್ರತೆ, ಸುರಕ್ಷತೆಗೆ ಒತ್ತು ನೀಡಿ ಕಿಟಕಿ, ಬಾಗಿಲು, ವರಾಂಡ, ಟೆರೇಸ್‌ನಿಂದ ಖದೀಮರು ನುಸುಳದಂತೆ ಎಚ್ಚರ ವಹಿಸಿ. ಕಳ್ಳತನ, ದರೋಡೆ, ಸುಲಿಗೆಯಂತಹ ಅಪರಾಧ ಪ್ರಕರಣಗಳಾಗದಂತೆ ನಾಗರಿಕರು ಎಚ್ಚರವಾಗಿರಬೇಕು ಎಂದು ಡಾ.ರಾಜೇಂದ್ರ ಅಭಿಪ್ರಾಯಪಟ್ಟರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ನಗರ ಪೊಲೀಸ್ ಆಯುಕ್ತ ಬಿ.ರಮೇಶ್, ಕಳೆದ ಒಂದು ವರ್ಷದಲ್ಲಿ ನಡೆದ ಅಪರಾಧಗಳ ಪತ್ತೆ ಮತ್ತು ಮುಂದಿನ ಒಂದು ವರ್ಷದ ಅವಧಿಯಲ್ಲಿ ಅಪರಾಧಗಳು ಸಂಭವಿಸದಂತೆ ತಡೆಗಟ್ಟುವ ನಿಟ್ಟಿನಲ್ಲಿ ಅಪರಾಧ ತಡೆ ಮಾಸಾಚರಣೆಯನ್ನು ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಮನೆಕಳವು, ಚಿನ್ನದ ಸರ ಅಪಹರಣ ಪ್ರಕರಣಗಳು ಗಣನೀಯವಾಗಿ ಕಡಿಮೆಯಾಗಿದ್ದು, ಅದೇ ರೀತಿ ಸಂಚಾರ ನಿಯಮ ಉಲ್ಲಂಘನೆಯಾಗದಂತೆ ನಿಯಂತ್ರಿಸುವ ನಿಟ್ಟಿನಲಿ ಪೊಲೀಸ್ ಇಲಾಖೆಯು ಅಗತ್ಯ ಕ್ರಮ ಕೈಗೊಳ್ಳುತ್ತಿದ್ದು, ಜನಸ್ನೇಹಿ ಪೊಲೀಸ್ ವ್ಯವಸ್ಥೆಗೆ ನಾಗರಿಕರು ಸಹಕರಿಸಬೇಕು ಎಂದು ನಗರ ಪೊಲೀಸ್ ಆಯುಕ್ತ ರಮೇಶ್ ತಿಳಿಸಿದರು.

ಈ ವೇಳೆ ಬಾಲ್ಯವಿವಾಹ, ಮೂಢನಂಬಿಕೆ, ಕಂದಾಚಾರ, ಸಾಮಾಜಿಕ ಅನಿಷ್ಟಗಳ ಬಗ್ಗೆ ಶಾಲಾ ಮಕ್ಕಳು ಬೀದಿನಾಟಕ ಪ್ರದರ್ಶಿಸಿದರು.

ನಂತರ ಅಪರಾಧ ತಡೆ ಮಾಸಾಚರಣೆ ಜಾಗೃತಿ ಜಾಥಾಕ್ಕೆ ಜಿಲ್ಲಾಧಿಕಾರಿ ಡಾ. ಕೆ.ವಿ.ರಾಜೇಂದ್ರ ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿದರು.

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಕೆ.ಎಂ.ಗಾಯತ್ರಿ, ಅಂತರರಾಷ್ಟ್ರೀಯ ಕ್ರೀಡಾಪಟು ರೀನಾ ಜಾರ್ಜ್, ಡಿಸಿಪಿಗಳಾದ ಎಂ.ಮುತ್ತುರಾಜ್, ಎಸ್.ಜಾಹ್ನವಿ, ಎ.ಮಾರುತಿ, ಮೌಂಟೆಡ್ ಪೊಲೀಸ್ ಕಮಾಂಡೆಂಟ್ ಶೈಲೇಂದ್ರ, ಎಸಿಪಿಗಳಾದ ಶಾಂತಮಲ್ಲಪ್ಪ, ಎಸ್.ಇ.ಗಂಗಾಧರಸ್ವಾಮಿ, ಎಸ್.ಜಿ.ಗಜೇಂದ್ರಪ್ರಸಾದ್, ಕೆ.ಸಿ.ಅಶ್ವಥನಾರಾಯಣ, ಪರಶುರಾಮಪ್ಪ, ಎಲ್ಲಾ ಠಾಣೆಗಳ ಇನ್ಸ್‌ಪೆಕ್ಟರ್, ಸಬ್ ಇನ್ಸ್‌ಪೆಕ್ಟರ್‌ಗಳು ಅಪರಾಧ ತಡೆ ಮಾಸಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

ಅತಿರೇಕದ ರಾಷ್ಟ್ರಪ್ರೇಮ ಅಪಾಯಕ್ಕೆ ನಾಂದಿ

ನಿವೃತ್ತ ಪ್ರಾಧ್ಯಾಪಕ ಪ್ರೊ.ಉಮಾಪತಿ ಎಚ್ಚರಿಕೆ



ಮೈಸೂರು,ಡಿ.11(ಬಿಎಲ್‌ಯು)–ರಾಷ್ಟ್ರಪ್ರೇಮ ಅತಿರೇಕಕ್ಕೆ ಹೋದರೆ ಅಪಾಯ ಕಟ್ಟಿಟ್ಟಬುತ್ತಿ. ಆದ ಕಾರಣ ಯುದ್ಧದ ಸ್ಥಿತಿ ತಂದೊಡ್ಡುವ ಅತಿಯಾದ ರಾಷ್ಟ್ರ ಪ್ರೇಮ ಮೆರೆಯಬಾರದು ಎಂದು ನಿವೃತ್ತ ಪ್ರಾಧ್ಯಾಪಕ ಪ್ರೊ.ಎಂ.ಉಮಾಪತಿ ಸಲಹೆ ನೀಡಿದರು.

ಮೈಸೂರಿನ ಮಾನಸಗಂಗೋತ್ರಿಯ ಗಾಂಧಿ ಅಧ್ಯಯನ ಕೇಂದ್ರದಲ್ಲಿ ಸೋಮವಾರ 74ನೇ ಸಂವಿಧಾನ ದಿನಾಚರಣೆ ಅಂಗವಾಗಿ ಭಾರತದ ಸಂವಿಧಾನ ಮತ್ತು ಗಾಂಧಿ ತತ್ವಗಳು ಕುರಿತ ವಿಶೇಷ ಉಪನ್ಯಾಸದಲ್ಲಿ ಮಾತನಾಡಿದ ಅವರು, ನನ್ನ ರಾಷ್ಟ್ರವೇ ಮೇಲು ಎಂದು ಯುದ್ಧಕ್ಕೆ ಇಳಿದರೆ ವಿಶ್ವದ ನಾಶ ಖಚಿತ ಎಂದು ಎಚ್ಚರಿಸಿದರು. ರಾಷ್ಟ್ರಪ್ರೇಮ ಅತಿರೇಕಕ್ಕೆ ಹೋಗಬಾರದು ಎಂದು ಇಸ್ರೇಲ್ ಹಾಗೂ ಪ್ಯಾಲೆಸ್ಟೈನ್ ನಡುವಿನ ಯುದ್ಧವನ್ನು ನಿದರ್ಶನವಾಗಿ ನೀಡಿದ ಪ್ರೊ.ಉಮಾಪತಿ, ಇಂತಹ ರಾಷ್ಟ್ರಪ್ರೇಮ, ದುಷ್ಟ ಪ್ರೇಮವಾಗಬಹುದು. ಇದು ವಿಶ್ವಕ್ಕೆ ಅಪಾಯವನ್ನು ತಂದೊಡ್ಡುತ್ತದೆ ಎಂದು ಆತಂಕ ವ್ಯಕ್ತಪಡಿಸಿದರು.

ರಾಷ್ಟ್ರಪಿತ ಮಹಾತ್ಮ ಗಾಂಧಿ ಅವರು ದೈಹಿಕವಾಗಿ ನಮ್ಮನ್ನು ಅಗಲಿರಬಹುದು, ಆದರೆ ಅವರ ವಿಚಾರಧಾರೆ, ತತ್ವಾದರ್ಶಗಳಿಂದ ಪ್ರತಿಯೊಬ್ಬರ ಆತ್ಮದಲ್ಲೂ ಜೀವಂತವಾಗಿದ್ದಾರೆ. ಪ್ರತಿಯೊಬ್ಬರಲ್ಲಿರುವ ಗಾಂಧಿಯನ್ನು ನೈತಿಕವಾಗಿ ಕೊಲ್ಲಲು ಸಾಧ್ಯವಿಲ್ಲ. ಗಾಂಧಿಯನ್ನು ಕೊಂದರೆ ಆತ್ಮ ಕೊಂದಂತೆ. ಗಾಂಧೀಜಿಯವರ ಶಾಂತಿ ಮಂತ್ರವಿಲ್ಲದ ವಿಶ್ವವನ್ನು ಊಹಿಸಿಕೊಳ್ಳಲು ಸಾಧ್ಯವಿಲ್ಲ ಎಂದು ಹೇಳಿದರು.

ಮಹಾತ್ಮ ಗಾಂಧಿ ಸಲಹೆ ನೀಡಿದಂತೆ ಅಧಿಕಾರ ವಿಕೇಂದ್ರಿಕರಣವಾಗಬೇಕು. ಇದರಿಂದ ತಳ ಮಟ್ಟದಲ್ಲಿ ಅಭಿವೃದ್ಧಿ ಕಾಣಲು ಸಾಧ್ಯವಾಗುತ್ತದೆ ಎಂದು ಪ್ರೊ.ಉಮಾಪತಿ ಅಭಿಪ್ರಾಯಪಟ್ಟರು.

ಮಾನಸಗಂಗೋತ್ರಿಯ ಡಾ.ಬಿ.ಆರ್.ಅಂಬೇಡ್ಕರ್ ಸಂಶೋಧನಾ ಹಾಗೂ ವಿಸ್ತರಣಾ ಕೇಂದ್ರದ ನಿರ್ದೇಶಕ ಪ್ರೊ.ಜೆ. ಸೋಮಶೇಖರ್, ಗಾಂಧಿ ಅಧ್ಯಯನ ಕೇಂದ್ರದ ನಿರ್ದೇಶಕ ಪ್ರೊ.ಎಸ್.ನರೇಂದ್ರಕುಮಾರ್ ವೇದಿಕೆಯಲ್ಲಿ ಉಪಸ್ಥಿತರಿದ್ದರು.

ನವೀಕರಣಗೊಂಡ 'ಎಸ್.ಚನ್ನಯ್ಯ ಮಹಲ್' ಕಟ್ಟಡದ ಉದ್ಘಾಟನೆ



ಮೈಸೂರು, ಡಿ. 11– ನಗರದ ವಾಣಿ ವಿಲಾಸ ಮೊಹಲ್ಲಾದಲ್ಲಿರುವ ಕೆ.ಎಚ್. ರಾಮಯ್ಯ ಉಚಿತ ವಿದ್ಯಾರ್ಥಿ ನಿಲಯದಲ್ಲಿ ನವೀಕರಣಗೊಂಡ ಸಾಹುಕಾರ ಎಸ್.ಚನ್ನಯ್ಯ ಮಹಲ್ ಕಟ್ಟಡದ ಉದ್ಘಾಟನೆಯನ್ನು ಹಿರಿಯ ವಿದ್ಯಾರ್ಥಿಗಳ ಸಂಘದ ವತಿಯಿಂದ ದೀಪ ಬೆಳಗುವುದರ ಮೂಲಕ ಕೆ.ಎಚ್.ರಾಮಯ್ಯ ಟ್ರಸ್ಟ್ ಅಧ್ಯಕ್ಷ ಚಂದ್ರ ಪ್ರಕಾಶ್ ಉದ್ಘಾಟಿಸಿದರು.

ಹಳೆಯ ವಿದ್ಯಾರ್ಥಿಗಳ ಸಂಘದ ಗೌರವಾಧ್ಯಕ್ಷರು ಹಾಗೂ ರಾಜ್ಯದ ಹಿರಿಯ ನಿವೃತ್ತ ಐಎಎಸ್ ಅಧಿಕಾರಿ ಎಂ.ಕೆ.ಶಂಕರಲಿಂಗೇಗೌಡರು ಎನ್.ಜಿ.ಗುಜ್ಜೇಗೌಡ ಡಿಜಿಟಲ್ ಲೈಬ್ರರಿಯನ್ನು ಉದ್ಘಾಟಿಸಿದರು. ಮುಂದಿನ ದಿನಗಳಲ್ಲಿ ವಿದ್ಯಾರ್ಥಿನಿಲಯದಲ್ಲಿ ನವ ತಂತ್ರಜ್ಞಾನ ಕಲಿಯಲು ಬೇಕಾದ ವ್ಯವಸ್ಥೆ ಮಾಡಲಾಗುತ್ತದೆ ಹಾಗೂ ಕೃಷಿಕ್ ಸರ್ವೋದಯ ಫೌಂಡೇಶನ್ ವತಿಯಿಂದ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತಯಾರಿಯಾಗಲು ಅನುಕೂಲವಾಗುವಂತೆ ತರಗತಿಗಳನ್ನು ಹಮ್ಮಿಕೊಳ್ಳಲಾಗುವುದು ಎಂದು ಸಂಘದ ಅಧ್ಯಕ್ಷರಾದ ನಿವೃತ್ತ ಹಿರಿಯ ಕೆಎಎಸ್ ಅಧಿಕಾರಿ ಡಾ.ಪಿ. ಬೋರೇಗೌಡ ತಿಳಿಸಿದರು.

ಸಂಘದ ಉಪಾಧ್ಯಕ್ಷ ಡಾ.ಅಪ್ಪಾಜಿಗೌಡ, ಯಶೋಧರಮ್ಮ ದಾಸಪ್ಪ ವಿದ್ಯಾರ್ಥಿನಿಯರ ಹಾಸ್ಟೆಲ್ ಟ್ರಸ್ಟ್ ಸರೋಜಮ್ಮ ತುಳಸಿದಾಸ್, ವಿದ್ಯಾವರ್ಧಕ ಸಂಘದ ಕಾರ್ಯದರ್ಶಿ ಪಿ.ವಿಶ್ವನಾಥ್, ಮಹಾರಾಜ ಇಂಜಿನಿಯರಿಂಗ್ ಕಾಲೇಜಿನ ಕಾರ್ಯದರ್ಶಿ ಡಾ.ಚೇತನ್, ಕೆಂಪರಾಜೇಗೌಡ, ಕೃಷ್ಣಪ್ಪ, ಬಿ.ಎಸ್.ಭೂಷಣ್, ಯದುನಂದನ್, ಚೌಡಪ್ಪ, ವರುಣ್, ದರ್ಶನ್, ಅಂಕೇಗೌಡ, ಕೆ.ಎಸ್. ನಿಂಗಪ್ಪ, ಪ್ರಕಾಶ್, ನಾಗರಾಜೇಗೌಡ ಮತ್ತಿತರರು ಉಪಸ್ಥಿತರಿದ್ದರು.

ಬಾಲೋದ್ಯಾನ ಪಬ್ಲಿಕ್ ಶಾಲೆಯಲ್ಲಿ ಅಂತರ ಶಾಲಾ ಸ್ಪರ್ಧೆ




ಮೈಸೂರು,ಡಿ.11–ಮೈಸೂರಿನ ಶ್ರೀ ವಿವೇಕ ಬಾಲೋದ್ಯಾನ ಪಬ್ಲಿಕ್ ಶಾಲೆಯಲ್ಲಿ ಬಾಲೋದ್ಯಾನ ಪ್ರತಿಭಾನ್ವೇಷಣಾ ಅಂತರ ಶಾಲಾ ಸ್ಪರ್ಧೆಯ ಅಂಗವಾಗಿ ಫ್ಯಾನ್ಸಿ ಡ್ರೆಸ್ ಸ್ಪರ್ಧೆ, ಬಣ್ಣ ಹಚ್ಚುವ ಸ್ಪರ್ಧೆ, ಚಿತ್ರ ಬಿಡಿಸುವ ಸ್ಪರ್ಧೆ, ಪೋಸ್ಟರ್ ಮೇಕಿಂಗ್, ಚರ್ಚಾ ಸ್ಪರ್ಧೆ ಹಾಗೂ ಸಾಮೂಹಿಕ ನೃತ್ಯ ಸ್ಪರ್ಧೆಗಳನ್ನು ವಿವಿಧ ವಯೋಮಾನದ ಮಕ್ಕಳಿಗೆ ಆಯೋಜಿಸಲಾಗಿತ್ತು. ಸ್ಪರ್ಧೆಯಲ್ಲಿ ಸುಮಾರು 45ಕ್ಕೂ ಹೆಚ್ಚು ಶಾಲಾ ಮಕ್ಕಳು ಭಾಗವಹಿಸಿದ್ದರು. ಪತ್ರಕರ್ತೆ ರಶ್ಮಿ ಕೋಟಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಕೈಗಳ ಎಲ್ಲಾ ಬೆರಳುಗಳು ಹೇಗೆ ಒಂದು ಸಮನಾಗಿಲ್ಲವೋ ಹಾಗೆ ಎಲ್ಲಾ ಮಕ್ಕಳು ಒಂದೇ ಸಮನಾಗಿ ಇರಲು ಸಾಧ್ಯವಿಲ್ಲ. ಒಬ್ಬೊಬ್ಬರಲ್ಲೂ ಒಂದೊಂದು ಸಾಮರ್ಥ್ಯವಿರುತ್ತದೆ. ಅಂತಹ ಸಾಮರ್ಥ್ಯವನ್ನು ಬೆಳೆಸಿಕೊಳ್ಳಲು ಈ ಕಾರ್ಯಕ್ರಮ ತುಂಬ ಅವಶ್ಯಕವಾಗಿದೆ ಎಂದರು. ಶಾಲೆ ಆಡಳಿತ ಮಂಡಳಿ ಅಧ್ಯಕ್ಷ ವಾಸುದೇವರಾವ್ ಅರೂರ್ ಅಧ್ಯಕ್ಷತೆ ವಹಿಸಿದ್ದರು. ಆಡಳಿತ ಮಂಡಳಿ ಉಪಾಧ್ಯಕ್ಷ ಬಿ.ಎನ್.ಪ್ರಭಾಕರ್, ಶ್ರೀ ವಿವೇಕ ವಿದ್ಯಾಲಯ ಪದವಿ ಪೂರ್ವ ಕಾಲೇಜಿನ ಅಧ್ಯಾಪಕಿ ಶೀಲಾ, ದಿವ್ಯ ಸೊಲ್ಲಾಪುರ, ದೀಪ್ತಿ, ತಾರಾ ಪ್ರಿಯದರ್ಶಿನಿ, ಶಿವಶಂಕರ್, ಶಾಲೆಯ ಮುಖ್ಯ ಆಡಳಿತ ಅಧಿಕಾರಿ ಭವಾನಿ ನಾಗೇಶ್, ಪ್ರಾಂಶುಪಾಲರಾದ ಪ್ರತಿಭಾ ಅಶೋಕ್ ಉಪಸ್ಥಿತರಿದ್ದರು. ವಿಜೇತರಿಗೆ ಪ್ರಥಮ ಬಹುಮಾನವಾಗಿ 1500 ರೂ., ದ್ವಿತೀಯ ಬಹುಮಾನವಾಗಿ 1000ರೂ. ತೃತೀಯ ಬಹುಮಾನವಾಗಿ 750 ರೂ. ಹಾಗೂ ಸಮಾಧಾನಕರ ಬಹುಮಾನವಾಗಿ 500 ರೂ. ಜೊತೆಗೆ ನೆನಪಿನ ಕಾಣಿಕೆಯನ್ನು ನೀಡಲಾಯಿತು.

ಇಂದು 19ನೇ ವರ್ಷದ ಶ್ರೀಮಹದೇಶ್ವರ ಪೂಜೆ

ಮೈಸೂರು,ಡಿ.11–ಮೈಸೂರಿನ ಚಾಮುಂಡಿಬೆಟ್ಟದ ನಾಯಕರ ಸಂಘದ ವತಿಯಿಂದ 19ನೇ ವರ್ಷದ ಶ್ರೀಮಹದೇಶ್ವರನ ಪೂಜೆ ಮತ್ತು ಅನ್ನದಾಸೋಹವನ್ನು ಡಿ.12ರಂದು ಉತ್ತನಹಳ್ಳಿಗೆ ಹೋಗುವ ರಸ್ತೆಯ ಮಹದೇಶ್ವರ ಹಳ್ಳದಲ್ಲಿ ಏರ್ಪಡಿಸಲಾಗಿದೆ. ಅಂದು ಬೆಳಗ್ಗೆ 10.30ಕ್ಕೆ ಮಹಾಮಂಗಳಾರತಿ ನಡೆಯಲಿದ್ದು, ನಂತರ ಅನ್ನದಾಸೋಹ ನೆರವೇರಲಿದೆ ಎಂದು ಸಂಘದ ಅಧ್ಯಕ್ಷ ಶಂಭುಲಿಂಗು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

12.12.2023 ಮಂಗಳವಾರ, ಮಳೆ ನಕ್ಷತ್ರ: ಜ್ಯೇಷ್ಠ 03.12.2023ರಿಂದ 15.12.2023
ಶ್ರೀ ಶೋಭಕೃತ್ ನಾಮ ಸಂವತ್ಸರ, ದಕ್ಷಿಣಾಯನ, ಶರದ್ ಋತು, ಕಾರ್ತಿಕ ಮಾಸ, ಕೃಷ್ಣ ಪಕ್ಷ,
ತಿಥಿ: ಅಮಾವಾಸ್ಯೆ, ನಕ್ಷತ್ರ: ಅನೂರಾಧ, ರಾಹುಕಾಲ: ಮಧ್ಯಾಹ್ನ 3ರಿಂದ 4.30ರವರೆಗೆ

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10ಕ್ಕೆ ಶ್ರದ್ಧೆಯ ಶಿಲ್ಪ, ಲೇಖನ ಮತ್ತು ಪ್ರಸ್ತುತಿ–ಟಿ.ಎಸ್. ಗೋಪಾಲ್, 6.40 ಪದಸಂಸ್ಕೃತಿ, ಪ್ರಸ್ತುತಿ–ಡಾ.ಬಿ.ವಿ.ವಸಂತಕುಮಾರ್, 6.50 ರೈತರಿಗೆ ಸಲಹೆ, 7.15 ಕಾದಂಬರಿ ವಿಹಾರ–ನಾ ಕಸ್ತೂರಿ ಅವರ ರಂಗನಾಯಕಿ ಕಾದಂಬರಿಯ ಬಾನುಲಿ ಓದು, ಪ್ರಸ್ತುತಿ – ಉಮೇಶ್ ಎಸ್.ಎಸ್., 8.30 ಪರಾಗ–ಬೇಸಾಯದ ಬದುಕು ಸರಾಗ–ಬಾನುಲಿ ಸರಣಿ, 8.45 ಕರೆಗೊಂದು ಗೀತೆ, 9.05 ಆರೋಗ್ಯ ಮಂಥನ–ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಇಲಾಖಾ ಪ್ರಾಯೋಜಿತ ಕಾರ್ಯಕ್ರಮ, 10.00 ವಂಶಿಧರ್ – ವೇಣುವಾದನ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ

ಮಧ್ಯಾಹ್ನ: 12.30 ದೇವರನಾಮ–ನರಸಿಂಹ ನಾಯಕ್, ಬಿ.ಆರ್. ಛಾಯಾ, ಅನಂತ ಕುಲಕರ್ಣಿ, 12.45 ಡಿಜಿಟಲ್ ಯುಗದಲ್ಲಿ ಭ್ರಷ್ಟಾಚಾರದ ವಿರುದ್ಧ ಜಾಗೃತಿ ಕುರಿತು ಭಾ.ಮಿ.ಶೆಣೈ ಅವರೊಂದಿಗೆ ಸಂದರ್ಶನ. ಸಂದರ್ಶಕರು– ದಿವಾಕರ ಹೆಗಡೆ, 1.20 ಭಾವಗೀತೆಗಳು–ರಾಧಿಕಾ ಐ. ಭಟ್, 3.00 ಶ್ರೀ ವಿದ್ಯಾ ಮತ್ತು ವಿಜಯಶ್ರೀ ವೈದ್ಯನಾಥನ್ – ಯುಗಳ ಗಾಯನ, 4.00 ಕಥಾ ಕಾಲಕ್ಷೇಪ–ಭೀಮ ಜರಾಸಂಧ, ಪ್ರಸ್ತುತಿ– ವಿದ್ವಾನ್ ಆರ್. ಗುರುರಾಜುಲು ನಾಯ್ಡು, 6.50 ಕೃಷಿರಂಗ–ಅರಿಶಿನ ಬೇಸಾಯ ಕುರಿತು ಎಸ್.ಎಂ. ನಾಗಾರ್ಜುನ ಕುಮಾರ್ ಅವರೊಂದಿಗೆ ಸಂದರ್ಶನ, 9.30 ಕೆ.ಎಸ್. ಹೇರಂಬ ಮತ್ತು ಕೆ.ಎಸ್. ಹೇಮಂತ್–ಯುಗಳ ವೇಣುವಾದನ, 10.00 ಗಮಕ ವ್ಯಾಖ್ಯಾನ, ವಾಚನ– ಇಂದಿರಾ ಶಾಸ್ತ್ರಿ, ವ್ಯಾಖ್ಯಾನ– ಸಿ.ಎನ್.ಸುಬ್ಬಣ್ಣ, 10.30 ಸವಿನೆನಪು

- **ವಿದ್ಯಾವರ್ಧಕ ಪದವಿಪೂರ್ವ ಕಾಲೇಜು :** ಬೆಳಗ್ಗೆ 8.30ಕ್ಕೆ ಜಿಲ್ಲಾ ಮಟ್ಟದ ಥ್ರೋಬಾಲ್, ಕಬಡ್ಡಿ ಮತ್ತು ವಾಲಿಬಾಲ್ ಪಂದ್ಯಾವಳಿ, ಅಧ್ಯಕ್ಷತೆ : ವಿದ್ಯಾವರ್ಧಕ ಸಂಘದ ಅಧ್ಯಕ್ಷ ಗುಂಡಪ್ಪಗೌಡ, ಉದ್ಘಾಟನೆ: ಮೈಸೂರು ವಿವಿ ದೈಹಿಕ ಶಿಕ್ಷಣ ವಿಭಾಗದ ನಿರ್ದೇಶಕ ಡಾ. ಸಿ. ವೆಂಕಟೇಶ್, ಮುಖ್ಯ ಅತಿಥಿಗಳು : ಸಂಘದ ಗೌರವ ಕಾರ್ಯದರ್ಶಿ ಪಿ. ವಿಶ್ವನಾಥ್, ಅತಿಥಿಗಳು : ಹೆಚ್.ಕೆ. ರಮೇಶ್, ಎನ್. ಮಹೇಶ್, ಸಂಜೆ 4ಕ್ಕೆ ಸಮಾರೋಪ ಸಮಾರಂಭ, ಅಧ್ಯಕ್ಷತೆ : ವಿದ್ಯಾವರ್ಧಕ ಸಂಘದ ಕೋಶಾಧ್ಯಕ್ಷ ಶ್ರೀಶೈಲ ರಾಮಣ್ಣವರ್, ಬಹುಮಾನ ವಿತರಣೆ : ಎಸ್. ಬಸವಲಿಂಗಯ್ಯ, ಅಬ್ದುಲ್ ಜಮೀಲ್, ಸ್ಥಳ: ಬೇಡನ್ ಪೊವೆಲ್ ಪಬ್ಲಿಕ್ ಸ್ಕೂಲ್ ಕ್ರೀಡಾ ಮೈದಾನ, ಡಿಸಿ ಕಚೇರಿ ಹಿಂಭಾಗ.
- **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ :** ಕಣ್ಣಿನ ಸಮಸ್ಯೆಗಳಿಗೆ ಚಿಕಿತ್ಸಾ ಶಿಬಿರ, ಸ್ಥಳ: ಆಸ್ಪತ್ರೆ ಆವರಣ, ಲಲಿತಾದ್ರಿಪುರ ರಸ್ತೆ, ಬೆಳಗ್ಗೆ 9 ರಿಂದ.
- **ರಾಮ್‌ಸನ್ಸ್ ಬೊಂಬೆ ಮನೆ :** ದಸರಾ ಬೊಂಬೆ ಪ್ರದರ್ಶನ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, ನಜರ್‌ಬಾದ್ ಮುಖ್ಯರಸ್ತೆ, ಬೆಳಗ್ಗೆ 10 ರಿಂದ ಸಂಜೆ 7ಗಂಟೆವರೆಗೆ.
- **ಡಾ.ಬಿ.ಆರ್.ಅಂಬೇಡ್ಕರ್ ಸಂಶೋಧನಾ ಹಾಗೂ ವಿಸ್ತರಣಾ ಕೇಂದ್ರ, ಗಾಂಧಿ ಅಧ್ಯಯನ ಕೇಂದ್ರ, ಗಾಂಧಿ ಭವನ, ಮಾನಸ ಗಂಗೋತ್ರಿ, ಮೈಸೂರು:** 74ನೇ ಸಂವಿಧಾನ ದಿನಾಚರಣೆ ಅಂಗವಾಗಿ ವಿಶೇಷ ಉಪನ್ಯಾಸ, ಮೈಸೂರು ವಿಶ್ವವಿದ್ಯಾನಿಲಯ ಕಾನೂನು ನಿಕಾಯ ಡೀನ್ ಪ್ರೊ. ಟಿ.ಆರ್. ಮಾರುತಿ ಅವರಿಂದ ಭಾರತದ ಸಂವಿಧಾನ ಮತ್ತು ಪರಿಸರ ಕುರಿತು ಉಪನ್ಯಾಸ, ಅಧ್ಯಕ್ಷತೆ : ಪರಿಸರ ಅಧ್ಯಯನ ವಿಭಾಗದ ಅಧ್ಯಕ್ಷ ಪ್ರೊ. ಎನ್.ಎಸ್. ರಾಜು, ಸ್ಥಳ: ಪರಿಸರ ವಿಜ್ಞಾನ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಬೆಳಗ್ಗೆ 10.30ಕ್ಕೆ.
- **ಹಿರಣ್ಮಯಿ ಪ್ರತಿಷ್ಠಾನ, ಕಾವೇರಿ ಬಳಗ :** ನಾಡು ನುಡಿ ಸಂಭ್ರಮ, ಅಧ್ಯಕ್ಷತೆ : ವಿಶ್ರಾಂತ ಶಿಕ್ಷಕ ರಾಜುಶೆಟ್ಟಿ, ಉದ್ಘಾಟನೆ : ಸಾಹಿತಿ ಬನ್ನೂರು ಕೆ. ರಾಜು, ಕಥಾ ನಿರೂಪಣೆ : ಕಲಾವಿದೆ ಶ್ರೀಮತಿ ಡಾ. ಜಮುನಾರಾಣಿ ಮಿರ್ಲೆ, ಗೀತಗಾಯನ : ಕಾವೇರಿ ಬಳಗದ ಅಧ್ಯಕ್ಷೆ ಶ್ರೀಮತಿ ಕಾವೇರಿಯಮ್ಮ, ಬಹುಮಾನ ವಿತರಣೆ : ಶಾಲಾ ಮುಖ್ಯ ಶಿಕ್ಷಕ ಗಿರೀಶ್ ಹುರಾ, ಪ್ರಾಸ್ತಾವಿಕ ನುಡಿ : ಹಿರಣ್ಮಯಿ ಪ್ರತಿಷ್ಠಾನ ಅಧ್ಯಕ್ಷ ಎ. ಸಂಗಪ್ಪ, ಸ್ಥಳ: ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಹಾರೋಹಳ್ಳಿ ಗ್ರಾಮ, ಬೆಳಗ್ಗೆ 11ಕ್ಕೆ
- **ಅಸೆಂಡೆನ್ಸ್ :** ಆರ್. ಚೇತನ್ ಅವರಿಂದ ವಾಟರ್‌ಕಲರ್ ಸೋಲೋ ಪ್ರದರ್ಶನ, ಮುಖ್ಯ ಅತಿಥಿಗಳು : ಅಂತರರಾಷ್ಟ್ರೀಯ ಕಲಾವಿದ ಎನ್. ಕಾಂತರಾಜ್, ಕಲಾವಿದ ಆರ್. ಲೋಕೇಶ, ಶ್ರೀ ಕಲಾನಿಕೇತನ ಸ್ಕೂಲ್ ಆಫ್ ಆರ್ಟ್ ಕಾರ್ಯದರ್ಶಿ ಬಾಬುರಾವ್, ಪ್ರಿನ್ಸಿಪಾಲ್ ಕೆ.ಸಿ. ಮಹದೇವ ಶೆಟ್ಟಿ, ಸ್ಥಳ: ಶ್ರೀ ಕಲಾನಿಕೇತನ ಆರ್ಟ್ ಗ್ಯಾಲರಿ, ವಿಜಯನಗರ 2ನೇ ಹಂತ, ಬೆಳಗ್ಗೆ 10 ರಿಂದ.
- **ಮರಿಮಲ್ಲಪ್ಪನವರ ಪದವಿಪೂರ್ವ ಕಾಲೇಜು :** 68ನೇ ಕನ್ನಡ ರಾಜ್ಯೋತ್ಸವ, ಅಧ್ಯಕ್ಷತೆ: ಮರಿಮಲ್ಲಪ್ಪನವರ ವಿದ್ಯಾಸಂಸ್ಥೆ ಗೌರವ ಕಾರ್ಯದರ್ಶಿ ಪ್ರೊ. ಕೆ.ಎನ್. ಪಂಚಾಕ್ಷರಸ್ವಾಮಿ, ಮುಖ್ಯ ಅತಿಥಿಗಳು : ಜಾನಪದ ವಿದ್ವಾಂಸ ಡಾ. ಪಿ.ಕೆ. ರಾಜಶೇಖರ, ಉಪಸ್ಥಿತರು : ಕಾಲೇಜು ಪ್ರಿನ್ಸಿಪಾಲ್ ಶ್ರೀಮತಿ ಎಂ.ಎಸ್. ವಿಜಯ, ಶೈಕ್ಷಣಿಕ ಅಧಿಕಾರಿ ಶ್ರೀಮತಿ ಮಂಗಳ ಮುದ್ದುಮಾದಪ್ಪ, ಸ್ಥಳ: ಗ್ಯಾಲರಿ ಹಾಲ್, ಕಾಲೇಜು ಆವರಣ, ಮಧ್ಯಾಹ್ನ 12.30ಕ್ಕೆ
- **ಹಿರಿಯರ ನಾಗರಿಕರ ವಿಶ್ವಸ್ಥ ಮಂಡಳಿ, ಹಿರಿಯ ನಾಗರಿಕರ ಮಂಡಳಿ :** ಸಂಸ್ಥಾಪನಾ ದಿನಾಚರಣೆ, ಉದ್ಘಾಟನೆ : ಶ್ರೀ ರಾಮಕೃಷ್ಣ ಆಶ್ರಮ ಅಧ್ಯಕ್ಷ ಶ್ರೀ ಸ್ವಾಮಿ ಮುಕ್ತಿದಾನಂದ ಮಹಾರಾಜ್, ಮುಖ್ಯ ಅತಿಥಿಗಳು : ಸಂಸದ ಪ್ರತಾಪ್ ಸಿಂಹ, ಸನ್ಮಾನಿತರು : ಗೋವಿಂದೇಗೌಡ, ಎಸ್.ವಿ. ವೆಂಕಟೇಶಯ್ಯ, ಡಾ. ಎಂ.ಟಿ. ನಾಗರಾಜ್, ಶ್ರೀಮತಿ ಸುಧಾ ಹರೀಶ್, ಶಂಕರನಾರಾಯಣ, ಅಧ್ಯಕ್ಷತೆ : ಹಿರಿಯ ನಾಗರಿಕರ ವಿಶ್ವಸ್ಥ ಮಂಡಳಿ ಅಧ್ಯಕ್ಷ ಎಸ್.ವಿ. ಗೌಡಪ್ಪ, ಉಪಸ್ಥಿತರು : ಹಿರಿಯ ನಾಗರಿಕರ ಮಂಡಳಿ ಅಧ್ಯಕ್ಷ ಡಾ.ಎಚ್.ಎಂ. ನಾಗರಾಜು, ಸ್ಥಳ: ಸರಸ್ವತಿ ಸಮುದಾಯ ಭವನ, ಜಯಲಕ್ಷ್ಮಿಪುರಂ, ಬೆಳಗ್ಗೆ 10.30ಕ್ಕೆ.

ಎಚ್‌ಎಸ್‌ಆರ್‌ಪಿ ನಂಬರ್ ಪ್ಲೇಟ್ ಬಗ್ಗೆ ಜಾಗೃತಿ ಮೂಡಿಸಲು ಸಾರಿಗೆ ಇಲಾಖೆ ಸಜ್ಜು



ಬೆಂಗಳೂರು: ಹೈ-ಸೆಕ್ಯುರಿಟಿ ರಿಜಿಸ್ಟ್ರೇಶನ್ ನಂಬರ್ ಪ್ಲೇಟ್‌ಗಳನ್ನು (ಎಚ್‌ಎಸ್‌ಆರ್‌ಪಿ) ಅಳವಡಿಸಲಾಗಿರುವ ವಾಹನಗಳ ಸಂಖ್ಯೆ ವೇಗ ಪಡೆದುಕೊಳ್ಳುತ್ತಿದೆ. ನವೆಂಬರ್ 17 ಅಂತಿಮ ದಿನಾಂಕವಾಗಿದ್ದರೂ, ನಗರದಲ್ಲಿ 2 ಕೋಟಿಯಲ್ಲಿ ಕೇವಲ 3 ಲಕ್ಷ ವಾಹನಗಳು ನೋಂದಣಿಯಾಗಿರುವುದರಿಂದ ಫೆಬ್ರವರಿ 17, 2024ರವರೆಗೆ ವಿಸ್ತರಿಸಲಾಗಿದೆ. ರಾಜ್ಯ ಸಾರಿಗೆ ಇಲಾಖೆಯು 2019ರ ಏಪ್ರಿಲ್‌ಗೆ ಮೊದಲು ನೋಂದಾಯಿಸಲಾದ ಎಲ್ಲಾ ಎರಡು ಕೋಟಿ ವಾಹನಗಳು ವಿಸ್ತರಿಸಿದ ಗಡುವಿನ ಮೊದಲು ಸಾಲಿಗೆ ಬರುತ್ತವೆ ಎಂದು ವಿಶ್ವಾಸ ಹೊಂದಿದೆ. ಹೀಗಾಗಿ ನಿವಾಸಿಗಳಲ್ಲಿ ಎಚ್‌ಎಸ್‌ಆರ್‌ಪಿ ಬಗ್ಗೆ ಪ್ರಚಾರ ಮತ್ತು ಜಾಗೃತಿ ಮೂಡಿಸಲು ಅವರು ಸಜ್ಜಾಗುತ್ತಿದ್ದಾರೆ. ರಸ್ತೆ ಸಾರಿಗೆ ಮತ್ತು ಹೆದ್ದಾರಿಗಳ ಸಚಿವಾಲಯವು (MoRTH) ಎಲ್ಲಾ ಹಳೆಯ ವಾಹನಗಳಲ್ಲಿ HSRP ನಂಬರ್ ಪ್ಲೇಟ್‌ಗಳನ್ನು ಅಳವಡಿಸುವುದನ್ನು ಕಡ್ಡಾಯಗೊಳಿಸಿದೆ. ನಂಬರ್ ಪ್ಲೇಟ್‌ಗಳನ್ನು ಸುಲಭವಾಗಿ ತೆಗೆಯುವ ಮೂಲಕ ವಾಹನಗಳ ದುರುಪಯೋಗವನ್ನು ತಡೆಯುವುದು ಪ್ರಾಥಮಿಕ ಕಾರಣಗಳಲ್ಲಿ ಒಂದಾಗಿದೆ. ಆದಾಗ್ಯೂ, ಎಚ್‌ಎಸ್‌ಆರ್‌ಪಿ ನಂಬರ್ ಪ್ಲೇಟ್‌ಗಳನ್ನು ರಿವೆಟ್‌ಗಳನ್ನು ಬಳಸಿ ಅಂಟಿಸಿದ ನಂತರ ಅವುಗಳನ್ನು ತೆಗೆದುಹಾಕಲಾಗುವುದಿಲ್ಲ.

ಏಪ್ರಿಲ್ 2019 ಕ್ಕಿಂತ ಮೊದಲು ನೋಂದಾಯಿಸಲಾದ ಎಲ್ಲಾ ವಾಹನಗಳು ಕಡ್ಡಾಯವಾಗಿ ಎಚ್‌ಎಸ್‌ಆರ್‌ಪಿ ನಂಬರ್ ಪ್ಲೇಟ್‌ಗಳನ್ನು ಅಳವಡಿಸಬೇಕು. ಈ ಸಂಬಂಧ ರಾಜ್ಯ ಸರ್ಕಾರ ಅಧಿಸೂಚನೆ ಹೊರಡಿಸಿದ್ದು, ನವೆಂಬರ್ 17 ಗಡುವು ಆಗಿತ್ತು ಎಂದು ಹೆಚ್ಚುವರಿ ಸಾರಿಗೆ ಆಯುಕ್ತ (ಜಾರಿ ದಕ್ಷಿಣ) ಮಲ್ಲಿಕಾರ್ಜುನ ಹೇಳಿದ್ದಾರೆ.

ಕಡೇ ಕಾರ್ತಿಕ ಸೋಮವಾರದಂದು ಮೈಸೂರಿನ ವಿವಿಧ ದೇವಾಲಯಗಳಲ್ಲಿ ವಿಶೇಷ ಪೂಜೆ

ದೀಪ ಬೆಳಗಿಸಿ ಇಷ್ಟಾರ್ಥಗಳ ಈಡೇರಿಕೆಗೆ ದೇವರ ಮೊರೆ ಹೋದ ಮಹಿಳಾ ಭಕ್ತರು

ಮೈಸೂರು, ಡಿ.11(ಆರ್‌ಕೆ, ಎಂಕೆ)– ಕಾರ್ತಿಕ ಮಾಸದ ಕಡೇ ಸೋಮವಾರದಂದು ಮೈಸೂರು ನಗರದಾದ್ಯಂತ ಇರುವ ಶಿವನ ಹಾಗೂ ಇನ್ನಿತರೆ ದೇವಸ್ಥಾನಗಳಲ್ಲಿ ಸಾಮೂಹಿಕವಾಗಿ ದೀಪ ಬೆಳಗಿಸಿ, ವಿಶೇಷ ಪೂಜಾ ಕೈಂಕರ್ಯ ನೆರವೇರಿಸಲಾಯಿತು.

ಸಂಜೆಯಾಗುತ್ತಿದ್ದಂತೆ ದೇವಸ್ಥಾನಗಳಲ್ಲಿ ನಡೆದ ವಿಶೇಷ ಪೂಜೆ, ಅರ್ಚನೆ, ಹೋಮ-ಹವನ ಹಾಗೂ ಇನ್ನಿತರೆ ಧಾರ್ಮಿಕ ಕೈಂಕರ್ಯಗಳಲ್ಲಿ ಭಾಗಿಯಾದ ಸಾವಿರಾರು ಭಕ್ತರು ಇಷ್ಟಾರ್ಥಗಳು ಸಿದ್ಧಿಸುವಂತೆ ಪ್ರಾರ್ಥನೆ ಸಲ್ಲಿಸಿದರು. ಕೆ.ಜಿ.ಕೊಪ್ಪಲಿನ ಶ್ರೀ ಚಂದ್ರಮೌಳೇಶ್ವರಸ್ವಾಮಿ ದೇವಸ್ಥಾನದಲ್ಲಿ ದೇವಸ್ಥಾನದ ಟ್ರಸ್ಟ್ ಹಾಗೂ ನೇಗಿಲಯೋಗಿ ಮಹಿಳೆಯರ ಕ್ಷೇಮಾಭಿವೃದ್ಧಿ ಸಂಘ ಮತ್ತು ನೇಗಿಲಯೋಗಿ ಸಮಾಜ ಸೇವಾ ಟ್ರಸ್ಟ್ ಸಂಯುಕ್ತಾಶ್ರಯದಲ್ಲಿ ಸಾಮೂಹಿಕ ದೀಪೋತ್ಸವ ಕಾರ್ಯಕ್ರಮ ಆಚರಿಸಲಾಯಿತು.

ಭಕ್ತರು ಮಣ್ಣಿನ ದೀಪ ಹಾಗೂ ಎಣ್ಣೆ ತಂದು ಸರತಿ ಸಾಲಿನಲ್ಲಿ ದೀಪಗಳನ್ನು ಬೆಳಗಿಸಿದರಲ್ಲದೆ ಸಾಮೂಹಿಕ ಭಜನೆ ಮೂಲಕ ದೇವರಲ್ಲಿ ಪ್ರಾರ್ಥನೆ ಸಲ್ಲಿಸಿದರು. ಹಾಗೆಯೇ ದೇವಸ್ಥಾನದ ಆವರಣದಲ್ಲಿ ಮಾಡಲಾಗಿದ್ದ ಸೆಲ್ಫಿ ಸ್ಪಾಟ್‌ನಲ್ಲಿ ಫೋಟೋ ಕ್ಲಿಕ್ಕಿಸಿಕೊಂಡು ಸಂಭ್ರಮಿಸಿದರು. ಹಾಗೆಯೇ ಮಾತೃಮಂಡಳಿ ವೃತ್ತದಲ್ಲಿರುವ ಚಂದ್ರಮೌಳೇಶ್ವರ ದೇವಸ್ಥಾನದಲ್ಲಿಯೂ ದೀಪೋತ್ಸವ ಆಚರಿಸಲಾಯಿತು.




ಮೈಸೂರು ಕೆ.ಜಿ.ಕೊಪ್ಪಲಿನ ಶ್ರೀ ಚಂದ್ರಮೌಳೇಶ್ವರಸ್ವಾಮಿ ದೇವಸ್ಥಾನದಲ್ಲಿ ನೇಗಿಲಯೋಗಿ ಮಹಿಳೆಯರ ಕ್ಷೇಮಾಭಿವೃದ್ಧಿ ಸಂಘ ಮತ್ತು ನೇಗಿಲಯೋಗಿ ಸಮಾಜ ಸೇವಾ ಟ್ರಸ್ಟ್ ಸಂಯುಕ್ತಾಶ್ರಯದಲ್ಲಿ ಸಾಮೂಹಿಕ ದೀಪೋತ್ಸವ ಕಾರ್ಯಕ್ರಮ ಆಚರಿಸಲಾಯಿತು. ಬಲಚಿತ್ರದಲ್ಲಿ ಮಾತೃ ಮಂಡಳಿ ವೃತ್ತದಲ್ಲಿರುವ ಚಂದ್ರಮೌಳೇಶ್ವರ ದೇವಸ್ಥಾನದಲ್ಲಿ ಲಕ್ಷ ದೀಪೋತ್ಸವ ವಿಜೃಂಭಣೆಯಿಂದ ನಡೆಯಿತು.

ಹಿನಕಲ್‌ನ ನನ್ನೇಶ್ವರ ದೇವಸ್ಥಾನ: ಮೈಸೂರಿನ ಹಿನಕಲ್‌ನಲ್ಲಿರುವ ಶ್ರೀ ನನ್ನೇಶ್ವರ ದೇವಸ್ಥಾನದ ಆವರಣ ಹಾಗೂ ದೇವಸ್ಥಾನ ವ್ಯಾಪ್ತಿಯ ದೇವರ ಕಲ್ಯಾಣಿಯಲ್ಲಿ ಭಕ್ತಿ-ಭಾವದಿಂದ ಕಾರ್ತಿಕ ಮಾಸದ ಅಂಗವಾಗಿ ಲಕ್ಷ ದೀಪೋತ್ಸವ ಆಚರಿಸಲಾಯಿತು. ಕಲ್ಯಾಣಿ ಸುತ್ತಲೂ ದೀಪಗಳನ್ನು ಬೆಳಗಿಸಿದ ಭಕ್ತ ಸಮೂಹ ದೀಪಗಳ ಬೆಳಕಿನಲ್ಲಿ ಮಿಂದೆದ್ದರು. ಬಳಿಕ ಭಕ್ತಾದಿಗಳಿಗೆ ಅನ್ನಸಂತರ್ಪಣೆ ನಡೆಯಿತು.

ಶ್ರೀ ನನ್ನೇಶ್ವರ ದೇವಸ್ಥಾನ ಸಮಿತಿಯ ಹೆಚ್.ಸಿ ರಾಜು, ಲೋಹಿತ್ ವಿ ಅರಸ್, ಹಿನಕಲ್ ಪಾಪಣ್ಣ, ಹಿನಕಲ್ ಗಣೇಶ್, ಎಂ.ರೇವಣ್ಣ, ಹೊನ್ನಪ್ಪ, ಮುಖಂಡರಾದ ಜಗದೀಶ್, ಕೆಂಪನಾಯಕ, ಕೆ.ಜಿ. ನಾಗರಾಜ್, ಶ್ರೀನಿವಾಸ್ ರಾಮೇಗೌಡ, ಹಿನಕಲ್ ಪ್ರಕಾಶ್, ಸಿ.ಸ್ವಾಮಿ, ಜವರಪ್ಪ, ಮಿಲ್ ಸ್ವಾಮಿ, ಮಂಜುನಾಥ, ಮಹದೇವ, ಮಹೇಶ್, ಲೋಕೇಶ್, ಈಶ್ವರಪ್ಪ, ಜೆ.ವೆಂಕಟೇಶ್, ಗ್ರಾಪಂ ಮಾಜಿ ಸದಸ್ಯೆ ನೇಹಾ ಹಾಗೂ ಗ್ರಾಮಸ್ಥರು ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

ಶ್ರೀ ಅಮೃತೇಶ್ವರ ದೇವಸ್ಥಾನ: ನಗರದ ದಿವಾನ್ಸ್ ರಸ್ತೆಯಲ್ಲಿರುವ ಶ್ರೀ ಅಮೃತೇಶ್ವರ ದೇವಸ್ಥಾನದಲ್ಲಿ ಕಡೇ ಕಾರ್ತಿಕ ಮಾಸದ ಅಂಗವಾಗಿ ವಿಶೇಷ ಪೂಜೆ ಸಲ್ಲಿಸಿ, ಸಾವಿರಾರು ದೀಪಗಳನ್ನು ಬೆಳಗಿಸಲಾಯಿತು. ರಾತ್ರಿ 8.30ರ ವೇಳೆಗೆ ಸಾವಿರಾರು ಮಂದಿ ಭಕ್ತರು ಜೋಡಿಸಲಾಗಿದ್ದ ದೀಪಗಳನ್ನು ಬೆಳಗಿಸಿ ಭಕ್ತಿಯಿಂದ ಧ್ಯಾನ ಮಾಡಿದರು.

ಹಾಗೆಯೇ ಧನ್ವಂತರಿ ರಸ್ತೆ ಮಧ್ಯದಲ್ಲಿರುವ ಶ್ರೀ ಚಿದಂಬರಸ್ವಾಮಿ ಹಾಗೂ ಶ್ರೀ ಆನಂದವಲ್ಲಿ ದೇವಸ್ಥಾನದಲ್ಲಿ ನೂರಾರು ದೀಪಗಳನ್ನು ಬೆಳಗಿಸಿ ಕಾರ್ತಿಕ ಮಾಸ ಆಚರಿಸಲಾಯಿತು.



ಹಿನಕಲ್ ಶ್ರೀ ನನ್ನೇಶ್ವರ ದೇವಸ್ಥಾನದ ಕಲ್ಯಾಣಿಯಲ್ಲಿ ಕಾರ್ತಿಕ ಮಾಸದ ಕಡೇ ಸೋಮವಾರ ಲಕ್ಷ ದೀಪೋತ್ಸವ ನಡೆಯಿತು.

ಶ್ರೀ ಮಲೆ ಮಹದೇಶ್ವರಸ್ವಾಮಿ ದೇವಸ್ಥಾನ: ಮೈಸೂರಿನ ನಜರ್‌ಬಾದ್‌ನಲ್ಲಿರುವ ಶ್ರೀ ಮಲೆ ಮಹದೇಶ್ವರಸ್ವಾಮಿ ದೇವಸ್ಥಾನದಲ್ಲಿ ಕಾರ್ತಿಕ ಮಾಸದ ಕಡೇ ಸೋಮವಾರದಂದು ದೀಪೋತ್ಸವ ಹಾಗೂ ಅನ್ನಸಂತರ್ಪಣೆ ನಡೆಸಲಾಯಿತು. ಬೆಳಗ್ಗೆಯಿಂದಲೇ ದೇವಸ್ಥಾನಕ್ಕೆ ಭೇಟಿ ನೀಡಿದ ಲಕ್ಷಾಂತರ ಮಂದಿ ಭಕ್ತರು ದೇವಸ್ಥಾನದ ಎದುರು ದೀಪಗಳನ್ನು ಬೆಳಗಿಸಿ, ಪೂಜೆ ಸಲ್ಲಿಸಿ, ಅರ್ಚನೆ ಮಾಡಿದರು. ಹಾಗೆಯೇ ದೇವಸ್ಥಾನ ಎದುರು ಭಕ್ತರಿಗೆ ಪ್ರಸಾದ ನೀಡುವ ವ್ಯವಸ್ಥೆ ಮಾಡಲಾಗಿತ್ತು.

ಹಾಗೆಯೇ ಕುವೆಂಪುನಗರ ಡಬಲ್ ರೋಡ್‌ನಲ್ಲಿರುವ ಈಶ್ವರ ದೇವಸ್ಥಾನ ಸೇರಿದಂತೆ ಹಲವೆಡೆ ಈಶ್ವರನ ವಿಗ್ರಹಗಳನ್ನು ಪ್ರತಿಷ್ಠಾಪಿಸಿ ಉತ್ಸವ ನೆರವೇರಿಸಲಾಯಿತು. ಅಲ್ಲದೇ ನಗರದಾದ್ಯಂತ ಎಲ್ಲಾ ಬಡಾವಣೆಗಳ ಪ್ರಮುಖ ಸರ್ಕಲ್‌ಗಳಲ್ಲಿ ಸಂಘ-ಸಂಸ್ಥೆಗಳಿಂದಲೂ ಕಡೇ ಸೋಮವಾರ ಆಚರಿಸಿ ಸಾರ್ವಜನಿಕರಿಗೆ ಪ್ರಸಾದ ವಿನಿಯೋಗ ಮಾಡಲಾಯಿತು.

ಗ್ರಾಮಾಂತರ ಪ್ರದೇಶಗಳಲ್ಲಿ ರಾತ್ರಿ ಈಶ್ವರನ ಉತ್ಸವಮೂರ್ತಿಯ ಮೆರವಣಿಗೆಯನ್ನು ಬೀದಿಗಳಲ್ಲಿ ಕೊಂಡೊಯ್ದು ದೇವಸ್ಥಾನದ ಆವರಣಕ್ಕೆ ಇರಿಸಲಾಯಿತು. ಸಾವಿರಾರು ಮಂದಿ ದೇವರ ದರ್ಶನ ಮಾಡಿದರಲ್ಲದೆ, ನಾಳೆ (ಡಿ. 12) ಬೆಳಗ್ಗೆ ಕಾರ್ತಿಕ ಮಾಸದ ಕಡೇ ಸೋಮವಾರದ ಅಂಗವಾಗಿ ಕೊಂಡೋತ್ಸವವನ್ನೂ ಆಯೋಜಿಸಲಾಗಿದೆ.

ಮೈಸೂರಿನ ಮಹಾರಾಣಿ ವಿಜ್ಞಾನ ಕಾಲೇಜಲ್ಲಿ ಇಂಗ್ಲಿಷ್ ವಿಭಾಗದ ಶೈಕ್ಷಣಿಕ ಪ್ರಾತ್ಯಕ್ಷಿಕೆ ಪ್ರದರ್ಶನ



ಮಹಾರಾಣಿ ಮಹಿಳಾ ಕಲಾ ಕಾಲೇಜಿನ ಪ್ರಾಂಶುಪಾಲ ಡಾ.ಬಿ.ವಿ.ವಸಂತಕುಮಾರ್, ವಸ್ತುಪ್ರದರ್ಶನದ ಪ್ರಾತ್ಯಕ್ಷಿಕೆಗಳನ್ನು ವೀಕ್ಷಿಸಿ, ವಿದ್ಯಾರ್ಥಿನಿಯರನ್ನು ಪ್ರಶಂಸಿಸಿದರು.

ಮೈಸೂರು,ಡಿ.11(ಎಸ್‌ಬಿಡಿ)– ಮೈಸೂರಿನ ಮಹಾರಾಣಿ ಮಹಿಳಾ ವಿಜ್ಞಾನ ಸ್ವಾಯತ್ತ ಕಾಲೇಜಿನಲ್ಲಿ ಇಂಗ್ಲಿಷ್ ವಿಭಾಗದ ವತಿಯಿಂದ ವಸ್ತು ಪ್ರದರ್ಶನ ಏರ್ಪಡಿಸಲಾಗಿತ್ತು. ಕಾಲೇಜಿನ ಕಲಾ ಮಂಟಪದಲ್ಲಿ ಏರ್ಪಡಿಸಿದ್ದ ವಸ್ತುಪ್ರದರ್ಶನದಲ್ಲಿ ಪ್ರಥಮ, ದ್ವಿತೀಯ ವರ್ಷದ ವಿಜ್ಞಾನ ಪದವಿ ವಿದ್ಯಾರ್ಥಿಗಳು ಪಠ್ಯಕ್ಕೆ ಸಂಬಂಧಿಸಿದ ಪ್ರಾತ್ಯಕ್ಷಿಕೆಗಳನ್ನು ಪ್ರದರ್ಶಿಸಿ, ಅದರ ಬಗ್ಗೆ ವಿವರಣೆ ನೀಡಿದರು.

ಇಂಗ್ಲಿಷ್ ಲೇಖಕ ವಿಲಿಯಂ ಷೇಕ್ಸ್‌ಪಿಯರ್ ಅವರ ಅಥೆಲೊ, ರವೀಂದ್ರನಾಥ ಠಾಗೋರ್ ಅವರ ಸ್ವಾತಂತ್ರ್ಯ ಪದ್ಯ ಸೇರಿದಂತೆ ಮೊದಲನೇ ಮತ್ತು ಮೂರನೇ ಚಾತುರ್ಮಾಸ ಪಠ್ಯದ ಪದ್ಯ, ಗದ್ಯ ಮತ್ತು ನಾಟಕ, ಸಾಧಕರ ಸಂದರ್ಶನ, ವಿಡಿಯೋ ಪ್ರದರ್ಶನ, ಪದ್ಯಗಳ ಓದು ಸೇರಿದಂತೆ ಹಲವು ಕ್ರಿಯಾಶೀಲ ಚಟುವಟಿಕೆಗಳನ್ನು ಪ್ರಸ್ತುತಪಡಿಸಿ, ಮೆಚ್ಚುಗೆ ಪಡೆದರು.

ವಸ್ತುಪ್ರದರ್ಶನ ಉದ್ಘಾಟಿಸಿದ ಮಹಾರಾಣಿ ಮಹಿಳಾ ಕಲಾ ಕಾಲೇಜಿನ ಪ್ರಾಂಶುಪಾಲ ಡಾ.ಬಿ.ವಿ.ವಸಂತಕುಮಾರ್, ವಿದ್ಯಾರ್ಥಿಗಳು ಸ್ವತಃ ತಯಾರಿಸಿದ ಮಾದರಿಗಳನ್ನು ನೋಡಿ ಶ್ಲಾಘಿಸಿದರಲ್ಲದೆ, ವಿದ್ಯಾರ್ಥಿ ದಿಸೆಯಲ್ಲಿ ಈ ರೀತಿಯ ಕ್ರಿಯಾಶೀಲ ಚಟುವಟಿಕೆಗಳಲ್ಲಿ ತೊಡಗಿಕೊಂಡರೆ ಮುಂದಿನ ದಿನಗಳಲ್ಲಿ ಉದ್ಯೋಗ ಗಳಿಸಲು ಮತ್ತು ವೃತ್ತಿಯಲ್ಲಿ ಉನ್ನತಿ ಸಾಧಿಸಲು ಸಹಕಾರಿಯಾಗಲಿದೆ ಎಂದು ಸಲಹೆ ನೀಡಿದರು.

ಮಹಾರಾಣಿ ಮಹಿಳಾ ವಿಜ್ಞಾನ ಕಾಲೇಜಿನ ಪ್ರಾಂಶುಪಾಲ ಪ್ರೊ.ಅಬ್ದುಲ್ ರಹಿಮಾನ್ ಮಾತನಾಡಿ, ಪಠ್ಯದ ವಸ್ತು ವಿಷಯಗಳನ್ನು ಚಟುವಟಿಕೆಗಳ ಮೂಲಕ ಪ್ರಾಯೋಗಿಕವಾಗಿ ಅರ್ಥೈಸಿಕೊಳ್ಳುವುದರಿಂದ ಮುಂದಿನ ದಿನಗಳಲ್ಲಿ ಸಾಕಷ್ಟು ಉಪಯೋಗವಾಗಲಿದೆ. ಮಾತೃಭಾಷೆ ಜತೆಗೆ ಇಂಗ್ಲಿಷ್ ಭಾಷಾ ಸಂವಹನ ಕಲೆ ಅಗತ್ಯವಾಗಿದೆ ಎಂದು ಕಿವಿಮಾತು ಹೇಳಿದರು.

ಇಂಗ್ಲಿಷ್ ವಿಭಾಗದ ಮುಖ್ಯಸ್ಥ ಗೋವಿಂದರಾಜು ಪ್ರಾಸ್ತಾವಿಕವಾಗಿ ಮಾತನಾಡಿ, ವಸ್ತುಪ್ರದರ್ಶನದ ಬಗ್ಗೆ ವಿವರಿಸಿದರು. ವಿದ್ಯಾರ್ಥಿಗಳ ಪ್ರತಿಭೆಯನ್ನು ಸಾಮಾಜಿಕ ಜಾಲತಾಣದ ಮೂಲಕ ಅಭಿವ್ಯಕ್ತಪಡಿಸುವ ಉದ್ದೇಶದಿಂದ ಇಂಗ್ಲಿಷ್ ವಿಭಾಗದ ವತಿಯಿಂದ ಆರಂಭಿಸಲಾಗಿರುವ ಯೂಟ್ಯೂಬ್ ಚಾನೆಲ್ ಅನ್ನು ಇದೇ ವೇಳೆ ಲೋಕಾರ್ಪಣೆ ಮಾಡಲಾಯಿತು. ವಿವಿಧ ಕಾಲೇಜಿನ ಸಾವಿರಾರು ವಿದ್ಯಾರ್ಥಿಗಳು ವಸ್ತುಪ್ರದರ್ಶನ ವೀಕ್ಷಿಸಿದರು.

ಈ ವೇಳೆ ಆಂತರಿಕ ಗುಣಮಟ್ಟ ಕೋಶದ ಸಂಚಾಲಕ ವಿ.ನಂದಕುಮಾರ್, ಕನ್ನಡ ವಿಭಾಗದ ಮುಖ್ಯಸ್ಥ ಡಾ.ಕೆಂಡಗಣ್ಣೇಗೌಡ, ಕುವೆಂಪುನಗರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಇಂಗ್ಲಿಷ್ ಸಹ ಪ್ರಾಧ್ಯಾಪಕ ಡಾ.ಬಸವರಾಜು, ವಿಭಾಗದ ಅಧ್ಯಾಪಕರಾದ ಡಾ.ವಿ.ಆರ್.ರಮೇಶ್ ಬಾಬು, ಡಾ.ಜಿ.ಪರಶುರಾಮಮೂರ್ತಿ, ಮಹಾರಾಣಿ ಮಹಿಳಾ ಕಲಾ ಕಾಲೇಜಿನ ಇಂಗ್ಲಿಷ್ ವಿಭಾಗದ ಮುಖ್ಯಸ್ಥರಾದ ರೇಖಾ ಮ್ಯಾಥಿವ್, ಸಹಾಯಕ ಪ್ರಾಧ್ಯಾಪಕರಾದ ಡಾ.ಸೌರಭ, ಅಭಿಷೇಕ್, ದಿನೇಶ್, ಹೆಚ್‌ಎಸ್.ರಂಗನಾಥ್, ಟಿ.ವಿ.ಲೋಕೇಶ್, ವಸ್ತುಪ್ರದರ್ಶನ ತೀರ್ಪುಗಾರರಾದ ಡಾ.ರಾಘವೇಂದ್ರ, ಡಾ.ಮಲ್ಲಿಕಾರ್ಜುನ, ಡಾ.ರಾಮಚಂದ್ರ, ಆನಂದ, ಶಶಿಕುಮಾರ್ ರಮೇಶ್, ಕೆ.ಸೌಮ್ಯ ಇದ್ದರು.

ಮಂಟೇಸ್ವಾಮಿ ಜಾತ್ಯಾತೀತತೆ ಮೌಲ್ಯ ಸಾರಿದವರು

- ಶ್ರೀಮಂಟೇಸ್ವಾಮಿ ಮಠದ ಶ್ರೀ ಎಂ.ಎಲ್.ವರ್ಚಸ್ವಿ ಶ್ರೀಕಂಠ ಸಿದ್ದಲಿಂಗರಾಜೇ ಅರಸ್ ಸ್ವಾಮಿಗಳು
- ಕಡೇ ಕಾರ್ತಿಕ ಸೋಮವಾರದ ಪ್ರಯುಕ್ತ ಪುಷ್ಪಾಲಂಕೃತ ಕಂಡಾಯ, ಕಳಸ, ದಾಳಗಳ ಮೆರವಣಿಗೆ

ಮೈಸೂರು,ಡಿ.11(ಪಿಎಂ)–ಶ್ರೀಮಂಟೇಸ್ವಾಮಿಯವರು ಸಹಭಾಗಿತ್ವ, ಏಕತೆ ಮತ್ತು ಜಾತ್ಯಾತೀತತೆಯ ಮೌಲ್ಯಗಳನ್ನು ಸಮಾಜದಲ್ಲಿ ಹರಡಿದ್ದು, ನೀಲಗಾರರು ಇಂತಹ ಮೌಲ್ಯಗಳ ಪರಂಪರೆಯನ್ನು ಕಾಪಾಡಿಕೊಂಡು ಬರುತ್ತಿದ್ದಾರೆ ಎಂದು ಮಳವಳ್ಳಿಯ ಶ್ರೀಮಂಟೇಸ್ವಾಮಿ ಮಠ, ಆದಿಹೊನ್ನಾಯಕನಹಳ್ಳಿ ಮತ್ತು ಶ್ರೀ ಕಪ್ಪಡಿ ಕ್ಷೇತ್ರದ ಪೀಠಾಧಿಪತಿಗಳಾದ ಶ್ರೀ ಎಂ.ಎಲ್.ವರ್ಚಸ್ವಿ ಶ್ರೀಕಂಠ ಸಿದ್ದಲಿಂಗರಾಜೇ ಅರಸ್ ಸ್ವಾಮಿಗಳು ತಿಳಿಸಿದರು.

ಮೈಸೂರಿನ ಕೆಸರೆ ಮೂರನೇ ಹಂತದ ಕುರಿಮಂಡಿಯ ಡಾ.ಬಿ.ಆರ್. ಅಂಬೇಡ್ಕರ್‌ನಗರದ ಶ್ರೀ ಸಿದ್ದಪ್ಪಾಜಿ ದೇವಸ್ಥಾನದಲ್ಲಿ ಶ್ರೀ ಮಂಟೇಸ್ವಾಮಿ ನೀಲಗಾರರು ಹಾಗೂ ಶ್ರೀ ಸಿದ್ದಪ್ಪಾಜಿ ದೇವಸ್ಥಾನದ ಹಕ್ಕು ರಕ್ಷಣಾ ಸಮಿತಿ ವತಿಯಿಂದ ಕಡೇ ಕಾರ್ತಿಕ ಸೋಮವಾರದ ಪ್ರಯುಕ್ತ ಸೋಮವಾರ ಹಮ್ಮಿಕೊಂಡಿದ್ದ ಕಳಸ, ಕಂಡಾಯ ಪೂಜೆ ಹಾಗೂ ದೀಪೋತ್ಸವದ ಧಾರ್ಮಿಕ ಕಾರ್ಯಕ್ರಮದಲ್ಲಿ ಪಾಲ್ಗೊಂಡು ದೇವಸ್ಥಾನದಲ್ಲಿನ ಶ್ರೀ ಸಿದ್ದಪ್ಪಾಜಿ ವಿಗ್ರಹಕ್ಕೆ ವಿಶೇಷ ಪೂಜೆ ಸಲ್ಲಿಸಿ, ಅವರು ಮಾತನಾಡಿದರು.

ಶ್ರೀಮಂಟೇಸ್ವಾಮಿಯವರ ಪರಂಪರೆ ಸುಮಾರು 600 ವರ್ಷಗಳ ಸುದೀರ್ಘ ಇತಿಹಾಸವನ್ನು ಹೊಂದಿದೆ. ಮಂಟೇಸ್ವಾಮಿಯವರು 14-15ನೇ ಶತಮಾನದ ಶಿವಶರಣರು. ಮಂಟೇಸ್ವಾಮಿಯವರು ಹಲವು ವಿಷಯಗಳ ಬಗ್ಗೆ ಸಮಾಜಕ್ಕೆ ಸ್ಪಷ್ಟವಾಗಿ ತಿಳಿಸಿಕೊಟ್ಟಿದ್ದಾರೆ. ಅವುಗಳಲ್ಲಿ ಸಹಭಾಗಿತ್ವ, ಏಕತೆ ಮತ್ತು ಜಾತ್ಯಾತೀತತೆ ಮೌಲ್ಯಗಳು ಮುಖ್ಯವಾದವು. ಮಂಟೇಸ್ವಾಮಿ ಪರಂಪರೆ ಭವ್ಯ ಮತ್ತು ಶ್ರೀಮಂತ ಹಿನ್ನೆಲೆಯನ್ನು ಹೊಂದಿದೆ ಎಂದು ತಿಳಿಸಿದರು.

ಉತ್ತರ ಕರ್ನಾಟಕದ ಕೊಡೇಕಲ್ಲ ಬಸವಣ್ಣ ಎಂದು ಒಬ್ಬರು ಶಿವಶರಣರಿದ್ದರು. ಮಂಟೇಸ್ವಾಮಿಯವರು ಅವರ ಸಹಪಾಠಿ. ಅಲ್ಲಿ ಅವರ ಪುತ್ರನನ್ನು ಶಿಷ್ಯನಾಗಿ ಪಡೆದುಕೊಂಡು ರಾಜ್ಯದ ದಕ್ಷಿಣ ಭಾಗಕ್ಕೆ ಮಂಟೇಸ್ವಾಮಿ ಬರುತ್ತಾರೆ. ಈ ಹಿಂದೆ ಈ ಭಾಗವನ್ನು ಕತ್ತಲ ರಾಜ್ಯ ಎಂದು ಕರೆಯಲಾಗುತ್ತಿತ್ತು. ಕತ್ತಲ ರಾಜ್ಯದಲ್ಲಿ ಜ್ಞಾನ ಪ್ರಸಾರಕ್ಕಾಗಿ ಮಂಟೇಸ್ವಾಮಿ ಬರುತ್ತಾರೆ. ಮಂಟೇಸ್ವಾಮಿ ಮತ್ತು ಮಲೆ ಮಹದೇಶ್ವರಸ್ವಾಮಿಯವರ ಪರಂಪರೆಗಳನ್ನು ಹಳೇ ಮೈಸೂರು ಪ್ರಾಂತ್ಯದಲ್ಲಿ ಪ್ರತಿಯೊಂದು ಹಳ್ಳಿಯಲ್ಲೂ ಕಾಣಬಹುದು ಎಂದು ಹೇಳಿದರು.

ಇಲ್ಲಿನ ಜಾನಪದ ಗಾಯಕ ದಿ.ಮಳವಳ್ಳಿ ಗುರುಬಸವಯ್ಯ ಅವರ ಕಾಲದಿಂದ ಕಡೇ ಕಾರ್ತಿಕ ಸೋಮವಾರದ ಆಚರಣೆ ಮಾಡುತ್ತಿರುವುದು ಸಂತಸದ ವಿಚಾರ. ಪ್ರತಿಯೊಬ್ಬ ಭಕ್ತರನ್ನೂ ಮಂಟೇಸ್ವಾಮಿಯವರು ಕಾಪಾಡಲಿ ಎಂದು ಆಶೀರ್ವದಿಸಿದರು.



ಇದಕ್ಕೂ ಮುನ್ನ ನಡೆದ ಕಂಡಾಯ, ಕಳಸ, ದಾಳಗಳ ಮೆರವಣಿಗೆಯೊಂದಿಗೆ ಎಂ.ಎಲ್. ವರ್ಚಸ್ವಿ ಶ್ರೀಕಂಠ ಸಿದ್ದಲಿಂಗರಾಜೇ ಅರಸ್ ಶ್ರೀಗಳು ಹೆಜ್ಜೆ ಹಾಕಿದರು.

ಇಲ್ಲಿನ ಮುಖ್ಯ ರಸ್ತೆಗಳಲ್ಲಿ ಮೆರವಣಿಗೆಯು ಸಾಗಿತು. ದಾರಿಯುದ್ದಕ್ಕೂ ಶ್ರೀಗಳು ಭಕ್ತರನ್ನು ಆಶೀರ್ವದಿಸಿದರು. ನಂತರ ಕುರಿಮಂಡಿ ವೃತ್ತದಿಂದ ಆರಂಭಗೊಂಡ ಮೆರವಣಿಗೆಯು, ಇಲ್ಲಿನ ಸಿದ್ದಪ್ಪಾಜಿ ದೇವಸ್ಥಾನ ತಲುಪಿ ಅಂತ್ಯಗೊಂಡಿತು. ಈ ಸಂದರ್ಭದಲ್ಲಿ ನಗರಪಾಲಿಕೆ ಮಾಜಿ ಸದಸ್ಯ ಪ್ರದೀಪ್ ಚಂದ್ರ, ಜಾನಪದ ಗಾಯಕ ಮೈಸೂರು ಗುರುರಾಜ್, ದೇವಸ್ಥಾನ ಗುಡ್ಡಪ್ಪ ಕೆಂಪರಾಜು, ಕಾಂಗ್ರೆಸ್ ಎಸ್‌ಸಿ ಘಟಕದ ಮುಖಂಡರಾದ ಜಿ.ಮಂಟೇಲಿಂಗಯ್ಯ, ಸಿದ್ದರಾಜು, ಕೆ.ರಮೇಶ್, ಮುಖಂಡ ಶಿವಕುಮಾರ್ ಸೇರಿದಂತೆ ಬಡಾವಣೆಯ ನಿವಾಸಿಗಳು ಹಾಜರಿದ್ದರು.

ಕಟ್ಟಡ ನಿರ್ಮಾಣ ಸಾಮಗ್ರಿಗಳ ಪ್ರದರ್ಶನ, ಮಾರಾಟದ ಮೈ ಬಿಲ್ಡ್ ವಸ್ತುಪ್ರದರ್ಶನಕ್ಕೆ ತೆರೆ

ಮೈಸೂರು,ಡಿ.11(ಎಂಕೆ)– ಮೈಸೂರು ಮಹಾರಾಜ ಕಾಲೇಜು ಮೈದಾನದಲ್ಲಿ ಬಿಲ್ಡರ್ಸ್ ಅಸೋಸಿಯೇಶನ್ ಆಫ್ ಇಂಡಿಯಾ ಮೈಸೂರು ಕೇಂದ್ರದ ವತಿಯಿಂದ ಆಯೋಜಿಸಿದ್ದ 'ಮೈ ಬಿಲ್ಡ್-2023' ವಸ್ತುಪ್ರದರ್ಶನ ಯಶಸ್ವಿ ತೆರೆಕಂಡಿತು.

ಕಳೆದ 5 ದಿನಗಳಿಂದ ಸಿಮೆಂಟ್, ಕಬ್ಬಿಣ, ಎಂ.ಸ್ಯಾಂಡ್, ನವೀನ ರೀತಿಯ ಬಾಗಿಲುಗಳು, ಕೃತಕ ಹಸಿರು ನೆಲಹಾಸು, ಇಂಟೀರಿಯರ್ ಡಿಸೈನ್ಸ್, ಹೋಂ ಥಿಯೇಟರ್ ಸೇರಿದಂತೆ ಬಹು ವಿಧದ ಕಟ್ಟಡ ನಿರ್ಮಾಣ ಸಾಮಗ್ರಿಗಳ ಬೃಹತ್ ವಸ್ತುಪ್ರದರ್ಶನ 'ಮೈ ಬಿಲ್ಡ್-2023' ಅಪಾರ ಜನಮನ್ನಣೆಯೊಂದಿಗೆ ಯಶಸ್ವಿಯಾಯಿತು.

ಕಡೆಯ ದಿನವಾದ ಸೋಮವಾರ ನಡೆದ ಸಮಾರೋಪ ಸಮಾರಂಭದಲ್ಲಿ ಅತ್ಯುತ್ತಮ ರೀತಿಯಲ್ಲಿ ಸ್ಟಾಲ್(ಮಳಿಗೆ)ಗಳನ್ನು ನಿರ್ಮಿಸಿ, ಗ್ರಾಹಕರಿಗೆ ಉಪಯುಕ್ತ ಮಾಹಿತಿ ನೀಡಿದ ವಿವಿಧ ಬಿಲ್ಡರ್ಸ್ ಹಾಗೂ ಇನ್ನಿತರೆ ಕಂಪನಿಗಳಿಗೆ ಬಹುಮಾನ ನೀಡುವುದರೊಂದಿಗೆ ಪ್ರೋತ್ಸಾಹಿಸಲಾಯಿತು.



ಪ್ಲಾಟಿನಂ ಬ್ಲಾಕ್‌ನ ಮಲ್ಟಿ ಸ್ಟಾಲ್ ವಿಭಾಗ (ಮೂರು ಅಥವಾ ಅದಕ್ಕಿಂತ ಹೆಚ್ಚು ಹೆಚ್ಚು)ದಲ್ಲಿ 'ಪ್ರೊ ಎಫ್‌ಎಕ್ಸ್ ಟೆಕ್ ಪ್ರೈವೆಟ್ ಲಿಮಿಟೆಡ್' ಪ್ರಥಮ, 'ಇಸ್ಪೈರ್ಸ್ ಯುಪಿವಿಸಿ ವಿಂಡೋಸ್' ದ್ವಿತೀಯ, 'ಆರ್‌ಕೆಬಿ ಬಿಲ್ಡ್ ಪ್ರೊ' ತೃತೀಯ ಸ್ಥಾನ ಪಡೆದರೆ, **ಡಬಲ್ ಸ್ಟಾಲ್ ವಿಭಾಗದಲ್ಲಿ** 'ಈವೆಂಟ್ಸ್-ಹ್ಯಾವೆಲ್ಸ್-ಮಂಗಳದೀಪ್ ಎಲೆಕ್ಟ್ರಿಕಲ್ಸ್ ಅಂಡ್ ಲೈಟ್ಸ್' ಪ್ರಥಮ, 'ಜಿನೀತ್ ಕನ್‌ಸ್ಟ್ರಕ್ಷನ್' ದ್ವಿತೀಯ ಹಾಗೂ 'ಅಲೈನ್ಸ್ ಸ್ಕ್ವೇರ್' ತೃತೀಯ ಸ್ಥಾನ ಪಡೆಯಿತು. ಹಾಗೆಯೇ **ಸಿಂಗಲ್ ಸ್ಟಾಲ್ ವಿಭಾಗದಲ್ಲಿ** 'ಅಹ್ಮದಲಿ ಅಂಡ್ ಕೋ ಪ್ರೈವೇಟ್ ಲಿಮಿಟೆಡ್ ಸಿನ್ಸ್-1916' ಪ್ರಥಮ, 'ಐ ಬಿಲ್ಡ್ ಇಂಟಿರೀಯರ್' ದ್ವಿತೀಯ ಹಾಗೂ 'ಇ3 ವುಡ್' ತೃತೀಯ ಸ್ಥಾನ ಪಡೆದುಕೊಂಡಿತು.

ಡೈಮಂಡ್ ಬ್ಲಾಕ್‌ನ ಡಬಲ್ ಸ್ಟಾಲ್ ವಿಭಾಗದಲ್ಲಿ 'ಟಫ್‌ವುಡ್ ಮತ್ತು ಅಡ್ವಸಿಸ್' ಪ್ರಥಮ, 'ಪಾಲಿವುಡ್ ಪ್ರೊಫೈಲ್ಸ್ ಪ್ರೈ. ಲಿಮಿಟೆಡ್ ಕೊಯಂಬತ್ತೂರು' ದ್ವಿತೀಯ ಸ್ಥಾನ ಪಡೆದರೆ, ಸಿಂಗಲ್ ಸ್ಟಾಲ್ ವಿಭಾಗದಲ್ಲಿ 'ಎನ್ವಿರೋ ಸೋಚ್' ಪ್ರಥಮ, 'ಹೋಂ ಸಿನಿಮಾ' ದ್ವಿತೀಯ ಸ್ಥಾನ ಪಡೆಯಿತು. ಮೈ ಬಿಲ್ಡ್ ವಸ್ತುಪ್ರದರ್ಶನದಲ್ಲಿ ಆಕರ್ಷಕ ಸ್ಟಾಲ್ ನಿರ್ಮಿಸಿದ್ದ 'ನಕ್ಷ ಬಿಲ್ಡರ್ಸ್'ಗೆ ಕ್ರಿಯೇಟಿವ್ ಸ್ಟಾಲ್ ಬಹುಮಾನ ನೀಡಲಾಯಿತು.

ಬೃಹತ್ ವಸ್ತುಪ್ರದರ್ಶನ: ಸಮಾರೋಪ ಸಮಾರಂಭ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಬಿಲ್ಡರ್ಸ್ ಅಸೋಸಿಯೇಶನ್ ಆಫ್ ಇಂಡಿಯಾ ರಾಷ್ಟ್ರೀಯ ಉಪಾಧ್ಯಕ್ಷ ಎನ್.ಎಸ್.ಮುರುಳಿಧರ್ ಮಾತನಾಡಿ, 23 ವರ್ಷದ ಹಿಂದೆ ಸಣ್ಣ ಪ್ರಮಾಣದಲ್ಲಿ ಆರಂಭಗೊಂಡ 'ಮೈ ಬಿಲ್ಡ್' ವಸ್ತುಪ್ರದರ್ಶನ ಇಂದು ದೊಡ್ಡ ಮಟ್ಟದಲ್ಲಿ ಬೆಳೆದಿದೆ. ನಂಜರಾಜ ಬಹದ್ದೂರ್ ಛತ್ರದಿಂದ ಮಹಾರಾಜ ಕಾಲೇಜಿನ ವಿಶಾಲ ಮೈದಾನಕ್ಕೆ ಬಂದಿದೆ. 'ಮೈ ಬಿಲ್ಡ್'ನ ಪ್ರಮುಖ ಉದ್ದೇಶ ಕಟ್ಟಡ ನಿರ್ಮಾಣ ಸಾಮಗ್ರಿಗಳು, ಒಳಾಂಗಣ ವಸ್ತುಗಳು, ಜೀವನ ಶೈಲಿ ಕುರಿತು ಚರ್ಚೆ ಹಾಗೂ ಪರಸ್ಪರ ಅಳವಡಿಸಿಕೊಳ್ಳುವ ವೇದಿಕೆಯಾಗಿದೆ. ಮನೆ ಕಟ್ಟುವವರು ಈ ವಸ್ತುಪ್ರದರ್ಶನಕ್ಕೆ ಕಾಯುವಂತಾಗಿದೆ. ಏಕೆಂದರೆ ಎಲ್ಲಾ ಬಗೆಯ ಕಟ್ಟಡ ಸಾಮಗ್ರಿಗಳು ಒಂದೇ ಸೂರಿನಡಿ

ಅತ್ಯುತ್ತಮ ಪ್ರದರ್ಶನ ಮಳಿಗೆಗಳಿಗೆ ಬಹುಮಾನ

ದೊರೆಯುತ್ತಿವೆ. ಪ್ರತಿಯೊಬ್ಬರು ತಮ್ಮ ಜೀವಿತಾವಧಿಯಲ್ಲಿ ಮನೆ ನಿರ್ಮಿಸುವ ಕನಸು ಕಾಣುತ್ತಾರೆ. ಅವರ ಕನಸಿಗೆ ಪೂರಕವಾಗಿ ಬಿಲ್ಡರ್ಸ್ ಅಸೋಸಿಯೇಶನ್ ಆಫ್ ಇಂಡಿಯಾ ಕೆಲಸ ಮಾಡುತ್ತಿದೆ ಎಂದರು.

ಇದೇ ವೇಳೆ 2024ರ ಡಿಸೆಂಬರ್‌ನಲ್ಲಿ ನಡೆಯುವ 'ಮೈ ಬಿಲ್ಡ್' ವಸ್ತುಪ್ರದರ್ಶನ ಬ್ಯಾನರ್ ಬಿಡುಗಡೆ ಮಾಡಲಾಯಿತು. ಮೈಸೂರು ಬಿಲ್ಡರ್ಸ್ ಚಾರಿಟಬಲ್ ಟ್ರಸ್ಟ್‌ನ ಮ್ಯಾನೇಜಿಂಗ್ ಟ್ರಸ್ಟಿ ಎನ್.ಪಿ.ವಿಶ್ವನಾಥ್, ಇಂಜಿನಿಯರ್ ಎನ್.ಕೆ.ಮಹೇಶ್, ಬಿಲ್ಡರ್ಸ್ ಅಸೋಸಿಯೇಶನ್ ಆಫ್ ಇಂಡಿಯಾ ಮೈಸೂರು ಕೇಂದ್ರದ ಅಧ್ಯಕ್ಷ ವಿ.ನಾಗರಾಜ್ ಬೈರಿ, ಕಾರ್ಯದರ್ಶಿ ಕೆ.ಎಸ್.ಬಾಲಾಜಿ, 'ಮೈ ಬಿಲ್ಡ್' ಅಧ್ಯಕ್ಷ ಎಂ.ಡಿ.ಚಂದ್ರಶೇಖರ್, ಕಾರ್ಯದರ್ಶಿ ಆರ್.ರಮೇಶ್‌ರಾವ್ ಮತ್ತಿತರರು ಉಪಸ್ಥಿತರಿದ್ದರು.

ಮೈಸೂರು ಮಿತ್ರ ಮಂಗಳವಾರ 12 ಡಿಸೆಂಬರ್ 2023

ನಕ್ಕರೆ ಅದೇ ಸ್ವರ್ಗ

ಸಂದರ್ಶಕ : ಯಂಗ್‌ಮ್ಯಾನ್, ಬೇರೆ ಬೇರೆ ಕೆಲಸಗಳನ್ನು ಮಾಡುವ ಸಾಮರ್ಥ್ಯ ನಿಮ್ಮಲ್ಲಿದೆಯೇ?

ಅಭ್ಯರ್ಥಿ : ಖಂಡಿತ ಇದೆ ಸಾರ್, ಹಾಗಾಗಿಯೇ ಕಳೆದ ನಾಲ್ಕು ತಿಂಗಳಲ್ಲಿ 12 ಕಡೆ ಕೆಲಸ ಮಾಡಿದ್ದೇನೆ!

ಮೈಸೂರು ಮಿತ್ರ

ಮಂಗಳವಾರ, 12 ಡಿಸೆಂಬರ್ 2023

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತವಾಹಿನಿ..........

ಸತ್ಯ ಮತ್ತು ಪ್ರಾಮಾಣಿಕತೆಯೇ ಎಲ್ಲಾ ಸದ್ಗುಣಗಳ ಮೂಲವಾಗಬೇಕು.
–ಕನ್‌ಫ್ಯೂಷಿಯಸ್

ವೇದ ಸುಳ್ಳಾದರೂ { ಅಡುಗೆ ಆಗೋದಕ್ಕೆ
ಗಾದೆ ಸುಳ್ಳಾಗದು { ಮುಂಚೆ ಎಲೆ ಹಾಕಿದಾಗೆ

ನಿಮ್ಮ ಪತ್ರಗಳು

ಪೀಠಾಧಿಪತಿ ಬದಲಾಗಲಿ

ಮಾನ್ಯರೆ,

ಚಿತ್ರದುರ್ಗದ ಖ್ಯಾತ ಮುರುಘಾ ಮಠದ ಪೀಠಾಧಿಕಾರವನ್ನು ಇನ್ನೂ ಪೋಕ್ಸೋ ಪ್ರಕರಣದಿಂದ ಮುಕ್ತರಾಗದ, ಸದ್ಯ ಜಾಮೀನಿನ ಮೇಲೆ ಬಿಡುಗಡೆಯಾಗಿ ಮಠದಿಂದ ಹೊರಗಿರುವ ಶಿವಮೂರ್ತಿ ಶರಣರಿಗೆ ಆಡಳಿತಾಧಿಕಾರಿಗಳು ಮರಳಿ ವಹಿಸಿದ್ದನ್ನು ತಿಳಿದು ಬಹಳ ಆಶ್ಚರ್ಯವಾಯಿತು.

ಇವರ ಮೇಲೆ ಹಲವಾರು ಸೆಕ್ಷನ್‌ಗಳಡಿ ಪ್ರಕರಣಗಳಿದ್ದು, ಜಾಮೀನು ಸಿಕ್ಕಿರುವುದೇ ಒಂದು ಪವಾಡದಂತಿದೆ!!

ಇನ್ನೂ ಆರೋಪದಿಂದ ಮುಕ್ತರಾಗದ, ಮುಕ್ತರಾದರೂ ಕಳಂಕ! ಅದು ಎಂದಿಗೂ ಒಂದು ಕಪ್ಪು ಚುಕ್ಕೆಯೇ. ಹೀಗಿರುವಾಗ ಮಠದ ಅಧಿಕಾರವನ್ನು ತರಾತುರಿಯಲ್ಲಿ ಮರಳಿ ಅವರಿಗೆ ವಹಿಸಿದ್ದು, ಯಾವ ಸಂಕೋಚವೂ ಇಲ್ಲದೆ ಅವರು ಮರಳಿ ಅಧಿಕಾರ ಪಡೆಯಲು ತವಕಿಸಿದ್ದು ಅತ್ಯಂತ ಅಚ್ಚರಿ ಸಂಗತಿ.

ಮಠದ ಆಸ್ತಿ ಶಿವಮೂರ್ತಿಯವರದ್ದೇ ಅಥವಾ ವೀರಶೈವ ಸಮಾಜಕ್ಕೆ ಸೇರಿದ್ದೇ ಎನ್ನುವುದು ಸ್ಪಷ್ಟವಾಗಬೇಕು. ಒಂದು ವೇಳೆ ವೀರಶೈವ ಸಮಾಜಕ್ಕೆ ಸೇರಿದ್ದೇ ಆದ ಪಕ್ಷದಲ್ಲಿ ಕೂಡಲೇ ಅವರನ್ನು ಮಠದ ಅಧಿಕಾರದಿಂದ ಕೆಳಗಿಳಿಸಿ ಹೊಸ ಪೀಠಾಧಿಪತಿಗೆ ಅಧಿಕಾರ ಹಸ್ತಾಂತರವಾಗಬೇಕು. ಅದು ವೀರಶೈವ ಸಮಾಜಕ್ಕೆ ಗೌರವ ತರುವ ಕೆಲಸವಾಗಬೇಕು. ಇಲ್ಲದಿದ್ದರೆ ನೂರಾರು ವರ್ಷಗಳಿಂದ ಮಠ ಪರಂಪರೆ ಹಾಗೂ ಅನ್ನ ದಾಸೋಹ ನಡೆಸುತ್ತಿರುವ ವೀರಶೈವ ಸಮಾಜ ಪರಂಪರೆಗೆ ಕಪ್ಪು ಚುಕ್ಕೆಯಂತಾಗಬಹುದು ಎನ್ನುವುದನ್ನು ಪವಿತ್ರ ವೀರಶೈವ ಸಮಾಜ ಪರಿಗಣಿಸಲಿ.

–ಮುಳ್ಳೂರು ಪ್ರಕಾಶ್, ಮೈಸೂರು.

ದಸರಾಕ್ಕೆ ದುಬಾರಿ ಖರ್ಚು

ಮಾನ್ಯರೆ,



ರಾಜ್ಯದಲ್ಲಿ ಈ ವರ್ಷ ಬರಗಾಲ ಕಾಣಿಸಿಕೊಂಡಿದ್ದರಿಂದ ದಸರಾವನ್ನು ಸರಳ ಮತ್ತು ಸಾಂಪ್ರದಾಯಿಕವಾಗಿ ಆಚರಿಸಬೇಕೆಂದು ಸಾರ್ವಜನಿಕರು ಒತ್ತಾಯ ಮಾಡಿದ್ದರಿಂದ ಸರ್ಕಾರ ಹಾಗೆಯೇ ಆಚರಣೆ ಮಾಡುವುದಾಗಿ ತಿಳಿಸಿತು.

ದಸರಾ ಮಹೋತ್ಸವದ ವಿಶೇಷಾಧಿಕಾರಿಯಾಗಿದ್ದ, ಜಿಲ್ಲಾಧಿಕಾರಿ ಡಾ. ಕೆ.ವಿ.ರಾಜೇಂದ್ರ ಅವರು ಇತ್ತೀಚೆಗೆ ಬಿಡುಗಡೆ ಮಾಡಿದ ದಸರಾ ಖರ್ಚು – ವೆಚ್ಚಗಳನ್ನು ನೋಡಿದರೆ, ಇದೇನು ಸರಳ ದಸರಾವೋ ಅಥವಾ ಅದ್ದೂರಿಯಲ್ಲಿ ಅದ್ದೂರಿ ದಸರಾವೋ ಎನ್ನಿಸುತ್ತದೆ. ದಸರಾಕ್ಕೆ ನಿಯೋಜನೆಗೊಂಡಿದ್ದ ಅಧಿಕಾರಿಯೊಬ್ಬರು ಹೇಳುವಂತೆ ಈ ವರ್ಷದ ದಸರಾಕ್ಕೆ ಖರ್ಚು ಮಾಡಿರುವ ಒಟ್ಟು ಹಣ 50 ಕೋಟಿಯನ್ನು ಮೀರಬಹುದು ಎನ್ನುತ್ತಾರೆ. ಕಳೆದ 25 ವರ್ಷಗಳ ಇತಿಹಾಸದಲ್ಲೇ ಇಷ್ಟು ದೊಡ್ಡ ಪ್ರಮಾಣದ ಹಣ ಖರ್ಚು ಮಾಡಿದ ಉದಾಹರಣೆ ಇಲ್ಲ. ಕೆಲವು ಕಾರ್ಯಕ್ರಮಗಳಿಗೆ ಖರ್ಚು ತೋರಿಸಿರುವುದನ್ನು ನೋಡಿದರೆ ಸಾರ್ವಜನಿಕರಿಗೆ ದಿಗ್ಭ್ರಮೆಯಾಗುತ್ತದೆ. ಉದಾಹರಣೆಗೆ ಕೇವಲ ಮೂರು ದಿನಗಳ ಕಾಲ ಮಹಾರಾಜ ಕಾಲೇಜು ಮೈದಾನದಲ್ಲಿ ನಡೆದ ಯುವ ದಸರಾಕ್ಕೆ 5.88 ಕೋಟಿ ರೂಪಾಯಿ ಖರ್ಚು ತೋರಿಸಿರುವುದನ್ನು ನೋಡಿದರೆ ಇದರಲ್ಲಿ ರಾಮನ ಲೆಕ್ಕ ಎಷ್ಟು, ಕೃಷ್ಣನ ಲೆಕ್ಕ ಎಷ್ಟು ಎಂದು ಕೇಳುವಂತಾಗಿದೆ. ಒಟ್ಟಿನಲ್ಲಿ ಈ ವರ್ಷದ ದಸರಾ ಹಬ್ಬ "ಹುಚ್ಚನ ಮದುವೆಯಲ್ಲಿ ಉಂಡವನೇ ಜಾಣ" ಎನ್ನುವಂತಾಗಿದೆ.

– ಬೂಕನಕೆರೆ ವಿಜೇಂದ್ರ, ಕುವೆಂಪು ನಗರ, ಮೈಸೂರು

ಆನ್‌ಲೈನ್ ವಂಚಕರಿಗೆ ಕಡಿವಾಣ ಅಗತ್ಯ

ಮಾನ್ಯರೆ,

ಪ್ರಸ್ತುತ ದಿನಗಳಲ್ಲಿ ಎಲ್ಲರೂ ಆನ್‌ಲೈನ್ ಹಣ ವಹಿವಾಟಿನ ಮೇಲೆಯೇ ಅವಲಂಬಿತವಾಗಿರುವುದು. ಈ ವ್ಯವಸ್ಥೆ ಋಣಾತ್ಮಕ ಮತ್ತು ಧನಾತ್ಮಕ ಎರಡನ್ನು ಹೊಂದಿದೆ. ಆದರೆ ಇತ್ತೀಚಿನ ದಿನಗಳಲ್ಲಿ ಇದನ್ನು ಕೆಲ ದುಷ್ಕರ್ಮಿಗಳು ತಮ್ಮ ಕೆಟ್ಟ ಕೆಲಸಗಳಿಗೆ ಬಳಸಿಕೊಳ್ಳುತ್ತಿದ್ದಾರೆ. ನಕಲಿ ಕರೆಯ ಮೂಲಕ ವಿದ್ಯಾರ್ಥಿಗಳಿಗೆ ಹಲವು ವಿದ್ಯಾರ್ಥಿ ವೇತನದ ಯೋಜನೆ ಹೆಸರಿನಲ್ಲಿ ಹಾಗೂ ಮಹಿಳೆಯರಿಗೆ, ಸಾರ್ವಜನಿಕರಿಗೆ ಹಲವು ವಸ್ತುಗಳನ್ನು ಉಚಿತವಾಗಿ ನೀಡುವ, ಪಾರ್ಟ್‌ಟೈಂ ಉದ್ಯೋಗದ ಆಮಿಷಗಳನ್ನು ನೀಡುವ ಮೂಲಕ ಫೋನ್ ಪೇ, ಗೂಗಲ್ ಪೇ ಅಂತಹ ಆನ್‌ಲೈನ್ ವಹಿವಾಟಿನ ಮೂಲಕ ಹಣವನ್ನು ದೋಚುತ್ತಿದ್ದಾರೆ. ಇದಲ್ಲದೆ ಯುವಕರಿಗೆ ಕೆಲಸದ ಆಮಿಷಗಳನ್ನು ನೀಡಿ ಅವರಿಂದ ಹಣ ದೋಚುತ್ತಿರುವ ಪ್ರಕರಣಗಳು ಹಾಗೂ ಆನ್‌ಲೈನ್ ಮನಿ ಗೇಮಿಂಗ್ ಪ್ರಕರಣಗಳು ಕಣ್ಮುಂದೆ ಇವೆ. ಇದರಿಂದಾಗಿ ವಿದ್ಯಾರ್ಥಿಗಳು, ಯುವಕರು, ಸಾರ್ವಜನಿಕರು ತಮ್ಮ ತಮ್ಮ ಹಣವನ್ನು ಕಳೆದುಕೊಳ್ಳುತ್ತಿದ್ದಾರೆ. ಈ ಒಂದು ಸಮಸ್ಯೆಗೆ ಸೈಬರ್ ಕ್ರೈಂ ಪೊಲೀಸರು ಕೂಡಲೇ ಕಡಿವಾಣ ಹಾಕಬೇಕಿದೆ. – ಹೆಚ್.ಎಸ್. ಯಶವಂತ, ಮಹಾರಾಜ ಕಾಲೇಜು, ಮೈಸೂರು

ಇಂದಿರಾ ಕ್ಯಾಂಟೀನ್ ಸಿಎಂ ಹೇಳಿದಂತೆ ಸುಧಾರಣೆಯಾಗಲಿ

ಮಾನ್ಯರೆ,



ಮುಖ್ಯಮಂತ್ರಿ ಸಿದ್ದರಾಮಯ್ಯನವರು ಇತ್ತೀಚೆಗೆ ಇಂದಿರಾ ಕ್ಯಾಂಟೀನ್‌ನ ಆಹಾರದ ಗುಣಮಟ್ಟದ ಸುಧಾರಣೆ ಬಗ್ಗೆ ಹೇಳಿಕೆ ನೀಡಿದ್ದರು. ಜೊತೆಗೆ ಮೈಸೂರಿನ ಮಹಾರಾಣಿ ಕಾಲೇಜು, ಸರ್ಕಾರಿ ಆಸ್ಪತ್ರೆಗಳ ಆವರಣದಲ್ಲಿ ಇಂದಿರಾ ಕ್ಯಾಂಟೀನ್ ಆರಂಭಕ್ಕೆ ಸರ್ಕಾರ ಅಸ್ತು ಎಂದಿರುವುದು ನಿಜಕ್ಕೂ ಜನ ಮೆಚ್ಚುವ ಕಾರ್ಯವಾಗಿದೆ. ಕಾಲೇಜಿನಲ್ಲಿ ವ್ಯಾಸಂಗ ಮಾಡುವ ಹೆಣ್ಣು ಮಕ್ಕಳಿಗೆ, ಆಸ್ಪತ್ರೆಗಳಲ್ಲಿ ರೋಗಿಗಳ ಪೋಷಕರಿಗೆ ಇದರಿಂದ ತುಂಬಾ ಉಪಯುಕ್ತವಾಗುತ್ತದೆ. ಸ್ವಲ್ಪ ಹಣ ಹೆಚ್ಚು ಪಡೆದಾದರೂ ಈ ಕ್ಯಾಂಟೀನ್‌ಗಳಲ್ಲಿ ಗುಣಮಟ್ಟದ ತಿಂಡಿ ತಿನಿಸುಗಳನ್ನು ಸಾರ್ವಜನಿಕರಿಗೆ ಪೂರೈಸಲಿ.

–ಜಿ.ಪಿ. ರಾಜೇಶ್, ವಿ.ವಿ. ಪುರಂ, ಮೈಸೂರು.

ಕಡೆಗುಂ...!


ಮಾನ್ಯರೆ,

ಈ ಕಾಲದಲ್ಲೂ ಯುದ್ಧ ಪ್ರಸಕ್ತಿಃದಾರುಣ! ಕಣ್ಣ ಮುಂದಿನ ಉದಾಹರಣ– ಇಸ್ರೇಲ್–ಹಮಾಸ್ ನಡುವಣ ಕದನ. (ರಷ್ಯಾ–ಉಕ್ರೇನ್ ಯುದ್ಧ ಏನಾಯಿತು?) ಕುವೆಂಪು ಅವರ 'ಸ್ಮಶಾನ ಕುರುಕ್ಷೇತ್ರ'ದ ಒಂದು ಮತು (ಭೀಮನ ಬಾಯಲ್ಲಿ): "ಕಡೆಗುಂ ಪೊಲಸಾದುದೀ ಭಾರತಸಂಗ್ರಾಮಂ". ತುಸು ತಿದ್ದುಪಾಟು ಅಗತ್ಯಃ "... ಪ್ರಪಂಚ ಸಂಗ್ರಾಮಂ!" ಸಂಗ್ರಾಮವೇನು? ಪ್ರಪಂಚವೆ ಹೊಲಸಾಗುತ್ತಿದೆ, ಭಾರತವೂ ಸೇರಿದಂತೆ! (ಭವಿಷ್ಯ ಭೀಭತ್ಸ).

ಗೌರವ : ಗಣ್ಯರ ಶವಗಳಿಗಿರುವ ಗೌರವ ಜೀವಚ್ಛವಗಳಿಗೆಲ್ಲಿ?

–ಸಿಪಿಕೆ, ಸಾಹಿತಿಗಳು, ಮೈಸೂರು.

ಹೆಣ್ಣು ಭ್ರೂಣ ಹತ್ಯೆ; ಮನಸ್ಥಿತಿಯಿಂದಷ್ಟೇ ಪರಿಸ್ಥಿತಿ ಬದಲಾವಣೆಯಾಗಬಹುದು



> ಲಿಂಗ ಸಮಾನತೆಯನ್ನು ಸಾಧಿಸುವ ನಿಟ್ಟಿನಲ್ಲಿ ಸರ್ಕಾರಗಳು ಎಷ್ಟೆಲ್ಲಾ ಕಾಯ್ದೆ-ಕಾನೂನುಗಳನ್ನು ರೂಪಿಸಿದ್ದರು, ಲಿಂಗತಾರತಮ್ಯವನ್ನು ನಿವಾರಿಸಲು ಎಷ್ಟೆಲ್ಲ ಜಾಗೃತಿ ಅಭಿಯಾನಗಳನ್ನು ಕೈಗೊಂಡರೂ ಹೆಣ್ಣು ಭ್ರೂಣ ಪತ್ತೆ ಮಾಡುವುದು ಹಾಗೂ ಹೆಣ್ಣು ಭ್ರೂಣವೆಂಬುದು ತಿಳಿಯುತ್ತಿದ್ದಂತೆ ಭ್ರೂಣ ಹತ್ಯೆಯಂತಹ ಕೃತ್ಯಗಳು ನಿರ್ದಯವಾಗಿ ನಡೆಯುತ್ತಿರುವುದು ನಾಗರಿಕ ಸಮಾಜವನ್ನು ನಾಚಿ ತಲೆ ತಗ್ಗಿಸುವಂತೆ ಮಾಡುತ್ತಿದೆ, ಈ ನೀಚ ಕೃತ್ಯಕ್ಕೆ ವೈದ್ಯಕೀಯ ಲೋಕದಲ್ಲಿ ಮಗು ಗರ್ಭದಲ್ಲಿರುವಾಗಲೇ ಅದಕ್ಕೆ ಇರುವ ರೋಗವನ್ನು ಪತ್ತೆ ಹಚ್ಚಲು ಆವಿಷ್ಕಾರಗೊಂಡಿರುವ ಒಂದು ವೈಜ್ಞಾನಿಕ ತಂತ್ರಜ್ಞಾನವನ್ನೇ ಮಗುವಿನ ಲಿಂಗಪತ್ತೆಗೆ ಆಯುಧವನ್ನಾಗಿ ಬಳಸಿಕೊಂಡಿರುವುದು ದುರದೃಷ್ಟಕರ. ಇತ್ತೀಚೆಗೆ ಇದೊಂದು ದೊಡ್ಡ ಜಾಲವಾಗಿ ಸಕ್ರಿಯವಾಗಿದೆ. ಸರ್ಕಾರಗಳು ಇದನ್ನು ಗಂಭೀರವಾಗಿ ಪರಿಗಣಿಸಬೇಕಿದೆ.



ಪ್ರಸಾದ್.ಎನ್
ಆರೋಗ್ಯ ಇಲಾಖೆ,
ಚಾಮರಾಜನಗರ.
ಮೊ.: 9164131654.

ವಿಶ್ವಸಂಸ್ಥೆಯ 'ಸುಸ್ಥಿರ ಅಭಿವೃದ್ಧಿ ಗುರಿ'ಗಳ ಸಾಧನೆಯಲ್ಲಿ ಭಾರತವು ವಿಶ್ವದ 166 ಸದಸ್ಯ ರಾಷ್ಟ್ರಗಳ ಸಾಲಿನಲ್ಲಿ 112ನೇ ಶ್ರೇಯಾಂಕಕ್ಕೆ ತೃಪ್ತಿಪಡಬೇಕಿದೆ 2015ರಲ್ಲಿ ರೂಪಿಸಿದ್ದ 17 ಸುಸ್ಥಿರ ಅಭಿವೃದ್ಧಿ ಗುರಿಗಳನ್ನು ಸಾಧಿಸುವ ಶ್ರೇಯಾಂಕದಲ್ಲಿ 112ನೇ ಸ್ಥಾನದಲ್ಲಿರಲು ಕಾರಣವಾಗಿರುವ ಎಸ್.ಡಿ.ಜಿಗಳನ್ನು ಪಟ್ಟಿ ಮಾಡಿದರೇ ಅವುಗಳಲ್ಲಿ ಪ್ರಮುಖವಾಗಿ ಹಸಿವು ಕೊನೆಗೊಳಿಸುವುದು ಮತ್ತು ಆಹಾರ ಭದ್ರತೆ ಸಾಧಿಸುವುದು(ಎಸ್.ಡಿ.ಜಿ–2) ಲಿಂಗಸಮಾನತೆ ಸಾಧಿಸುವುದು(ಎಸ್.ಡಿ.ಜಿ–5) ಮೂಲಸೌಕರ್ಯ, ಕೈಗಾರಿಕೆಗಳಿಗೆ ಉತ್ತೇಜನ ನೀಡುವುದು(ಎಸ್.ಡಿ.ಜಿ–9) ಗುರಿಗಳು ದೇಶಕ್ಕೆ ಸವಾಲಾಗಿ ಪರಿಣಮಿಸಿದೆ, 2023ರ ಆಗಸ್ಟ್‌ನಲ್ಲಿ ವಿಶ್ವಸಂಸ್ಥೆಯು ಬಿಡುಗಡೆ ಮಾಡಿರುವ ವರದಿಯ ಅನುಸಾರ 2030ಕ್ಕೆ ಗುರಿ ನಿಗದಿಪಡಿಸಿಕೊಂಡು ರೂಪಿಸಿರುವ 17 ಸುಸ್ಥಿರ ಅಭಿವೃದ್ಧಿ ಗುರಿಗಳ ಸಾಧನೆಯಲ್ಲಿ ಭಾರತವು 100ಕ್ಕೆ 63.5 ಅಂಕಗಳನ್ನು ಗಳಿಸಿರುವುದು ಭಾರತದ ಪಾಲಿಗೆ ಅಷ್ಟೇನು ತೃಪ್ತಿಕರವಾಗಿಲ್ಲ, ಅದರಲ್ಲೂ ಲಿಂಗ ಸಮಾನತೆ ಸಾಧಿಸುವಲ್ಲಿ ಸುಧಾರಿಸಿಕೊಳ್ಳಬೇಕಾದ ಅಂಶಗಳನ್ನು ಪಟ್ಟಿ ಮಾಡಿದಾಗ ಭಾರತದಲ್ಲಿ ಮಹಿಳೆಯರ ಮೇಲೆ ಎಸಗಲಾಗುತ್ತಿರುವ ಕೃತ್ಯಗಳ ಪ್ರಮಾಣದಲ್ಲಿ ನಿರೀಕ್ಷಿತ ಪ್ರಮಾಣದಲ್ಲಿ ಇಳಿಕೆ ಸಾಧ್ಯವಾಗದಿರುವುದು, ಹೆಣ್ಣು ಮಕ್ಕಳ ಮೇಲೆ ಎಸಗಲಾದ ಅಪರಾಧ ಪ್ರಕರಣಗಳ ಪ್ರಮಾಣದಲ್ಲಿ ಏರಿಕೆಯಾಗಿರುವುದು, ಲಿಂಗಾನುಪಾತದಲ್ಲಿ ರಾಜ್ಯವಾರು ಇರುವ ವ್ಯತ್ಯಾಸ, ಮಹಿಳಾ ಮತ್ತು ಮಕ್ಕಳ ಸುರಕ್ಷತೆಗೆ ರೂಪಿಸಿರುವ ಕಾಯ್ದೆ ಕಾನೂನುಗಳ ಸಮರ್ಪಕ ಅನುಷ್ಠಾನಗೊಳಿಸುವಲ್ಲಿ ವಿಫಲವಾಗಿರುವುದು ಕಡಿಮೆ ಶ್ರೇಯಾಂಕ ಗಳಿಸಿರುವುದಕ್ಕೆ ಪ್ರಮುಖ ಕಾರಣವಾಗಿರುವುದು ಕಳವಳಕಾರಿ ಅಂಶ.

ಸಾಮಾನ್ಯವಾಗಿ ಲಿಂಗಾನುಪಾತವು ಒಂದು ನಿರ್ದಿಷ್ಟ ಭೌಗೋಳಿಕ ಪ್ರದೇಶದಲ್ಲಿ ವಾಸವಾಗಿರುವ ಪ್ರತಿ 1000 ಪುರುಷರಿಗೆ ಹೋಲಿಸಿದರೆ ಎಷ್ಟು ಮಹಿಳೆಯರಿದ್ದಾರೆ ಎಂಬುದನ್ನು ತಿಳಿಸುತ್ತದೆ. ಆದರೆ ಇದನ್ನು ಎಲ್ಲಾ ಕಾಲಕ್ಕೂ ಎಲ್ಲಾ ಪ್ರದೇಶಗಳಿಗೂ ಸಾಮಾನ್ಯೀಕರಿಸಲು ಸಾಧ್ಯವಾಗುವುದಿಲ್ಲ, ಇತ್ತೀಚಿನ ಅಂಕಿ–ಅಂಶಗಳ ಪ್ರಕಾರ ಭಾರತದಲ್ಲಿ ಒಟ್ಟು ಜನಸಂಖ್ಯೆಯಲ್ಲಿ ಲಿಂಗಾನುಪಾತವು ಪ್ರತಿ 1000 ಪುರುಷರಿಗೆ; 1020 ಮಹಿಳೆಯರಿದ್ದಾರೆ ಎಂದು ತೋರಿಸುತ್ತದೆ. ಇದು ಭಾರತದಲ್ಲಿ ಪುರುಷರಿಗಿಂತ ಮಹಿಳೆಯರೇ ಹೆಚ್ಚಿದ್ದಾರೆ ಎಂಬುದನ್ನು ಸೂಚಿಸುತ್ತದೆ.

ಆದರೆ ಕಳೆದ ಐದು ವರ್ಷಗಳಲ್ಲಿ ಜನಿಸಿದವರ ಲಿಂಗಾನುಪಾತವು ಪ್ರತಿ 1000 ಗಂಡು ಮಕ್ಕಳಿಗೆ 943 ಹೆಣ್ಣು ಮಕ್ಕಳಿದ್ದಾರೆ. ಇದು ಲಿಂಗಾನುಪಾತದಲ್ಲಿ ಸಮಾನತೆ ಸಾಧಿಸಿಲ್ಲವೆಂಬುದನ್ನು ಸೂಚಿಸುತ್ತದೆ. ಕಳೆದ 2019–2023 ರ ನಡುವಣ ಐದು ವರ್ಷಗಳಲ್ಲಿ ಜನಿಸಿದವರ ಲಿಂಗಾನುಪಾತವು ಪ್ರತಿ 1000 ಗಂಡುಮಕ್ಕಳಿಗೆ;978 ಹೆಣ್ಣು ಮಕ್ಕಳಿದ್ದಾರೆ ಎಂಬುದನ್ನು ವಿವರಿಸುತ್ತದೆ. ಒಟ್ಟಾರೆ ಕಳೆದ ಐದು ವರ್ಷಗಳಲ್ಲಿ ಜನಿಸಿದ ಒಟ್ಟು ಮಕ್ಕಳಲ್ಲಿ ಗಂಡು ಮತ್ತು ಹೆಣ್ಣು ಮಕ್ಕಳ ಲಿಂಗಾನುಪಾತವನ್ನು ಲೆಕ್ಕ ಹಾಕುವುದಾದರೆ ಲಿಂಗ ಅಸಮಾನತೆ ಇರುವುದು ಸ್ಪಷ್ಟವಾಗಿ ಗೋಚರವಾಗುತ್ತದೆ.

ಲಿಂಗ ಸಮಾನತೆಯನ್ನು ಸಾಧಿಸುವ ನಿಟ್ಟಿನಲ್ಲಿ ಸರ್ಕಾರಗಳು ಎಷ್ಟೆಲ್ಲಾ ಕಾಯ್ದೆ–ಕಾನೂನುಗಳನ್ನು ರೂಪಿಸಿದ್ದರು, ಲಿಂಗತಾರತಮ್ಯವನ್ನು ನಿವಾರಿಸಲು ಎಷ್ಟೆಲ್ಲ ಜಾಗೃತಿ ಅಭಿಯಾನಗಳನ್ನು ಕೈಗೊಂಡರೂ ಹೆಣ್ಣು ಭ್ರೂಣ ಪತ್ತೆ ಮಾಡುವುದು ಹಾಗೂ ಹೆಣ್ಣು ಭ್ರೂಣವೆಂಬುದು ತಿಳಿಯುತ್ತಿದ್ದಂತೆ ಭ್ರೂಣ ಹತ್ಯೆಯಂತಹ ಕೃತ್ಯಗಳು ನಿರ್ದಯವಾಗಿ ನಡೆಯುತ್ತಿರುವುದು ನಾಗರಿಕ ಸಮಾಜವನ್ನು ನಾಚಿ ತಲೆ ತಗ್ಗಿಸುವಂತೆ ಮಾಡುತ್ತಿದೆ, ಈ ನೀಚ ಕೃತ್ಯಕ್ಕೆ ವೈದ್ಯಕೀಯ ಲೋಕದಲ್ಲಿ ಮಗು ಗರ್ಭದಲ್ಲಿರುವಾಗಲೇ ಅದಕ್ಕೆ ಇರುವ ರೋಗವನ್ನು ಪತ್ತೆ ಹಚ್ಚಲು ಆವಿಷ್ಕಾರಗೊಂಡಿರುವ ಒಂದು ವೈಜ್ಞಾನಿಕ ತಂತ್ರಜ್ಞಾನವನ್ನೇ ಮಗುವಿನ ಲಿಂಗಪತ್ತೆಗೆ ಆಯುಧವನ್ನಾಗಿ ಬಳಸಿಕೊಂಡಿರುವುದು ದುರದೃಷ್ಟಕರ. ಇತ್ತೀಚೆಗೆ ಇದೊಂದು ದೊಡ್ಡ ಜಾಲವಾಗಿ ಸಕ್ರಿಯವಾಗಿದೆ. ಸರ್ಕಾರಗಳು ಇದನ್ನು ಗಂಭೀರವಾಗಿ ಪರಿಗಣಿಸಬೇಕಿದೆ.

ಕಾಯ್ದೆಯ ಪರಿಣಾಮಕಾರಿ ಅನುಷ್ಠಾನ ಹಾಗೂ ಜಾಗೃತಿ ಮೂಡಿಸುವುದೊಂದೇ ಲಿಂಗ ಸಮಾನತೆ ಸಾಧಿಸಲು ಇರುವ ಏಕೈಕ ಮಾರ್ಗ. ರಾಜ್ಯದಲ್ಲಿ ಹೆಣ್ಣು ಭ್ರೂಣ ಹತ್ಯೆಯನ್ನು ತಡೆಯಲು ಗರ್ಭಧಾರಣಾ ಪೂರ್ವ ಮತ್ತು ಪ್ರಸವ ಪೂರ್ವ ರೋಗಪತ್ತೆ ತಂತ್ರ ವಿಧಾನಗಳ (ಲಿಂಗ ಆಯ್ಕೆ ನಿಷೇಧ) ಕಾಯ್ದೆ–1994ರ ಜಾರಿಯಲ್ಲಿದ್ದು ಕಾಯ್ದೆಯ ಅನುಸಾರ ಭ್ರೂಣಲಿಂಗ ಪತ್ತೆ ಹಚ್ಚುವುದು ಕಾನೂನುಬಾಹಿರ ಚಟುವಟಿಕೆ ಮತ್ತು ಕಾನೂನಿನ ರೀತ್ಯಾ ಶಿಕ್ಷಾರ್ಹ ಅಪರಾಧವಾಗಿರುತ್ತದೆ. ಮಗು ಗರ್ಭದಲ್ಲಿರುವಾಗಲೇ ಅದಕ್ಕಿರುವ ರೋಗವನ್ನು ಪತ್ತೆಹಚ್ಚಲು ಅಂದರೆ ಕೆಲವೊಂದು ವರ್ಣತಂತುಗಳ ವ್ಯತ್ಯಾಸದಿಂದ ಉಂಟಾಗುವ ನ್ಯೂನತೆಗಳನ್ನು, ಅನುವಂಶೀಯ ಹಾಗೂ ಲೈಂಗಿಕ ಸಂಬಂಧಿ ನ್ಯೂನತೆಗಳನ್ನು ಪತ್ತೆಹಚ್ಚಲು ಹಾಗೂ ಮಗುವಿನ ಬೆಳವಣಿಗೆಯಲ್ಲಿರುವ ಅಪಾಯದ ಚಿಹ್ನೆಗಳನ್ನು ಗುರುತಿಸಿ ವೈಜ್ಞಾನಿಕವಾಗಿ ಚಿಕಿತ್ಸೆ ನೀಡಲು, ಅಪಾಯದ ಅಂಚಿನಲ್ಲಿರುವ ತಾಯಿ ಮಗುವಿಗೆ ಉತ್ತಮ ಆರೋಗ್ಯ ಸೇವೆಗಳನ್ನು ಒದಗಿಸಿ ತಾಯಿ ಮರಣ ಹಾಗೂ ನವಜಾತ ಶಿಶುಮರಣವನ್ನು ತಡೆಗಟ್ಟುವ ಉದ್ದೇಶದಿಂದ ವೈದ್ಯಕೀಯ ಕ್ಷೇತ್ರದಲ್ಲಿ ಈ ತಂತ್ರಜ್ಞಾನವನ್ನು ಬಳಸಲು ಕಾನೂನಿನಲ್ಲಿ ಅವಕಾಶ ಮಾಡಿಕೊಟ್ಟಿದೆ. ಆದರೆ ದೇಶದಲ್ಲಿ ತಾಯಿ–ಮಗುವಿನ ಆರೋಗ್ಯದ ಹಿತದೃಷ್ಟಿಯಿಂದ ಒಬ್ಬ ಗರ್ಭಿಣಿಗೆ 24 ವಾರಗಳು ತುಂಬುವವರೆಗೂ ತಾಯಿ ಹಾಗೂ ಮಗುವಿನ ಆರೋಗ್ಯಕ್ಕೆ ಅಪಾಯವನ್ನುಂಟು ಮಾಡುವಂತಹ ಚಿಹ್ನೆಗಳಿದ್ದರೆ ಸಂಬಂಧಪಟ್ಟ ತಜ್ಞವೈದ್ಯರ ಅಥವಾ ಪ್ರಾಧಿಕಾರದ ಸಲಹೆಯಂತೆ ಗರ್ಭಪಾತ ಮಾಡಿಸಿಕೊಳ್ಳಲು ಕಾನೂನಿನಲ್ಲಿ ಅವಕಾಶವಿದೆ. ಕಾನೂನಿನಲ್ಲಿರುವ ಈ ಅವಕಾಶವೂ ತಾಯಿಯ ಭ್ರೂಣಕ್ಕೆ 10–12 ವಾರಗಳು ತುಂಬಿದ ಕೂಡಲೇ ಮಗುವಿನ ಭ್ರೂಣ ಪತ್ತೆ ಹಚ್ಚಿ ಅದು ಹೆಣ್ಣು ಶಿಶು ಎಂಬುದು ದೃಢಪಟ್ಟರೇ 'ಹೆಣ್ಣು ಮಗುವಾದರೆ ಬೇಡವೇ... ಬೇಡವೆಂದು ನಿರ್ಧರಿಸಿ ಬೆಳೆಯುವ ಪೈರನ್ನು ಮೊಳಕೆಯಲ್ಲೇ ಚಿವುಟುವಂತಹ ಶೋಚನೀಯ ಸ್ಥಿತಿಗೆ ಅವಕಾಶ ಮಾಡಿಕೊಟ್ಟಿರುವುದು ನಮ್ಮ ನಡುವೆ ನಡೆದಿರುವ ಪ್ರಚಲಿತ ವಿದ್ಯಮಾನಗಳೆ ಸಾಕ್ಷಿಯಾಗಿದೆ. ಹಾಗಂತ ಈ ಕಾಯ್ದೆಯನ್ನು ವ್ಯಾಪಕವಾಗಿ ದುರ್ಬಳಕೆ ಮಾಡಿಕೊಳ್ಳಲು ಸರ್ಕಾರ ಅವಕಾಶ ಮಾಡಿಕೊಟ್ಟು ಕೈಕಟ್ಟಿ ಕೂರಲು ಅವಕಾಶ ಕೊಡಬಾರದು ಕಾಯ್ದೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಪ್ರಯತ್ನಿಸಬೇಕಿದೆ. ಈ ಬಗ್ಗೆ ಜನಸಮುದಾಯದಲ್ಲಿ ಹೆಚ್ಚಿನ ಅರಿವು ಮೂಡಿಸಬೇಕಿದೆ. ಈಗಾಗಲೇ ಕಾಯ್ದೆಯು ಅನುಷ್ಠಾನಗೊಂಡ ನಂತರ ಕಾಯ್ದೆಯ ಕುರಿತು ಜಾಗೃತಿ ಮೂಡಿದಂತೆ ಭ್ರೂಣಹತ್ಯೆ ಹಾಗೂ ಲಿಂಗತಾರತಮ್ಯದಂತಹ ನೀಚಕೃತ್ಯಗಳು ನಿವಾರಣೆಯಾಗುತ್ತಾ ಹೋಗಬೇಕಿತ್ತು, ಆದರೆ ಇತ್ತೀಚಿನ ಬೆಳವಣಿಗೆಗಳು ತದ್ವಿರುದ್ಧವಾಗಿದೆ,

ಹೆಣ್ಣು ಕುಟುಂಬಕ್ಕೆ ಹೊರೆ ಎಂದು ಭಾವಿಸುವ ಪೋಷಕರ ಮನಸ್ಥಿತಿಯೇ ಈ ಪ್ರವೃತ್ತಿಗೆ ಎಡೆಮಾಡಿಕೊಟ್ಟಿದೆ

ಹೆಣ್ಣು ಮಗು ಬೇಡ, ಕುಟುಂಬಕ್ಕೆ ಹೊರೆ ಎಂಬುದಕ್ಕೆ ಅನೇಕ ಕಾರಣಗಳಿವೆ. ಹೆಣ್ಣು ಮಗು ಜನನವಾದರೆ ಅವಳ ವಿವಾಹಕ್ಕೆ ಅತೀ ಹೆಚ್ಚು ವೆಚ್ಚವಾಗುತ್ತದೆ. ಮದುವೆ ಮಾಡಲು ವರದಕ್ಷಿಣೆ ಹೊಂದಿಸಬೇಕಾಗುತ್ತದೆ ಎಂಬ ಸಾಮಾಜಿಕ ಕಾರಣಗಳು ಒಂದು ಕಡೆಯಾದರೆ, ಮತ್ತೊಂದು ಕಡೆ ಗಂಡು ಮಗುವಾದರೆ ವಂಶಾಭಿವೃದ್ಧಿಯಾಗುತ್ತದೆ ನಮ್ಮ ಪೂರ್ವಜರಿಗೆ ಮೋಕ್ಷ ಸಿಕ್ಕಿದಂತಾಗುತ್ತದೆ, ಗಂಡು ಮಕ್ಕಳಾದರೆ ಆಸ್ತಿಗೆ ವಾರಸುದಾರರಾಗುತ್ತಾರೆ ಎಂಬ ಪುತ್ರ ವ್ಯಾಮೋಹ, ತಾನು ಅನುಭವಿಸಿದ ಕಷ್ಟ ಕಾರ್ಪಣ್ಯಗಳನ್ನು ನನ್ನ ಮಗಳು ಅನುಭವಿಸುವುದು ಬೇಡ ಎಂಬ ತಾಯಿ ಯೋಚನೆಯು ಸಹ ಹೆಣ್ಣು ಮಗುವನ್ನು ಅದರ ಭ್ರೂಣದಲ್ಲಿಯೇ ಹಿಸುಕಿ ಹಾಕಲು ಕಾರಣವಾಗುತ್ತಿವೆ. ಈ ಪ್ರವೃತ್ತಿಯೇ ಹೆಣ್ಣಿನ ಮೇಲೆ ನಿರಂತರವಾಗಿ ನಡೆಯುವ ಶೋಷಣೆ, ಗಂಡು–ಹೆಣ್ಣು ಎಂಬ ಅಸಮಾನತೆ, ಸಮಾಜದಲ್ಲಿ ಲಿಂಗ–ತಾರತಮ್ಯ ಉಲ್ಬಣಗೊಂಡು ರಾಷ್ಟ್ರದ ಸುಸ್ಥಿರ ಅಭಿವೃದ್ಧಿಯ ಗುರಿಗಳನ್ನು ಸಾಧಿಸಲು ಅಡ್ಡಿಯುಂಟಾಗಿದೆ. ಆದರೂ ಸಮಾಜದಲ್ಲಿ ಹೆಣ್ಣುಮಕ್ಕಳ ರಕ್ಷಣೆಗಾಗಿ ಗರ್ಭಧಾರಣಾ ಪೂರ್ವ ಮತ್ತು ಪ್ರಸವ ಪೂರ್ವ ರೋಗಪತ್ತೆ ತಂತ್ರ ವಿಧಾನಗಳ (ಲಿಂಗ ಆಯ್ಕೆ ನಿಷೇಧ) ಕಾಯ್ದೆ–1994ರ ಜಾರಿಯಲ್ಲಿದ್ದು ಕಾಯ್ದೆಯ ಬಗ್ಗೆ ಸಾರ್ವಜನಿಕರಿಗೆ ವ್ಯಾಪಕವಾಗಿ ಅರಿವು ಮೂಡಿಸಿ ಕಾಯ್ದೆಯ ಉಲ್ಲಂಘಿಸುವವರಿಗೆ ಕಾನೂನಿನಡಿ ಶಿಕ್ಷಿಸುವ ಮೂಲಕ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಬೇಕಿದೆ.

ಕಾಯಿದೆಯ ಉಲ್ಲಂಘನೆ ಶಿಕ್ಷಾರ್ಹ ಅಪರಾಧ

ಕಾಯಿದೆಯ ಅನುಸಾರ ಭ್ರೂಣಲಿಂಗ ಪತ್ತೆ ಭ್ರೂಣ ಲಿಂಗ ಆಯ್ಕೆಗೆ ಸಂಬಂಧಿಸಿದಂತೆ ಯಾವುದೇ ರೀತಿಯ ಜಾಹೀರಾತುಗಳನ್ನು ನೀಡುವಂತಿಲ್ಲ, ವೈದ್ಯರು ಭ್ರೂಣಲಿಂಗ ಪತ್ತೆ ಮಾಡಿದ್ದಲ್ಲಿ ಮೂರು ವರ್ಷಗಳಿಂದ ಐದು ವರ್ಷಗಳವರೆಗೆ ಜೈಲು ಶಿಕ್ಷೆ ಜೊತೆಗೆ ರೂ 10,000 ಗಳಿಂದ 50,000 ವರೆಗೆ ದಂಡ ವಿಧಿಸಲಾಗುವುದು ಹಾಗೂ ಇಲಾಖೆಯಿಂದ ನೀಡಿರುವ ನೋಂದಣಿ ಮಾನ್ಯತೆಯನ್ನು ನ್ಯಾಯಾಲಯದಲ್ಲಿ ಅಪರಾಧ ನಿರ್ಣಯವಾಗುವವರೆಗೂ ತಡೆಹಿಡಿಯಲಾಗುವುದು, ಅಪರಾಧ ದೃಢಪಟ್ಟಲ್ಲಿ ರಾಜ್ಯ ವೈದ್ಯಕೀಯ ಮಂಡಳಿಯಿಂದ ಸಂಬಂಧಪಟ್ಟ ವೈದ್ಯರು ವೃತ್ತಿ ನಡೆಸದಂತೆ ಕಪ್ಪುಪಟ್ಟಿಗೆ ಸೇರಿಸಲಾಗುವುದು. ಗರ್ಭಿಣಿ ಅಥವಾ ಆಕೆಯ ಪತಿ ಅಥವಾ ಕುಟುಂಬಸ್ಥರು ಭ್ರೂಣ ಲಿಂಗ ಪತ್ತೆಗೆ ಒತ್ತಾಯಿಸಿದ್ದಲ್ಲಿ ಅಂತಹವರೂ ಸಹ ಈ ಕಾಯ್ದೆಯಡಿಯಲ್ಲಿ ಶಿಕ್ಷೆಗೆ ಒಳಗಾಗುತ್ತಾರೆ. ಯಾವುದೇ ಪ್ರಕಾರದ ಅಲ್ಟ್ರಾಸೌಂಡ್ ಸ್ಕ್ಯಾನಿಂಗ್ ಸೆಂಟರ್‌ಗಳು ಆರೋಗ್ಯ ಇಲಾಖೆಯ ಸಂಬಂಧಪಟ್ಟ ಪ್ರಾಧಿಕಾರದಲ್ಲಿ ನೋಂದಾಯಿಸಿಕೊಳ್ಳುವುದು ಕಡ್ಡಾಯವಾಗಿರುತ್ತದೆ. ತಪ್ಪಿದ್ದಲ್ಲಿ ಕಾನೂನಿನಡಿ ಶಿಕ್ಷಾರ್ಹ ಅಪರಾಧಕ್ಕೊಳಗಾಗುವರು.

ಜಾಗೃತಿ ಮೂಡಿಸುವ ಅಭಿಯಾನ ಹಮ್ಮಿಕೊಳ್ಳುವ ಅವಶ್ಯಕತೆ ಇದೆ


ಪ್ರಸವ ಪೂರ್ವ ಲಿಂಗಪತ್ತೆ ಹಾಗೂ ಹೆಣ್ಣು ಭ್ರೂಣ ಹತ್ಯೆ ತಡೆಗಟ್ಟುವ ಕಾಯ್ದೆಯ ಕುರಿತು ಪೋಷಕರಿಗೆ ಜಾಗೃತಿ ಮೂಡಿಸಬೇಕಿದೆ. ಈಗಾಗಲೇ ಪೋಷಕರಲ್ಲಿ ಹೆಣ್ಣುಮಕ್ಕಳ ಜನನದ ನಿರ್ಲಕ್ಷ್ಯದ ಬಗ್ಗೆ ಇರುವ ಸಾಮಾಜಿಕ ನಡವಳಿಕೆ ಮತ್ತು ಪೂರ್ವಾಗ್ರಹ ಪೀಡಿತ ಮನೋಭಾವನೆಯನ್ನು ಬದಲಾಯಿಸಬೇಕಿದೆ. ಈ ಕುರಿತು ವಿವಿಧ ಜಾಗೃತಿ ಮೂಡಿಸುವ ಕಾರ್ಯ ಕ್ರಮಗಳನ್ನು ನಿರಂತರವಾಗಿ ಆಕಾಶವಾಣಿ, ದೂರದರ್ಶನ, ಬೀದಿ ನಾಟಕ, ವಿಚಾರ ಸಂಕಿರಣ ಹಾಗೂ ವಿಚಾರಾಂದೋಲನಗಳ ಮೂಲಕ ಹಮ್ಮಿಕೊಳ್ಳಬೇಕಿದೆ, ಪ್ರಸ್ತುತ ಜನರು ಚಲನಚಿತ್ರ ಹಾಗೂ ದೃಶ್ಯಮಾಧ್ಯಮಗಳಿಗೆ ಹೆಚ್ಚು ಆಕರ್ಷಿತರಾಗಿರುವುದರಿಂದ ಹೆಣ್ಣು ಭ್ರೂಣ ಹತ್ಯೆಯಿಂದ ಉಂಟಾಗುವ ಸಾಮಾಜಿಕ ಲಿಂಗ ಅಸಮತೋಲನದ ಕುರಿತು ಕಿರುಚಿತ್ರಗಳ ಮೂಲಕ ಅರಿವು ಮೂಡಿಸಬೇಕಿದೆ. ಆ ಮುಖೇನ ಪ್ರಸ್ತುತ ಇರುವ ಸಾಮಾಜಿಕ ವಾತಾವರಣವನ್ನು ಪರಿವರ್ತಿಸಲು ಸಮಾಜದ ಎಲ್ಲಾ ವಿಭಾಗಗಳು ಪಾಲ್ಗೊಳ್ಳುವಂತೆ ಮಾಡಿಕೊಂಡು ಸಮತೋಲಿತ ಲಿಂಗ ಅನುಪಾತವನ್ನು ಸಾಧಿಸಲು ಪ್ರಯತ್ನಿಸಬೇಕಿದೆ, ಜನರ ಮನಸ್ಥಿತಿಯನ್ನು ಬದಲಾಯಿಸದ ಹೊರತು, ಸಾರ್ವಜನಿಕರಲ್ಲಿರುವ ಲಿಂಗ ಆಧಾರಿತ ಪೂರ್ವಾಗ್ರಹ ಮನೋಭಾವನೆಯನ್ನು ತೊಡೆದುಹಾಕದ ಹೊರತು ಈ ಜ್ವಲಂತ ಸಮಸ್ಯೆಯನ್ನು ಬಗೆಹರಿಸಲು ಸಾಧ್ಯವಿಲ್ಲ.

ಕೇಂದ್ರ, ರಾಜ್ಯದ ಹಲವು ಕಲ್ಯಾಣ ಯೋಜನೆ

ಹೆಣ್ಣು ಭ್ರೂಣಹತ್ಯೆ ತಡೆಯಲು ಹಾಗೂ ಮಹಿಳೆಯರ ಬಗೆಗಿನ ಸಾಮಾಜಿಕ ದೃಷ್ಟಿಕೋನವನ್ನು ಬದಲಾಯಿಸಲು ಮತ್ತು ಸುಧಾರಿಸಲು, ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಹಲವು ಕಲ್ಯಾಣ ಯೋಜನೆಗಳನ್ನು ಪರಿಚಯಿಸಿವೆ. ಬಾಲಿಕ ಸಮೃದ್ಧಿಯಂತಹ ಹೆಣ್ಣು ಮಕ್ಕಳ ಶೈಕ್ಷಣಿಕ ಹಾಗೂ ಸಾಮಾಜಿಕ ಸ್ಥಿತಿಯನ್ನು ಉನ್ನತೀಕರಿಸಲು ರೂಪಿಸಿರುವ ವಿದ್ಯಾರ್ಥಿ ವೇತನ ಯೋಜನೆ, ಹೆಣ್ಣು ಮಕ್ಕಳ ಆರೋಗ್ಯ ಸುಧಾರಣೆಗಾಗಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ರೂಪಿಸಿರುವ ಜನನಿ ಸುರಕ್ಷಾ ಕಾರ್ಯಕ್ರಮ, ರಾಷ್ಟ್ರೀಯ ಬಾಲಸ್ವಾಸ್ಥ್ಯ ಕಾರ್ಯಕ್ರಮ, ರಾಷ್ಟ್ರೀಯ ಕಿಶೋರಿ ಸ್ವಾಸ್ಥ್ಯ ಕಾರ್ಯಕ್ರಮ, ಪ್ರಧಾನಮಂತ್ರಿ ಸುರಕ್ಷಿತ ಮಾತೃತ್ವ ಅಭಿಯಾನ ಹಾಗೂ ಸಂತಾನೋತ್ಪತ್ತಿ ಮತ್ತು ಮಕ್ಕಳ ಆರೋಗ್ಯ ಕಾರ್ಯಕ್ರಮದಡಿಯಲ್ಲಿ ತಾಯಿ ಮತ್ತು ಮಗುವಿನ ಸಮಗ್ರ ಆರೋಗ್ಯ ಸುಧಾರಣೆಗೆ ವಿಶೇಷ ಯೋಜನೆಗಳನ್ನು ರೂಪಿಸಲಾಗಿದೆ. ಅಲ್ಲದೇ ದೇಶಾದ್ಯಂತ ಹೆಣ್ಣು ಮಕ್ಕಳ ಶಿಕ್ಷಣದ ಸುಧಾರಣೆಗಾಗಿ ಮತ್ತು ಹೆಣ್ಣು ಭ್ರೂಣ ಹತ್ಯೆಯನ್ನು ತಡೆಗಟ್ಟಲು ಬೇಟಿ ಬಚಾವೋ ಬೇಟಿ ಪಢಾವೋ ಯೋಜನೆ ಮುಖ್ಯವಾಗಿ ಕಡಿಮೆ ಲಿಂಗ ಅನುಪಾತ ಹೊಂದಿರುವ ರಾಜ್ಯಗಳನ್ನು ಗುರಿಯಾಗಿಸಿಕೊಂಡು ಅನುಷ್ಠಾನಗೊಳಿಸಲಾಗಿದೆ, ಅದರಲ್ಲೂ ಕರ್ನಾಟಕ ರಾಜ್ಯದಲ್ಲಿ ವಿಶೇಷವಾಗಿ ಪ್ರತ್ಯೇಕವಾಗಿ ಲಿಂಗಧಾರಿತ ಆಯವ್ಯಯವನ್ನು ರೂಪಿಸಿ ಮಹಿಳೆಯರ ಸಾಮಾಜಿಕ ಆರ್ಥಿಕ ಅಭಿವೃದ್ಧಿಗೆ ಪೂರಕವಾಗಿ ಸ್ತ್ರೀಶಕ್ತಿ, ಪ್ರಧಾನ ಮಂತ್ರಿ ಮಾತೃತ್ವ ವಂದನಾ ಯೋಜನೆ, ಪೋಷಣ್ ಅಭಿಯಾನ, ಭಾಗ್ಯಲಕ್ಷ್ಮಿ, ಗೃಹಲಕ್ಷ್ಮಿ, ಗೃಹಜ್ಯೋತಿ, ಉದ್ಯೋಗಿನಿ, ಶಕ್ತಿಯಂತಹ ಮಹತ್ವಾಕಾಂಕ್ಷಿ ಯೋಜನೆಗಳನ್ನು ರೂಪಿಸಿ ಪ್ರತಿ ಬಾರಿ ಮಂಡಿಸುವ ಬಜೆಟ್‌ನಲ್ಲಿ ಮಹಿಳಾ ಕೇಂದ್ರಿತ ಯೋಜನೆಗಳಿಗೆ ವಿಶೇಷ ಒತ್ತು ನೀಡಲಾಗುತ್ತಿದೆ. ಇಷ್ಟೆಲ್ಲಾ ಯೋಜನೆಗಳ ಗುರಿ ಮತ್ತು ಉದ್ದೇಶ ಒಂದೇ. ಅದು ಲಿಂಗ ತಾರತಮ್ಯವನ್ನು ಹೋಗಲಾಡಿಸಿ ಪುರುಷರಂತೆ ಮಹಿಳೆಯರು ಸಮಾನ ಅವಕಾಶಗಳನ್ನು ಪಡೆದು ಲಿಂಗಸಮಾನತೆಯನ್ನು ಸಾಧಿಸುವುದು.

'ಸುಪ್ರೀಂ' ತೀರ್ಪು ನಿರಾಶೆ ತಂದಿದೆ; ಹತಾಶೆಗೊಂಡಿಲ್ಲ

ಹೋರಾಟ ಮುಂದುವರಿಸುತ್ತೇವೆ: ಒಮರ್ ಅಬ್ದುಲ್ಲಾ, ಮೆಹಬೂಬ ಮುಫ್ತಿ



ಶ್ರೀನಗರ: ಕೇಂದ್ರ ಸರ್ಕಾರ 2019ರ ಆಗಸ್ಟ್ 5ರಂದು ಜಮ್ಮು–ಕಾಶ್ಮೀರಕ್ಕೆ ನೀಡಲಾಗಿದ್ದ ಸಂವಿಧಾನ ವಿಧಿ 370 ಅನ್ನು ರದ್ದುಪಡಿಸಿದಾಗ ಟೀಕಿಸಿದವರಲ್ಲಿ ಜಮ್ಮು–ಕಾಶ್ಮೀರದ ನ್ಯಾಷನಲ್ ಕಾನ್ಫರೆನ್ಸ್ ಅಧ್ಯಕ್ಷ ಫಾರೂಕ್ ಅಬ್ದುಲ್ಲಾ, ಉಪಾಧ್ಯಕ್ಷ ಒಮರ್ ಅಬ್ದುಲ್ಲಾ, ಪಿಡಿಪಿ ಅಧ್ಯಕ್ಷೆ ಮೆಹಬೂಬ ಮುಫ್ತಿ ಪ್ರಮುಖರು.

ಕೇಂದ್ರ ಸರ್ಕಾರ ನಿರ್ಧಾರ ವಿರುದ್ಧ ಸುಪ್ರೀಂಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು. ಹಲವು ಸುತ್ತಿನ ವಾದ–ವಿವಾದಗಳನ್ನು ಆಲಿಸಿದ ನಂತರ ಸುಪ್ರೀಂಕೋರ್ಟ್ ಇಂದು ಮಹತ್ವದ ತೀರ್ಪು ನೀಡಿದರು. ಸುಪ್ರೀಂಕೋರ್ಟ್‌ನ ತೀರ್ಪಿನಿಂದ ನಾನು ನಿರಾಶೆಗೊಂಡಿದ್ದೇನೆ, ಆದರೆ ಹತಾಶೆಗೊಂಡಿಲ್ಲ ಎಂದು ನ್ಯಾಷನಲ್ ಕಾನ್ಫರೆನ್ಸ್ (NC) ಉಪಾಧ್ಯಕ್ಷ ಒಮರ್ ಅಬ್ದುಲ್ಲಾ ಪ್ರತಿಕ್ರಿಯಿಸಿದ್ದಾರೆ. ಹೋರಾಟ ಮುಂದುವರಿಯುತ್ತದೆ ಎಂದು ಟ್ವೀಟ್ ಮಾಡಿದ್ದಾರೆ. 370ನೇ ವಿಧಿಯು ನಿಬಂಧನೆಗಳನ್ನು ರದ್ದುಗೊಳಿಸಲು ಭಾರತೀಯ ಜನತಾ ಪಕ್ಷ (BJP) ದಶಕಗಳನ್ನು ತೆಗೆದುಕೊಂಡಿತು, ನಾವು ಹೋರಾಟ ಮುಂದುವರಿಸುತ್ತೇವೆ ಎಂದು ತಿಳಿಸಿದರು.

"ಬಿಜೆಪಿಗೆ ಇಲ್ಲಿಗೆ ತಲುಪಲು ದಶಕಗಳೇ ಬೇಕಾಯಿತು. ನಾವು ಕೂಡ ದೀರ್ಘಾವಧಿ ಹೋರಾಟಕ್ಕೆ ಸಿದ್ಧರಾಗಿದ್ದೇವೆ" ಎಂದು ಅವರು ಹೇಳಿದರು. ಸುಪ್ರೀಂಕೋರ್ಟ್ ತೀರ್ಪು ನಿರಾಶಾದಾಯಕವಾಗಿದೆ, ಜಮ್ಮು ಮತ್ತು ಕಾಶ್ಮೀರದ ಜನರಿಗೆ ನ್ಯಾಯವು ಮತ್ತೊಮ್ಮೆ "ಕೈತಪ್ಪಿ ಹೋಗಿದೆ" ಎಂದು ಪೀಪಲ್ಸ್ ಕಾನ್ಫರೆನ್ಸ್ (ಪಿಸಿ) ಮುಖ್ಯಸ್ಥ ಸಜಾದ್ ಲೋನ್ ಪ್ರತಿಕ್ರಿಯಿಸಿದ್ದಾರೆ.

ಆರ್ಟಿಕಲ್ 370ರ ಮೇಲಿನ ಸುಪ್ರೀಂಕೋರ್ಟ್ ತೀರ್ಪು ನಿರಾಶಾದಾಯಕವಾಗಿದೆ. ನ್ಯಾಯವು ಮತ್ತೊಮ್ಮೆ ಜಮ್ಮು–ಕಾಶ್ಮೀರ ಜನರ ಕೈತಪ್ಪಿ ಹೋಗಿದೆ ಎಂದಿದ್ದಾರೆ. 370ನೇ ವಿಧಿಯನ್ನು ಕಾನೂನುಬದ್ಧವಾಗಿ ಅಳಿಸಿಹಾಕಿರಬಹುದು, ಆದರೆ ಯಾವಾಗಲೂ ನಮ್ಮ ರಾಜಕೀಯ ಆಕಾಂಕ್ಷೆಗಳ ಅಲ್ಲಿನ ಭಾಗವಾಗಿ ಉಳಿಯುತ್ತದೆ ಎಂದು ಅವರು ಹೇಳಿದರು.

ಹಿಂದಿನ ಜಮ್ಮು ಮತ್ತು ಕಾಶ್ಮೀರ ರಾಜ್ಯಕ್ಕೆ ವಿಶೇಷ ಸ್ಥಾನಮಾನವನ್ನು ನೀಡಿದ್ದ 370ನೇ ವಿಧಿಯನ್ನು ರದ್ದುಗೊಳಿಸುವ ಕೇಂದ್ರದ ಆಗಸ್ಟ್ 5, 2019ರ ನಿರ್ಧಾರವನ್ನು ಸುಪ್ರೀಂ ಕೋರ್ಟ್ ಸೋಮವಾರ ಎತ್ತಿಹಿಡಿದಿದೆ ಮತ್ತು 2024ರ ಸೆಪ್ಟೆಂಬರ್ 30ರೊಳಗೆ ಕೇಂದ್ರಾಡಳಿತ ಪ್ರದೇಶದಲ್ಲಿ ವಿಧಾನಸಭೆಗೆ ಚುನಾವಣೆ ನಡೆಸಲು ಕ್ರಮಗಳನ್ನು ತೆಗೆದುಕೊಳ್ಳಬೇಕು ಎಂದು ಹೇಳಿದೆ. ಜಮ್ಮು ಮತ್ತು ಕಾಶ್ಮೀರ ಕೇಂದ್ರಾಡಳಿತ ಪ್ರದೇಶಕ್ಕೆ ರಾಜ್ಯ ಸ್ಥಾನಮಾನವನ್ನು ಶೀಘ್ರವೇ ಮರುಸ್ಥಾಪಿಸುವಂತೆ ಸುಪ್ರೀಂಕೋರ್ಟ್ ನಿರ್ದೇಶನ ನೀಡಿದೆ.



ಕಡೇ ಕಾರ್ತಿಕ ಸೋಮವಾರದ ಅಂಗವಾಗಿ ಮೈಸೂರಿನ ಸುಣ್ಣದಕೇರಿ ಶ್ರೀ ಮಹದೇಶ್ವರ ದೇವಸ್ಥಾನದಲ್ಲಿ ಕೊಂಡೋತ್ಸವ ಹಾಗೂ ರಥೋತ್ಸವ ಜರುಗಿದ ಸಂದರ್ಭದಲ್ಲಿ ನಾಯಕ ಸಮುದಾಯದ ಮುಖಂಡ ದ್ಯಾವಪ್ಪನಾಯಕ ಅವರನ್ನು ನಗರಪಾಲಿಕೆ ಮಾಜಿ ಸದಸ್ಯ ಲೋಕೇಶ್ ಪಿಯಾ ಹಾಗೂ ಸುಣ್ಣದಕೇರಿ ಯಾಜಮಾನರು ಅಭಿನಂದಿಸಿದರು.


ಎನ್‌ಸಿಎಫ್ ಆಧಾರದ ಮೇಲೆ ರಾಜ್ಯಗಳು ತಮ್ಮದೇ ಪಠ್ಯಪುಸ್ತಕಗಳನ್ನು ಸಿದ್ಧಪಡಿಸಬಹುದು

ನವದೆಹಲಿ: ರಾಜ್ಯ ಸರ್ಕಾರಗಳು ಎನ್‌ಸಿಇಆರ್‌ಟಿ ಪಠ್ಯಪುಸ್ತಕಗಳನ್ನು ಅಳವಡಿಸಿಕೊಳ್ಳಬಹುದು ಅಥವಾ ಶಾಲಾ ಶಿಕ್ಷಣಕ್ಕಾಗಿ ರಾಷ್ಟ್ರೀಯ ಪಠ್ಯಕ್ರಮ ಚೌಕಟ್ಟಿನ (ಎನ್‌ಸಿಎಫ್) ಆಧಾರದ ಮೇಲೆ ತಮ್ಮದೇ ಆದ ಪಠ್ಯಪುಸ್ತಕಗಳನ್ನು ಅಭಿವೃದ್ಧಿಪಡಿಸಬಹುದು ಎಂದು ಕೇಂದ್ರ ಸರ್ಕಾರ ಹೇಳಿದೆ. ಈ ಕುರಿತು ಲೋಕಸಭೆಗೆ ಲಿಖಿತ ಉತ್ತರ ನೀಡಿದ ಶಿಕ್ಷಣ ಖಾತೆ ರಾಜ್ಯ ಸಚಿವೆ ಅನ್ನಪೂರ್ಣದೇವಿ, ಎನ್‌ಸಿಎಫ್ ಸೂಚನೆ ನೀಡುವ ದಾಖಲೆಯಲ್ಲ. ಇದು ಸಲಹೆ ಅಥವಾ ಶಿಫಾರಸು ಮಾಡುತ್ತದೆ ಎಂದರು. ಎನ್‌ಸಿಇಆರ್‌ಟಿಯ ರಾಷ್ಟ್ರೀಯ ಪಠ್ಯಕ್ರಮವನ್ನು ತಿರಸ್ಕರಿಸಿದ ಮತ್ತು ರಾಜ್ಯಗಳು ತಮ್ಮದೇ ಪಠ್ಯಕ್ರಮವನ್ನು ಸಿದ್ಧಪಡಿಸಿದ ಕುರಿತು ತಮಿಳುನಾಡು ಸಂಸದರಾದ ಎ ರಾಜಾ ಮತ್ತು ಗಣೇಶಮೂರ್ತಿ ಅವರ ಪ್ರಶ್ನೆಗೆ ಉತ್ತರ ನೀಡಿದ ಸಚಿವೆ, ಎನ್‌ಸಿಎಫ್ ಶಾಲಾ ಶಿಕ್ಷಣದ ಫೆಡರಲ್ ರಚನೆಯನ್ನು ಸಕ್ರಿಯಗೊಳಿಸುತ್ತದೆ ಎಂದು ಹೇಳಿದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ಡಾ.ಶ್ರೀ ಶಿವರಾತ್ರಿ ರಾಜೇಂದ್ರ ಶ್ರೀಗಳ ಪ್ರತಿಮೆ ಅನಾವರಣ ನಿಮ್ಮ ಉಪಸ್ಥಿತಿಯಲ್ಲೇ ನೆರವೇರಲಿ...

ಮೈಸೂರು ರಾಜವಂಶಸ್ಥೆ ಡಾ.ಪ್ರಮೋದಾದೇವಿ ಒಡೆಯರ್ ಅವರಿಗೆ 2022ರ ಜುಲೈ 28ರಂದೇ ಶಿವರಾತ್ರಿ ದೇಶಿಕೇಂದ್ರ ಶ್ರೀಗಳು ಬರೆದ ಪತ್ರದಲ್ಲಿ ಆಶಯ



ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ



ಪ್ರಮೋದಾದೇವಿ ಒಡೆಯರ್

ಮೈಸೂರು,ಡಿ.11(ಆರ್‌ಕೆ)–ಡಾ.ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳ ಪ್ರತಿಮೆ ಸ್ಥಾಪನೆಯಾಗಿ, ಅದರ ಅನಾವರಣವೂ ನಿಮ್ಮ ಉಪಸ್ಥಿತಿಯಲ್ಲಿಯೇ ನೆರವೇರಲಿ. ಅದಕ್ಕೆ ತಾವು ಸಮ್ಮತಿಸುತ್ತೀರೆಂಬ ಭರವಸೆ ಇದೆ ಎಂದು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿಯವರು 2022ರ ಜುಲೈ 28ರಂದು ಮೈಸೂರು ರಾಜವಂಶಸ್ಥರಾದ ಪ್ರಮೋದಾದೇವಿ ಒಡೆಯರ್ ಅವರಿಗೆ ಬರೆದಿದ್ದ ಪತ್ರದಲ್ಲಿ ಆಶಯ ವ್ಯಕ್ತಪಡಿಸಿದ್ದರು.

2017ರ ಸೆಪ್ಟೆಂಬರ್ 1ರಂದು, ನಿಮ್ಮ ಪತ್ರದಲ್ಲಿ ಪ್ರಸ್ತಾಪಿಸಿರುವ ವಿಷಯವನ್ನು ಅರಮನೆ ಕಾರ್ಯದರ್ಶಿ ಎಂ.ಎನ್. ಲಕ್ಷ್ಮೀನಾರಾಯಣ್ ಸುತ್ತೂರು ಶ್ರೀಕ್ಷೇತ್ರಕ್ಕೆ ಬಂದು ನಮ್ಮ ಗಮನಕ್ಕೆ ತಂದಿದ್ದರು. ಈ ಸಂದರ್ಭದಲ್ಲಿ ಅವರೊಂದಿಗೂ ಚರ್ಚಿಸಿ, ವಿವರಗಳನ್ನು ನಿಮ್ಮ ಗಮನಕ್ಕೂ ತರಲು ಸೂಚಿಸಿ, ಪತ್ರವನ್ನು ನಿಮಗೆ ತಲುಪಿಸಲು ಕಳುಹಿಸಿಕೊಡಲಾಗಿತ್ತು ಎಂದು ಶ್ರೀಗಳು ಆ ಪತ್ರದಲ್ಲಿ ಉಲ್ಲೇಖಿಸಿದ್ದಾರೆ.

ಡಾ.ಶ್ರೀ ಶಿವರಾತ್ರಿ ರಾಜೇಂದ್ರ ಶ್ರೀಗಳು ಧಾರ್ಮಿಕ, ಆಧ್ಯಾತ್ಮಿಕ, ಶೈಕ್ಷಣಿಕ, ಸಾಂಸ್ಕೃತಿಕ ಹಾಗೂ ಸಾಮಾಜಿಕ ಕ್ಷೇತ್ರಗಳಿಗೆ ಸಲ್ಲಿಸಿದ ಸೇವೆ ನಿಮಗೆ ತಿಳಿದುದೇ ಆಗಿದೆ. ಪರಮ ಪೂಜ್ಯರು ಲಿಂಗೈಕ್ಯರಾದ ಬಳಿಕ ಮೈಸೂರು ಮಹಾನಗರ ಪಾಲಿಕೆಯವರು ಈ ವೃತ್ತಕ್ಕೆ 'ಜಗದ್ಗುರು ಡಾ. ಶ್ರೀ ಶಿವರಾತ್ರಿ ರಾಜೇಂದ್ರ ವೃತ್ತ' ಎಂದು ನಾಮಕರಣ ಮಾಡಿದ್ದು, 1988ರಂದೇ ಫಲಕ ಅನಾವರಣಗೊಳಿಸಲಾಗಿದೆ ಎಂದು ಶ್ರೀಗಳು ತಿಳಿಸಿದ್ದಾರೆ.

ಕೆಲ ವರ್ಷಗಳ ನಂತರ ಸಂಸ್ಥೆಯ ಹಿರಿಯ ವಿದ್ಯಾರ್ಥಿಗಳು, ಭಕ್ತಾದಿಗಳು, ಸಾರ್ವಜನಿಕರು ಅಲ್ಲಿಯೇ ಶ್ರೀಗಳ ಪ್ರತಿಮೆ ಸ್ಥಾಪಿಸುವುದು ಸೂಕ್ತ ಎಂದು ಒತ್ತಾಯಿಸಿದ್ದರಿಂದ ಪ್ರಸ್ತಾವನೆ ಸಲ್ಲಿಸಲಾಯಿತು. ಅದಕ್ಕೆ ಸರ್ಕಾರವು 2017ರ ಮಾರ್ಚ್ 3ರಂದು ಅನುಮೋದನೆ ನೀಡಿರುತ್ತದೆ. ನ್ಯಾಯಾಲಯದ ಸೂಚನೆಯಂತೆ ಕಾಮಗಾರಿಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿತ್ತು. ಮರು ಪರಿಶೀಲನೆಗೆ ಮನವಿ ಸಲ್ಲಿಸಿದಾಗ ಪ್ರತಿಮೆ ಸ್ಥಾಪನೆಯಾಗುವುದರಿಂದ ವಾಹನ ಸಂಚಾರಕ್ಕೆ ಯಾವುದೇ ಅಡಚಣೆಗಳಾಗದಿದ್ದಲ್ಲಿ ಅನುಮತಿ ನೀಡಬಹುದೆಂದು ನ್ಯಾಯಾಲಯವು ಆದೇಶಿಸಿರುತ್ತದೆ ಎಂದು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು ತಮ್ಮ ಪತ್ರದಲ್ಲಿ ತಿಳಿಸಿದ್ದಾರೆ.

ಮಹಾರಾಜರಾದ ಜಯಚಾಮರಾಜ ಒಡೆಯರ್ ಹಾಗೂ ಶ್ರೀ ಶಿವರಾತ್ರಿ ರಾಜೇಂದ್ರ ಸ್ವಾಮಿಗಳಿಗೂ ಇದ್ದ ನಿಕಟ ಸಂಬಂಧ ತಮಗೆ ತಿಳಿದುದೇ ಆಗಿದೆ. ಈ ಪ್ರತಿಮೆ ಅವರಿಬ್ಬರ ಆತ್ಮೀಯ ಬಾಂಧವ್ಯವನ್ನು ಚಿರಗೊಳಿಸುವ ಸಂಕೇತವೂ ಆಗಿರುವುದರಿಂದ ಈ ಅಂಶಗಳನ್ನು ಗಮನಿಸಿ ಡಾ.ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರ ಪ್ರತಿಮೆ ಅನಾವರಣ ನಿಮ್ಮ ಉಪಸ್ಥಿತಿಯಲ್ಲೇ ನೆರವೇರಲು ಸಮ್ಮತಿಸುತ್ತೀರೆಂಬ ಭರವಸೆ ಇದೆ ಎಂದು ಪ್ರಮೋದಾದೇವಿ ಒಡೆಯರ್ ಅವರಿಗೆ ಬರೆದಿರುವ ಪತ್ರದಲ್ಲಿ ಶಿವರಾತ್ರಿ ದೇಶಿಕೇಂದ್ರ ಶ್ರೀಗಳು ತಿಳಿಸಿದ್ದಾರೆ.

ರಾತ್ರೋರಾತ್ರಿ ಪ್ರತಿಮೆ ಸ್ಥಾಪಿಸಿದ್ದನ್ನು ರಾಜಮಾತೆ ಪ್ರಮೋದಾದೇವಿ ಒಡೆಯರ್, ಇದು ದುರದೃಷ್ಟಕರ ಎಂದು ಪ್ರತಿಕ್ರಿಯಿಸಿದ್ದನ್ನು ಇಲ್ಲಿ ಸ್ಮರಿಸಬಹುದಾಗಿದೆ.

ಮೈಸೂರಲ್ಲಿ ಕಾಂಗ್ರೆಸ್ ವಿರುದ್ಧ ಬಿಜೆಪಿ ಪ್ರತಿಭಟನೆ



ಮೈಸೂರು,ಡಿ.11(ಜಿಎ)–ಜಾರ್ಖಂಡ್‌ನ ಕಾಂಗ್ರೆಸ್ ರಾಜ್ಯಸಭಾ ಸದಸ್ಯನ ಮನೆಯಲ್ಲಿ ಐಟಿ ದಾಳಿ ವೇಳೆ 353 ಕೋಟಿ ಹಣ ಪತ್ತೆ ಆಗಿರುವುದು ಕಾಂಗ್ರೆಸ್ ಪಕ್ಷದ ಭ್ರಷ್ಟಾಚಾರದ ಪ್ರತೀಕ ಎಂದು ಆರೋಪಿಸಿ ಮೈಸೂರಿನಲ್ಲಿ ಬಿಜೆಪಿ ನಗರ ಮತ್ತು ಜಿಲ್ಲಾ ಘಟಕದ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ನಗರದ ಗಾಂಧಿ ಚೌಕದ ಮುಂಭಾಗ ಬಿಜೆಪಿಯ ಮುಖಂಡರು ಮತ್ತು ನೂರಾರು ಕಾರ್ಯಕರ್ತರು ಭ್ರಷ್ಟಾಚಾರದ ಜನಕ ಕಾಂಗ್ರೆಸ್ ಎಂಬ ವಿವಿಧ ಭಿತ್ತಿಪತ್ರ ಪ್ರದರ್ಶಿಸಿ, ಕಾಂಗ್ರೆಸ್ ವಿರುದ್ಧ ಧಿಕ್ಕಾರ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಈ ವೇಳೆ ಮಾಜಿ ಶಾಸಕ ಎಲ್.ನಾಗೇಂದ್ರ ಮಾತನಾಡಿ, ಸಿದ್ದರಾಮಯ್ಯನವರು ಕಾಂಗ್ರೆಸ್‌ನವರ ಮೇಲೆ ಮಾತ್ರ ಐಟಿ ದಾಳಿ ಆಗುತ್ತಿದೆ ಎಂದು ಹೇಳುತ್ತಾರೆ. ಅವರಿಗೆ ಬಿಜೆಪಿಯವರ ಅಕ್ರಮ ಆಸ್ತಿ ಇದೆ ಎಂಬ ಮಾಹಿತಿ ಇದ್ದರೆ ದೂರು ನೀಡಲಿ. ತಮ್ಮ ಭ್ರಷ್ಟಾಚಾರ ಮುಚ್ಚಿಟ್ಟುಕೊಳ್ಳಲು ಬಿಜೆಪಿ ಮೇಲೆ ಆರೋಪ ಮಾಡುತ್ತಾರೆ. ಗ್ಯಾರಂಟಿ ಯೋಜನೆ ಮೂಲಕ ಲೋಕಸಭಾ ಚುನಾವಣೆಗೆ ಹಣ ಸಂಗ್ರಹ ಮಾಡುತ್ತಿದ್ದಾರೆ. ಈ ರೀತಿ ಏನೇ ಮಾಡಿದರೂ ಪ್ರಧಾನಿ ಮೋದಿಯವರನ್ನು ಸೋಲಿಸಲು ಆಗುವುದಿಲ್ಲ ಎಂದರು.

ಸಫಾಯಿ ಕರ್ಮಚಾರಿ ಆಯೋಗದ ಮಾಜಿ ಅಧ್ಯಕ್ಷ ಕೋಟೆ ಎಂ.ಶಿವಣ್ಣ ಮಾತನಾಡಿ, ಸಂಸದ ಪ್ರತಾಪಸಿಂಹ ಒಳ್ಳೆಯ ಅಭಿವೃದ್ಧಿ ಕೆಲಸ ಮಾಡಿದ್ದಾರೆ. ಜೊತೆಗೆ ಪ್ರಧಾನಿ ನರೇಂದ್ರ ಮೋದಿಯವರ ಜನಪ್ರಿಯ ಯೋಜನೆಗಳನ್ನು ಸಹಿಸಲು ಕಾಂಗ್ರೆಸ್‌ಗೆ ಆಗುತ್ತಿಲ್ಲ. ಹೀಗಾಗಿ ಆಧಾರವಿಲ್ಲದ ಆರೋಪಗಳ ಮೂಲಕ ರಾಜಕೀಯ ಮಾಡುತ್ತಿದ್ದಾರೆಂದು ಆರೋಪಿಸಿದರು. ಪ್ರತಿಭಟನೆಯಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ಮಂಗಳ ಸೋಮಶೇಖರ್, ಮೈಸೂರು ಬಿಜೆಪಿ ವಿಭಾಗೀಯ ಉಸ್ತುವಾರಿ ಮೈ.ವಿ.ರವಿಶಂಕರ್, ಮುಡಾ ಮಾಜಿ ಅಧ್ಯಕ್ಷ ಯಶಸ್ವಿ ಸೋಮಶೇಖರ್, ಕರ್ನಾಟಕ ವಸ್ತು ಪ್ರದರ್ಶನ ಪ್ರಾಧಿಕಾರದ ಮಾಜಿ ಅಧ್ಯಕ್ಷರಾದ ಮಿರ್ಲೆ ಶ್ರೀನಿವಾಸ್‌ಗೌಡ, ಹೇಮಂತ್‌ಕುಮಾರ್‌ಗೌಡ, ಬಿ.ವಿ.ಮಂಜುನಾಥ್, ಮಾಜಿ ಮೇಯರ್ ಸಂದೇಶ್ ಸ್ವಾಮಿ, ರಾಜ್ಯ ಪ್ರಧಾನ ಕಾರ್ಯದರ್ಶಿ ರಾಜೇಂದ್ರ, ಮುಡಾ ಮಾಜಿ ಸದಸ್ಯೆ ಲಕ್ಷ್ಮಿ, ನಗರ ಪ್ರಧಾನ ಕಾರ್ಯದರ್ಶಿ ಗಿರಿಧರ್, ಕೃಷ್ಣಪ್ಪಗೌಡ ಇನ್ನಿತರರಿದ್ದರು.



ತಮಿಳುನಾಡಿಗೆ ನೀರು ಹರಿಸುತ್ತಿರುವುದನ್ನು ಖಂಡಿಸಿ, ಕಾವೇರಿ ಕ್ರಿಯಾ ಸಮಿತಿ ವತಿಯಿಂದ ಪುರಭವನದ ಮುಂದೆ ಧರಣಿ ಸೋಮವಾರವೂ ಮುಂದುವರೆದಿದೆ. ಈ ವೇಳೆ ಉಪಾಧ್ಯಕ್ಷ ಸುರೇಶ್‌ಗೌಡ, ತೇಜೇಶ್ ಲೋಕೇಶ್‌ಗೌಡ, ಶೈಲಕುಮಾರ್, ಶುಭಶ್ರೀ, ಮೆಲ್ಲಹಳ್ಳಿ ಮಹಾದೇವಸ್ವಾಮಿ, ಮಂಜುಳಾ, ಪುಷ್ಪವತಿ, ಮಹಾದೇವಸ್ವಾಮಿ, ಹನುಮಂತಯ್ಯ, ಪ್ರದೀಪ್‌ಕುಮಾರ್, ಇದ್ದರು.

ನಾರಾಯಣ ಆಸ್ಪತ್ರೆಯಿಂದ ಮ್ಯಾಮೊ ಬಸ್ ಮೂಲಕ ಸ್ತನ ಕ್ಯಾನ್ಸರ್ ತಪಾಸಣೆ ಯಶಸ್ವಿ




ಸ್ತನ ಕ್ಯಾನ್ಸರ್ ಸ್ಕ್ರೀನಿಂಗ್ ವ್ಯವಸ್ಥೆಯುಳ್ಳ 'ಮ್ಯಾಮೊ ಬಸ್'

ಮೈಸೂರು, ಡಿ.11 (ಎಸ್‌ಬಿಡಿ)–ಮೈಸೂರಿನ ನಾರಾಯಣ ಆಸ್ಪತ್ರೆ ವತಿಯಿಂದ 'ಮ್ಯಾಮೊ ಬಸ್' ಮೂಲಕ ಮೈಸೂರು ಹಾಗೂ ನೆರೆ ಜಿಲ್ಲೆಗಳಲ್ಲಿ ಆಯೋಜಿಸಿದ್ದ ಸ್ತನ ಕ್ಯಾನ್ಸರ್ ಸ್ಕ್ರೀನಿಂಗ್(ತಪಾಸಣೆ) ಕಾರ್ಯಕ್ರಮ ಯಶಸ್ವಿಯಾಗಿದೆ. ಆರಂಭಿಕ ಹಂತದಲ್ಲೇ ಪತ್ತೆಯಾದರೆ ಸ್ತನ ಕ್ಯಾನ್ಸರ್ ಅನ್ನು ತಡೆಗಟ್ಟಬಹುದು. ಈ ನಿಟ್ಟಿನಲ್ಲಿ ಮಹಿಳೆಯರಲ್ಲಿ ಸ್ಕ್ರೀನಿಂಗ್ ಬಗ್ಗೆ ಜಾಗೃತಿ ಮೂಡಿಸುವುದು ಅತ್ಯವಶ್ಯ ಹಾಗಾಗಿ ಮೈಸೂರಿನ ನಾರಾಯಣ ಆಸ್ಪತ್ರೆ ವತಿಯಿಂದ ವೈದ್ಯಕೀಯ ಪರೀಕ್ಷೆ ಸಾಧನಗಳನ್ನೊಳಗೊಂಡ 'ಮ್ಯಾಮೊ ಬಸ್' ಮೂಲಕ ಮಂಡ್ಯದ ತಾರಾ ಡಯೋಗ್ನೋಸ್ಟಿಕ್ ಸೆಂಟರ್, ಸ್ಯಾಂಜೋ ಆಸ್ಪತ್ರೆ, ಮೈಸೂರಿನ ಆಯಿಷ್ ಹಾಗೂ ವಿಜಯನಗರದ ನಾರಾಯಣ ವೈದ್ಯಕೀಯ ಕೇಂದ್ರ, ಸೋಮವಾರಪೇಟೆಯ ಇನ್ನರ್ ವ್ಹೀಲ್ ಗೋಲ್ಡ್ ಕ್ಲಬ್ ಹಾಗೂ ಲಯನ್ಸ್ ಕ್ಲಬ್ ಸೇರಿದಂತೆ ವಿವಿಧೆಡೆ ತಪಾಸಣಾ ಶಿಬಿರ ನಡೆಸಲಾಯಿತು.

ಮಹಿಳೆಯರ ಸಮಗ್ರ ಆರೋಗ್ಯ ಬದ್ಧತೆಯೊಂದಿಗೆ ಆರು ದಿನಗಳ ಕಾಲ ನಡೆಸಲಾದ ವಿಶೇಷ ಶಿಬಿರದಲ್ಲಿ ಒಟ್ಟು 301 ಮಹಿಳೆಯರನ್ನು ಸ್ಕ್ರೀನಿಂಗ್‌ಗೆ ಒಳಪಡಿಸಲಾಯಿತು. ಇವರಲ್ಲಿ 62 ಮಹಿಳೆಯರಿಗೆ ಸ್ತನ ರೋಗಗಳ ಆರಂಭಿಕ ಪತ್ತೆ ಹಾಗೂ ರೋಗ ನಿರ್ಣಯಕ್ಕೆ ಸಹಕಾರಿಯಾದ ಮ್ಯಾಮೋಗ್ರಫಿ ಪರೀಕ್ಷೆ ಹಾಗೂ 36 ಮಹಿಳೆಯರಿಗೆ ಗರ್ಭಕಂಠದ ಕ್ಯಾನ್ಸರ್ ಪತ್ತೆ ಮಾಡುವ ಪ್ಯಾಪ್(PAP) ಪರೀಕ್ಷೆ ನಡೆಸಲಾಯಿತು. ನಾರಾಯಣ ಆಸ್ಪತ್ರೆಯ ಈ ಮಹತ್ವದ ಕಾರ್ಯಕ್ರಮವನ್ನು ಮಂಡ್ಯ ವೈದ್ಯಕೀಯ ವಿಜ್ಞಾನ ಸಂಸ್ಥೆ (ಮಿಮ್ಸ್)ಯ ವೈದ್ಯಕೀಯ ಅಧೀಕ್ಷಕ ಡಾ.ರಾಮಲಿಂಗೇಗೌಡ ಉದ್ಘಾಟಿಸಿದ್ದರು. ಸ್ತನ ಕ್ಯಾನ್ಸರ್‌ನಿಂದ ಬಳಲುತ್ತಿರುವ ಮಹಿಳೆಯರ ಸಂಖ್ಯೆ ಹೆಚ್ಚುತ್ತಿರುವ ಆರಂಭಿಕ ಹಂತದಲ್ಲೇ ರೋಗ ಪತ್ತೆಗೆ ಉತ್ತೇಜನ ನೀಡುವ ನಿಟ್ಟಿನಲ್ಲಿ 'ಮ್ಯಾಮೊ ಬಸ್' ಮೂಲಕ ವಿವಿಧೆಡೆ ಸ್ಕ್ರೀನಿಂಗ್ ನಡೆಸುವ ಯೋಜನೆಯನ್ನು ಪ್ರಶಂಸಿಸಿದ್ದರು.

ಜಮ್ಮು–ಕಾಶ್ಮೀರಕ್ಕೆ ವಿಶೇಷ ಸ್ಥಾನಮಾನ ಕಲ್ಪಿಸಿದ್ದ 370ನೇ ವಿಧಿ ರದ್ದು ಎತ್ತಿಹಿಡಿದ 'ಸುಪ್ರೀಂ'; ಮುತಾಲಿಕ್ ಸ್ವಾಗತ

ಇದು ಭಾರತದ 140 ಕೋಟಿ ಜನತೆಗೂ ಹರ್ಷ ತಂದಿದೆ



ಮೈಸೂರು, ಡಿ.11(ಎಸ್‌ಬಿಡಿ)–ಜಮ್ಮು–ಕಾಶ್ಮೀರಕ್ಕೆ ವಿಶೇಷ ಸ್ಥಾನಮಾನ ಕಲ್ಪಿಸಿದ್ದ ಆರ್ಟಿಕಲ್ 370 ರದ್ದು ಪಡಿಸಿದ ಕೇಂದ್ರ ಸರ್ಕಾರದ ನಿರ್ಧಾರವನ್ನು ಸುಪ್ರೀಂಕೋರ್ಟ್ ಎತ್ತಿ ಹಿಡಿದಿರುವುದಕ್ಕೆ ಶ್ರೀರಾಮಸೇನೆ ಸಂಸ್ಥಾಪಕ ಪ್ರಮೋದ್ ಮುತಾಲಿಕ್ ಸಂತಸ ವ್ಯಕ್ತಪಡಿಸಿದ್ದಾರೆ.

ಕಾರ್ಯನಿಮಿತ್ತ ಸೋಮವಾರ ಮೈಸೂರಿಗೆ ಆಗಮಿಸಿದ್ದ ಅವರು ಮಾಧ್ಯಮಗಳಿಗೆ ಪ್ರತಿಕ್ರಿಯಿಸಿ, ಆರ್ಟಿಕಲ್ 370 ವಿಚಾರದಲ್ಲಿ ಸುಪ್ರೀಂಕೋರ್ಟ್ ನೀಡಿರುವ ತೀರ್ಪು ದೇಶದ 140 ಕೋಟಿ ಜನರಿಗೂ ಹರ್ಷ ತಂದಿದೆ. ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ 370ನೇ ವಿಧಿ ಮರು ಜಾರಿಗೊಳಿಸುವುದಾಗಿ ಹೇಳಲಾಗುತ್ತಿತ್ತು. ನ್ಯಾಯಾಲಯದ ಈ ತೀರ್ಪಿನಿಂದಾಗಿ ಕಾಂಗ್ರೆಸ್‌ಗೆ ಮುಖಭಂಗವಾಗಿದೆ ಎಂದು ಅಭಿಪ್ರಾಯಿಸಿದರು.

370ನೇ ವಿಧಿ ರದ್ದಾದ ಬಳಿಕ ಜಮ್ಮು–ಕಾಶ್ಮೀರದಲ್ಲಿ ಶಾಂತಿ ಮರುಕಳಿಸಿದೆ. ಸಣ್ಣಪುಟ್ಟ ಭಯೋತ್ಪಾದನೆ ಕೃತ್ಯಗಳು ನಡೆದಿವೆಯಾದರೂ ಪರಿಸ್ಥಿತಿ ನಿಯಂತ್ರಣದಲ್ಲಿದೆ. ಕಲ್ಲು ಹೊಡೆಯುತ್ತಿದ್ದವರು ಕಾಲೇಜಿಗೆ ಹೋಗಿ ಶಿಕ್ಷಣ ಪಡೆಯುತ್ತಿದ್ದಾರೆ. ಅಲ್ಲಿನ ಪ್ರವಾಸೋದ್ಯಮ ಕ್ಷೇತ್ರ ಅಭಿವೃದ್ಧಿ ಆಗುತ್ತಿದೆ. ಈ ಸುಧಾರಣೆಗೆ ಕಾರಣರಾದ ಕೇಂದ್ರ ಸರ್ಕಾರ ಹಾಗೂ ಪ್ರಧಾನಿ ನರೇಂದ್ರ ಮೋದಿಯವರಿಗೆ ಅಭಿನಂದನೆ ಸಲ್ಲಿಸುತ್ತೇನೆ ಎಂದು ಹೇಳಿದರು.

ಕಾಂಗ್ರೆಸ್ ಭ್ರಷ್ಟಾಚಾರಕ್ಕೆ ಸಾಕ್ಷಿ: ಐಟಿ ದಾಳಿ ವೇಳೆ ಕಾಂಗ್ರೆಸ್ ಸಂಸದನಿಗೆ ಸೇರಿದ ನೂರಾರು ಕೋಟಿ ಹಣ ಪತ್ತೆ ವಿಚಾರದ ಬಗ್ಗೆ ಮಾತನಾಡಿ, ಇದು ಕಾಂಗ್ರೆಸ್ ಪಕ್ಷದ ಭ್ರಷ್ಟಾಚಾರಕ್ಕೆ ಸಾಕ್ಷಿಯಾಗಿದೆ. ಮುಂಬರುವ ಲೋಕಸಭಾ ಚುನಾವಣೆ ದೃಷ್ಟಿಯಿಂದ ಕಾಂಗ್ರೆಸ್ ಅಕ್ರಮವಾಗಿ ಹಣ ಸಂಗ್ರಹಿಸಲು ಮುಂದಾಗಿದೆ. ದಾಳಿ ಮುಂದುವರೆದರೆ ಸಾವಿರಾರು ಕೋಟಿ ಹಣ ಪತ್ತೆಯಾಗಲಿದೆ. ಈ ಪ್ರಕರಣ ಕಾಂಗ್ರೆಸ್‌ನ ನೈತಿಕ ದಿವಾಳಿತನಕ್ಕೆ ಸಾಕ್ಷಿಯಾಗಿದೆ. ಈ ಬಗ್ಗೆ ಚಕಾರವೆತ್ತದ ಐಎನ್‌ಡಿಐಎ (ಇಂಡಿಯಾ) ಮೈತ್ರಿಕೂಟದ ಪಕ್ಷಗಳ ನಾಯಕರೂ ಕೂಡ ಭ್ರಷ್ಟಾತಿಭ್ರಷ್ಟರಾಗಿದ್ದಾರೆ ಎಂದು ಹೇಳಿದರು.

ಕೇವಲ ಕಾಂಗ್ರೆಸ್ ನಾಯಕರನ್ನು ಗುರಿಯಾಗಿಸಿ ಐಟಿ ದಾಳಿ ನಡೆಸಲಾಗುತ್ತಿದೆ ಎಂಬ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಆರೋಪಕ್ಕೆ ಪ್ರತಿಕ್ರಿಯಿಸಿ, ಏಕಾಏಕಿ ಐಟಿ ದಾಳಿ ನಡೆಸುವುದಿಲ್ಲ. ದಾಳಿಗೂ ಮುನ್ನಾ ಸಮಗ್ರವಾಗಿ ಮಾಹಿತಿ ಕಲೆ ಹಾಕಲಾಗುತ್ತದೆ. ಸಂಗ್ರಹಿಸಿದ ಮಾಹಿತಿಗಳನ್ನು ಪರಿಶೀಲಿಸಿ ಖಚಿತಪಡಿಸಿಕೊಂಡ ನಂತರವೇ ಐಟಿ ದಾಳಿ ನಡೆಸುವುದು. ಹಾಗಾಗಿ ಸಿದ್ದರಾಮಯ್ಯನವರ ಆರೋಪದಲ್ಲಿ ಯಾವುದೇ ಹುರುಳಿಲ್ಲ ಎಂದರು.

ಕಾಂಗ್ರೆಸ್ ನೀಡಿರುವ ಗ್ಯಾರಂಟಿ ಯೋಜನೆಗಳಿಂದ ಜನರಿಗೆ ದೀರ್ಘಾವಧಿ ಪ್ರಯೋಜನ ಆಗುವುದಿಲ್ಲ. ಗ್ಯಾರಂಟಿ ಯೋಜನೆಗಳ ಮೂಲಕ ಜನರ ದುಡಿಮೆಯನ್ನು ಕಸಿದುಕೊಳ್ಳಲಾಗುತ್ತಿದೆ. ಈ ರೀತಿಯ ಉಚಿತ ಯೋಜನೆಗಳ ಬದಲು ಶಿಕ್ಷಣ, ಉದ್ಯೋಗ, ಆರೋಗ್ಯ ಸೇವೆ ನೀಡಬೇಕು. ಉಚಿತ ಯೋಜನೆಗಳಿಂದ ಆರ್ಥಿಕ ವ್ಯವಸ್ಥೆಗೂ ತೊಂದರೆಯಾಗುತ್ತದೆ ಎಂದು ಅಭಿಪ್ರಾಯಿಸಿದರು.

ರಾಹುಲ್ ಕರ್ನಾಟಕದಲ್ಲಿ ಗೆಲ್ಲಲ್ಲ: ಕೇರಳದ ವಯನಾಡಿನಲ್ಲಿ ಮುಸ್ಲಿಂ ಮತದಾರರು ಹೆಚ್ಚಿರುವುದರಿಂದ ಕಳೆದ ಲೋಕಸಭಾ ಚುನಾವಣೆಯಲ್ಲಿ ರಾಹುಲ್ ಗಾಂಧಿ ಅಲ್ಲಿಂದ ಆಯ್ಕೆಯಾದರು. ಮುಂದಿನ ಚುನಾವಣೆಯಲ್ಲಿ ಕರ್ನಾಟಕದ ಯಾವುದೇ ಕ್ಷೇತ್ರದಿಂದ ಸ್ಪರ್ಧಿಸಿದರೂ ಅವರ ವಿರುದ್ಧ ಹಿಂದೂ ಪರ ಸಂಘಟನೆಗಳು ಪ್ರಚಾರ ಮಾಡುತ್ತವೆ. ಕರ್ನಾಟಕದಲ್ಲಿ ರಾಹುಲ್ ಗಾಂಧಿ ಗೆಲುವು ಸಾಧಿಸುವುದು ವಯನಾಡಿನಷ್ಟು ಸುಲಭವಲ್ಲ ಎಂದರು.

ಅತಿಥಿ ಉಪನ್ಯಾಸಕರ ನೇಮಕಕ್ಕೆ ನೇರ ಸಂದರ್ಶನ

ಮೈಸೂರು,ಡಿ.11–ಮೈಸೂರು ವಿಶ್ವವಿದ್ಯಾನಿಲಯವು ತನ್ನ ಅಧೀನದಡಿ ಕಾರ್ಯನಿರ್ವಹಿಸುತ್ತಿರುವ ವಿವಿಧ ಅಧ್ಯಯನ ವಿಭಾಗಗಳಲ್ಲಿನ ಸ್ನಾತಕೋತ್ತರ ವಿಷಯಗಳಲ್ಲಿ ಲಭ್ಯವಿರುವ ಹೆಚ್ಚುವರಿ ಬೋಧನಾ ಕಾರ್ಯಭಾರವನ್ನು ನಿರ್ವಹಿಸಲು ಅತಿಥಿ ಉಪನ್ಯಾಸಕರನ್ನು ಆಹ್ವಾನಿಸುವ ಸಂಬಂಧ ಅರ್ಹ ಅಭ್ಯರ್ಥಿಗಳಿಗೆ ಡಿ.13ರಂದು ನೇರ ಸಂದರ್ಶನ ಆಯೋಜಿಸಿದೆ. ಇದರ ಸಂಪೂರ್ಣ ವಿವರವನ್ನು ಮೈಸೂರು ವಿವಿ ವೆಬ್‌ಸೈಟ್ www.uni-mysore.ac.in ಆಸಕ್ತರು ವಿವರಗಳನ್ನು ಮತ್ತು ನಿಗದಿತ ಅರ್ಜಿ ನಮೂನೆಗಳನ್ನು ಮೇಲ್ಕಂಡ ವೆಬ್‌ಸೈಟ್‌ನಿಂದ ಪಡೆಯಬಹುದಾಗಿರುತ್ತದೆ. ನಿಗದಿಪಡಿಸಲಾದ ದಿನಾಂಕದಲ್ಲಿ ವ್ಯತ್ಯಾಸವಾದಲ್ಲಿ ಬದಲಾವಣೆಯ ದಿನಾಂಕದ ಬಗ್ಗೆ ಮಾಹಿತಿಯನ್ನು ವಿವಿ ವೆಬ್‌ಸೈಟ್ www.uni-mysore.ac.inನಲ್ಲಿ ಹೊರಡಿಸಲಾಗುವುದು. ಹೆಚ್ಚಿನ ಮಾಹಿತಿಗಾಗಿ ದೂ.ಸಂ: 2419440/2419361 ಅನ್ನು ಸಂಪರ್ಕಿಸಬಹುದು.

ರೈತರ ಸಾಲ ಮರುಪಾವತಿಗೆ ಒತ್ತಡ ಹಾಕದಂತೆ ಕೇಂದ್ರದಿಂದ ರಾಷ್ಟ್ರೀಕೃತ ಬ್ಯಾಂಕ್‌ಗಳಿಗೆ ನಿರ್ದೇಶನ

ಮುಖ್ಯಮಂತ್ರಿಗಳ ಮೂಲಕ ಮನವಿ: ಚಲುವರಾಯಸ್ವಾಮಿ



ಬೆಂಗಳೂರು, ಡಿ.11(ಕೆಎಂಶಿ)–ಬರ ಪರಿಸ್ಥಿತಿ ಹಿನ್ನೆಲೆಯಲ್ಲಿ ರೈತರ ಸಾಲ ಮರುಪಾವತಿಗೆ ಒತ್ತಡ ಹೇರದಂತೆ ರಾಷ್ಟ್ರೀಕೃತ ಬ್ಯಾಂಕ್‌ಗಳಿಗೆ ನಿರ್ದೇಶನ ನೀಡುವಂತೆ ಮುಖ್ಯಮಂತ್ರಿಗಳ ಮೂಲಕ ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಸಲಾಗುವುದು ಎಂದು ಕೃಷಿ ಸಚಿವ ಎನ್. ಚಲುವರಾಯಸ್ವಾಮಿ ಭರವಸೆ ನೀಡಿದರು.

ತಮ್ಮನ್ನು ಭೇಟಿ ಮಾಡಿದ ರೈತ ಸಂಘಟನೆಗಳ ಪ್ರತಿನಿಧಿಗಳ ಅಹವಾಲು ಆಲಿಸಿದ ಸಚಿವರು, ಸಮಸ್ಯೆಗಳನ್ನು ಕಾನೂನಿನ ಪರಿಮಿತಿ ಹಾಗೂ ಸಂಪನ್ಮೂಲಗಳ ಲಭ್ಯತೆ ಆಧಾರದ ಮೇಲೆ ಪರಿಹರಿಸಲು ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂದು ತಿಳಿಸಿದರು.

ರೈತರ ಪಂಪ್‌ಸೆಟ್‌ಗಳಿಗೆ 7 ಗಂಟೆ ಉಚಿತ ವಿದ್ಯುತ್ ನೀಡಲಾಗುತ್ತದೆ. ಉತ್ಪಾದನೆ, ಲಭ್ಯತೆ ಆಧಾರದ ಮೇಲೆ ಇದರ ಅವಧಿ ಹೆಚ್ಚಳದ ಬಗ್ಗೆ ಪರಿಶೀಲಿಸಲಾಗುವುದು ಎಂದು ಕೃಷಿ ಸಚಿವ ಚಲುವರಾಯಸ್ವಾಮಿ ಹೇಳಿದರು.

ಎಪಿಎಂಸಿ ಕಾಯಿದೆ ತಿದ್ದುಪಡಿ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯಾಪ್ತಿಗೆ ಬರಲಿದ್ದು, ಈಗಾಗಲೇ ಆ ನಿಟ್ಟಿನಲ್ಲಿ ಕ್ರಮ ವಹಿಸಲಾಗುತ್ತಿದೆ ಎಂದರು. ಬರ ಪರಿಸ್ಥಿತಿ ಹಿನ್ನೆಲೆಯಲ್ಲಿ ಪರಿಹಾರ ಹೆಚ್ಚಳದ ಬಗ್ಗೆಯೂ ಸರ್ಕಾರದ ಹಂತದಲ್ಲಿ ತೀರ್ಮಾನ ಕೈಗೊಳ್ಳಲಾಗುತ್ತದೆ ಎಂದು ಕೃಷಿ ಸಚಿವರು ಹೇಳಿದರು. ಕಬ್ಬು ಬೆಳೆಗಾರರ ಸಮಸ್ಯೆ ಸೇರಿದಂತೆ ರೈತರ ಎಲ್ಲಾ ಸಮಸ್ಯೆಗಳ ಪರಿಹಾರಕ್ಕೆ ಕ್ರಮ ವಹಿಸಲಾಗುವುದು ಎಂದು ಚಲುವರಾಯಸ್ವಾಮಿ ಹೇಳಿದರು. ಸರ್ಕಾರದ ಗ್ಯಾರಂಟಿ ಯೋಜನೆಗಳು ಕೇವಲ ಮಹಿಳಾ ಕೇಂದ್ರಿತವಾಗಿರದೆ ಗ್ರಾಮೀಣ ರೈತರು ಹಾಗೂ ಬಡಜನರ ಏಳಿಗೆಯ ಆಶಯದೊಂದಿಗೆ ರೂಪಿಸಲಾಗಿದೆ ಎಂದು ಸಚಿವರು ಮನವರಿಕೆ ಮಾಡಿಕೊಟ್ಟರು.

ತಾಂತ್ರಿಕ ಕೌಶಲ್ಯಾಭಿವೃದ್ಧಿ ತರಬೇತಿಗೆ ಅರ್ಜಿ ಆಹ್ವಾನ

ಮೈಸೂರು,ಡಿ.11–ಕರ್ನಾಟಕ ಸರ್ಕಾರದ ಎಐಟಿಟಿ–ಎಸ್‌ಸಿಪಿ ಮತ್ತು ಟಿಎಸ್‌ಪಿ ಯೋಜನೆಯಡಿ ಕರ್ನಾಟಕ ರಾಜ್ಯದಲ್ಲಿ ವಾಸವಾಗಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅರ್ಹ ಯುವಕ, ಯುವತಿಯರಿಗಾಗಿ ಉದ್ಯೋಗ ಆಧಾರಿತ, ಉಚಿತ ತಾಂತ್ರಿಕ ಕೌಶಲ್ಯಾಭಿವೃದ್ಧಿ ತರಬೇತಿಗಳಾದ ಪೋಸ್ಟ್ ಡಿಪ್ಲೊಮೋ ಇನ್ ಟೂಲ್ ಡಿಸೈನ್, ಟೂಲ್ ರೂಮ್ ಮೆಕಾನಿಸ್ಟ್, ಸಿಎನ್ಸಿ ಟೆಕ್ನಾಲಜಿ, ಸಿಎಂಎಂ, ಸಿಎನ್ಸಿ ಪ್ರೋಗ್ರಾಮರ್–ವಿಎಂಸಿ, ಟರ್ನಿಂಗ್, ಡಿಸೈನರ್ ಮೆಕಾನಿಕಲ್ (ಸಿಎಡಿ–ಸಿಎಎಂ), ಎಲೆಕ್ಟ್ರಿಷಿಯನ್ (ಇಂಡಸ್ಟ್ರಿಯಲ್ ಅಂಡ್ ಡೊಮೆಸ್ಟಿಕ್), ಕನ್ವೆನ್ಷನಲ್ ಮಷಿನ್ಸ್, ಕ್ವಾಲಿಟಿ ಇನ್‌ಸ್ಪೆಕ್ಟರ್, ಸಿಎನ್ಸಿ ಮಷಿನ್ ಆಪರೇಟರ್ (ಟರ್ನರ್ ಅಂಡ್ ಮಿಲ್ಲರ್) ತರಬೇತಿಗೆ ಅರ್ಜಿ ಆಹ್ವಾನಿಸಲಾಗಿದೆ. ತರಬೇತಿ ಪಡೆದವರಿಗೆ ಮಾಸಿಕ ರೂ. 2500 ಸ್ಟೈಫಂಡ್ ನೀಡಲಾಗುವುದು. ಮಾಹಿತಿಗಾಗಿ ದೂ.ಸಂ: 9945349638, 8095978954 ಸಂಪರ್ಕಿಸಬಹುದು.



ಮೈಸೂರಿನ ವಾರ್ಡ್ ನಂ.24ರ ರಾಜರಾಜೇಶ್ವರಿ ಕಾಲೋನಿಯ ಸಿದ್ದಪ್ಪಾಜಿ ಕಂಡಾಯೋತ್ಸವದಲ್ಲಿ ಮಾಜಿ ಶಾಸಕ ಎಲ್.ನಾಗೇಂದ್ರ ಭಾಗವಹಿಸಿದ್ದರು. ಈ ವೇಳೆ ರಾಜು, ಸಚಿನ್, ಕೇಬಲ್ ವಿಜಿ, ಶಶಿ, ಕೇಬಲ್ ರಾಜಣ್ಣ, ರವಿ ಕೆಂಪಣ್ಣ, ಮೆಕ್ಯಾನಿಕ್ ರವಿ ಇದ್ದರು.

ಉಚಿತ ಹೃದ್ರೋಗ ತಪಾಸಣೆ ಶಿಬಿರ

ಮೈಸೂರು, ಡಿ.11–ಮೈಸೂರಿನ ರಾಮಕೃಷ್ಣನಗರ ಬಡಾವಣೆಯಲ್ಲಿರುವ ಸುಯೋಗ್ ಆಸ್ಪತ್ರೆಯಲ್ಲಿ ಡಿ.16ರವರೆಗೆ ಉಚಿತ ಹೃದ್ರೋಗ ತಪಾಸಣಾ ಶಿಬಿರ, ಹೃದಯ ಶಸ್ತ್ರಚಿಕಿತ್ಸಾ ತಜ್ಞ ವೈದ್ಯರಾದ ಡಾ.ಆದಿತ್ಯ ಉಡುಪ ಕೆ. ಹಾಗೂ ಡಾ.ರವಿಕುಮಾರ್ ಟಿ.ಎನ್. ಅವರ ನೇತೃತ್ವದಲ್ಲಿ ನಡೆಯಲಿದೆ. ಶಿಬಿರದಲ್ಲಿ ಸಮಾಲೋಚನೆ ಇದ್ದು, ವೈದ್ಯರು ಸೂಚಿಸುವ ಇ.ಸಿ.ಜಿ., ಲಿಪಿಡ್ ಪ್ರೊಫೈಲ್, ಆರ್.ಬಿ.ಎಸ್., ಎಕೋ ಸ್ಕ್ರೀನಿಂಗ್, ಟಿ.ಎಂ.ಟಿ ಪರೀಕ್ಷೆಗಳಿಗೆ ವಿಶೇಷ ಪ್ಯಾಕೇಜ್ ಲಭ್ಯವಿರುತ್ತದೆ. ಹೆಚ್ಚಿನ ಮಾಹಿತಿಗಾಗಿ 0821–2533600, 9986399862 ಸಂಪರ್ಕಿಸಬಹುದಾಗಿದೆ.

ಡಿ.17, ವಧು–ವರರ ಮುಖಾಮುಖಿ ಸಮಾವೇಶ

ಮೈಸೂರು,ಡಿ.11–ಜೆಎಸ್‌ಎಸ್ ವಿವಾಹ ವೇದಿಕೆ ಆಶ್ರಯದಲ್ಲಿ ಡಿ.17ರಂದು ಜೆಎಸ್‌ಎಸ್ ಆಸ್ಪತ್ರೆ ಆವರಣದಲ್ಲಿರುವ ಶ್ರೀ ಶಿವರಾತ್ರಿ ರಾಜೇಂದ್ರ ಭವನದ ಸಭಾಂಗಣದಲ್ಲಿ ವಧು–ವರರ ಸಮಾವೇಶ ಏರ್ಪಡಿಸಲಾಗಿದೆ. ಸಮಾವೇಶ ಬೆಳಗ್ಗೆ 10ರಿಂದ ಮಧ್ಯಾಹ್ನ 1ರವರೆಗೆ ನಡೆಯಲಿದೆ. ಮಾಹಿತಿಗೆ ದೂ. 0821–2430322, ಮೊ. 9611070674

ಪ್ರೀತಿಸಿದ ಯುವತಿ ಜೊತೆ ಓಡಿಹೋದ ಮಗ ಯುವಕನ ತಾಯಿಯನ್ನು ಬೆತ್ತಲೆಗೊಳಿಸಿ ಮೆರವಣಿಗೆ; 7 ಮಂದಿ ಬಂಧನ

ಬೆಳಗಾವಿಯ ಒಂಟಮೂರಿಯಲ್ಲಿ ಅಮಾನವೀಯ ಘಟನೆ

ಬೆಳಗಾವಿ, ಡಿ.11– ತಾಲೂಕಿನ ಹೊಸ ಒಂಟಮೂರಿ ಗ್ರಾಮದಲ್ಲಿ ಭಾನುವಾರ ರಾತ್ರಿ ಮಹಿಳೆಯೊಬ್ಬರನ್ನು ಬೆತ್ತಲೆಗೊಳಿಸಿ, ಗ್ರಾಮದಲ್ಲಿ ಮೆರವಣಿಗೆ ಮಾಡಿ, ಕಂಬಕ್ಕೆ ಕಟ್ಟಿ ಥಳಿಸಲಾಗಿದೆ.

ಹೊಸ ಒಂಟಮೂರಿಯ ಸಂತ್ರಸ್ತ ಮಹಿಳೆಯ ಪುತ್ರ ಯುವತಿಯನ್ನು ಪ್ರೀತಿಸಿ ಓಡಿಹೋಗಿದ್ದೇ ಘಟನೆಗೆ ಕಾರಣ ಎಂದು ಗ್ರಾಮಸ್ಥರು ತಿಳಿಸಿದ್ದಾರೆ.

ಸಂತ್ರಸ್ತೆಯ ಪುತ್ರ ದುಂಡಪ್ಪ ಹಾಗೂ ಇದೇ ಊರಿನ ಪ್ರಿಯಾಂಕ ಪ್ರೀತಿಸುತ್ತಿದ್ದರು. ಪ್ರಿಯಾಂಕ ಮನೆಯವರು ಇದಕ್ಕೆ ಒಪ್ಪದೇ, ಬೇರೊಬ್ಬ ವರನೊಂದಿಗೆ ನಿಶ್ಚಿತಾರ್ಥ ಮಾಡಿದ್ದರು. ಸೋಮವಾರ (ಡಿ.11) ಪ್ರಿಯಾಂಕ ಮದುವೆ ಕೂಡ ಗೊತ್ತಾಗಿತ್ತು. ಆದರೆ, ಭಾನುವಾರ ರಾತ್ರಿಯೇ ದುಂಡಪ್ಪ–ಪ್ರಿಯಾಂಕ ಮನೆ ಬಿಟ್ಟು ಓಡಿ ಹೋದರು. ಇದರಿಂದ ರೊಚ್ಚಿಗೆದ್ದ ಯುವತಿ ಮನೆಯವರು ಯುವಕನ ತಾಯಿಯನ್ನು ಹಿಗ್ಗಾಮುಗ್ಗಾ ಥಳಿಸಿದರು. ಬೆತ್ತಲೆ ಮಾಡಿ ಊರಿನ ಬೀದಿಗಳಲ್ಲಿ ಓಡಾಡಿಸಿದರು. ಕಂಬಕ್ಕೆ ಕಟ್ಟಿ ಮತ್ತೆ ಹೊಡೆದರು. ಅವರ ಮನೆಗೆ ಬೆಂಕಿ ಹಚ್ಚಿ ಅಪಾರ ಹಾನಿ ಮಾಡಿದರು ಎಂದು ಮೂಲಗಳು ತಿಳಿಸಿವೆ. ತಡರಾತ್ರಿ ಸ್ಥಳಕ್ಕೆ ಕಾಕತಿ ಪೊಲೀಸರು ಭೇಟಿ ನೀಡಿ, ಪರಿಶೀಲನೆ ನಡೆಸಿದ್ದು, ಪ್ರಕರಣ ಸಂಬಂಧ 7 ಜನ ಆರೋಪಿಗಳನ್ನು ಬಂಧಿಸಲಾಗಿದೆ.

ಇಂದು ಬೆಳಗ್ಗೆ ನಗರ ಪೊಲೀಸ್ ಆಯುಕ್ತ ಎಸ್.ಎನ್.ಸಿದ್ದರಾಮಪ್ಪ ಅವರು ಕೂಡ ಗ್ರಾಮಕ್ಕೆ ಭೇಟಿ ನೀಡಿ ಮಾಹಿತಿ ಪಡೆದುಕೊಂಡಿದ್ದಾರೆ. ಓಡಿ ಹೋಗಿರುವ ಯುವಕ, ಯುವತಿಗೆ ಪೊಲೀಸರ ಶೋಧ ಕಾರ್ಯ ಆರಂಭಿಸಿದ್ದಾರೆ. ಗ್ರಾಮದಲ್ಲಿ 2 ಕೆಎಸ್‌ಆರ್‌ಪಿ ತುಕಡಿ ಮತ್ತು ಪೊಲೀಸ್ ಬಂದೋಬಸ್ತ್ ಸಹ ನಿಯೋಜಿಸಲಾಗಿದೆ.

ಗೊತ್ತು ಗುರಿಯಿಲ್ಲದ ಶೈಕ್ಷಣಿಕ ನೀತಿಗೆ ವಿದ್ಯಾರ್ಥಿಗಳು ಬಲಿಪಶು

ಸಂಗೀತ ವಿವಿ ಕುಲಪತಿ ಪ್ರೊ.ನಾಗೇಶ್ ವಿ.ಬೆಟ್ಟಕೋಟೆ



ಮೈಸೂರು,ಡಿ.11(ಎಸ್‌ಪಿಎನ್)– ನಮ್ಮನ್ನಾಳುವ ಸರ್ಕಾರಗಳು ಗೊತ್ತು–ಗುರಿಯಿಲ್ಲದೆ ಶೈಕ್ಷಣಿಕ ನೀತಿಗಳನ್ನು ಜಾರಿಗೊಳಿಸಲು ಹೊರಟ ನಿಲುವುಗಳಿಗೆ ವಿದ್ಯಾರ್ಥಿಗಳು ಬಲಿಪಶುಗಳಾಗುತ್ತಿದ್ದಾರೆ ಎಂದು ಡಾ.ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯಗಳ ಕುಲಪತಿ ಪ್ರೊ.ನಾಗೇಶ್ ವಿ.ಬೆಟ್ಟಕೋಟೆ ವಿಷಾದಿಸಿದರು.

ಸರಸ್ವತಿಪುರಂನ ಜೆಎಸ್‌ಎಸ್ ಮಹಿಳಾ ಕಾಲೇಜು ನವಜ್ಯೋತಿ ಸಭಾಂಗಣದಲ್ಲಿ ಶರಣ ಸಾಹಿತ್ಯ ಪರಿಷತ್ ಹಾಗೂ ಜೆಎಸ್‌ಎಸ್ ಮಹಿಳಾ ಕಾಲೇಜು ಸಹಯೋಗದೊಂದಿಗೆ ಆಯೋಜಿಸಿದ್ದ ಅಂತರ್ ಕಾಲೇಜು ಪ್ರಬಂಧ ಸ್ಪರ್ಧೆಯ ಬಹುಮಾನ ವಿತರಣೆ ಹಾಗೂ ವಚನ ಸಾಹಿತ್ಯದಲ್ಲಿ ವೈಜ್ಞಾನಿಕ ಚಿಂತನೆ ವಿಷಯ ಕುರಿತು ವಿಚಾರ ಸಂಕಿರಣದಲ್ಲಿ ಮಾತನಾಡಿದರು.

ಆಡಳಿತಕ್ಕೆ ಬರುವ ಸರ್ಕಾರಗಳು ತಮಗಿಷ್ಟ ಬಂದಂತೆ ಶೈಕ್ಷಣಿಕ ನೀತಿಗಳನ್ನು ರೂಪಿಸುತ್ತಿವೆ. ಇದರ ಅನುಷ್ಠಾನ ನೇರ ಪರಿಣಾಮ ವಿದ್ಯಾರ್ಥಿಗಳ ಮೇಲಾಗುತ್ತವೆ. ತಜ್ಞರ ಅಭಿಪ್ರಾಯವಿಲ್ಲದೆ, ಯಾವುದೇ ನೀತಿಗಳನ್ನು ಗೊತ್ತು–ಗುರಿಯಿಲ್ಲದೆ ಅನುಷ್ಠಾನಗೊಳಿಸಲು ಮುಂದಾಗುತ್ತಿವೆ ಎಂದರು.

ಬ್ರಿಟಿಷರ ಶೈಕ್ಷಣಿಕ ಪದ್ಧತಿ ಅನುಕರಣೆಯಿಂದ ನಮ್ಮ ಯುವಕರ ಮನಸ್ಥಿತಿ ಗುಲಾಮರನ್ನಾಗಿಸಿದೆ. ತಾಂತ್ರಿಕತೆ ಶಿಕ್ಷಣ ಅವಶ್ಯಕತೆ ಇದ್ದು, ಅದನ್ನು ನಿರ್ಲಕ್ಷಿಸುತ್ತಿರುವುದು ದುರಂತ ಸಂಗತಿ. ಅಲ್ಲದೆ, ಶರಣರ ತತ್ವಗಳು ಸಮಾಜಕ್ಕೆ ತ್ವರಿತವಾಗಿ ತಲುಪಿಸುವ ಅಗತ್ಯತೆ ಇದೆ. 12ನೇ ಶತಮಾನದಲ್ಲಿ ವೃತ್ತಿ ಬದುಕಿಗೆ ನ್ಯಾಯಬದ್ಧ ಬದುಕಿಗೆ ಬದ್ಧರಾಗಿದ್ದು, ನಡೆ–ನುಡಿಯ ಜೀವನ ಮೌಲ್ಯವನ್ನು ಪ್ರತಿಪಾದಿಸಿದ್ದಾರೆ. ಆದರೆ, ಈಗಿನ ವಿದ್ಯಾರ್ಥಿಗಳಿಗೆ ಗೂಗಲ್ ಗುರು ಆಗಿರುವುದು ಕ್ರೋಟೋನ್ ಗಿಡದಾಗೆ. ಹಾಗಾಗಿ ಆಲದಮರದಂತೆ ಬೆಳೆದು ನಿಂತಿರುವುದು ವಚನ ಸಾಹಿತ್ಯ ಇಂದಿನ ವಿದ್ಯಾರ್ಥಿಗಳ ಗುರು ಆಗಬೇಕು. ಶರಣರ ನಡೆ–ನುಡಿ ವ್ಯಕ್ತಿತ್ವವಾಗಿ ಬದಲಾಗಬೇಕು ಎಂದು ಸಲಹೆ ನೀಡಿದರು.

'ವಚನ ಸಾಹಿತ್ಯದಲ್ಲಿ ವೈಜ್ಞಾನಿಕ ಚಿಂತನೆ' ಕುರಿತು ಮಾತನಾಡಿದ ಬನ್ನೂರು ಕೆ.ರಾಜು, ಹನ್ನೆರಡನೇ ಶತಮಾನಕ್ಕಿಂತ ಮುಂಚೆ ಮನುಷ್ಯರೇ ಆಗಿರದ ಮಾನವರಿದ್ದರು. 12ನೇ ಶತಮಾನದ ನಂತರದಲ್ಲಿ ಬಂದ ವ್ಯಕ್ತಿಗಳು ಶರಣ ಸಾಹಿತ್ಯದಲ್ಲಿ ತೊಡಗಿಸಿಕೊಂಡು ಮನುಷ್ಯರೇ ದೇವರಾದ ಸಂದರ್ಭವನ್ನು ವಿವರಿಸಿದರಲ್ಲದೆ, ಶರಣ ಬರುವಿಕೆಗೂ ಮುನ್ನ ಕಂದಾಚಾರದ ಕಟ್ಟಡಗಳಲ್ಲಿ ಸುಖವಾಗಿ ನಿದ್ರಿಸುತ್ತಿದ್ದ ಜನರನ್ನು ವೈಜ್ಞಾನಿಕ ವಿಚಾರಗಳಿಂದ ಸಮರ ಸಾರಿ ಸಶಕ್ತ ಸಮಾಜ ನಿರ್ಮಾಣಕ್ಕೆ ಪ್ರಯತ್ನಿಸಿದೆ. ವಚನ ಸಾಹಿತ್ಯ ಕಾಗಕ್ಕ–ಗುಬ್ಬಕ್ಕಗಳ ಕಥೆಯಲ್ಲ, ಅದು ಶುದ್ಧ ಸಾಹಿತ್ಯ. ಎಲ್ಲಾ ದೋಷಯುಕ್ತ ಕರ್ಮಠಗಳಿಗೆ ಸಿದೌಷಧ ಜಗತ್ತು ರೋಗಮುಕ್ತ ಹೊಂದಬೇಕಾದರೆ ಈ ವಚನ ಸಾಹಿತ್ಯ ಎಂಬ ಮದ್ದನ್ನು ಅನುಸರಿಸಬೇಕು ಇಲ್ಲವಾದರೆ ಸಮಾಜ ರೋಗಗ್ರಸ್ತವಾಗಿ ನರಳುವುದು ಎಂದರು.

ಸಮಾರಂಭದ ಅಧ್ಯಕ್ಷತೆಯನ್ನು ಮಗು ಸದಾನಂದಯ್ಯ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಗಂಗಾಧರಸ್ವಾಮಿ, ಜೆಎಸ್‌ಎಸ್ ಮಹಿಳಾ ಕಾಲೇಜು ಪ್ರಿನ್ಸಿಪಾಲ್ ರಾಧಾ ಎನ್.ಪೂರ್ಣಿಮಾ ಹಾಗೂ ದತ್ತಿ ದಾನಿಗಳಾದ ಡಾಕ್ಟರ್ ಲತಾ ರಾಜಶೇಖರ್, ವೈ.ಬಿ.ಪ್ರಭುಸ್ವಾಮಿ, ಡಾ.ಜಿ.ಸಿದ್ದೇಶ್ ಮತ್ತು ಕನ್ನಡ ವಿಭಾಗದ ಮುಖ್ಯಸ್ಥ ಎಸ್.ಆರ್. ಕುಮಾರ್ ಉಪಸ್ಥಿತರಿದ್ದರು.

ಪ್ರಥಮ ಬಹುಮಾನವನ್ನು ಜೆಎಸ್‌ಎಸ್ ಕಾಲೇಜ್ ಪವಿತ್ರ, ಎರಡನೇ ಬಹುಮಾನವನ್ನು ಎಸ್.ಡಿ.ಎಂ ಕಾಲೇಜಿನ ರಚನಾ, ಹೆಚ್.ಆರ್.ಸುಚಿತ್ರ, ಎಸ್.ಜಿ ಸೌಮ್ಯ, ಅಕ್ಷತಾ, ಮಾನಸ, ಜ್ಯೋತಿಕಾ, ಪ್ರಿಯಾಂಕ, ಸುಲೋಚನಾ, ಮಧು ಕ್ರಮವಾಗಿ ತೃತೀಯ ಮತ್ತು ಸಮಾಧಾನಕರ ಪಡೆದರು. ಪ್ರಬಂಧ ಸ್ಪರ್ಧೆಯಲ್ಲಿ ಭಾಗವಹಿಸಿದ್ದ ಎಲ್ಲ ವಿದ್ಯಾರ್ಥಿಗಳಿಗೂ ಪ್ರಮಾಣ ಪತ್ರ ವಿತರಿಸಲಾಯಿತು.

ಮೈಸೂರು ಮಿತ್ರ ಮಂಗಳವಾರ 12 ಡಿಸೆಂಬರ್ 2023

ಹಿಂದೂ ಧರ್ಮ ಟೀಕಿಸಿದ್ದಕ್ಕೆ ವಿವೇಕಾನಂದರ ಜಯಂತಿ ಆಚರಣೆ ನಿಲ್ಲಿಸಿದ ಆರ್‌ಎಸ್‌ಎಸ್

ಸಾಹಿತಿ ಪ್ರೊ.ಕೆ.ಎಸ್.ಭಗವಾನ್ ಆರೋಪ



ಮಂಡ್ಯ, ಡಿ.11– ಸ್ವಾಮಿ ವಿವೇಕಾನಂದರು ಹಿಂದೂ ಧರ್ಮದ ಕಟು ಟೀಕಾಕಾರ ಎಂಬ ವಾಸ್ತವ ವಿಚಾರ ಗೊತ್ತಾದ ಮೇಲೆ ರಾಷ್ಟ್ರೀಯ ಸ್ವಯಂಸೇವಕ ಸಂಘ ವಿವೇಕಾನಂದರ ಜಯಂತಿ ಆಚರಣೆ ಮಾಡುವುದನ್ನು ನಿಲ್ಲಿಸಿದೆ ಎಂದು ಸಾಹಿತಿ ಪ್ರೊ.ಕೆ.ಎಸ್.ಭಗವಾನ್ ಆರೋಪಿಸಿದರು.

ಸೋಮವಾರ ನಗರದ ಅಂಬೇಡ್ಕರ್ ಭವನದಲ್ಲಿ ಕರ್ನಾಟಕ ದಲಿತ ಸಂಘರ್ಷ ಸಮಿತಿ ಸಂಯೋಜನೆಯಲ್ಲಿ ನಡೆದ ಡಾ.ಬಿ.ಆರ್ ಅಂಬೇಡ್ಕರ್‌ರವರ 67ನೇ ಮಹಾ ಪರಿನಿಬ್ಬಾಣ ದಿನದ ನಿಮಿತ್ತ ದಲಿತ, ಶೋಷಿತ ಸಮುದಾಯದ ಅಭ್ಯುದಯಕ್ಕಾಗಿ, ಸಾಮಾಜಿಕ ನ್ಯಾಯಕ್ಕಾಗಿ ಜನಾಗ್ರಹ ಸಮಾವೇಶ ಉದ್ಘಾಟಿಸಿ ಅವರು ಮಾತನಾಡಿದರು.

ಸ್ವಾಮಿ ವಿವೇಕಾನಂದರನ್ನು ಹಿಂದೂ ಧರ್ಮದ ಪ್ರತಿಪಾದಕರು ಎಂದು ಬಿಂಬಿಸಿ ಆರಾಧಿಸುತ್ತಿದ್ದರು. ಆದರೆ ವಾಸ್ತವವಾಗಿ ಅವರು ಹಿಂದೂ ಧರ್ಮದ ಕಟು ಟೀಕಾಕಾರರಾಗಿದ್ದರು. ನಾನೊಬ್ಬ ಬೌದ್ಧ ಎಂದು ಹೇಳಿಕೊಂಡಿದ್ದರ ಜೊತೆಗೆ ನನ್ನದು ಸಂಕುಚಿತ ಹಿಂದೂ ಧರ್ಮವಲ್ಲ ಬದಲಾಗಿ ಮಾನವ ಧರ್ಮ ಎಂದು ಸಾರಿದ್ದರು. ಇಂತಹ ವಿಚಾರವನ್ನು ಇತಿಹಾಸದಲ್ಲಿ ಮರೆಮಾಚಿದ್ದಾರೆ ಹಾಗಾಗಿ ಆರ್‌ಎಸ್‌ಎಸ್ ಅನ್ನು ರಾಷ್ಟ್ರೀಯ ಸುಳ್ಳುಗಾರರ ಸಂಘ ಎಂದು ಕರೆಯುವುದಾಗಿ ಟೀಕಿಸಿದರು.

ಕೇರಳದಲ್ಲಿ ದಲಿತರ ಶೋಚನೀಯ ಸ್ಥಿತಿ ಕಂಡು ಮರುಗಿದ್ದ ಸ್ವಾಮಿ ವಿವೇಕಾನಂದರು, ಇಂಡಿಯಾದಲ್ಲಿ ಕೇರಳ ಹುಚ್ಚಾಸ್ಪತ್ರೆ ಎಂದು ಕರೆದಿದ್ದರು. ಅದೇ ರೀತಿ ಬೆಳಗಾವಿ ಯಲ್ಲಿ ದಲಿತರ ಪರಿಸ್ಥಿತಿ ನೋಡಿ ಕಣ್ಣೀರು ಹಾಕಿದ್ದರು. ಭಾರತ ದಲ್ಲಿ ಬೌದ್ಧ ಧರ್ಮ ಪ್ರಬಲವಾಗಿತ್ತು. ಅದರ ವಿರುದ್ಧ ದಮನಕಾರಿ ನೀತಿ ಅನುಸರಿಸಲಾಯಿತು. ಬೌದ್ಧ ಧರ್ಮದ ಇತಿಹಾಸ ಮರೆಮಾಚಲು ಸಾವಿರ ವರ್ಷಗಳ ಇತಿಹಾಸವನ್ನೇ ದೇಶ ದಲ್ಲಿ ಮರೆಮಾಚಲಾಗಿದ್ದು, ಬುದ್ಧ ಮಣ್ಣಿನ ಮಗ, ಬೌದ್ಧ ಪರಂಪರೆ ನೆಲದ ಸಂಸ್ಕೃತಿ, ಬಾಬಾ ಸಾಹೇಬರು ಸಂಶೋಧನೆ ಮೂಲಕ ಎಲ್ಲಾ ವಿಚಾರವನ್ನು ಬಯಲುಗೊಳಿಸಿದ್ದಾರೆ. ಅಂಬೇಡ್ಕರ್ ತೋರಿಸಿರುವ ಮಾರ್ಗದಲ್ಲಿ ಭಾರತದ ಇತಿಹಾಸ ಮರು ರಚನೆಯಾಗಬೇಕು ಎಂದು ಹೇಳಿದರು.

ರಾಷ್ಟ್ರಕವಿ ಕುವೆಂಪು ಕಾನೂರು ಹೆಗ್ಗಡತಿ ಹಾಗೂ ಮಲೆಗಳಲ್ಲಿ ಮದುಮಗಳು ಕೃತಿಯಲ್ಲಿ ಹಿಂದೂ ಧರ್ಮವನ್ನು ಸಿಗಿದು ತೋರಣ ಕಟ್ಟಿದ್ದಾರೆ. ಅದೇ ರೀತಿ ಸವರ್ಣಶ್ರೇಷ್ಠರು ಎಂದು ಹೇಳಿಕೊಳ್ಳುವ ಬ್ರಾಹ್ಮಣರಲ್ಲಿ ಮಹಿಳೆಯರಿಗೆ ಉಪನಯನ ಇಲ್ಲ, ಜನಿವಾರ ಧರಿಸುವಂತಿಲ್ಲ. ಪೆರಿಯಾರ್, ನಾರಾಯಣಗುರು, ಅಂಬೇಡ್ಕರ್ ಹಿಂದೂ ಧರ್ಮದಲ್ಲಿನ ಮೌಢ್ಯ, ಅಂಧಕಾರ,ಶೋಷಣೆ ವಿರುದ್ಧ ನಿರಂತರ ಹೋರಾಟ ನಡೆಸಿದ್ದಾರೆ. ಹಾಗಾಗಿ ಬುದ್ಧ, ಅಶೋಕ, ಬಸವಣ್ಣ, ಸ್ವಾಮಿ ವಿವೇಕಾನಂದರ ಜೊತೆಗೆ ಇಂತಹ ಮಹನೀಯರ ಅಧ್ಯಯನ ಮಾಡಬೇಕು. ಅಂಬೇಡ್ಕರ್ ನಮ್ಮವರು ಎಂದರೆ ಬಲ ಬರಲ್ಲ, ಬದಲಾಗಿ ಅವರ ಬದುಕು–ಬರಹ ಮತ್ತು ವಿಚಾರದ ಪುಸ್ತಕಗಳನ್ನು ಓದಬೇಕು. ವಿಶೇಷವಾಗಿ ಜಾತಿ ವಿನಾಶ ಸಂಪುಟವನ್ನು ಓದಿ ಎಂದು ತಿಳಿಸಿದರು.

ವೇದಿಕೆಯಲ್ಲಿ ಸಮಿತಿಯ ರಾಜ್ಯಾಧ್ಯಕ್ಷ ವೆಂಕಟಗಿರಿಯಯ್ಯ, ರಾಜ್ಯ ಸಂಪನ್ಮೂಲ ಕೇಂದ್ರದ ಮಾಜಿ ನಿರ್ದೇಶಕ ಡಾ.ಎಸ್. ತುಕಾರಾಂ, ವಿಚಾರವಾದಿ ಮಾಯಿಗೌಡ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಸಾರಿಗೆ ಬಸ್ ಡಿಕ್ಕಿ ಹೊಡೆದು ಮಹಿಳೆ ಸಾವು

ಮಂಡ್ಯ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದಲ್ಲಿ ದುರ್ಘಟನೆ

ಮಂಡ್ಯ, ಡಿ.11– ಸಾರಿಗೆ ಬಸ್ ಡಿಕ್ಕಿ ಹೊಡೆದು ಮಹಿಳೆ ಸಾವನ್ನಪ್ಪಿರುವ ಘಟನೆ ಮಂಡ್ಯ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದಲ್ಲಿ ಸೋಮವಾರ ಸಂಭವಿಸಿದೆ.

ಬೆಂಗಳೂರಿನ ಆಡುಗೋಡಿ ನಿವಾಸಿ ಪೂಜಾ ಭಾರತಿ (40) ಅಪಘಾತದಲ್ಲಿ ಸಾವನ್ನಪ್ಪಿದವರಾಗಿದ್ದು, ಕಾರ್ಯ ನಿಮಿತ್ತ ಮಂಡ್ಯಕ್ಕೆ ಆಗಮಿಸಿದ್ದ ಅವರು, ಬಸ್ ನಿಲ್ದಾಣದ ಆಗಮನ ದ್ವಾರದಿಂದ ನಿಲ್ದಾಣಕ್ಕೆ ಪ್ರವೇಶಿಸುವಾಗ ಮೈಸೂರು ಕಡೆಯಿಂದ ವೇಗವಾಗಿ ಬಂದ ನಗರ ಸಾರಿಗೆ ಬಸ್ ಇವರಿಗೆ ಡಿಕ್ಕಿ ಹೊಡೆದ ಪರಿಣಾಮ ಮಹಿಳೆ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಈ ಸಂಬಂಧ ಮಂಡ್ಯ ಸಂಚಾರಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಈ ದುರ್ಘಟನೆಯ ವೀಡಿಯೋ ದೃಶ್ಯಾವಳಿ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದೆ.

ಯುದ್ಧಗಳಿಂದ ಮಾನವ ಹಕ್ಕು ಉಲ್ಲಂಘನೆ

ನಿವೃತ್ತ ನ್ಯಾ.ನಾಗಮೋಹನ್ ದಾಸ್ ಅಭಿಮತ



ಮಂಡ್ಯ, ಡಿ.11– ಜಗತ್ತಿನ ಎಲ್ಲಾ ಸರ್ಕಾರಗಳು ತಮ್ಮ ಬಜೆಟ್‌ನಲ್ಲಿ ರಕ್ಷಣಾ ಇಲಾಖೆಗೆ(ಯುದ್ಧ) ಹೆಚ್ಚು ಹಣ ವ್ಯಯಿಸುತ್ತಿವೆ. ಯುದ್ಧಗಳಿಂದ ಮಾನವ ಹಕ್ಕುಗಳ ಉಲ್ಲಂಘನೆ ಆಗುತ್ತದೆ ಎಂದು ನಿವೃತ್ತ ನ್ಯಾಯಮೂರ್ತಿ ಹೆಚ್.ಎನ್.ನಾಗಮೋಹನ್ ದಾಸ್ ಅಭಿಪ್ರಾಯಪಟ್ಟರು.

ಸೋಮವಾರ ಜಿಲ್ಲಾಡಳಿತದ ವತಿಯಿಂದ ನಗರದ ಕಲಾಮಂದಿರದಲ್ಲಿ ನಡೆದ ವಿಶ್ವ ಮಾನವ ಹಕ್ಕುಗಳ ದಿನಾಚರಣೆಯನ್ನು ಉದ್ಘಾಟಿಸಿ ಮಾತನಾಡಿದ ಅವರು, ಇಂದು ಜಗತ್ತಿನಲ್ಲಿ ಯುದ್ಧಕ್ಕೆ ಸಂಬಂಧಪಟ್ಟ ಉದ್ಯಮ ಹೆಚ್ಚು ಬೆಳೆದಿದೆ. ಯುದ್ಧದ ಪರಿಣಾಮ, ಶಾಲಾ–ಕಾಲೇಜಿನ ಶುಲ್ಕ, ಆಹಾರ, ಪೆಟ್ರೋಲ್, ಡೀಸೆಲ್, ಔಷಧಿ, ದಿನನಿತ್ಯ ಬಳಕೆಯ ವಸ್ತುಗಳ ಬೆಲೆ ಹೆಚ್ಚುತ್ತದೆ. ನಮ್ಮೆಲ್ಲರ ಬದುಕು ಕಷ್ಟಕ್ಕೆ ಸಿಲುಕುತ್ತಿದೆ. ಇದು ಆಘಾತಕಾರಿ ಬೆಳವಣಿಗೆ. ಪ್ರತಿಯೊಬ್ಬರು ಮಾನವೀಯ ಮೌಲ್ಯಗಳನ್ನು ಬೆಳೆಸಿಕೊಂಡರೆ ಯುದ್ಧಗಳೇ ನಡೆಯುವುದಿಲ್ಲ. ರಕ್ಷಣಾ ಇಲಾಖೆಯ ಹಣವನ್ನು ಸರ್ಕಾರಗಳು ಜನಕಲ್ಯಾಣಕ್ಕಾಗಿ ಹೆಚ್ಚು ವ್ಯಯಿಸಬಹುದು ಎಂದರು.

ಅಣು ಯುದ್ಧ ಜಗತ್ತನ್ನು ಕಾಡುತ್ತಿದೆ. ವಿಶ್ವದಲ್ಲಿ ಅನೇಕ ಯುದ್ಧಗಳು ನಡೆದ ಪರಿಣಾಮ ಕೋಟ್ಯಾಂತರ ಮಂದಿ ಸಾವಿಗೀಡಾಗಿದ್ದಾರೆ. ಈ ಸಂದರ್ಭದಲ್ಲಿ ನಾವು ಮಾನವ ಹಕ್ಕುಗಳ ಬಗ್ಗೆ ಚಿಂತಿಸಬೇಕಿದೆ. 1939 ರಲ್ಲಿ ನಡೆದ ಎರಡನೇ ಮಹಾಯುದ್ಧದಲ್ಲಿ ಜಗತ್ತು ಎಂದೂ ಕಾಣದಂತಹ ವಿಪತ್ತು, ವಿನಾಶ, ಭೀಕರ ನರಹತ್ಯೆ, ಆರ್ಥಿಕ ದುಂದುವೆಚ್ಚ, ಅವ್ಯವಸ್ಥೆ ನೋಡಿತು. ಈ ಯುದ್ಧದಿಂದ ಬಂದೊದಗಿದ ರೋಗ ರುಜಿನಗಳಿಂದ ಮತ್ತು ಆಹಾರದ ಅಭಾವದಿಂದ ಅನೇಕ ಜನರು ಸಾವನ್ನಪ್ಪಿದರು. ಬಾಂಬ್‌ಗಳನ್ನು ಸಿಡಿಸಿ ನಗರಗಳನ್ನು ಧ್ವಂಸ ಮಾಡಲಾಯಿತು. ಹಳ್ಳಿಗಳಿಗೆ ಮತ್ತು ಕಾಡುಗಳಿಗೆ ಬೆಂಕಿ ಹಚ್ಚಲಾಯಿತು. ಕೈಗಾರಿಕೆಗಳನ್ನು, ಅಣೆಕಟ್ಟುಗಳನ್ನು, ರಸ್ತೆಗಳನ್ನು, ಮೂಲ ಸೌಕರ್ಯಗಳನ್ನು ನಾಶಮಾಡಲಾಯಿತು. ಇದರಿಂದ ಉಂಟಾದ ದುಷ್ಪರಿಣಾಮಗಳು ಜಗತ್ತಿನ ಜನರನ್ನು ದಂಗುಬಡಿಸಿ ಮತ್ತೊಂದು ಯುದ್ಧ ನಡೆದರೆ ಇಡೀ ಜಗತ್ತೇ ನಾಶವಾಗುತ್ತದೆ ಎಂಬ ಕಟು ಸತ್ಯದ ಅರಿವು ಮೂಡಿಸಿತು. ಇದರ ಪರಿಣಾಮವಾಗಿ 1945 ರಲ್ಲಿ ವಿಶ್ವಸಂಸ್ಥೆ ಸ್ಥಾಪನೆಯಾಯಿತು ಎಂದು ಹೇಳಿದರು.

ಪ್ರತಿನಿತ್ಯ ಮಹಿಳೆ ಹಾಗೂ ದಲಿತರ ಮೇಲೆ ಅತ್ಯಾಚಾರ ನಡೆಯುತ್ತಿವೆ. ಇಂತಹ ಸಂದರ್ಭದಲ್ಲಿ ಮಾನವ ಹಕ್ಕುಗಳು ಎಲ್ಲಿವೆ ಎಂದು ನಾವು ಪ್ರಶ್ನಿಸಿಕೊಳ್ಳಬೇಕು. ಮಾನವ ಹಕ್ಕುಗಳನ್ನು ಪರಿಪೂರ್ಣವಾಗಿ ಪ್ರತಿಯೊಬ್ಬರು ಅನುಭವಿಸಬೇಕು. ಅಂತಃಕರಣದಲ್ಲಿ ಮಾನವೀಯತೆ ಹಾಗೂ ಶಾಂತಿಯ ಗುಣ ಬೆಳೆದರೆ ಮಾನವ ಹಕ್ಕುಗಳು ಪ್ರತಿಯೊಬ್ಬರಿಗೂ ದೊರೆಯುತ್ತದೆ ಎಂದರು.

ಜಿಲ್ಲಾಧಿಕಾರಿ ಡಾ.ಕುಮಾರ್ ಮಾತನಾಡಿ, ಮಾನವ ಹಕ್ಕುಗಳು ಹುಟ್ಟುತ್ತಲೇ ಪ್ರತಿಯೊಬ್ಬರಿಗೂ ದೊರಕುತ್ತವೆ. ನಾವು ಜೀವಂತ ಇರುವವರೆಗೂ ಮಾನವ ಹಕ್ಕು ನಮ್ಮ ಜೊತೆಗಿರುತ್ತವೆ. ಇದನ್ನು ಮಾನವ ಹಕ್ಕುಗಳಿಗೆ ಪೆಟ್ಟು ಬೀಳದಂತೆ ರಕ್ಷಿಸಬೇಕಾಗುತ್ತದೆ. ಮಾನವ ಗೌರವಕ್ಕೆ ಧಕ್ಕೆ ಬರದಂತೆ ನಡೆದುಕೊಳ್ಳಬೇಕು. ನೈತಿಕ, ಮಾನವೀಯ, ಹೃದಯವಂತಿಕೆ ಮೌಲ್ಯಗಳನ್ನು ಅಳವಡಿಸಿಕೊಳ್ಳಬೇಕು. ಮನೆಗಳಲ್ಲಿ ಮಕ್ಕಳಿಗೆ ಮಾನವ ಹಕ್ಕುಗಳ ಬಗ್ಗೆ ತಿಳಿಸಬೇಕು ಎಂದು ಸಲಹೆ ನೀಡಿದರು.

ವೇದಿಕೆಯಲ್ಲಿ ಜಿ.ಪಂ. ಸಿಇಓ ಶೇಖ್ ತನ್ವೀರ್ ಆಸಿಫ್, ಎಸ್ಪಿ ಎನ್.ಯತೀಶ್, ಅಪರ ಜಿಲ್ಲಾಧಿಕಾರಿ ಡಾ.ನಾಗರಾಜು, ಉಪವಿಭಾಗಾಧಿಕಾರಿ ಶಿವಮೂರ್ತಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪನಿರ್ದೇಶಕ ರಾಜಮೂರ್ತಿ, ಮಾನವ ಹಕ್ಕು ಆಯೋಗದ ಸದಸ್ಯ ಮಿಕ್ಕೆರೆ ವೆಂಕಟೇಶ್ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು, ಸಂಘ ಸಂಸ್ಥೆಗಳ ಪದಾಧಿಕಾರಿಗಳು ಸೇರಿದಂತೆ ಇನ್ನಿತರ ಗಣ್ಯರು ಉಪಸ್ಥಿತರಿದ್ದರು.

ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘದ ಕಟ್ಟಡ ಉದ್ಘಾಟನೆ



ನಾಗಮಂಗಲ, ಡಿ.11– ತಾಲೂಕಿನ ಹೊಣಕೆರೆ ಹೋಬಳಿ ಗೊಟಕಹಳ್ಳಿಯಲ್ಲಿ ನೂತನವಾಗಿ ನಿರ್ಮಿಸಿರುವ ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘದ ಕಟ್ಟಡ, ಅಂಗನವಾಡಿ ಕಟ್ಟಡ ಉದ್ಘಾಟನೆ ಹಾಗೂ ಜಲಜೀವನ್ ಮಿಷನ್ ಯೋಜನೆಯಡಿ ಪ್ರತಿ ಮನೆಗೆ ಶುದ್ಧ ಕುಡಿಯುವ ನೀರು ಪೂರೈಕೆ ಮಾಡುವ ಅಭಿವೃದ್ಧಿ ಕಾಮಗಾರಿಗೆ ಜಿಲ್ಲಾ ಉಸ್ತುವಾರಿ ಸಚಿವ ಎನ್. ಚೆಲುವರಾಯಸ್ವಾಮಿ ಚಾಲನೆ ನೀಡಿದರು.

ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘದಲ್ಲಿ ಗ್ರಾಮಸ್ಥರು ಗುಣಮಟ್ಟದ ಹಾಲು ಪೂರೈಕೆ ಮಾಡಿದರೆ ಆರ್ಥಿಕವಾಗಿ ಸದೃಢರಾಗಬಹುದು ಹಾಗೂ ಸಂಘವನ್ನು ಉತ್ತಮ ರೀತಿಯಲ್ಲಿ ಅಭಿವೃದ್ಧಿಪಡಿಸಬಹುದು, ಗ್ರಾಮದ ಅಭಿವೃದ್ಧಿ ವಿಚಾರದಲ್ಲಿ ಎಲ್ಲರೂ ಒಗ್ಗಟ್ಟಾಗಿ ಹೋದರೆ ಮಾತ್ರ ಅಭಿವೃದ್ಧಿ ಪಡಿಸಬಹುದು ಎಂದರು.

ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ಪ್ರಾಮಾಣಿಕವಾಗಿ ಶ್ರಮಿಸುವುದಾಗಿ ಹೇಳಿದರು. ಜನರ ಪ್ರೀತಿ, ವಿಶ್ವಾಸ, ನಂಬಿಕೆಗೆ ಯಾವುದೇ ಚ್ಯುತಿ ಬಾರದಂತೆ ಅಭಿವೃದ್ಧಿಗೆ ಪ್ರಾಮಾಣಿಕವಾಗಿ ಸ್ಪಂದಿಸುತ್ತೇನೆ ಎಂದರು. ಮುಂಬರುವ ಲೋಕಸಭಾ ಚುನಾವಣೆಯ ನಂತರ ತಾಲೂಕಿನ ರಘುರಾಮಪುರ, ಗೊಟಕಹಳ್ಳಿ ಮಾರ್ಗವಾಗಿ ಮೇಲುಕೋಟೆಗೆ ಸಂಪರ್ಕ ಕಲ್ಪಿಸುವ ರಸ್ತೆ ಅಭಿವೃದ್ಧಿ ಹಾಗೂ ಗ್ರಾಮದ ಕೆರೆಗಳಿಗೆ ನೀರು ತುಂಬಿಸಲು ಕಾಲುವೆ ನಿರ್ಮಾಣ ಸೇರಿದಂತೆ ಇನ್ನಿತರ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುವುದು ಎಂದರು. ಮಂಡ್ಯ ಮನ್‌ಮುಲ್ ಅಧ್ಯಕ್ಷ ಬೋರೇಗೌಡ ಮಾತನಾಡುತ್ತಾ, 2012ರಲ್ಲಿ ಆರಂಭಗೊಂಡಿರುವ ಈ ಸಂಘಕ್ಕೆ ಗ್ರಾಮಸ್ಥರು ಗುಣಮಟ್ಟದ ಹಾಲು ಪೂರೈಕೆ ಮಾಡಿ ಸಂಘವನ್ನು ಆರ್ಥಿಕವಾಗಿ ಬಲಪಡಿಸಿರುವುದರಿಂದ ನಮ್ಮ ಮನಮುಲ್‌ನಿಂದ ಯಾವುದೇ ರೀತಿಯ ಆರ್ಥಿಕ ಸಹಾಯ ಪಡೆಯದೆ ಸ್ವಂತ ಕಟ್ಟಡ ನಿರ್ಮಿಸಿರುವುದು ಶ್ಲಾಘನೀಯ ಎಂದರು. ಇದೇ ರೀತಿ ಸಹಕಾರ ಸಂಘಗಳು ಮುನ್ನಡೆಸಿದರೆ ಒಕ್ಕೂಟಕ್ಕೂ ಅನುಕೂಲವಾಗುತ್ತದೆ ಎಂದರು.

ಸಮಾರಂಭದಲ್ಲಿ ಸಂಘದ ಅಧ್ಯಕ್ಷ ಇಂದ್ರಮ್ಮ, ಸಮಾಜ ಸೇವಕ ಲಕ್ಷ್ಮಿ ಕಾಂತ್, ಪಿಎಲ್‌ಡಿ ಬ್ಯಾಂಕ್ ನಿರ್ದೇಶಕ ಗೊಟಕಹಳ್ಳಿ ಕೃಷ್ಣೇಗೌಡ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎನ್.ಜೆ ರಾಜೇಶ್, ಕೊಣನೂರು ಹನುಮಂತು, ಭೀಮಣ್ಣ, ಹುಚ್ಚಪ್ಪ ಸೇರಿದಂತೆ ಗ್ರಾಮಸ್ಥರಿದ್ದರು.

ಲೋಕ್ ಅದಾಲತ್‌ನಲ್ಲಿ 34,686 ಪ್ರಕರಣಗಳು ಇತ್ಯರ್ಥ

ಮಂಡ್ಯ,ಡಿ.11– ಮಂಡ್ಯ ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿ ನಡೆದ ರಾಷ್ಟ್ರೀಯ ಲೋಕ್ ಅದಾಲತ್‌ಗೆ ವಕೀಲರು, ಕಕ್ಷಿಗಾರರು ಹಾಗೂ ಸಾರ್ವಜನಿಕರಿಂದ ಉತ್ತಮ ಸ್ಪಂದನೆ ದೊರೆತಿದ್ದು, ಜಿಲ್ಲೆಯ ವಿವಿಧ ನ್ಯಾಯಾಲಯಗಳಲ್ಲಿ ಹಲವಾರು ವರ್ಷಗಳಿಂದ ಇತ್ಯರ್ಥವಾಗದೇ ಉಳಿದಿದ್ದ ಒಟ್ಟು 4341 ಪ್ರಕರಣಗಳು ಹಾಗೂ ಜಿಲ್ಲೆಯ ಒಟ್ಟು 30348 ವ್ಯಾಜ್ಯ ಪೂರ್ವ ಪ್ರಕರಣಗಳು ಸೇರಿದಂತೆ ಒಟ್ಟು 34,686 ಪ್ರಕರಣಗಳು ಇತ್ಯರ್ಥವಾಗಿವೆ.

ಮಂಡ್ಯ ನಗರದ ವಿವಿಧ ನ್ಯಾಯಾಲಯಗಳಲ್ಲಿ ಒಟ್ಟು 25,584 ಪ್ರಕರಣಗಳು, ಮದ್ದೂರಿನ ವಿವಿಧ ನ್ಯಾಯಾಲಯಗಳಲ್ಲಿ ಒಟ್ಟು 2394 ಪ್ರಕರಣಗಳು, ಶ್ರೀರಂಗಪಟ್ಟಣದ ವಿವಿಧ ನ್ಯಾಯಾಲಯಗಳಲ್ಲಿ ಒಟ್ಟು 1967 ಪ್ರಕರಣಗಳು, ಪಾಂಡವಪುರದ ವಿವಿಧ ನ್ಯಾಯಾಲಯಗಳಲ್ಲಿ ಒಟ್ಟು 651 ಪ್ರಕರಣಗಳು, ಮಳವಳ್ಳಿಯ ವಿವಿಧ ನ್ಯಾಯಾಲಯಗಳಲ್ಲಿ ಒಟ್ಟು 1225 ಪ್ರಕರಣಗಳು, ನಾಗಮಂಗಲದ ವಿವಿಧ ನ್ಯಾಯಾಲಯಗಳಲ್ಲಿ ಒಟ್ಟು 576 ಪ್ರಕರಣಗಳು ಹಾಗೂ ಕೆ.ಆರ್.ಪೇಟೆಯ ವಿವಿಧ ನ್ಯಾಯಾಲಯಗಳಲ್ಲಿ ಒಟ್ಟು 2292 ಪ್ರಕರಣಗಳು ಇತ್ಯರ್ಥಗೊಂಡಿವೆ.

ದಂಪತಿಯ ದಾಂಪತ್ಯದಲ್ಲಿ ತೀವ್ರ ಭಿನ್ನಾಭಿಪ್ರಾಯಗಳು ಕಂಡುಬಂದು, ನ್ಯಾಯಾಲಯದಲ್ಲಿ ವರ್ಷಗಳಿಂದ ಪ್ರಕರಣ ನಡೆದು ವಿವಾಹ ವಿಚ್ಛೇದನ ಹಂತ ತಲುಪಿತ್ತು. ಅದಾಲತ್‌ನಲ್ಲಿ ಈ ದಂಪತಿಯ ಭಿನ್ನಾಭಿಪ್ರಾಯ ನಿವಾರಣೆಗೆ ನಿರಂತರವಾಗಿ ನ್ಯಾಯಾಧೀಶರು, ವಕೀಲರು ಹಾಗೂ ಸಂಧಾನಕಾರರು ನಡೆಸಿದ ರಾಜಿ ಸಂಧಾನ ಮಾತುಕತೆ ಯಶಸ್ವಿಯಾಗಿದ್ದು, ತಪ್ಪು ತಿಳುವಳಿಕೆಗಳನ್ನು ಸರಿಪಡಿಸಿಕೊಂಡು ಮುಂದೆ ಯಾವುದೇ ಭಿನ್ನಾಭಿಪ್ರಾಯ ಬರದಂತೆ ಸಂತೋಷದಿಂದ ದಾಂಪತ್ಯ ಜೀವನ ನಡೆಸಿಕೊಂಡು ಹೋಗಲು ದಂಪತಿ ಮತ್ತೆ ಒಂದಾದರು. ನ್ಯಾಯಾಲಯದಲ್ಲಿ ಹಾಜರಿದ್ದ ನ್ಯಾಯಾಧೀಶರು, ವಕೀಲರು, ಸಿಬ್ಬಂದಿಗಳು ಹಾಗೂ ಸಾರ್ವಜನಿಕರು, ಈ ಶುಭ ಕಾರ್ಯಕ್ರಮಕ್ಕೆ ಸಾಕ್ಷಿಯಾದರು.



ಮೈಸೂರಿನ ಬಸವೇಶ್ವರ ರಸ್ತೆಯಲ್ಲಿ ಕಡೇ ಕಾರ್ತಿಕ ಸೋಮವಾರದ ನಿಮಿತ್ತ ಜರುಗಿದ ಶ್ರೀ ಮಲೈ ಮಹದೇಶ್ವರ ಸ್ವಾಮಿಯ ಪೂಜೆ ಮತ್ತು ಅನ್ನದಾನ ಕಾರ್ಯಕ್ರಮದಲ್ಲಿ ಮಾಜಿ ಶಾಸಕ ಎಂಕೆ.ಸೋಮಶೇಖರ್ ಭಾಗವಹಿಸಿದ್ದರು. ಈ ವೇಳೆ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಜಿ.ಸೋಮಶೇಖರ್, ಮಹೇಶ್, ಮಲ್ಲು, ಸಂದೀಪ್, ಬಂಡಿಕೇರಿಯ ಮೋಹನ್,ರವಿ, ಶಿವಕುಮಾರ್, ಪುನೀತ್, ರಾಘವೇಂದ್ರ ಮತ್ತಿತರರು ಉಪಸ್ಥಿತರಿದ್ದರು.



ಮೈಸೂರು ಜಿಲ್ಲಾ ಕಾಂಗ್ರೆಸ್ ರಾಜೀವ್ ಗಾಂಧಿ ಪಂಚಾಯತ್ ರಾಜ್ ಸಮಿತಿಯ ಕಾರ್ಯಕಾರಿಣಿ ಸಭೆಯನ್ನು ನಡೆಸಲಾಯಿತು. ಈ ವೇಳೆ ಜಿಲ್ಲಾಧ್ಯಕ್ಷ ಮಲ್ಲೇಶ್ ಕೋಟೆ, ಪ್ರಧಾನ ಕಾರ್ಯದರ್ಶಿ ನಜರಬಾದ್ ಲೋಕೇಶ್, ಭಾಸ್ಕರ್, ರಾಜೇಶ್, ಪಳನಿ, ಕೇಶವಯ್ಯ, ಕೆಂಪರಾಜ್ ಮತ್ತಿತರರು ಉಪಸ್ಥಿತರಿದ್ದರು.



ಮೈಸೂರು ನಗರದ ಮಹಾರಾಜ ಕಾಲೇಜು ಆವರಣದಲ್ಲಿ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ವತಿಯಿಂದ ಜರುಗಿದ ಜಿಲ್ಲಾ ಮಟ್ಟದ ಪ್ರತಿಭಾ ಕಾರಂಜಿ ಹಾಗೂ ಕಲೋತ್ಸವ ಕಾರ್ಯಕ್ರಮದಲ್ಲಿ ಪ್ರೌಢಶಾಲೆ ವಿಭಾಗ ಕನ್ನಡ ಚರ್ಚಾ ಸ್ಪರ್ಧೆಯಲ್ಲಿ ಮೈಸೂರು ತಾಲೂಕಿನ ಮುಳ್ಳೂರಿನ ವಿನಾಯಕ ಪ್ರೌಢಶಾಲೆ ವಿದ್ಯಾರ್ಥಿನಿ ದೇವಮ್ಮಣಿ ಪ್ರಥಮ ಸ್ಥಾನ ಪಡೆದು ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ. ಈ ವೇಳೆ ಡಯಟ್‌ನ ಪ್ರಾಂಶುಪಾಲ ನಾಗರಾಜಯ್ಯ ಅವರು ಅಭಿನಂದನಾ ಪತ್ರ ನೀಡಿ ಗೌರವಿಸಿದರು. ಈ ಸಂದರ್ಭದಲ್ಲಿ ಶಿಕ್ಷಕರಾದ ಆನಂದ್, ಮಂಜುಳ, ಯೋಗಲಕ್ಷ್ಮಿ, ಸತ್ಯಭಾಮ, ನಾಗಮ್ಮ ಮತ್ತಿತರರು ಉಪಸ್ಥಿತರಿದ್ದರು.

ಉಚಿತ ಆಯುರ್ವೇದ ತಪಾಸಣಾ ಶಿಬಿರ

ಮೈಸೂರು, ಡಿ. 11– ಮೈಸೂರಿನ ಎಸ್.ಎನ್. ಪಂಡಿತ್ ಆಯುರ್ವೇದ ವತಿಯಿಂದ ಡಿ. 13 ರಂದು ಬೆಳಗ್ಗೆ 11 ರಿಂದ ಮಧ್ಯಾಹ್ನ 2 ರವರೆಗೆ ಹಾಗೂ ಸಂಜೆ 5.30 ರಿಂದ 8.30 ರವರೆಗೆ ಉದರ, ಗ್ಯಾಸ್ಟ್ರಿಕ್, ಲಿವರ್ ಸಂಬಂಧ ಕಾಯಿಲೆ, ಅಸಿಡಿಟಿ ರೋಗಗಳಿಗೆ ಉಚಿತ ತಪಾಸಣೆ ಮತ್ತು ಸಲಹೆ ನೀಡಲಾಗುವುದು. ಹೆಚ್ಚಿನ ಮಾಹಿತಿಗೆ 90363 05966 ಸಂಪರ್ಕಿಸಬಹುದು.

ಸಮಾಜದ ಸಮಸ್ಯೆಗಳಿಗೆ ಸಂಘ–ಸಂಸ್ಥೆಗಳ ಕೊಡುಗೆ ಅಪಾರ

ಸಮಾಜ ಕಾರ್ಯದ ಮುಖ್ಯಸ್ಥೆ ಡಾ.ಭಾವನಾ



ಮೈಸೂರು, ಡಿ. 11– ಮೈಸೂರಿನ ಪೂಜಾ ಭಗವತ್ ಮೆಮೋರಿಯಲ್ ಮಹಾಜನ ಎಜುಕೇಷನ್ ಸೆಂಟರ್‌ನ ಎವಿಸಿ–1ರ ಸಭಾಂಗಣದಲ್ಲಿ ಎಸ್‌ಬಿಆರ್‌ಆರ್ ಮಹಾಜನ ಪ್ರಥಮ ದರ್ಜೆ ಕಾಲೇಜಿನ ಸಮಾಜಶಾಸ್ತ್ರ ವಿಭಾಗ ಮತ್ತು ಐಕ್ಯೂಎಸಿ ಸಹಭಾಗಿತ್ವದಲ್ಲಿ 'ಸಬಲೀಕರಣದ ಬದಲಾವಣೆ ಹಾಗೂ ಉದ್ಯಮಶೀಲತೆ' ವಿಷಯದ ಕುರಿತು ಸಂವಾದ ಕಾರ್ಯಕ್ರಮ ನಡೆಯಿತು.

ಸಂಪನ್ಮೂಲ ವ್ಯಕ್ತಿಯಾಗಿ, ಪೂಜಾ ಭಗವತ್ ಮೆಮೋರಿಯಲ್ ಮಹಾಜನ ಎಜುಕೇಷನ್ ಸೆಂಟರ್‌ನ ಸಮಾಜ ಕಾರ್ಯದ ಮುಖ್ಯಸ್ಥೆ ಮತ್ತು ಸಹಾಯಕ ಪ್ರಾಧ್ಯಾಪಕಿ ಡಾಭಾವನಾ ವಿಶೇಷ ಉಪನ್ಯಾಸ ನೀಡಿದರು. ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಸಮಾಜದ ಸಮಸ್ಯೆಗಳಿಗೆ ಹೇಗೆ ಬದಲಾವಣೆ ತರಬೇಕು, ಅದಕ್ಕೆ ಪರಿಹಾರವನ್ನು ಹೇಗೆ ಕಂಡುಕೊಳ್ಳುವುದು ಎಂದು ತಿಳಿಸಿದರು. ವಿದ್ಯಾಥಿಗಳಲ್ಲಿ ಕಂಡುಬರುವ ಸಮಸ್ಯೆಗಳಿಗೆ ಅವರಲ್ಲಿಯೇ ಇರುವ ಪರಿಹಾರ ಮತ್ತು ಸಮಸ್ಯೆಗೆ ಮೂಲ ಕಾರಣದ ಕುರಿತು ಪ್ರಸ್ತಾಪಿಸಿದರು. ಸಮಾಜದಲ್ಲಿ ಮುಖ್ಯವಾಗಿ ನಿರುದ್ಯೋಗ ಅನ್ನುವುದು ದೊಡ್ಡ ಸಮಸ್ಯೆಯಾಗಿದ್ದು, ಯುವಜನತೆ ಮೇಲೆ ಹೆಚ್ಚು ಪರಿಣಾಮ ಬೀರುತ್ತಿದೆ. ಸಮಾಜದಲ್ಲಿ ಬದಲಾವಣೆ ತರಬೇಕಾದರೆ ಪ್ರತಿಯೊಬ್ಬ ನಾಗರಿಕರು ತಮ್ಮ ಜವಾಬ್ದಾರಿಯನ್ನು ಅರಿಯಬೇಕು ಎಂದು ತಿಳಿಸಿದರು.

ವೈಯಕ್ತಿಕ ಅನುಭವ, ಶಿಕ್ಷಣ, ಮಾಧ್ಯಮಗಳು ಮತ್ತು ಸಾಮಾಜಿಕ ತಾಣಗಳ ಮೂಲಕ ಸಮಾಜಿಕ ಸಮಸ್ಯೆಗಳನ್ನು ಅರಿಯಬಹುದು. ಆದರೆ, ಇದೆಲ್ಲಕ್ಕಿಂತ ಮುಖ್ಯವಾಗಿ ಡೀಡ್, ಒಡನಾಡಿ, ಚರಕದಂತಹ ಸರ್ಕಾರೇತರ ಸಂಸ್ಥೆಗಳು (ಎನ್‌ಜಿಒ), ಸಂಘಟನೆಗಳು ಸಾಮಾನ್ಯವಾಗಿ ಸರ್ಕಾರಿ ಅಧಿಕಾರದ ಹೊರಗೆ ಕಾರ್ಯನಿರ್ವಹಿಸುವ ಲಾಭ ರಹಿತ ಖಾಸಗಿ ಗುಂಪುಗಳಾಗಿರುವುದರಿಂದ ಪಕ್ಷಾತೀತವಾಗಿ ಕೆಲಸ ಮಾಡುತ್ತವೆ ಎಂದು ತಿಳಿಸಿದರು. ಜೊತೆಗೆ ಎನ್‌ಜಿಒಗಳ ರಚನೆ, ಸಂಘಟನೆಯ ದೃಷ್ಟಿ ಮತ್ತು ಅವುಗಳ ಧ್ಯೇಯಗಳ ಬಗ್ಗೆ ವಿವರಿಸಿದರು.

ಸರ್ಕಾರೇತರ ಸ್ವಯಂ ಸಂಸ್ಥೆಗಳು ಸಮಾಜಕ್ಕೆ ಸೇವೆ ಸಲ್ಲಿಸುತ್ತಿರುವುದು ಒಂದೆಡೆಯಾದರೆ, ಸಮಾಜದಿಂದ ಆ ಸಂಸ್ಥೆಗಳ ಗುರುತಿಸುವಿಕೆ ಆಗುತ್ತಿದೆಯೇ ಎಂದು ಅವಲೋಕಿಸಬೇಕಾಗಿದೆ. ಸರ್ಕಾರೇತರ ಸಂಸ್ಥೆಗಳು ಕೇವಲ ಸನ್ಮಾನ, ಪದಕ ಮತ್ತು ಪ್ರಶಸ್ತಿಗಳಿಗೆ ಸೀಮಿತವಾಗಿರುವುದಿಲ್ಲ. ನಮ್ಮಲ್ಲಿರುವ ಸಂಪನ್ಮೂಲಗಳನ್ನು ಬಳಸಿಕೊಂಡು ಅಭಿವೃದ್ಧಿ ಹೊಂದುವುದು ಸರ್ಕಾರೇತರ ಸಂಸ್ಥೆಗಳ ಗುರಿಯಾಗಬೇಕು. ಇಂತಹ ಕಾರ್ಯಕ್ರಮಗಳಿಂದ ನಮ್ಮ ದೃಷ್ಟಿಕೋನವನ್ನು ಬದಲಾಯಿಸಿಕೊಳ್ಳಬೇಕು ಎಂದರು.

ಅಧ್ಯಕ್ಷತೆಯನ್ನು ಪ್ರಾಂಶುಪಾಲರಾದ ಡಾ.ಬಿ.ಆರ್.ಜಯ ಕುಮಾರಿ ವಹಿಸಿದ್ದರು. ಕಾಲೇಜಿನ ಸಮಾಜಶಾಸ್ತ್ರ ವಿಭಾಗದ ಮುಖ್ಯಸ್ಥೆ ಮತ್ತು ಸಹಾಯಕ ಪ್ರಾಧ್ಯಾಪಕಿಯಾದ ದೀಪು, ಇತಿಹಾಸ ವಿಭಾಗದ ನಂದೀಶ್, ಅಧ್ಯಾಪಕರು, ಅಧ್ಯಾಪಕೇತರರು ಹಾಜರಿದ್ದರು.

ಡಿ.19ರಿಂದ ಸ್ವಾಮಿನಿ ಕಾಶಿಕಾನಂದಜೀ ಅವರಿಂದ ಗೀತಾಜ್ಞಾನ ಯಜ್ಞ



ಮೈಸೂರು, ಡಿ. 11– ದತ್ತ ಜಯಂತಿ ಅಂಗವಾಗಿ ಡಿ.19ರಿಂದ 25 ರವರೆಗೆ ಮೈಸೂರಿನ ಚಿನ್ಮಯ ಮಿಷನ್ ವತಿಯಿಂದ, ಸ್ವಾಮಿನಿ ಕಾಶಿಕಾನಂದಜೀ ಅವರಿಂದ "ಗೀತಾ ಜ್ಞಾನ ಯಜ್ಞ"ವನ್ನು ಆಯೋಜಿಸಲಾಗಿದೆ. ಮೈಸೂರಿನ ಗೋಕುಲಂನಲ್ಲಿರುವ ಚಿನ್ಮಯ ಮಿಷನ್ ಕೇಂದ್ರ ಶ್ರೀ ಗುರುದೇವ ದತ್ತ ಸನ್ನಿಧಿ, ಸಂ. 148, 6ನೇ ಮುಖ್ಯರಸ್ತೆ, 3ನೇ ಹಂತ ಇಲ್ಲಿ ನಡೆಯಲಿರುವ ಕಾರ್ಯಕ್ರಮದಲ್ಲಿ ಪೂಜ್ಯ ಸ್ವಾಮಿನಿಯವರು, ಭಗವದ್ಗೀತೆಯ 7ನೇ ಅಧ್ಯಾಯವಾದ "ಜ್ಞಾನ ವಿಜ್ಞಾನ ಯೋಗ"ದ ಕುರಿತು ಪ್ರತಿದಿನ ಸಾಯಂಕಾಲ 6:30ರಿಂದ 7:30 ಗಂಟೆಯವರೆಗೆ ಕನ್ನಡದಲ್ಲಿ ಪ್ರವಚನವನ್ನು ನೀಡಲಿದ್ದಾರೆ. ಇದರ ಅಂಗವಾಗಿ ಡಿ.20ರಿಂದ ಪ್ರತಿದಿನ ಸಂಜೆ 6ರಿಂದ 6:30ರವರೆಗೆ ದತ್ತಾತ್ರೇಯ ಅಷ್ಟೋತ್ತರದ ಸಾಮೂಹಿಕ ಅರ್ಚನೆ ನಡೆಯಲಿದೆ.

ಡಿ.22ರಂದು "ಗೀತಾ ಜಯಂತಿ"ಯ ಪ್ರಯುಕ್ತ ಶ್ರೀಮದ್ಭಗವದ್ಗೀತೆಯ 18 ಅಧ್ಯಾಯಗಳ ಸಾಮೂಹಿಕ ಪಾರಾಯಣವನ್ನು ಮಧ್ಯಾಹ್ನ 3 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ನಡೆಸಲಾಗುತ್ತದೆ. ಡಿ. 26ರಂದು "ದತ್ತ ಜಯಂತಿ"ಯ ಅಂಗವಾಗಿ ಬೆಳಗ್ಗೆ 10 ಗಂಟೆಯಿಂದ ಭಕ್ತಾದಿಗಳಿಂದ ಸಾಮೂಹಿಕ ಕ್ಷೀರಾಭಿಷೇಕವನ್ನು ಆಯೋಜಿಸಲಾಗಿದೆ. ಭಕ್ತಾದಿಗಳು ದೇವರಿಗೆ ಹಾಲನ್ನು ಅರ್ಪಿಸಬಹುದು. ಮಧ್ಯಾಹ್ನ 12.30 ಕ್ಕೆ ಮಹಾಮಂಗಳಾರತಿ ನೆರವೇರಲಿದೆ.

ಡಿ.24ರ ಭಾನುವಾರದಂದು "ಹನುಮದ್ವ್ರತ"ವನ್ನು, "ಶ್ರೀರಾಮ ಕ್ಷೇತ್ರ", 5ನೇ ಮುಖ್ಯ ರಸ್ತೆ, ಸಾರ್ವಜನಿಕ ಹಾಸ್ಟೆಲ್ ರಸ್ತೆ, ವಿದ್ಯಾರಣ್ಯಪುರಂನಲ್ಲಿರುವ ಮಿಷನ್ನಿನ ಶಾಖೆಯಲ್ಲಿ ಬೆಳಗ್ಗೆ 11 ರಿಂದ 12.30 ಗಂಟೆಯವರೆಗೆ ಆಯೋಜಿಸಲಾಗಿದೆ.

ಇಂದಿನಿಂದ ಮೈಸೂರಿನಲ್ಲಿ ಎಸ್‌ಡಿಪಿಐ ರಾಷ್ಟ್ರೀಯ ಕಾರ್ಯಕಾರಿಣಿ

ಮೈಸೂರು, ಡಿ. 11–ಡಿ.12ರಿಂದ ನಗರದ ಕ್ಯೂ ಸ್ಟಾರ್ ಹೋಟೆಲ್‌ನಲ್ಲಿ ಎರಡು ದಿನಗಳ ಕಾಲ ಎಸ್‌ಡಿಪಿಐ ರಾಷ್ಟ್ರೀಯ ಕಾರ್ಯಕಾರಿಣಿ ಸಭೆ ನಡೆಯಲಿದೆ ಎಂದು ಎಸ್‌ಡಿಪಿಐ ಜಿಲ್ಲಾಧ್ಯಕ್ಷ ರಫತ್ ಖಾನ್ ತಿಳಿಸಿದ್ದಾರೆ.

ಬೆಳಗ್ಗೆ 10 ಗಂಟೆಗೆ ನಡೆಯುವ ರಾಷ್ಟ್ರೀಯ ಕಾರ್ಯಕಾರಿಣಿ ಸಭೆಯನ್ನು ಎಸ್‌ಡಿಪಿಐ ರಾಷ್ಟ್ರೀಯ ಅಧ್ಯಕ್ಷರಾದ ಎಂ.ಕೆ.ಫೈಝಿ ಉದ್ಘಾಟಿಸುವರು. ಸಂಜೆ ತನಕ ಸಭೆ ನಡೆಯಲಿದ್ದು, ಸಂಜೆ 6 ಗಂಟೆಗೆ ಕ್ಯೂ ಸ್ಟಾರ್ ಹೋಟೆಲ್‌ನಿಂದ ರಾಜೀವ್ ನಗರದ ದಸ್ತಗೀರ್ ಫಂಕ್ಷನ್ ಹಾಲ್ ತನಕ ಎಸ್‌ಡಿಪಿಐ ಕಾರ್ಯಕರ್ತರ ಜಾಥಾ ನಡೆಯಲಿದೆ. ಬಳಿಕ ಅಲ್ಲಿ ಸಾರ್ವಜನಿಕ ಸಭೆ ನಡೆಯಲಿದೆ ಎಂದರು.

ರಾಷ್ಟ್ರೀಯ ಕಾರ್ಯಕಾರಿಣಿ ಸಭೆಯಲ್ಲಿ ಪ್ರಸ್ತುತ ದೇಶದ ರಾಜಕೀಯ ವಿದ್ಯಮಾನಗಳ ಬಗ್ಗೆ ವಿಚಾರ ವಿನಿಮಯ ಹಾಗೂ ಪಕ್ಷದ ಹೋರಾಟಗಳ ರೂಪುರೇಷೆಗಳ ಬಗ್ಗೆ ಕಾರ್ಯಕರ್ತರ ಅಭಿಪ್ರಾಯ ಸಂಗ್ರಹಿಸಿ ಚರ್ಚೆ ನಡೆಸಲಾಗುವುದು. ಕಾರ್ಯಕಾರಿಣಿಯಲ್ಲಿ ಎಸ್‌ಡಿಪಿಐ ರಾಜ್ಯಾಧ್ಯಕ್ಷರಾದ ಅಬ್ದುಲ್ ಮಜೀದ್ ಸೇರಿದಂತೆ ಪಕ್ಷದ ಪ್ರಮುಖ ಪದಾಧಿಕಾರಿಗಳು ಪಾಲ್ಗೊಳ್ಳಲಿದ್ದಾರೆ ಎಂದರು.

ಸಾವಿರಾರು ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಜೆಎಸ್‌ಎಸ್ ರೇಡಿಯೋದಿಂದ ಉಪಯುಕ್ತ ಮಾಹಿತಿ

ವಿವಿಧ ವಿಷಯ ತಜ್ಞರಿಂದ ಮಕ್ಕಳಿಗೆ ವಿಷಯ ಮನನ



ಮೈಸೂರು, ಡಿ. 11– 2023–24ನೇ ಸಾಲಿನ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳ ಪರೀಕ್ಷಾ ಫಲಿತಾಂಶವನ್ನು ಉನ್ನತ ಶ್ರೇಣಿಗೆ ಕೊಂಡೊಯ್ಯುವ ದೃಷ್ಟಿಯಿಂದ ಹಾಗೂ ಕಲಿಕೆಯಲ್ಲಿ ಹಿಂದುಳಿದ ವಿದ್ಯಾರ್ಥಿಗಳನ್ನು ಕೂಡ ಉತ್ತೇಜಿಸಿ ಪರೀಕ್ಷೆಯಲ್ಲಿ ಹೆಚ್ಚಿನ ಅಂಕಗಳೊಂದಿಗೆ ಉತ್ತೀರ್ಣರಾಗುವಂತೆ ಮಾಡುವ ಸದುದ್ದೇಶದಿಂದ ಜೆಎಸ್‌ಎಸ್ ರೇಡಿಯೋ 91.2ಎಫ್‌ಎಂ. ಸಮುದಾಯ ಬಾನುಲಿ ಕೇಂದ್ರವು ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ, ಮೈಸೂರು ಜಿಲ್ಲೆ, ಹಾಗೂ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಮೈಸೂರು ಜಿಲ್ಲೆ, ಇವರ ಸಹಾಯೋಗದೊಂದಿಗೆ "ಪರೀಕ್ಷಾ ಸಮಯ" ಶೀರ್ಷಿಕೆಯಡಿ ಡಿ. 4 ರಿಂದ 16ರವರೆಗೆ 6 ವಿಷಯಗಳ ಕುರಿತು 12 ಸಂಚಿಕೆಗಳ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದ್ದು, ಕಾರ್ಯಕ್ರಮದಲ್ಲಿ ಪ್ರತಿ ವಿಷಯ ತಜ್ಞ ಶಿಕ್ಷಕರ ತಂಡವು ಭಾಗವಹಿಸಲಿದೆ.

ಮೊದಲ ಅರ್ಧ ಗಂಟೆ ವಿಷಯ ಪರಿಚಯ ಕೊನೆಯ ಅರ್ಧ ಗಂಟೆ ಮಕ್ಕಳ ಪ್ರಶ್ನೆಗಳು ಅಥವಾ ಅನುಮಾನಗಳಿಗೆ ಪ್ರತಿಕ್ರಿಯಿಸಲಾಗುತ್ತಿದೆ. ಕಾರ್ಯಕ್ರಮವು ಸೋಮವಾರದಿಂದ ಶನಿವಾರದವರೆಗೆ ಬೆಳಗ್ಗೆ 11:30ರಿಂದ 12:30ರವರೆಗೆ ನಡೆಯುತ್ತಿದ್ದು ಜಿಲ್ಲೆಯ ಎಲ್ಲಾ ಶಾಲೆಗಳಲ್ಲಿ ಈ ರೇಡಿಯೋ ಕಾರ್ಯಕ್ರಮವನ್ನು ಮಕ್ಕಳಿಗೆ ರೇಡಿಯೋ ಎಫ್‌ಎಂ 91.2 ಕಂಪನಾಂಕದ ಮೂಲಕ, JSS Radio App ಮೂಲಕ ಹಾಗೂ JSS Radio ಯೂಟ್ಯೂಬ್ ಚಾನಲ್ ಮೂಲಕ ಪ್ರಸಾರ ಮಾಡಲಾಗುತ್ತಿದೆ.

ಇದೊಂದು ವಿಶೇಷ ಕಾರ್ಯಕ್ರಮವಾಗಿದ್ದು, ವಿದ್ಯಾಥಿಗಳಿಗೆ ಈಗಾಗಲೇ ಆಯಾಯ ಶಾಲೆಯ ಶಿಕ್ಷಕರು ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡುತ್ತಿದ್ದರೂ ಮತ್ತೊಂದು ಶಾಲೆಯ ನುರಿತ ಶಿಕ್ಷಕರು ನೀಡುವ ಸಲಹೆಗಳಿಂದ ಈ ಮಾಧ್ಯಮದ ಮೂಲಕ ಕೇಳಿಸಿಕೊಳ್ಳುವುದರಿಂದ ಮತ್ತಷ್ಟು ಮನದಟ್ಟು ಮಾಡಿಕೊಳ್ಳಲಿಕ್ಕೆ ಮಕ್ಕಳಿಗೆ ಸಹಾಯವಾಗುತ್ತಿದೆ. ಜೊತೆಗೆ ಯೂಟ್ಯೂಬ್ ಚಾನಲ್‌ನಲ್ಲಿ ಕಾರ್ಯಕ್ರಮಗಳು ಇರುವುದರಿಂದ ಮಕ್ಕಳು ಮತ್ತೆ ಮತ್ತೆ ನೋಡಿ ತಿಳಿದುಕೊಳ್ಳುವ ಮೂಲಕ ತಮ್ಮ ವಿಶ್ವಾಸವನ್ನು ಹೆಚ್ಚಿಸಿಕೊಳ್ಳಬಹುದಾಗಿದೆ.

ಕಳೆದ ವರ್ಷ 43951 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದು, 31103 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದು, ಅಂದರೆ ಶೇ.88.99ರಷ್ಟು ಫಲಿತಾಂಶ ಬಂದಿದ್ದು, ಈ ವರ್ಷ 40174 ವಿದ್ಯಾರ್ಥಿಗಳು ಪರೀಕ್ಷೆಗೆ ನೋಂದಣಿಯಾಗಿದ್ದು, ಪರೀಕ್ಷೆ ಬರುವ ಮೂರು ತಿಂಗಳ ಮುಂಚಿತವಾಗಿ ಆಯೋಜಿಸಿರುವ ಈ ಕಾರ್ಯಕ್ರಮದಿಂದ ಮಕ್ಕಳು ಈಗಿನಿಂದಲೇ ಜಾಗೃತರಾಗಲು, ಗುಣಾತ್ಮಕ ಫಲಿತಾಂಶ ಪಡೆಯುವ ಮೂಲಕ 100ಕ್ಕೆ 100 ಫಲಿತಾಂಶ ಪಡೆಯುವ ಪ್ರಯತ್ನಕ್ಕೆ ಈ ಕಾರ್ಯಕ್ರಮ ಪೂರಕವಾಗಿದೆ.

ಶ್ರೀ ಶೃಂಗೇರಿ ಶಾರದಾಂಬೆಯ ದೇವಸ್ಥಾನದ ಮಹಿಳಾ ಸ್ವಚ್ಛತಾ ಸಿಬ್ಬಂದಿಗೆ ಬಾಗಿನ ವಿತರಣೆ



ಮೈಸೂರು, ಡಿ. 11– ಮೈಸೂರಿನ ಶ್ರೀ ದುರ್ಗಾಫೌಂಡೇಶನ್ ವತಿಯಿಂದ ಕಾರ್ತಿಕ ಮಾಸದ ಪ್ರಯುಕ್ತ ಶ್ರೀ ಶೃಂಗೇರಿ ಪೀಠದ ಶಾರದಾಂಬೆಯ ದೇವಸ್ಥಾನದ ಮಹಿಳಾ ಸ್ವಚ್ಛತಾ ಸಿಬ್ಬಂದಿಗೆ ಸೀರೆ, ಬಳೆ, ಅರಿಶಿನ ಕೊಡುವ ಮೂಲಕ ಬಾಗಿನ ವಿತರಿಸಲಾಯಿತು. ನಂತರ ಶ್ರೀ ದುರ್ಗಾ ಫೌಂಡೇಶನ್‌ನ 2024ರ ದೇವ ಸ್ಥಾನದ ಸ್ವಚ್ಛತಾ ಸೇನಾನಿಯಿಂದ ಕ್ಯಾಲೆಂಡರ್ ಅನ್ನು ಬಿಡುಗಡೆಗೊಳಿಸಲಾಯಿತು.


ಶ್ರೀ ದುರ್ಗಾ ಫೌಂಡೇಶನ್ ಅಧ್ಯಕ್ಷರಾದ ರೇಖಾ ಶ್ರೀನಿವಾಸ್, ಡಾ. ಶ್ರೀನಿವಾಸ್ ಆಚಾರ್ಯ, ಹಿರಿಯ ಪ್ರಧಾನ ಅರ್ಚಕರಾದ ರಾಜೇಶ್ ಭಟ್, ಪೋಲಿಸ್ ಸಿಬ್ಬಂದಿ ಶಾರದ, ಸುಶ್ಮಿತಾ, ಶಿಲ್ಪ, ಪ್ರದೀಪ್ ಇನ್ನಿತರರು ಹಾಜರಿದ್ದರು

ಮೈಸೂರು ಮಿತ್ರ ಮಂಗಳವಾರ 12 ಡಿಸೆಂಬರ್ 2023

ಜಯಪ್ರಕಾಶ್‌ರಾವ್ ಅವರ ದಶಕಗಳ ಸಾಹಿತ್ಯ ಮೊಗಸಾಲೆಯಲ್ಲಿ ಪುಸ್ತಕ ಬಿಡುಗಡೆ



ಮೈಸೂರು, ಡಿ.11(ಬಿಎಲ್‌ಯು)– ರಾಜ್ಯೋತ್ಸವದ ಅಂಗವಾಗಿ ಸಪ್ನ ಬುಕ್ ಹೌಸ್ ಬೆಂಗಳೂರಿನಲ್ಲಿ ಶನಿವಾರ ಬಿಡುಗಡೆಗೊಳಿಸಿದ ಪುಸ್ತಕಗಳಲ್ಲಿ ಮೈಸೂರಿನ ಹಿರಿಯ ಸಾಹಿತಿ ಕೆ.ಜಯಪ್ರಕಾಶ್ ರಾವ್ ಅವರ 7 ನೇ ಕನ್ನಡ ಪುಸ್ತಕ "ದಶಕಗಳ ಸಾಹಿತ್ಯ ಮೊಗಸಾಲೆಯಲ್ಲಿ"ಕೂಡ ಒಂದಾಗಿದೆ.



ಇನ್ಫೋಸಿಸ್ ಪ್ರತಿಷ್ಠಾನದ ಡಾ. ಸುಧಾಮೂರ್ತಿ ಪುಸ್ತಕಗಳನ್ನು ಲೋಕಾರ್ಪಣೆಗೊಳಿಸಿದರು. ತುಮಕೂರಿನ ರಾಮಕೃಷ್ಣ ಆಶ್ರಮದ ಶ್ರೀ ವೀರೇಶಾನಂದ ಸರಸ್ವತಿ ಸ್ವಾಮೀಜಿ ಸಾನ್ನಿಧ್ಯ ವಹಿಸಿದ್ದ ಕಾರ್ಯಕ್ರಮದಲ್ಲಿ ಖ್ಯಾತ ಸಾಹಿತಿ ಡಾ.ಕೆ.ಮರಳ ಸಿದ್ದಪ್ಪ, ಖ್ಯಾತ ಸಿನಿಮಾ ನಿರ್ದೇಶಕ ಯೋಗರಾಜ್ ಭಟ್, ಸಪ್ನ ಬುಕ್ ಹೌಸ್ ವ್ಯವಸ್ಥಾಪಕ ನಿರ್ದೇಶಕ ನಿತಿನ್ ಶಾಹ ಉಪಸ್ಥಿತರಿದ್ದರು.

ಕೆ.ಜಯಪ್ರಕಾಶ್ ರಾವ್ ಅವರು ತಮ್ಮ ಸೇವಾವಧಿಯಲ್ಲಿ ಡಾ.ಕಲಾಂ ಅವರ ಶಿಷ್ಟಾಚಾರ ಅಧಿಕಾರಿಯಾಗಿ, ಕೇಂದ್ರ ರಕ್ಷಣಾ ಮಂತ್ರಿಗಳ ಸಮನ್ವಯ ಅಧಿಕಾರಿಯಾಗಿ ಕಾರ್ಯ ನಿರ್ವಹಿಸಿದ್ದರು. ಜಯಪ್ರಕಾಶ್ ಅವರ ಸೇವೆಗಾಗಿ ರಾಷ್ಟ್ರಮಟ್ಟದ ಹಾಗೂ ಸಾರ್ವಜನಿಕ ಪರಿಷತ್‌ನಿಂದ ಸರ್ವಶ್ರೇಷ್ಠ ಹಾಲ್ ಆಫ್ ಫೇಮ್ ಪುರಸ್ಕಾರ ಪಡೆದಿದ್ದಾರೆ. ಅಲ್ಲದೆ 14 ರಾಷ್ಟ್ರಗಳ ಕನ್ನಡ ಸಂಘಗಳು, ಅಕ್ಕ ಹಾಗೂ ನಾವಿಕ ವಿಶ್ವ ಸಮ್ಮೇಳನಗಳಲ್ಲಿ ಜಯಪ್ರಕಾಶ್ ರಾವ್ ಉಪನ್ಯಾಸ ನೀಡಿದ್ದರು. ಅಂದು ಬಿಡುಗಡೆಯಾದ ದಶಕಗಳ ಸಾಹಿತ್ಯದ ಮೊಗಸಾಲೆಯಲ್ಲಿ ಪುಸ್ತಕ ಅಪರೂಪದ ಕೃತಿಯಾಗಿದ್ದು, ಜಯಪ್ರಕಾಶ್ ರಾವ್ ಅವರು ತಮ್ಮ ಸಾಹಿತ್ಯ ಸೇವೆಯ ಬಹು ಮುಖಗಳನ್ನು ಈ ಪುಸ್ತಕದಲ್ಲಿ ಅನಾವರಣಗೊಳಿಸಿದ್ದಾರೆ.

ಹುಣಸೂರು ಬಸ್ ನಿಲ್ದಾಣದಲ್ಲಿ ವೃದ್ಧೆಯ ಸರ ಕಳವು

ಹುಣಸೂರು, ಡಿ. 11– ಬಸ್ ಹತ್ತುವ ವೇಳೆ ವೃದ್ಧೆಯ ಚಿನ್ನದ ಸರ ಕಳವು ಮಾಡಿದ ಘಟನೆ ಹುಣಸೂರು ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದಲ್ಲಿ ನಡೆದಿದೆ.

ಮೈಸೂರು ತಾಲೂಕು ವರುಣ ಹೋಬಳಿ ಪಿಲ್ಲಹಳ್ಳಿ ಗ್ರಾಮದ ವೃದ್ಧೆ ಶಿವಮ್ಮ(72) ಸರ ಕಳೆದುಕೊಂಡವರಾಗಿದ್ದು, ಡಿ. 10ರಂದು ಹುಣಸೂರಿನ ವಾಲ್ಮೀಕಿ ಭವನದಲ್ಲಿ ಮದುವೆ ಸಮಾರಂಭದಲ್ಲಿ ಭಾಗವಹಿಸಿ ಮೈಸೂರಿಗೆ ಹಿಂತಿರುಗಲು ಹುಣಸೂರಿನ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದಲ್ಲಿ ಕೆಎ 19–ಎಫ್ 3402 ಸಂಖ್ಯೆಯ ಸಾರಿಗೆ ಬಸ್ ಅನ್ನು ಇಂದು ಸಂಜೆ 5.30ರ ಸುಮಾರಿನಲ್ಲಿ ಹತ್ತುತ್ತಿದ್ದ ವೇಳೆ ಖದೀಮರು ಇವರ ಕುತ್ತಿಗೆಯಲ್ಲಿದ್ದ 35 ಗ್ರಾಂ ತೂಕದ ಚಿನ್ನದ ಸರವನ್ನು ಕಳವು ಮಾಡಿದ್ದಾರೆ. ಈ ಸಂಬಂಧ ಹುಣಸೂರು ಟೌನ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಮತ್ತೊಂದು ಪ್ರಕರಣ ಕೆ.ಆರ್.ನಗರ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದಲ್ಲಿ ನರ್ಸ್‌ವೊಬ್ಬರ ವ್ಯಾನಿಟಿ ಬ್ಯಾಗ್‌ನಲ್ಲಿದ್ದ 50 ಗ್ರಾಂ ತೂಕದ ಚಿನ್ನಾಭರಣ ಕಳವು ಮಾಡಲಾಗಿದೆ. ಹಾಸನ ಟೌನ್‌ನ ಸುಧಾ(31) ಚಿನ್ನಾಭರಣ ಕಳೆದುಕೊಂಡವರಾಗಿದ್ದು, ಇವರು ಡಿ. 7ರಂದು ಕೆ.ಆರ್.ನಗರ ತಾಲೂಕು ಲಾಳಂದೇವನಹಳ್ಳಿ ಗ್ರಾಮದಲ್ಲಿರುವ ತವರು ಮನೆಗೆ ತೆರಳಿ ಹಾಸನಕ್ಕೆ ಹಿಂತಿರುಗಲು ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದಲ್ಲಿ ಬಸ್ ಹತ್ತುವ ವೇಳೆ ಇವರ ವ್ಯಾನಿಟಿ ಬ್ಯಾಗ್‌ನಲ್ಲಿದ್ದ ಚಿನ್ನಾಭರಣ ಕಳವು ಮಾಡಲಾಗಿದೆ. ಈ ಸಂಬಂಧ ಡಿ. 9ರಂದು ಅವರು ನೀಡಿದ ದೂರನ್ನು ದಾಖಲಿಸಿಕೊಂಡಿರುವ ಕೆಆರ್ ನಗರ ಠಾಣೆ ಪೊಲೀಸರು ತನಿಖೆ ನಡೆಸುತ್ತಿದ್ದಾರೆ.

ಕೆಎಸ್‌ಆರ್‌ಟಿಸಿ ಮಹಿಳಾ ಅಧಿಕಾರಿ ಮನೆ ಬಾಗಿಲು ಮುರಿದು ಚಿನ್ನಾಭರಣ, ನಗದು ಕಳವು

ಮೈಸೂರು, ಡಿ. 11– ಕೆಎಸ್‌ಆರ್‌ಟಿಸಿ ಮಹಿಳಾ ಅಧಿಕಾರಿ ಮನೆ ಬಾಗಿಲು ಮುರಿದು ಚಿನ್ನಾಭರಣ, ನಗದು ಹಾಗೂ ಗೃಹಪಯೋಗಿ ವಸ್ತುಗಳನ್ನು ಕಳವು ಮಾಡಿರುವ ಬಗ್ಗೆ ವರದಿಯಾಗಿದೆ.

ಕೆಎಸ್‌ಆರ್‌ಟಿಸಿಯಲ್ಲಿ ಕಿರಿಯ ಸಹಾಯಕಿ ಆಗಿರುವ ಎನ್. ಪುಷ್ಪಲತಾ(39) ಚಿನ್ನಾಭರಣ ಕಳೆದುಕೊಂಡವರಾಗಿದ್ದು, ಮೈಸೂರಿನ ಸಾತಗಳ್ಳಿ ಡಿ.ಟಿ.ಎಸ್. ರಾವ್ ನಗರದಲ್ಲಿ ಇವರು ವಾಸವಿದ್ದಾರೆ. ಸರಗೂರಿನ ಕೆನರಾ ಬ್ಯಾಂಕ್ ಉದ್ಯೋಗಿಯಾಗಿರುವ ಸುನಿಲ್ ಎಸ್. ಶೆಟ್ಟಿ ಅವರೊಂದಿಗೆ ಪುಷ್ಪಲತಾ ಡಿ. 7ರಂದು ಬೆಳಗ್ಗೆ ಎಸ್‌ಎಸ್ ನಗರದಲ್ಲಿರುವ ತಾಯಿ ಮನೆಗೆ ಹೋಗಿದ್ದಾರೆ. ಡಿ. 9ರಂದು ಬೆಳಗ್ಗೆ ಹಿಂತಿರುಗಿದಾಗ ಇವರ ಮನೆಯ ಗೇಟ್ ಬೀಗ ಮುರಿದಿರುವುದು ಕಂಡುಬಂದಿದೆ.

ಮನೆಗೆ ಹೋಗಿ ನೋಡಿದಾಗ ಖದೀಮರು ಮನೆಯ ಮೊದಲ ಮಹಡಿಯ ಬಾಗಿಲನ್ನು ಮೀಟಿ ಒಳಪ್ರವೇಶಿಸಿ, 210 ಗ್ರಾಂ ತೂಕದ ಚಿನ್ನಾಭರಣ, 1 ಕೆಜಿ ಬೆಳ್ಳಿ ಪದಾರ್ಥ, ಎಲ್‌ಇಡಿ ಟಿವಿ, 2 ವಾಚ್‌ಗಳು, 2 ಮೊಬೈಲ್ ಹಾಗೂ 7 ಸಾವಿರ ರೂ. ನಗದು ಸೇರಿದಂತೆ 11.57 ಲಕ್ಷ ರೂ. ಮೌಲ್ಯದ ವಸ್ತುಗಳನ್ನು ಕಳವು ಮಾಡಿರುವುದು ಗೊತ್ತಾಗಿದೆ. ಈ ಸಂಬಂಧ ಮೈಸೂರು ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಡಿ.14, ಉಚಿತ ಕ್ಯಾನ್ಸರ್ ತಪಾಸಣಾ ಶಿಬಿರ

ಮೈಸೂರು,ಡಿ.11–ಮೈಸೂರಿನ ಲಕ್ಷ್ಮೀಪುರಂನ ಪ್ರೀತಿ ಕ್ಯಾನ್ಸರ್ ಸೆಂಟರ್‌ನಲ್ಲಿ ಡಿ.14ರಂದು ಬೆಳಗ್ಗೆ 10ರಿಂದ ರಾತ್ರಿ 8 ಗಂಟೆಯವರೆಗೆ ಉಚಿತ ಕ್ಯಾನ್ಸರ್ ತಪಾಸಣಾ ಶಿಬಿರ ಹಮ್ಮಿಕೊಳ್ಳಲಾಗಿದೆ. ಮಾಹಿತಿಗೆ ದೂ. 0821–4259259 ಸಂಪರ್ಕಿಸಬಹುದು.

ಮಾನಸಗಂಗೋತ್ರಿ ಅಭಿವೃದ್ಧಿ ಅಧ್ಯಯನ ಸಂಸ್ಥೆ ನಿರ್ದೇಶಕರ ವಿರುದ್ಧ ವಿದ್ಯಾರ್ಥಿಗಳ ಪ್ರತಿಭಟನೆ



ಮೈಸೂರು, ಡಿ.11(ಎಂಕೆ)– ಮೈಸೂರು ವಿವಿ ಮಾನಸಗಂಗೋತ್ರಿಯಲ್ಲಿರುವ ಅಭಿವೃದ್ಧಿ ಅಧ್ಯಯನ ಸಂಸ್ಥೆ ನಿರ್ದೇಶಕರು ವಿದ್ಯಾರ್ಥಿಗಳ ಕಲಿಕೆಗೆ ಸ್ಪಂದಿಸದೆ ತುಚ್ಛವಾಗಿ ಕಾಣುತ್ತಿದ್ದಾರೆ ಎಂದು ಆರೋಪಿಸಿ ಸೋಮವಾರ ಪ್ರತಿಭಟನೆ ನಡೆಸಲಾಯಿತು.

ಅಭಿವೃದ್ಧಿ ಅಧ್ಯಯನ ಸಂಸ್ಥೆ ಎದುರು ಜಮಾವಣೆಗೊಂಡು ಸಂಸ್ಥೆಯ ನಿರ್ದೇಶಕರಾದ ಡಾ.ಎಂ.ಮೀರಾ ಅವರ ವರ್ತನೆಗೆ ಆಕ್ಷೇಪ ವ್ಯಕ್ತಪಡಿಸಿದ ಪ್ರತಿಭಟನಾನಿರತ ಸ್ನಾತಕೋತ್ತರ ಹಾಗೂ ಸಂಶೋಧನಾ ವಿದ್ಯಾರ್ಥಿಗಳು, ಧಿಕ್ಕಾರ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಏ.1ರಿಂದ ಅಭಿವೃದ್ಧಿ ಅಧ್ಯಯನ ಸಂಸ್ಥೆಯ ನಿರ್ದೇಶಕರಾಗಿ ನೇಮಕಗೊಂಡ ಡಾ.ಎಂ.ಮೀರಾ ಅವರು, ಇದುವರೆಗೂ ಟೈಮ್ ಟೇಬಲ್ ತಯಾರಿಸಿಲ್ಲ. ಇದರಿಂದ ಸರಿಯಾಗಿ ಯಾವ ತರಗತಿಗಳು ನಡೆಯದಂತಾಗಿದೆ. ಕೇಳಿದರೆ ಟೈಮ್ ಟೇಬಲ್ ರೆಡಿ ಮಾಡುವುದಿಲ್ಲ ಎಂದು ಬೇಜವಾಬ್ದಾರಿ ಉತ್ತರ ನೀಡುತ್ತಾರೆ. ಅಲ್ಲದೆ ಕೆಲ ವಿದ್ಯಾರ್ಥಿಗಳನ್ನು ಜಾತಿ ನಿಂದನೆ ಮೂಲಕ ತುಚ್ಛವಾಗಿ ಕಾಣುತ್ತಿದ್ದಾರೆ ಎಂದು ದೂರಿದರು.

ಸಂಸ್ಥೆಯಲ್ಲಿ ಮೂಲಸೌಕರ್ಯಗಳಿಲ್ಲದೆ ಪರಿತಪಿಸುವಂತಾಗಿದೆ. ಶೌಚಾಲಯವಿಲ್ಲದೆ ಪಕ್ಕದ ವಿಭಾಗಕ್ಕೆ ಹೋಗುವಂತಾಗಿದೆ. ಇದನ್ನು ಕೇಳಲು ಹೋದರೆ ಗಂಟೆ ಗಟ್ಟಲೆ ಕಾಯಿಸುವುದಲ್ಲದೆ ಅವಾಚ್ಯ ಶಬ್ದಗಳಿಂದ ನಿಂದಿಸಿ ಕಳುಹಿಸುತ್ತಾರೆ. ಆದ್ದರಿಂದ ಮೈಸೂರು ವಿವಿ ಕುಲಪತಿಗಳು ಇವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವುದಲ್ಲದೆ ಸಂಸ್ಥೆಗೆ ನುರಿತ ಪ್ರಾಧ್ಯಾಪಕರನ್ನು ಹಾಗೂ ನಿರ್ದೇಶಕರನ್ನು ನೇಮಕ ಮಾಡಬೇಕು ಎಂದು ಒತ್ತಾಯಿಸಿದರು.

ಮೈಸೂರು ಬಳಿ ಅರಣ್ಯ ಸಿಬ್ಬಂದಿಗಳ ನಿದ್ದೆಗೆಡಿಸಿದ ತ್ರಿವಳಿ 'ಅರ್ಬನ್ ಟೈಗ್ರೆಸ್'



- ಕಾಡಿನ ಗಂಧ–ಗಾಳಿ ಅರಿಯದ ಹೆಣ್ಣು ಹುಲಿಮರಿಗಳು
- ಮೂರು ದಿಕ್ಕಿನಲ್ಲಿ ಪ್ರತ್ಯೇಕವಾಗಿ ಕಬ್ಬಿನ ಗದ್ದೆ, ಪಾಳುಬಿದ್ದ ಭೂಮಿಯಲ್ಲಿ ಅಡಗಿರುವ ಹುಲಿಮರಿ
- ಒಂದೂವರೆ ವರ್ಷ ವಯಸ್ಸಿನ ಲವಲವಿಕೆಯಿಂದ ಇರುವ ಮರಿಗಳು
- ಅರಣ್ಯ ಇಲಾಖೆಯ ಸಿಬ್ಬಂದಿಗಳಿಗೆ ಪದೇ ಪದೇ ಚಳ್ಳೆಹಣ್ಣು ತಿನ್ನಿಸಿದ ಟಿ–7
- ಮರಿ ಬೇರ್ಪಡಿಸಿ, ಕಾಡು ಸೇರಿರುವ ತಾಯಿ ಹುಲಿ

ಎಂ.ಟಿ.ಯೋಗೇಶ್ ಕುಮಾರ್

ಮೈಸೂರು,ಡಿ.11 – ಸಾಂಸ್ಕೃತಿಕ ನಗರಿ ಮೈಸೂರು ನಗರದ ಸಮೀಪವೇ ಮೂರು ಪ್ರತ್ಯೇಕ ಸ್ಥಳದಲ್ಲಿ ಕಾಣಿಸಿಕೊಳ್ಳುತ್ತಿರುವ ಒಂದೂವರೆ ವರ್ಷದ ಹೆಣ್ಣು ಹುಲಿ ಮರಿಗಳು ಅರಣ್ಯ ಇಲಾಖೆಯ ಸಿಬ್ಬಂದಿಗಳನ್ನು ಹೈರಾಣಾಗಿಸಿವೆ. 'ತ್ರಿವಳಿ ಅರ್ಬನ್ ಟೈಗ್ರೆಸ್' ಎಂದು ಗುರುತಿಸಲ್ಪಟ್ಟಿರುವ ಮೂರು ಮರಿಗಳಲ್ಲಿ ಒಂದು ಮರಿ(ಟಿ–7) ದೊಡ್ಡಕಾನ್ಯದ ಬಳಿ ಕಬ್ಬಿನ ಗದ್ದೆಯಲ್ಲಿ ಬೀಡು ಬಿಟ್ಟಿದ್ದರೆ, ಇನ್ನೆರಡು ಬೇರೆ ಗ್ರಾಮಗಳಲ್ಲಿ ಓಡಾಡುತ್ತಿವೆ.



ಬಂಡೀಪುರ ಹಾಗೂ ನಾಗರಹೊಳೆ ಹುಲಿ ಸಂರಕ್ಷಿತ ಪ್ರದೇಶದ ಅರಣ್ಯಕ್ಕೆ ಹೊಂದಿಕೊಂಡಂತೆ ಇರುವ ಮೈಸೂರು ಜಿಲ್ಲೆಗೆ ಸೇರಿದ ಕಾಡಂಚಿನ ಗ್ರಾಮಗಳ ಪಾಳುಬಿದ್ದಿರುವ ಖಾಸಗಿ ಭೂಮಿಯಲ್ಲಿ ನಾಲ್ಕು ಮರಿಗಳೊಂದಿಗೆ ಸುರಕ್ಷಿತವಾಗಿ ವಾಸ್ತವ್ಯ ಹೂಡಿದ್ದ ತಾಯಿ ಹುಲಿ, ಇದೀಗ ಮರಿಗಳನ್ನು ಸ್ವತಂತ್ರವಾಗಿ ಬದುಕಲು ತನ್ನ ಸುಪರ್ದಿಯಿಂದ ಹೊರದೂಡಿದೆ. ಅಮ್ಮನ ಆರೈಕೆಯಲ್ಲಿ ಬೆಳೆಯುತ್ತಿದ್ದ ಹುಲಿ ಮರಿಗಳು ತಿಂಗಳ ಹಿಂದಷ್ಟೇ ಪ್ರತ್ಯೇಕ ದಿಕ್ಕಿನಲ್ಲಿ ಹೆಜ್ಜೆ ಹಾಕಿದ್ದು, ಅರಿವಿಲ್ಲದೆ ಮೈಸೂರು ನಗರದ ಹೆಬ್ಬಾಗಿಲಿಗೆ ಬಂತು ನಿಂತಿವೆ. ಈ ಹಿಂದೆಯೇ ಮೈಸೂರು ವಲಯಕ್ಕೆ ಸೇರಿದ ಚಿಕ್ಕನಹಳ್ಳಿ ಮೀಸಲು ಅರಣ್ಯ ಪ್ರದೇಶದಲ್ಲಿ ನಾಲ್ಕು ಮರಿಯೊಂದಿಗೆ ತಾಯಿ ಹುಲಿ ಸಂಚಾರದ ದೃಶ್ಯ ದನಗಾಹಿಗಳು ಹಾಗೂ ಅರಣ್ಯ ಸಿಬ್ಬಂದಿಗಳು ಗಮನಿಸಿದ್ದರು. ಅಲ್ಲದೆ, ಅರಣ್ಯ ಇಲಾಖೆ ಅಳವಡಿಸಿದ್ದ ಕ್ಯಾಮರಾ ಟ್ರ್ಯಾಪ್‌ನಲ್ಲಿ ನಾಲ್ಕು ಮರಿಯೊಂದಿಗೆ ತಾಯಿ ಹುಲಿ ಓಡಾಡುತ್ತಿರುವ ದೃಶ್ಯ ಸೆರೆ ಸಿಕ್ಕಿತ್ತು.

ಚಿಕ್ಕನಹಳ್ಳಿ ಮೀಸಲು ಅರಣ್ಯದಿಂದ ವಲಸೆ: ಬಂಡೀಪುರ ಹಾಗೂ ನಾಗರಹೊಳೆ ಅಭಯಾರಣ್ಯದಲ್ಲಿ ಬದುಕು ಕಟ್ಟಿಕೊಂಡಿದ್ದ ಹೆಣ್ಣು ಹುಲಿ, ಗರ್ಭಿಣಿಯಾದ ಬಳಿಕ ತನ್ನ ಕರುಳ ಕುಡಿಗಳನ್ನು ಬೇರೆ ಹುಲಿಯಿಂದ ರಕ್ಷಿಸಿಕೊಳ್ಳಲು ಸುರಕ್ಷಿತ ಸ್ಥಳ ಅರಸಿ ಚಿಕ್ಕನಹಳ್ಳಿ ಮೀಸಲು ಅರಣ್ಯಕ್ಕೆ ಬಂದಿರುವ ಶಂಕೆಯಿದೆ. ಅಲ್ಲಿಯೇ ನಾಲ್ಕು ಮರಿಗಳಿಗೆ ಜನ್ಮ ನೀಡಿದ ತಾಯಿ ಹುಲಿ, ಆ ಭಾಗದಲ್ಲಿರುವ ಕಾಡಂದಿ, ಮೊಲ, ಮೇಯಲು ಬರುತ್ತಿದ್ದ ಜಾನುವಾರುಗಳನ್ನು ಬೇಟೆಯಾಡಿ ಮರಿಗಳನ್ನು ಪಾಲನೆ ಮಾಡಿತ್ತು. ಮರಿಗಳಿಗೆ ಒಂದೂವರೆ ವರ್ಷದವರೆಗೂ ಮರಿಗಳನ್ನು ಆರೈಕೆ ಮಾಡಿದ ತಾಯಿ ಹುಲಿ, ಕಾಡಂದಿ, ಮೊಲ, ನವಿಲು ಸೇರಿದಂತೆ ಸಣ್ಣಪುಟ್ಟ ಪ್ರಾಣಿಗಳನ್ನು ಬೇಟೆಯಾಡುವ ಕಲೆ ಕಲಿಸಿದೆ. ಈ ವೇಳೆ ಮರಿಯೊಂದನ್ನು ತನ್ನಿಂದ ದೂರ ಮಾಡಿರುವ ತಾಯಿ ಹುಲಿ, ಉಳಿದ ಮೂರು ಹೆಣ್ಣು ಮರಿಗಳನ್ನು ಕೆಲ ದಿನ ಪಾಲನೆ ಮಾಡುತ್ತಾ ಹಂತ ಹಂತವಾಗಿ ಸ್ವತಂತ್ರವಾಗಿ ಬದುಕು ಕಟ್ಟಿಕೊಳ್ಳುವಂತೆ ಮಾರ್ಗದರ್ಶನ ಮಾಡಿ ದೂರ ಮಾಡಿದೆ.

ತಾಯಿಯಿಂದ ಬೇರ್ಪಟ್ಟ ಮರಿಗಳಲ್ಲಿ ಒಂದು ಮರಿ ದೊಡ್ಡಕಾನ್ಯ, ಚಿಕ್ಕಕಾನ್ಯ ಬಳಿ ಸುತ್ತಾಡಿದ್ದರೆ, ಮತ್ತೊಂದು ಮರಿ ದೂರ ಗ್ರಾಮದ ಕೆಲವೆಡೆ ಓಡಾಡಿರುವ ದೃಶ್ಯ ಅರಣ್ಯ ಸಿಬ್ಬಂದಿಗಳ ಗಮನಕ್ಕೆ ಬಂದಿದೆ. ಇನ್ನೊಂದು ಮರಿ ನಂಜನಗೂಡು ವಲಯಕ್ಕೆ ಸೇರಿರುವ ಮೈಸೂರು–ನಂಜನಗೂಡು ಗಡಿ ಭಾಗದ ಬ್ಯಾತಹಳ್ಳಿ ಬಳಿ ಇರುವ ಕಬ್ಬಿನ ಗದ್ದೆ, ಪಾಳುಬಿದ್ದ ಭೂಮಿಯಲ್ಲಿ ಬೆಳೆದಿರುವ ಪೊದೆಗಳ ರಕ್ಷಣೆಯಲ್ಲಿ ಆಶ್ರಯ ಪಡೆದುಕೊಂಡಿರುವ ಮಾಹಿತಿ ಅರಣ್ಯ ಇಲಾಖೆಗೆ ಲಭ್ಯವಾಗಿದೆ. ಬ್ಯಾತಹಳ್ಳಿಯಲ್ಲಿರುವ ಹುಲಿಯನ್ನು ಪತ್ತೆ ಮಾಡಲು ನಂಜನಗೂಡು ವಲಯದ ಅರಣ್ಯ ಸಿಬ್ಬಂದಿಗಳ ತಂಡ ಕ್ಯಾಮರಾ ಟ್ರ್ಯಾಪ್ ಸೇರಿದಂತೆ ವಿವಿಧ ವಿಧಾನದ ಮೂಲಕ ಗಮನಿಸುತ್ತಿದ್ದಾರೆ.

ದೊಡ್ಡಕಾನ್ಯದ ಹುಲಿ ಬಲು ಹುಷಾರು: ಕಳೆದ ಒಂದು ತಿಂಗಳಿಂದಲೂ ದೊಡ್ಡಕಾನ್ಯ, ಚಿಕ್ಕಕಾನ್ಯ ಹಾಗೂ ಟಿವಿಎಸ್ ಫ್ಯಾಕ್ಟರಿ ಬಳಿ ಸುತ್ತಾಡುತ್ತಿರುವ ಹೆಣ್ಣು ಹುಲಿ ಮರಿ ಸೂಕ್ಷ್ಮ ಗ್ರಹಿಕೆಯುಳ್ಳ ಹುಲಿಯಾಗಿದೆ. ಈ ಹುಲಿಗೆ ಟಿ–7 ಎಂದು ಕೋಡ್ ವರ್ಡ್ ನೀಡಲಾಗಿದ್ದು, ಈ ಹುಲಿ ಐದಾರು ಬಾರಿ ಜನರೊಂದಿಗೆ ಮುಖಾಮುಖಿಯಾಗಿದ್ದರೂ ದಾಳಿ ಮಾಡುವ ಪ್ರಯತ್ನ ಮಾಡಿಲ್ಲ. ಜನರನ್ನು ಕಂಡ ಈ ಹುಲಿ ಮರಿ ತಾನೇ ಸ್ಥಳದಿಂದ ಕಾಲ್ಕಿತ್ತಿತ್ತು.

ನ.25ರಿಂದ ದೊಡ್ಡಕಾನ್ಯ, ಚಿಕ್ಕಕಾನ್ಯ ಹಾಗೂ ಸುತ್ತಮುತ್ತಲಿನ ಗ್ರಾಮಗಳಲ್ಲಿ ಕಾಣಿಸಿಕೊಳ್ಳುತ್ತಿದ್ದ ಟಿ–7 ಹುಲಿಯನ್ನು ಸೆರೆ ಹಿಡಿಯಲು ಕಾರ್ಯಾಚರಣೆ ಆರಂಭಿಸಿದ್ದ ಅರಣ್ಯ ಸಿಬ್ಬಂದಿಗಳಿಗೆ ಚಳ್ಳೆಹಣ್ಣು ತಿನ್ನಿಸುತ್ತಲೇ ಬಂದಿದೆ. ಕಬ್ಬಿನ ಗದ್ದೆಯಲ್ಲಿ ಅಡಗಿ ಕುಳಿತಿರುವ ಹುಲಿ ಸೆರೆಗೆ ಕಾರ್ಯಾಚರಣೆ ಚುರುಕುಗೊಳಿಸಲಾಗಿದೆ. ಹುಲಿಯನ್ನು ಸುರಕ್ಷಿತವಾಗಿ ಸೆರೆ ಹಿಡಿಯಲು ಅರಣ್ಯ ಇಲಾಖೆ ಕೈಗೊಂಡಿರುವ ಕ್ರಮವನ್ನೆಲ್ಲಾ ಟಿ–7 ಬುಡಮೇಲು ಮಾಡುತ್ತಲೇ ಬಂದಿದೆ. ಇದರಿಂದ ಅರಣ್ಯ ಸಿಬ್ಬಂದಿ ಹೈರಾಣಾಗಿದ್ದಾರೆ.

ರಾತ್ರಿಯಿಡೀ ಕಾರ್ಯಾಚರಣೆ: ಟಿ–7 ಹುಲಿ ಮರಿ ಹೊರತುಪಡಿಸಿ, ಉಳಿದ ಎರಡು ಹೆಣ್ಣು ಮರಿಗಳು ಮರಳಿ ಚಿಕ್ಕನಹಳ್ಳಿ ಮೀಸಲು ಅರಣ್ಯ ಸೇರಿರುವ ನಿರೀಕ್ಷೆಯಿದೆ. ಇದಕ್ಕೆ ಪೂರಕವಾಗಿ ಈ ಹುಲಿ ಮರಿಗಳು ಓಡಾಡುತ್ತಿದ್ದ ಸ್ಥಳದಲ್ಲಿ ಅಳವಡಿಸಿರುವ ಕ್ಯಾಮರಾ ಟ್ರ್ಯಾಪ್‌ನಲ್ಲಿ ಹುಲಿಮರಿಗಳ ದೃಶ್ಯ ಸೆರೆಯಾಗಿಲ್ಲ. ಈ ಹಿನ್ನೆಲೆಯಲ್ಲಿ ಮೈಸೂರು ಸಮೀಪವೇ ಬೀಡು ಬಿಟ್ಟಿರುವ ಟಿ–7 ಹುಲಿ ಸೆರೆಗೆ ಅರಣ್ಯ ಸಿಬ್ಬಂದಿಗಳು ರಾತ್ರಿಯಿಡೀ ಕಾರ್ಯಾಚರಣೆ ಮಾಡುತ್ತಿದ್ದಾರೆ. ಆದರೂ, ಎರಡು ದಿನಕ್ಕೊಮ್ಮೆ ಸಿಬ್ಬಂದಿಗಳಿಗೆ ದರ್ಶನ ನೀಡಿ, ಮಿಂಚಿನ ವೇಗದಲ್ಲಿ ಕಣ್ಮರೆಯಾಗುತ್ತಿದೆ. ಇದರಿಂದ ಅರಣ್ಯ ಸಿಬ್ಬಂದಿಗಳ ಚಡಪಡಿಸುವಂತಾಗಿದೆ.

ಹುಲಿ ಸೆರೆಗೆ ತಾಳ್ಮೆ ಅಗತ್ಯ

ಟಿ–7 ಹುಲಿ ಸೆರೆಗೆ ಅರಣ್ಯ ಇಲಾಖೆ ಸಿಬ್ಬಂದಿಗಳು ತಜ್ಞರೊಂದಿಗೆ ಚರ್ಚಿಸಿದ್ದು, ಬೋನ್ ಹಾಗೂ ಅರವಳಿಕೆ ಚುಚ್ಚುಮದ್ದು ನೀಡಿ ಹುಲಿ ಸೆರೆ ಹಿಡಿಯುವುದೇ ಸೂಕ್ತ ಎಂದು ಸಲಹೆ ನೀಡಿದ್ದಾರೆ. ಈ ಹಿನ್ನೆಲೆಯಲ್ಲಿ ಕೆಲವೆಡೆ ಬೋನ್ ಇಡಲಾಗಿದೆ. ಆದರೆ, ಬೋನ್‌ಗೆ ಹುಲಿ ಬೀಳುವುದು ಅಪರೂಪ. ಇನ್ನೊಂದು ವಿಧಾನದಂತೆ ಅರವಳಿಕೆ ಚುಚ್ಚುಮದ್ದು ನೀಡಲು ಕಾಯುತ್ತಿದ್ದಾರೆ. ತಾಳ್ಮೆಯಿಂದ ಕಾರ್ಯಾಚರಣೆ ಮಾಡಬೇಕಾಗಿದ್ದು, ಗದ್ದೆಯೊಳಗೆ ಅಡಗಿರುವ ಹುಲಿ ಹೊರಗೆ ಬರುವುದನ್ನೇ ಕಾಯಲಾಗುತ್ತಿದೆ.

ಮುಂದಿನ 6 ತಿಂಗಳಲ್ಲಿ ಕೆಎಸ್‌ಆರ್‌ಟಿಸಿ 130 ನಗರ ಬಸ್‌ಗಳಿಗೆ 15 ವರ್ಷ ಪೂರ್ಣ

ಆ ಕೊರತೆ ನೀಗಿಸಲು 100 ಹೊಸ ಎಲೆಕ್ಟ್ರಿಕ್ ಬಸ್‌ಗಳಿಗೆ ಪ್ರಸ್ತಾವನೆ



ಸಾಂಧರ್ಬಿಕ ಚಿತ್ರ

ಮೈಸೂರು, ಡಿ. 11(ಆರ್‌ಕೆ)– ಮೈಸೂರು ನಗರದಲ್ಲಿ ಸಂಚರಿಸುತ್ತಿರುವ ಕೆಎಸ್‌ಆರ್‌ಟಿಸಿ ಬಸ್ (ಸಿಟಿ ಬಸ್)ಗಳ ಪೈಕಿ 130 ಬಸ್‌ಗಳಿಗೆ ಮುಂದಿನ 6 ತಿಂಗಳಲ್ಲಿ 15 ವರ್ಷ ಪೂರ್ಣಗೊಳ್ಳಲಿದೆ.

ಬಸ್‌ಗಳ ಬಳಕೆ 15 ವರ್ಷ ಪೂರ್ಣಗೊಂಡಲ್ಲಿ ಅವುಗಳಿಗೆ ಪ್ರಾದೇಶಿಕ ಸಾರಿಗೆ ಅಧಿಕಾರಿ (ಆರ್‌ಟಿಓ) ಕಚೇರಿಯಲ್ಲಿ ದೃಢತೆ ಪ್ರಮಾಣ ಪತ್ರ (ಫಿಟ್‌ನೆಸ್ ಸರ್ಟಿಫಿಕೇಟ್) ನವೀಕರಿಸುವುದಿಲ್ಲ ಹಾಗೂ ವಾಹನ ವಿಮೆಯನ್ನೂ ಮಾಡಲಾಗುವುದಿಲ್ಲ. 15 ವರ್ಷ ಬಳಕೆಯ ನಂತರ ಬಸ್ಸುಗಳು ಸಂಚಾರಕ್ಕೆ ಯೋಗ್ಯವಲ್ಲ ಹಾಗೂ ಸುರಕ್ಷೆ ಇರುವುದಿಲ್ಲ ಎಂಬ ಕಾರಣಕ್ಕೆ ಅಂತಹ ಅವಧಿ ಮೀರಿದ ವಾಹನಗಳನ್ನು ಸ್ಕ್ರ್ಯಾಪ್ ಮಾಡಲಾಗುವುದು.

ಮೈಸೂರು ನಗರದಾದ್ಯಂತ ಪ್ರಸ್ತುತ ನೂರಾರು ಸಿಟಿ ಬಸ್‌ಗಳು ಸಂಚರಿಸುತ್ತಿದ್ದು, ಕಾಲ ಕಾಲಕ್ಕೆ ಆರ್‌ಟಿಓದಲ್ಲಿ ಎಫ್‌ಸಿ ಮಾಡಿಸಿ ಇನ್ಶೂರೆನ್ಸ್ ನವೀಕರಿಸಲಾಗುತ್ತಿದೆ. ಆ ಪೈಕಿ ಸುಮಾರು 130 ಹಳೇ ಬಸ್‌ಗಳನ್ನು ಮುಂದಿನ 6 ತಿಂಗಳಲ್ಲಿ ಸ್ಥಗಿತಗೊಳಿಸಲಾಗುತ್ತದೆ ಎಂದು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ಮೈಸೂರು ವಿಭಾಗೀಯ ನಿಯಂತ್ರಕ ಶ್ರೀನಿವಾಸ 'ಮೈಸೂರು ಮಿತ್ರ'ನಿಗೆ ತಿಳಿಸಿದ್ದಾರೆ.

ಸಂಚಾರ ಕಾರ್ಯಸ್ಥಗಿತಗೊಳ್ಳುವ ಅವಧಿ ಮುಗಿದ ಬಸ್‌ಗಳ ಬದಲಾಗಿ ಹೊಸ 100 ಎಲೆಕ್ಟ್ರಿಕ್ ಬಸ್‌ಗಳನ್ನು ಪೂರೈಸುವಂತೆ ಸಂಸ್ಥೆಯು ಪ್ರಸ್ತಾವನೆ ಸಲ್ಲಿಸಿದ್ದು, 6 ತಿಂಗಳೊಳಗೆ ಬರಬಹುದೆಂದು ನಿರೀಕ್ಷಿಸಲಾಗಿದೆ. ಅವುಗಳಿಗೆ ಚಾರ್ಜ್ ಮಾಡಿಕೊಳ್ಳಲು ಕುವೆಂಪುನಗರ, ವಿಜಯನಗರ, ಸಾತಗಳ್ಳಿ ಹಾಗೂ ಬನ್ನಿಮಂಟಪ ಡಿಪೋಗಳಲ್ಲಿ ಎಲೆಕ್ಟ್ರಿಕ್ ಚಾರ್ಜಿಂಗ್ ಸ್ಟೇಷನ್ ಸ್ಥಾಪಿಸಲಾಗುವುದು ಎಂದು ತಿಳಿಸಿದರು.


ಎಲೆಕ್ಟ್ರಿಕ್ ಬಸ್ (ಇ–ಬಸ್)ಗಳಿಗೆ ಪ್ರಯಾಣಿಕರಿಂದಲೂ ಬೇಡಿಕೆ ಇರುವ ಕಾರಣ ಈ ಯೋಜನೆ ಯಶಸ್ವಿಯಾಗಲಿದೆ ಎಂಬುದು ಸಮೀಕ್ಷೆಯಿಂದ ದೃಢಪಟ್ಟಿರುವ ಕಾರಣ ಹೊಸದಾಗಿ 100 ಬಸ್‌ಗಳಿಗೆ ಬೇಡಿಕೆ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದು ಶ್ರೀನಿವಾಸ್ ತಿಳಿಸಿದ್ದಾರೆ. ಪ್ರಸ್ತುತ ಮೈಸೂರು–ಬೆಂಗಳೂರು ನಡುವೆ ಒಟ್ಟು 14 ಎಲೆಕ್ಟ್ರಿಕ್ ಬಸ್‌ಗಳು ಪ್ರತೀದಿನ 3 ಸಿಂಗಲ್ ಟ್ರಿಪ್‌ನಂತೆ ಸಂಚರಿಸುತ್ತಿದ್ದು, ಪ್ರತೀ ಬಸ್‌ನಲ್ಲಿ ಎಲ್ಲಾ ಟ್ರಿಪ್‌ಗಳಲ್ಲೂ ಶೇ. 100ರಷ್ಟು ಆಸನಗಳು ಭರ್ತಿಯಾಗುತ್ತಿವೆ. ಅವುಗಳಿಗೆ ಪ್ರಯಾಣಿಕರಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗುತ್ತಿದೆ ಎಂದು ಅವರು ತಿಳಿಸಿದರು.

ರಾಷ್ಟ್ರೀಕೃತ ಬ್ಯಾಂಕ್‌ಗಳಿಂದ ಪರಿಶಿಷ್ಟ ಉದ್ಯಮಿಗಳಿಗೆ ಸಾಲ ಯೋಜನೆ

ಮೈಸೂರು, ಡಿ.11– ಸಮಾಜ ಕಲ್ಯಾಣ ಇಲಾಖೆ ವತಿಯಿಂದ 2023–24 ನೇ ಸಾಲಿಗೆ ಪರಿಶಿಷ್ಟ ಜಾತಿಯ ಉದ್ಯಮಿಗಳಿಗೆ ಕೆಎಸ್‌ಎಫ್‌ಸಿ ಇಂದ ಎರಡು ಕೋಟಿಗಳವರೆಗೆ ಸಾಲವನ್ನು ಪಡೆಯಲು ಸರ್ಕಾರದಿಂದ ಸಮನಾಂತರ ಖಾತರಿಯನ್ನು ಒದಗಿಸಲಾಗುತ್ತಿದ್ದು, 2023–24 ನೇ ಸಾಲಿನ ಆಯವ್ಯಯ ಕಂಡಿಕೆ 144 ರಲ್ಲಿ ರಾಷ್ಟ್ರೀಕೃತ ಬ್ಯಾಂಕ್‌ಗಳು, ಆರ್.ಆರ್.ಬಿ ಬ್ಯಾಂಕುಗಳಿಗೂ ಈ ಯೋಜನೆಯನ್ನು ವಿಸ್ತರಿಸಿ ಆದೇಶಿಸಿದ್ದು, ಆಸಕ್ತಿಯುಳ್ಳ ಉದ್ಯಮಿಗಳು ಸದುಪಯೋಗ ಪಡೆದುಕೊಳ್ಳುವಂತೆ ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

370ನೇ ವಿಧಿ ರದ್ದತಿ ಎತ್ತಿಹಿಡಿದ ಸುಪ್ರೀಂ: ಮಾಜಿ ಪ್ರಧಾನಿ ಹೆಚ್‌ಡಿಡಿ ಸ್ವಾಗತ

ಹಾಸನ: ಜಮ್ಮು–ಕಾಶ್ಮೀರಕ್ಕೆ ಆರ್ಟಿಕಲ್ 370 (Jammu Kashmir Article 370) ಅಡಿ ನೀಡಲಾಗಿದ್ದ ವಿಶೇಷ ಸ್ಥಾನಮಾನವನ್ನು ರದ್ದು ಮಾಡಿದ್ದ ಕೇಂದ್ರ ಸರ್ಕಾರದ ಆದೇಶವನ್ನು ಎತ್ತಿ ಹಿಡಿದ ಸುಪ್ರೀಂ ಕೋರ್ಟ್ ನಿರ್ಧಾರವನ್ನು, ಮಾಜಿ ಪ್ರಧಾನಿ ಹೆಚ್.ಡಿ ದೇವೇಗೌಡರು ಸ್ವಾಗತಿಸಿದ್ದಾರೆ.



ಇಂದು ಹೊಳೆನರಸೀಪುರ ತಾಲೂಕಿನ ತಮ್ಮ ಹುಟ್ಟೂರು ಹರದನಹಳ್ಳಿಯಲ್ಲಿ ಕಡೆಯ ಕಾರ್ತಿಕ ಮಾಸದ ಅಂಗವಾಗಿ ಕುಟುಂಬ ಸಮೇತರಾಗಿ ಆಗಮಿಸಿ ವಿಶೇಷ ಪೂಜೆ ಸಲ್ಲಿಸಿದರು. ಬಳಿಕ ಮಾತನಾಡಿದ ಅವರು, ಸುಪ್ರೀಂಕೋರ್ಟ್ ತೀರ್ಪನ್ನು ನಾನು ಸ್ವಾಗತಿಸುತ್ತೇನೆ. ಆರ್ಟಿಕಲ್ 370 ಮೂಲಕ ಕಾಶ್ಮೀರಕ್ಕೆ ವಿಶೇಷ ಸವಲತ್ತು ಕಲ್ಪಿಸಲಾಗಿತ್ತು. ಅದನ್ನು ಲೋಕಸಭೆ, ರಾಜ್ಯಸಭೆಯಲ್ಲಿ ತಿದ್ದುಪಡಿ ಮಾಡುವ ಮುಖೇನಾ ಆ ಸವಲತ್ತು ರದ್ದು ಮಾಡಿದ್ದರು. ಇದರಿಂದ ಬೇರೆ ರಾಜ್ಯಗಳಿಗೂ, ಅನ್ಯಾಯ, ಅನುಕೂಲವಾಗುತ್ತೋ ಅದು ಜಮ್ಮು–ಕಾಶ್ಮೀರಕ್ಕೂ ಅನ್ವಯವಾಗುತ್ತೆ ಎಂದು ನುಡಿದರು. ಐದು ಜನ ನ್ಯಾಯಾಧೀಶರು ಸುಪ್ರೀಂಕೋರ್ಟ್‌ನಲ್ಲಿ ತೀರ್ಪು ಕೊಟ್ಟಿದ್ದಾರೆ. ಇದನ್ನು ನಾನು ಸ್ವಾಗತಿಸುತ್ತೇನೆ. ಮುಂಬರುವ ಚುನಾವಣೆಯಲ್ಲಿ ಇಂಡಿಯಾ (I.N.D.I.A) ಒಂದು ಕಡೆ, ಇನ್ನೊಂದು ಕಡೆ ಎನ್‌ಡಿಎ ಇದೆ. ನಾವು ಬಿಜೆಪಿ ಜೊತೆ ಹೊಂದಾಣಿಕೆ ಮಾಡಿಕೊಂಡಿದ್ದೇವೆ. ಲೋಕಸಭೆ ಚುನಾವಣೆಯಲ್ಲಿ ಈ ರಾಷ್ಟ್ರದ ಮಹಾಜನತೆ ಇಂಡಿಯಾ ಪರ ತೀರ್ಪು ಕೊಡುತ್ತಾರೋ, ಎನ್‌ಡಿಎ ಮೈತ್ರಿಕೂಟಕ್ಕೆ ತೀರ್ಪು ಕೊಡ್ತಾರೋ ಕಾದುನೋಡಬೇಕು ಎಂದು ಹೇಳಿದರು. ಇದೇ ವೇಳೆ ಐದು ರಾಜ್ಯಗಳ ಚುನಾವಣೆ ಫಲಿತಾಂಶ ಗಮನಿಸಿದರೆ ಜನರ ಮನಸ್ಸಿನಲ್ಲಿ ಬಿಜೆಪಿಗೆ ಸ್ವಾಭಾವಿಕವಾಗಿ ಹೆಚ್ಚಿ ಶಕ್ತಿ ಕೊಟ್ಟಿದ್ದಾರೆ ಎಂದರು.

1.75 ಲಕ್ಷ ಕಳೆದುಕೊಂಡ ವಿದ್ಯಾರ್ಥಿನಿ!

ಪಿರಿಯಾಪಟ್ಟಣ, ಡಿ. 11– ಪ್ರಶ್ನೆಗಳಿಗೆ ಉತ್ತರಿಸಿದರೆ ಹೆಚ್ಚಿನ ಮೊತ್ತದ ಕಮಿಷನ್ ದೊರೆಯುತ್ತದೆ ಎಂದು ನಂಬಿಸಿ ವಿದ್ಯಾರ್ಥಿನಿಗೆ ಆನ್‌ಲೈನ್ ಮೂಲಕ 1.75 ಲಕ್ಷ ರೂ. ವಂಚಿಸಲಾಗಿದೆ. ಪಿರಿಯಾಪಟ್ಟಣ ತಾಲೂಕು ಮಾಲಂಗಿ ಗ್ರಾಮದವರಾಗಿದ್ದು, ಮೈಸೂರಿನ ಜೆಎಸ್‌ಎಸ್ ಕಾಲೇಜಿನಲ್ಲಿ ಪ್ರಥಮ ಎಂಎಸ್‌ಸಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿನಿ ಎಂ.ಸಿ. ಗೀತಾ(20) ವಂಚನೆಗೊಳಗಾದವರು. ಇವರು ಮೈಸೂರಿನಿಂದ ಮಾಲಂಗಿಗೆ ಬಸ್‌ನಲ್ಲಿ ತೆರಳುತ್ತಿದ್ದ ವೇಳೆ ಇವರ ಮೊಬೈಲ್‌ಗೆ 'ಮೇಡಂ ನಾವು ಪ್ರಶ್ನೆ ಕೇಳುತ್ತೇವೆ, ನೀವು ಉತ್ತರಿಸಿ ಲಾಭ ಗಳಿಸಿ' ಎಂದು ಸಂದೇಶ ಬಂದಿದೆ. ಸಂದೇಶದಲ್ಲಿ ತಿಳಿಸಿದಂತೆ ಗೀತಾ ಅವರು 100 ವರ್ಗಾಯಿಸಿ ಪ್ರಶ್ನೆಗಳಿಗೆ ಉತ್ತರ ಹೇಳಿದಾಗ ಅವರ ಖಾತೆಗೆ 500 ರೂ. ಜಮೆ ಆಗಿದೆ. ನಂತರ ಹಂತ ಹಂತವಾಗಿ 1.75 ಲಕ್ಷ ರೂ.ಗಳನ್ನು ವರ್ಗಾಯಿಸಿಕೊಂಡು ವಂಚಿಸಲಾಗಿದೆ. ಈ ಸಂಬಂಧ ಪಿರಿಯಾಪಟ್ಟಣ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಇಸ್ರೇಲ್–ಪ್ಯಾಲೆಸ್ಟೀನ್ ಯುದ್ಧ ಕೊನೆಗಾಣಿಸಲು ಆಗ್ರಹ

ಪ್ರಗತಿಪರ ಸಂಘಟನೆಗಳ ಒಕ್ಕೂಟದಿಂದ ಯುದ್ಧ ವಿರೋಧಿ ಪ್ರದರ್ಶನ



ಮೈಸೂರಿನ ಗಾಂಧಿಚೌಕದಲ್ಲಿ ಸೋಮವಾರ ಇಸ್ರೇಲ್ ಮತ್ತು ಪ್ಯಾಲೆಸ್ಟೀನ್ ನಡುವಿನ ಯುದ್ಧ ಕೊನೆಯಾಗಿಸಲು ಆಗ್ರಹಿಸಿ ಯುದ್ಧ ವಿರೋಧಿ ಪ್ರದರ್ಶನ ನಡೆಸಲಾಯಿತು.

ಮೈಸೂರು,ಡಿ.11(ಪಿಎಂ)– ಇಸ್ರೇಲ್ ಮತ್ತು ಪ್ಯಾಲೆಸ್ಟೀನ್ ನಡುವಿನ ಯುದ್ಧ ಕೊನೆಯಾಗಿ ಶಾಂತಿ ನೆಲೆಸುವ ಮೂಲಕ ಎರಡೂ ದೇಶಗಳಲ್ಲಿ ಸಾವು–ನೋವು ತಪ್ಪಬೇಕೆಂದು ಒತ್ತಾಯಿಸಿ 'ಯುದ್ಧ ನಿಲ್ಲಿಸಿ, ಮನುಕುಲದ ನಾಶ ತಪ್ಪಿಸಿ' ಶೀರ್ಷಿಕೆಯಡಿ ಮೈಸೂರಿನ ಪ್ರಗತಿಪರ ಸಂಘಟನೆಗಳ ಒಕ್ಕೂಟದ ವತಿಯಿಂದ ಸೋಮವಾರ ಯುದ್ಧ ವಿರೋಧಿ ಪ್ರದರ್ಶನ ನಡೆಸಲಾಯಿತು.

ಮೈಸೂರಿನ ಗಾಂಧಿಚೌಕದಲ್ಲಿ ಜಮಾಯಿಸಿದ ಒಕ್ಕೂಟದ ಮುಖಂಡರು, ಕಾರ್ಯಕರ್ತರು, ಯುದ್ಧ ನಿಲ್ಲಿಸಬೇಕೆಂಬ ಕುರಿತಂತೆ ವಿವಿಧ ಘೋಷಣೆಗಳನ್ನು ಒಳಗೊಂಡಿರುವ ಫಲಕಗಳನ್ನಿಡಿದು, ಯುದ್ಧ ಕೊನೆಗಾಣಿಸಿ ಎರಡೂ ದೇಶದಲ್ಲಿ ಶಾಂತಿ ಸ್ಥಾಪಿಸಬೇಕೆಂದು ಆಗ್ರಹಿಸಿದರು. ಯುದ್ಧ ವಿರೋಧಿ ಪರಿಕಲ್ಪನೆಯಲ್ಲಿ ದಾಳಿಯಿಂದ ಉಂಟಾಗುವ ಸಾವು–ನೋವುಗಳ ಚಿತ್ರ ರಚಿಸಿ ಪ್ರದರ್ಶಿಸಿ, ಶಾಂತಿ ಸಂದೇಶ ಸಾರಿದರಲ್ಲದೆ, ಮೇಣದ ಬತ್ತಿ ಬೆಳಗಿಸಿದರು.

ಇದಕ್ಕೂ ಮುನ್ನ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಒಕ್ಕೂಟದ ಮುಖಂಡ ಉಗ್ರನರಸಿಂಹೇಗೌಡ, ಇಸ್ರೇಲ್ ಮತ್ತು ಪ್ಯಾಲೆಸ್ಟೀನ್ ನಡುವಿನ ಯುದ್ಧವನ್ನು ನಿಲ್ಲಿಸಿ, ಮನುಕುಲದ ನಾಶ ತಪ್ಪಿಸಬೇಕು. ಈ ನಿಟ್ಟಿನಲ್ಲಿ ಯುದ್ಧ ವಿರೋಧಿ ಪ್ರದರ್ಶನ ಮಾಡುತ್ತಿದ್ದೇವೆ. ಈ ಯುದ್ಧದಲ್ಲಿ ಇದುವರೆಗೆ 7 ಸಾವಿರದಷ್ಟು ಮಕ್ಕಳು ಸಾವನ್ನಪ್ಪಿದ್ದಾರೆ ಎಂದು ಬೇಸರ ವ್ಯಕ್ತಪಡಿಸಿದರು.

ಈ ಯುದ್ಧಕ್ಕೆ ಕಾರಣವಾದ ಅಂಶಗಳನ್ನು ಹೇಳಲೇಬೇಕಿದೆ. ಈ ಸಂಘರ್ಷ ಇದ್ದಕ್ಕಿದ್ದಂತೆ ಶುರುವಾಗಿದ್ದಲ್ಲ. ಜಗತ್ತಿನಾದ್ಯಂತ ಬೇರೆ ಬೇರೆ ಕಡೆಗಳಿಗೆ ಹರಿದುಹಂಚಿ ಹೋಗಿ ಕೊಲೆ–ಸುಲಿಗೆ, ಸಾವು–ನೋವುಗಳಿಗೆ ಒಳಗಾಗಿದ್ದಂತಹ ಯಹೂದಿಗಳನ್ನು ಸೇರಿಸಿ, ಪ್ಯಾಲೆಸ್ಟೀನ್ ಪಕ್ಕದಲ್ಲಿ 1948ರಲ್ಲಿ ಇಸ್ರೇಲ್ ಸ್ಥಾಪನೆ ಮಾಡಲಾಯಿತು. ಇಂಗ್ಲೆಂಡ್ ಮತ್ತು ಅಮೇರಿಕವು ಇಸ್ರೇಲ್ ಸ್ಥಾಪನೆಗೆ ಕಾರಣವಾದವು. ಹೀಗೆ ಉದಯಿಸಿದ ಇಸ್ರೇಲ್ ನೆರೆ ದೇಶವಾದ ಪ್ಯಾಲೆಸ್ಟೀನ್ ಜನತೆಗೆ ನಿರಂತರವಾಗಿ ಕಿರುಕುಳ ಕೊಡಲು ಶುರು ಮಾಡಿತು ಎಂದು ದೂರಿದರು.

ಇದೀಗ ಸಂಘರ್ಷದಿಂದ ಎರಡೂ ದೇಶಗಳಲ್ಲಿ ಅಮಾಯಕರು ಬಲಿಯಾಗುತ್ತಿದ್ದಾರೆ. ವಿಶ್ವಸಂಸ್ಥೆ ಈ ಯುದ್ಧ ನಿಲ್ಲಿಸಬೇಕೆಂಬ ನಿರ್ಣಯದ ವಿರುದ್ಧ ಅಮೇರಿಕ ವಿಟೋ ಚಲಾಯಿಸಿ ಅಡ್ಡಗಾಲು ಹಾಕಿದೆ. ನೆನ್ನೆಯಿಂದ ಇಸ್ರೇಲ್‌ನ ದಾಳಿ ಮತ್ತಷ್ಟು ವ್ಯಾಪಕವಾಗಿದೆ. ಯುದ್ಧ ಯಾರೇ ಮಾಡಲಿ, ಅದರಿಂದ ಮನುಕುಲದ ನಾಶವಾಗಲಿದೆ. ನಾವು ಯಾವುದೇ ಒಂದು ದೇಶದ ಪರ ವಾದಿಸಲು ಈ ಪ್ರದರ್ಶನ ನಡೆಸುತ್ತಿಲ್ಲ. ಈ ಯುದ್ಧ ಕೊನೆಯಾಗಿ ಶಾಂತಿ ನೆಲೆಸಬೇಕೆಂದು ನಮ್ಮ ನಿಲುವು ಎಂದು ಹೇಳಿದರು.

ವಿಜಯಪುರದ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ ವಿಶ್ರಾಂತ ಕುಲಪತಿ ಪ್ರೊ.ಸಬಿಹಾ ಭೂಮಿಗೌಡ, ರಂಗಾಯಣ ಮಾಜಿ ನಿರ್ದೇಶಕ ಹೆಚ್. ಜನಾರ್ಧನ್ (ಜನ್ನಿ), ಕಾಂಗ್ರೆಸ್ ಮುಖಂಡ ಡಾ.ಸುಶ್ರುತ್‌ಗೌಡ, ನಿವೃತ್ತ ಪ್ರಾಧ್ಯಾಪಕ ಪ್ರೊ.ಕಾಳಚನ್ನೇಗೌಡ, ಪ್ರಗತಿಪರ ಚಿಂತಕರಾದ ಶಬೀರ್ ಮುಸ್ತಾಫ, ನಾ. ದಿವಾಕರ್, ವಿವಿಧ ಸಂಘಟನೆಗಳ ಮುಖಂಡರಾದ ಎನ್.ಕೆ.ದೇವದಾಸ್, ರಾಮಕೃಷ್ಣ, ಡಾ.ರತಿರಾವ್ ಸೇರಿದಂತೆ ಇನ್ನಿತರ ಸಂಘಟನೆಗಳ ಮುಖಂಡರು ಹಾಗೂ ಕಾರ್ಯಕರ್ತರು ಪಾಲ್ಗೊಂಡಿದ್ದರು.

ಮೈಸೂರು ಮಿತ್ರ ಮಂಗಳವಾರ 12 ಡಿಸೆಂಬರ್ 2023

ಡಿ.15ರಿಂದ ಸುಬ್ರಹ್ಮಣ್ಯ ಷಷ್ಠಿ

ಗೋಣಿಕೊಪ್ಪ, ಡಿ.11–ಗೋಣಿಕೊಪ್ಪ ಉಮಾಮಹೇಶ್ವರಿ ದೇವಸ್ಥಾನದಲ್ಲಿ ಡಿ.15 ರಿಂದ 20ರವರೆಗೆ ಸುಬ್ರಹ್ಮಣ್ಯ ಷಷ್ಠಿ ಆಚರಣೆ ನಡೆಯಲಿದೆ.

ಡಿ.15ರಂದು ಬೆಳಗ್ಗೆ 7 ಗಂಟೆಗೆ ಗಣಪತಿ ಹೋಮ, 18ರಂದು ಮುಂಜಾನೆ 5 ಗಂಟೆಗೆ ಇರ್ ಬೊಳಕ್, ಪ್ರದಕ್ಷಿಣೆ, ಭಕ್ತರಿಂದ ಸೇವೆ, ಅನ್ನಸಂತರ್ಪಣೆ, ರಾತ್ರಿ 7ಕ್ಕೆ ದೇವರ ನೃತ್ಯ, ಸಾಮೂಹಿಕ ಪೂಜೆ, ಮಹಾಮಂಗಳಾರತಿ. 19ರಂದು ಬೆಳಗ್ಗೆ 7ಕ್ಕೆ ಭಕ್ತರಿಂದ ಸೇವೆ, ಮಧ್ಯಾಹ್ನ 1 ಗಂಟೆಗೆ ಮಹಾಪೂಜೆ, ಅನ್ನಸಂತರ್ಪಣೆ, ರಾತ್ರಿ 7ಕ್ಕೆ ದೇವಸ್ಥಾನದ ಕೆರೆಯಲ್ಲಿ ಅವಬ್ರತ ಸ್ನಾನ, 8 ಗಂಟೆಗೆ ದೇಗುಲದಲ್ಲಿ ಪ್ರದಕ್ಷಿಣೆ, 9 ಗಂಟೆಗೆ ಮಹಾಮಂಗಳಾರತಿ ನಡೆಯಲಿದೆ ಎಂದು ದೇವಸ್ಥಾನದ ಪ್ರಕಟಣೆ ತಿಳಿಸಿದೆ.

ಜಿಪಂ ಕ್ಷೇತ್ರಗಳ ಏರಿಕೆಗೆ ಶಾಸಕದ್ವಯರು ಆಗ್ರಹ

ಅಧಿವೇಶನದಲ್ಲಿ ವಿಷಯ ಪ್ರಸ್ತಾಪಿಸಿದ ಎ.ಎಸ್.ಪೊನ್ನಣ್ಣ, ಡಾ.ಮಂಥರ್‌ಗೌಡ




ಮಡಿಕೇರಿ, ಡಿ.11–ಕೊಡಗು ಭೌಗೋಳಿಕವಾಗಿ ವಿಭಿನ್ನವಾಗಿರುವ ಹಿನ್ನೆಲೆಯಲ್ಲಿ ಜಿಲ್ಲೆಯ ಅಭಿವೃದ್ಧಿ ದೃಷ್ಟಿಯಿಂದ ಜಿಲ್ಲಾ ಪಂಚಾಯಿತಿ ಕ್ಷೇತ್ರಗಳನ್ನು ಹಿಂದಿನಂತೆ 29ಕ್ಕೆ ಏರಿಸಬೇಕು ಎಂದು ಜಿಲ್ಲೆಯ ಶಾಸಕದ್ವಯರು ರಾಜ್ಯ ಸರ್ಕಾರವನ್ನು ಆಗ್ರಹಿಸಿದರು.

ಬೆಳಗಾವಿಯಲ್ಲಿ ನಡೆಯುತ್ತಿರುವ ಅಧಿವೇಶನದಲ್ಲಿ ಸೋಮವಾರ ವಿಷಯ ಪ್ರಸ್ತಾಪಿಸಿದ ಮುಖ್ಯಮಂತ್ರಿ ಕಾನೂನು ಸಲಹೆಗಾರ ಹಾಗೂ ವಿರಾಜಪೇಟೆ ಶಾಸಕ ಅಜ್ಜಿಕುಟ್ಟಿರ ಎಸ್.ಪೊನ್ನಣ್ಣ, ಈ ಮೊದಲು ಕೊಡಗು ಜಿಲ್ಲಾ ಪಂಚಾಯಿತಿ ಕ್ಷೇತ್ರಗಳ ಸಂಖ್ಯೆ 29ಕ್ಕೆ ಮೀಸಲಾಗಿತ್ತು. ನಂತರ ಜನಸಂಖ್ಯಾ ಆಧಾರದ ತಿದ್ದುಪಡಿಯಿಂದ ಕ್ಷೇತ್ರಗಳ ಸಂಖ್ಯೆ 23ಕ್ಕೆ ಇಳಿದಿದೆ. ಆದರೆ, ಪ್ರತಿ ಕ್ಷೇತ್ರವನ್ನು 18 ಸಾವಿರ ಜನಸಂಖ್ಯೆಗೆ ಬದಲಾಗಿ 17 ಸಾವಿರಕ್ಕೆ ಮೀಸಲು ಮಾಡಿದರೆ ಮೊದಲಿನಂತೆ ಕ್ಷೇತ್ರಗಳ ಸಂಖ್ಯೆ 29ಕ್ಕೆ ಏರಿಕೆಯಾಗಲಿದೆ ಎಂದು ಸರ್ಕಾರದ ಗಮನ ಸೆಳೆದರು. ವಿರಾಜಪೇಟೆ ಕ್ಷೇತ್ರ ಒಟ್ಟು 152 ಕಿ.ಮೀ. ವ್ಯಾಪ್ತಿಯಿದ್ದು, ಕೇವಲ 12 ಜಿಲ್ಲಾ ಪಂಚಾಯಿತಿ ಕ್ಷೇತ್ರಗಳಿವೆ. ಈ ಸಂಖ್ಯೆಯನ್ನು ಏರಿಸುವ ಮೂಲಕ 29 ಸದಸ್ಯ ಸ್ಥಾನವನ್ನು ಮತ್ತೆ ನೀಡಬೇಕು ಎಂದು ಮನವಿ ಮಾಡಿದರು. ಇದಕ್ಕೆ ಧ್ವನಿಗೂಡಿಸಿದ ಮಡಿಕೇರಿ ಶಾಸಕ ಡಾ.ಮಂಥರ್ ಗೌಡ, ಮಡಿಕೇರಿ ಕ್ಷೇತ್ರ ಒಟ್ಟು 130 ಕಿ.ಮೀ. ವ್ಯಾಪ್ತಿಯಿದೆ. ಹೀಗಾಗಿ 17 ಸಾವಿರ ಜನಸಂಖ್ಯೆಗೆ 1 ಕ್ಷೇತ್ರ ನೀಡಬೇಕು. ಇದರಿಂದ ಪ್ರತಿನಿಧಿಗಳ ಸಂಖ್ಯೆಯೂ ಏರಿಕೆಯಾಗುವುದಲ್ಲದೇ, ಸಾರ್ವಜನಿಕರಿಗೆ ಅನುಕೂಲವಾಗುತ್ತದೆ. ಜೊತೆಗೆ ಜಿಲ್ಲೆಯ ಹೆಚ್ಚು ಅಭಿವೃದ್ಧಿಗೆ ಸಾಧ್ಯವಾಗಲಿದೆ ಎಂದು ಹೇಳಿದರು.

ತಿದ್ದುಪಡಿಯಿಂದ ಸಮಸ್ಯೆಗೆ ಪರಿಹಾರ

ಸದನದಲ್ಲಿ ಶಾಸಕದ್ವಯರ ಪ್ರಸ್ತಾಪಕ್ಕೆ ಪ್ರತಿಕ್ರಿಯಿಸಿದ ಕಂದಾಯ ಸಚಿವ ಕೃಷ್ಣಬೈರೇಗೌಡ, 7 ಲಕ್ಷಕ್ಕಿಂತ ಹೆಚ್ಚಿನ ಜನಸಂಖ್ಯೆ ಮತ್ತು 9.50 ಲಕ್ಷಕ್ಕಿಂತ ಕಡಿಮೆ ಜನಸಂಖ್ಯೆ ಇರುವ ಕಡೆ ಜಿಲ್ಲಾ ಪಂಚಾಯಿತಿಯ 28 ಚುನಾಯಿತ ಸದಸ್ಯರು ಇರಬೇಕು ಎಂದು ತಿದ್ದು ಪಡಿ ತರಲಾಗಿದೆ. ಇದರ ಅನ್ವಯ ಜಿಪಂ ಸದಸ್ಯರ ಸಂಖ್ಯೆ ಹೆಚ್ಚಳ ಕುರಿತು ಕೊಡಗಿನ ಸಮಸ್ಯೆ ಬಗೆಹರಿಯುವ ನಿರೀಕ್ಷೆ ಹೊಂದಲಾಗಿದೆ. ಕೊಡಗಿನ ಶಾಸಕದ್ವಯರ ಸಲಹೆಯನ್ನು ಪರಿಶೀಲನೆ ಮಾಡಲಾಗುವುದು ಎಂದು ಭರವಸೆ ನೀಡಿದರು.

ಹಕ್ಕುಗಳಿಗೆ ಗೌರವ ಕೊಡಬೇಕು

ಗೋಪಾಲಗೌಡ ಆಸ್ಪತ್ರೆಯ ವ್ಯವಸ್ಥಾಪಕ ನಿರ್ದೇಶಕ ಡಾ.ಶುಶ್ರೂತ್‌ಗೌಡ



ಗೋಣಿಕೊಪ್ಪ, ಡಿ.11– ಹಕ್ಕುಗಳಿಗೆ ಗೌರವ ಕೊಡುವುದನ್ನು ಎಲ್ಲರೂ ಅರಿತುಕೊಳ್ಳಬೇಕು ಎಂದು ಮೈಸೂರಿನ ಗೋಪಾಲಗೌಡ ಆಸ್ಪತ್ರೆಯ ವ್ಯವಸ್ಥಾಪಕ ನಿರ್ದೇಶಕ ಡಾ.ಶುಶ್ರೂತ್‌ಗೌಡ ಹೇಳಿದರು.

ಮಾಯಮುಡಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಮೈದಾನದಲ್ಲಿ ಐರನ್ ಸೈಟ್ ಶೂಟರ್ಸ್ ಅಸೋಸಿಯೇಷನ್ ವತಿಯಿಂದ ಆಯೋಜಿಸಿದ್ದ ತೋಕ್‌ನಮ್ಮೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಕೊಡವರಿಗೆ ದೊರೆತಿರುವ ಹಕ್ಕು ಸದುಪಯೋಗ ಪಡಿಸಿಕೊಳ್ಳಲು ಅವರು ಮುಂದೆ ಬರಬೇಕು. ಪ್ರತಿಯೊಬ್ಬರಿಗೂ ಬೇರೆ ಬೇರೆ ಹಕ್ಕು ದೊರೆತಿರುವುದನ್ನು ಗೌರವಿಸಿಕೊಂಡು ಮುಂದುವರೆಯಬೇಕು. ನಮಗೆ ಹಕ್ಕು ಇಲ್ಲ ಎಂಬ ಕೊರಗು ಬೇಡ ಎಂದು ಸಲಹೆ ನೀಡಿದರು.

ಕೊಡವ ಸಂಸ್ಕೃತಿ, ಪದ್ಧತಿ ವಿಶ್ವದಲ್ಲೇ ವಿಶೇಷತೆ ಪಡೆದುಕೊಂಡಿದೆ. ಅರ್ಥಪೂರ್ಣ ಪದ್ಧತಿಯ ಪೋಷಣೆಗೆ ಕೊಡವರು ತೊಡಗಿಕೊಳ್ಳಬೇಕಿದೆ. ಯಾವುದೇ ಸಮಸ್ಯೆ ಪರಿಹಾರಕ್ಕೆ ಒಗ್ಗಟ್ಟು ಅವಶ್ಯ. ಹೋರಾಟದ ಮೂಲಕ ಸಾಧಿಸುವ ಛಲ ಇರಬೇಕು ಎಂದರು. ಇದೇ ವೇಳೆ ತೆಂಗಿನಕಾಯಿ ಹಾಗೂ ಮೊಟ್ಟೆಗೆ ಗುಂಡು ಹೊಡೆಯುವ ಸ್ಪರ್ಧೆ ನಡೆಯಿತು. 375ಕ್ಕೂ ಹೆಚ್ಚು ಸ್ಪರ್ಧಿಗಳು ಭಾಗವಹಿಸಿದ್ದರು. ಮಾಜಿ ಎಂಎಲ್‌ಸಿ ಚೆಪ್ಪುಡೀರ ಅರುಣ್ ಮಾಚಯ್ಯ, ಕಾಂಗ್ರೆಸ್ ಜಿಲ್ಲಾಧ್ಯಕ್ಷ ತೀತೀರ ಧರ್ಮಜ ಉತ್ತಪ್ಪ, ಹಿರಿಯ ವಕೀಲ ಮುಕ್ಕಾಟೀರ ಆರ್.ಹರೀಶ್, ಕಾವೇರಿ ಅಸೋಸಿಯೇಷನ್ ಅಧ್ಯಕ್ಷ ಕಾಳಪಂಡ ಟಿಪ್ಪು ಬಿದ್ದಪ್ಪ, ಮಾಜಿ ಅಧ್ಯಕ್ಷ ಕಾಳಪಂಡ ಸಿ.ಸುದೀರ್, ಕೊಡವ ಪೊಮ್ಮಕ್ಕಡ ಕೂಟದ ಅಧ್ಯಕ್ಷೆ ಕೊಟ್ಟಂಗಡ ವಿಜು ದೇವಯ್ಯ, ದಾನಿ ಚೆಪ್ಪುಡೀರ ಕಿಟ್ಟು ಅಯ್ಯಪ್ಪ, ಮಾಜಿ ಅಧ್ಯಕ್ಷ ಎಸ್.ಎಸ್.ಸುರೇಶ್, ಕಂಗಳತ್ನಾಡ್ ಅಮ್ಮ ಕೊಡವ ಸಮಾಜದ ಅಧ್ಯಕ್ಷೆ ಬಾನಂಡ ಆಶಾ ಸುದನ್, ಕ್ರೀಡಾಕೂಟ ಸಂಚಾಲಕ ಆಪಟ್ಟೀರ ಟಾಟು ಮೊಣ್ಣಪ್ಪ, ಯೋಜನಾ ನಿರ್ದೇಶಕ ಆಪಟ್ಟೀರ ಆರ್.ಅಯ್ಯಪ್ಪ ಇದ್ದರು.

ಪಾಲಿಬೆಟ್ಟದಲ್ಲಿ ಬರಿಗಾಲಿನ ಮ್ಯಾರಥಾನ್



ಸಿದ್ದಾಪುರ, ಡಿ.11–ವಿರಾಜಪೇಟೆ ತಾಲೂಕಿನ ಪಾಲಿಬೆಟ್ಟದ ಗ್ರಾಮೀಣ ರಸ್ತೆಗಳಲ್ಲಿ ಕೂರ್ಗ್ ವೆಲ್ನೆಸ್ ಫೌಂಡೇಷನ್ ಹಾಗೂ ಬಾಲಿವುಡ್ ನಟ ಮಿಲಿಂದ್ ಸೋಮನ್ ಸಹಯೋಗದಲ್ಲಿ 7ನೇ ಬರಿಗಾಲಿನ ಮ್ಯಾರಥಾನ್ ನಡೆಯಿತು.

ಟಾಟಾ ಸಂಸ್ಥೆಯ ಆಟದ ಮೈದಾನದಲ್ಲಿ ಮ್ಯಾರಥಾನ್‌ಗೆ ಮಿಲಿಂದ್ ಸೋಮನ್ ಚಾಲನೆ ನೀಡಿದರು. ಕೂರ್ಗ್ ವೆಲ್ನೆಸ್ ಫೌಂಡೇಷನ್ ಸ್ಥಾಪಕಿ ಚೆಪ್ಪುಡಿರ ನಿಕ್ಕಿ ಪೊನಪ್ಪ ಮಾತನಾಡಿದರು. ಮ್ಯಾರಥಾನಲ್ಲಿ ಸಿಂಗಪೂರ್, ಮಲೇಷ್ಯಾ, ಕೇರಳ, ತಮಿಳುನಾಡು, ದೆಹಲಿ, ಮುಂಬೈ, ಕೋಲ್ಕತಾ ಸೇರಿದಂತೆ ಜಿಲ್ಲೆಯಿಂದ 200ಕ್ಕೂ ಜನ ಪಾಲ್ಗೊಂಡಿದ್ದರು. ಕಾಡುಪ್ರಾಣಿಗಳ ಭಯದ ನಡುವೆಯೂ ಅರಣ್ಯ ಸಿಬ್ಬಂದಿ ಸಹಕಾರ, ರಕ್ಷಣೆಯೊಂದಿಗೆ ಪಾಲಿಬೆಟ್ಟ, ಚನ್ನಯ್ಯನಕೋಟೆ, ಚನ್ನಂಗಿ, ಅಬ್ಬೂರ್ ಸುತ್ತಮುತ್ತಲ ಗ್ರಾಮದ ರಸ್ತೆಗಳಲ್ಲಿ ಬರಿಗಾಲಿನ ನಡಿಗೆಯಲ್ಲಿ ಪಾಲ್ಗೊಂಡ ಗುರಿ ಮುಟ್ಟಿದರು.

ವಿಜೇತರು: 42 ಕಿ.ಮೀ ಬರಿಗಾಲು ಮ್ಯಾರಥಾನ್ ಸ್ಪರ್ಧೆಯ ಪುರುಷರ ವಿಭಾಗದಲ್ಲಿ ವಿರಾಜಪೇಟೆ ಗೌತಮ್ ಶೆಟ್ಟಿ ಪ್ರಥಮ ಸ್ಥಾನಗಳಿಸಿ ಮೂರನೇ ಬಾರಿ ಚಾಂಪಿಯನ್ ಪಡೆದರು. ಬೆಂಗಳೂರಿನ ಬೊಬ್ಬಯ್ ದ್ವಿತೀಯ ಹಾಗೂ ಮೈಸೂರು ಧನುಪ್ರಕಾಶ್ ತೃತೀಯ ಸ್ಥಾನ ಪಡೆದರು. 21 ಕಿ.ಮೀ. ಪುರುಷರ ವಿಭಾಗದಲ್ಲಿ ನಿತಿನ್ ಪ್ರಥಮ, ವಿನಯ್ ಕುಮಾರ್ ದ್ವಿತೀಯ, ಜಗದೀಶ್ ತೃತೀಯ ಸ್ಥಾನ. 21 ಕಿ.ಮೀ. ಮಹಿಳಾ ವಿಭಾಗದಲ್ಲಿ ವಿಜಯಾ ಪ್ರಥಮ, ಪಲ್ಲವಿ ದ್ವಿತೀಯ, ದಿವ್ಯಾ ತೃತಿಯ ಸ್ಥಾನ. 10 ಕಿ.ಮೀ. ಪುರುಷರ ವಿಭಾಗದಲ್ಲಿ ಜಗದೀಶ್ ಪ್ರಥಮ, ಗಣೇಶ್ ದ್ವಿತೀಯ, ವಿಷ್ಣು ತೃತಿಯ ಸ್ಥಾನ. 10 ಕಿ.ಮೀ. ಮಹಿಳಾ ವಿಭಾಗದಲ್ಲಿ ಅನುಪಮಾ ರಾವ್ ಪ್ರಥಮ, ಮೀರಾ ದ್ವಿತೀಯ, ಕುಂಕುಂ ನಾಣಯ್ಯ ತೃತೀಯ ಸ್ಥಾನ. 5 ಕಿ.ಮೀ. ಪುರುಷ ವಿಭಾಗದಲ್ಲಿ ಸ್ಟೇಜ್ಮಾನ್ ಪ್ರಥಮ, ಮೆರ್ಲಿನ್ ದ್ವಿತೀಯ, ಶಾಜಿ ತೃತೀಯ. 5 ಕಿ.ಮೀ ಮಹಿಳಾ ವಿಭಾಗದಲ್ಲಿ ಚೊಂದಮ್ಮ ಪ್ರಥಮ, ಶಿವಾನಿ ದ್ವಿತೀಯ, ಪ್ರತಿಕ್ಷ ತೃತೀಯ ಬಹುಮಾನ ಪಡೆದರು.

ಅರುಂಧತಿಗೆ ದ್ವಿತೀಯ ರ್‍ಯಾಂಕ್



ವಿರಾಜಪೇಟೆ, ಡಿ.11– ವಿರಾಜಪೇಟೆ ನಿಸರ್ಗ ಬಡಾವಣೆಯ ನಿವಾಸಿ ಹಾಗೂ ಕಾರ್ಕಳದ ನಿಟ್ಟೆ ಎನ್‌ಎಂಎಎಂ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ತಾಂತ್ರಿಕ ಮಹಾವಿದ್ಯಾಲಯದ ವಿದ್ಯಾರ್ಥಿನಿ ಅರುಂಧತಿ ಮನೋಜ್‌ಕುಮಾರ್ ಎಂ.ಟೆಕ್ ಪರೀಕ್ಷೆಯಲ್ಲಿ ಬೆಳ್ಳಿ ಪದಕ ಪಡೆಯುವ ಮೂಲಕ ದ್ವಿತೀಯ ರ್‍ಯಾಂಕ್ ಗಳಿಸಿದ್ದಾರೆ. ಬೆಳಗಾವಿಯ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ 2022–23ನೇ ಸಾಲಿನ ವಿಎಲ್‌ಎಸ್‌ಐ ವಿಭಾಗದ ಇಂಜಿನಿಯರ್ ಕ್ಷೇತ್ರದಲ್ಲಿ ಸಾಧನೆ ಮಾಡಿದ್ದಾರೆ. ಈಕೆ ನಿಸರ್ಗ ಬಡಾವಣೆಯ ಮನೋಜ್ ಕುಮಾರ್ ಹಾಗೂ ಕವಿತಾ ದಂಪತಿಯ ಪುತ್ರಿ.

ಇಂದು ಹೆಬ್ಬಾಲೆಯಲ್ಲಿ ಬನಶಂಕರಿ ಉತ್ಸವ



ಕುಶಾಲನಗರ, ಡಿ.11–ತಾಲೂಕಿನ ಐತಿಹಾಸಿಕ ಹೆಬ್ಬಾಲೆ ಗ್ರಾಮದೇವತೆ ಶ್ರೀ ಬನಶಂಕರಿ ಅಮ್ಮನವರ ಉತ್ಸವ ಡಿ.12ರಂದು ವಿಜೃಂಭಣೆಯಿಂದ ನಡೆಯಲಿದೆ.

ಬನಶಂಕರಿ, ಬಸವೇಶ್ವರ ಮತ್ತು ರಾಮಲಿಂಗೇಶ್ವರ ದೇವಸ್ಥಾನ ಸಮಿತಿ ಹಾಗೂ ಗ್ರಾಮಸ್ಥರ ವತಿಯಿಂದ ಕಾರ್ತಿಕ ಮಾಸ ಕೃಷ್ಣಪಕ್ಷ ಅಮಾವಾಸೆ ಮಂಗಳವಾರ ರಾತ್ರಿ ದೇವಿಗೆ ವಿಶೇಷ ಪೂಜೆ ನೆರವೇರಲಿದೆ. ಬೆಳಗ್ಗೆ 7ಕ್ಕೆ ಗಣಪತಿ ಪೂಜೆ, ಪುಣಾಹಃ ರಕ್ಷಾಬಂಧನ ಧ್ವಜಾರೋಹಣ ನವಗ್ರಹ ಸ್ಥಾಪನೆ, ಮಹಾಮಂಗಳಾರತಿ ಸೇರಿದಂತೆ ಇನ್ನಿತರ ಪೂಜಾ ಕೈಂಕರ್ಯ ಪ್ರಧಾನ ಅರ್ಚಕ ಕೃಷ್ಣಮೂರ್ತಿ, ದೇವಸ್ಥಾನ ಸಮಿತಿ ಅಧ್ಯಕ್ಷ ಎಚ್.ಎನ್.ಬಸವರಾಜು, ಯಜಮಾನ ಎಚ್.ಪಿ.ರಾಜಪ್ಪ ನೇತೃತ್ವದಲ್ಲಿ ನಡೆಯಲಿವೆ. ರಾತ್ರಿ 8 ಗಂಟೆಗೆ ಬನದಲ್ಲಿ ಅಗ್ನಿಕುಂಡ ಸ್ಥಾಪಿಸಲಾಗುವುದು. ಇದೇ ವೇಳೆ ಹರಕೆ ಹೊತ್ತ ಭಕ್ತರು ಅಗ್ನಿಕುಂಡ ತುಳಿದು ದೇವಿಯ ದರ್ಶನ ಪಡೆಯುತ್ತಾರೆ. ರಾತ್ರಿ 10.30ಕ್ಕೆ ವಿದ್ಯುತ್ ಅಲಂಕೃತ ಮಂಟಪದಲ್ಲಿ ದೇವಿಯ ಉತ್ಸವ ನಡೆಯಲಿದೆ. ಡಿ.12 ಮತ್ತು 13ರಂದು ಸರ್ಕಾರಿ ಮಾದರಿ ಪ್ರಾಥಮಿಕ ಶಾಲಾ ಮೈದಾನದಲ್ಲಿ ಎತ್ತಿನಗಾಡಿ ಓಟ ಹಾಗೂ ವಿವಿಧ ಗ್ರಾಮೀಣ ಕ್ರೀಡಾಕೂಟ ಆಯೋಜಿಸಲಾಗಿದೆ.

ಅಜಿತ್ ನಾಣಯ್ಯಗೆ 5 ಚಿನ್ನದ ಪದಕ



ಮಡಿಕೇರಿ, ಡಿ.11– ಇತ್ತೀಚಿಗೆ ಮೂಡಬಿದ್ರೆಯಲ್ಲಿ ನಡೆದ ರೋಟರಿ ಜಿಲ್ಲೆ 3181ರ ಕ್ರೀಡಾಕೂಟದಲ್ಲಿ ಮಡಿಕೇರಿ ರೋಟರಿ ಮಿಸ್ಟಿಹಿಲ್ಸ್‌ನ ಸದಸ್ಯ ಕುಲ್ಲೇಟಿರ ಅಜಿತ್ ನಾಣಯ್ಯ ಅವರು ದಾಖಲೆಯ 5 ಚಿನ್ನದ ಪದಕ ಗಳಿಸಿದ್ದಾರೆ.

ಮೂಡಬಿದ್ರೆ ಆಳ್ವಾಸ್ ಕಾಲೇಜಿನ ಅಥ್ಲೆಟಿಕ್ಸ್ ಮೈದಾನದಲ್ಲಿ 50 ವರ್ಷ ಮೇಲ್ಪಟ್ಟವರಿಗೆ ನಡೆದ 100, 200, 400 ಮೀಟರ್ ಓಟ, ಗುಂಡು ಎಸೆತ ಮತ್ತು 400 ಮೀಟರ್ ನಡಿಗೆಯಲ್ಲಿ ಪ್ರಥಮ ಬಹುಮಾನ ಗಳಿಸುವ ಮೂಲಕ ಅಜಿತ್ ಚಿನ್ನದ ಪದಕಗಳನ್ನು ತಮ್ಮದಾಗಿಸಿಕೊಂಡಿದ್ದಾರೆ. ಕ್ರೀಡಾಕೂಟದಲ್ಲಿ ರೋಟರಿ ಜಿಲ್ಲೆ 3181ರ ಕೊಡಗು, ಮೈಸೂರು, ದಕ್ಷಿಣ ಕನ್ನಡ ಮತ್ತು ಚಾಮರಾಜನಗರದ ಸ್ಪರ್ಧಿಗಳು ಪಾಲ್ಗೊಂಡಿದ್ದರು.

ಡಿ.16ರಿಂದ ಸಂಪ್ರೋಕ್ಷಣೆ ಪೂಜಾ ಕಾರ್ಯ

ಮಡಿಕೇರಿ, ಡಿ.11– ಶ್ರೀ ಭಗಂಡೇಶ್ವರ–ತಲಕಾವೇರಿ ದೇವಾಲಯದಲ್ಲಿ ಉಚ್ಚಿಲ ನೀಲೇಶ್ವರ ಪದ್ಮನಾಭ ತಂತ್ರಿಯವರ ನೇತೃತ್ವದಲ್ಲಿ ಡಿ.16 ರಿಂದ 19ರ ವರೆಗೆ 'ಸಂಪ್ರೋಕ್ಷಣೆ' ಪೂಜಾ ಕಾರ್ಯ ನಡೆಯಲಿದೆ.

ಡಿ.16ರಂದು ಬೆಳಗ್ಗೆ 7.30ಕ್ಕೆ ಶ್ರೀ ತಲಕಾವೇರಿ ದೇವಾಲಯದಲ್ಲಿ ಗಣಹೋಮ, ಸಂಪ್ರೋಕ್ಷಣೆ, ಕಲಶಾಭಿಷೇಕ, ಮಧ್ಯಾಹ್ನ ಮಹಾಪೂಜೆ, ಪ್ರಸಾದ ವಿತರಣೆ. 17ರಂದು ಬೆಳಗ್ಗೆ 7.30ಕ್ಕೆ ಭಗಂಡೇಶ್ವರ ದೇವಾಲಯದಲ್ಲಿ ಗಣಪತಿ ಹೋಮ, ಸಂಪ್ರೋಕ್ಷಣೆ, ಕಳಶಾಭಿಷೇಕ, ರಾತ್ರಿ ಶ್ರೀಭೂತ ಬಲಿ, ಭಗಂಡೇಶ್ವರ ದೇವರ ಉತ್ಸವ ನಡೆಯಲಿದೆ. 18ರಂದು ಬೆಳಗ್ಗೆ 7.30ಕ್ಕೆ ಗಣಹೋಮ, ಸುಬ್ರಹ್ಮಣ್ಯ ದೇವರಿಗೆ ಪಂಚಾಮೃತ ಅಭಿಷೇಕ, ರಾತ್ರಿ ಸುಬ್ರಹ್ಮಣ್ಯ ದೇವರ ಉತ್ಸವ ನಡೆಯಲಿದೆ. 19ರಂದು ಬೆಳಗ್ಗೆ 7.30ಕ್ಕೆ ಮಹಾ ವಿಷ್ಣು ಮತ್ತು ಪರಿವಾರ ದೇವರುಗಳ ಶುದ್ಧಿ ಕಲಶಾಭಿಷೇಕ, ಮಧ್ಯಾಹ್ನ ಪ್ರಸಾದ ವಿತರಣೆ ಹಾಗೂ ರಾತ್ರಿ ಮಹಾವಿಷ್ಣು ದೇವರ ಉತ್ಸವ ನಡೆಯಲಿದೆ ಎಂದು ಶ್ರೀ ಭಗಂಡೇಶ್ವರ–ತಲ ಕಾವೇರಿ ಮತ್ತು ಸಮೂಹ ದೇವಾಲಯಗಳ ಕಾರ್ಯನಿರ್ವಾಹಕ ಅಧಿಕಾರಿ ಎನ್.ಜಿ.ಚಂದ್ರಶೇಖರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ದೀಪದಗಿರಿ ಒಡ್ಡುವಿನಲ್ಲಿ ಬೆಳಗಿದ ಮಹಾಜ್ಯೋತಿ

ಮಲೆಮಹದೇಶ್ವರಬೆಟ್ಟದಲ್ಲಿ ತೆಪ್ಪೋತ್ಸವದೊಂದಿಗೆ ಜಾತ್ರೆಗೆ ತೆರೆ



ಹನೂರು, ಡಿ.11–ಜಿಲ್ಲೆಯ ಪ್ರಸಿದ್ಧ ಯಾತ್ರಾ ಸ್ಥಳ ಮಲೆಮಹದೇಶ್ವರಬೆಟ್ಟದಲ್ಲಿ ಕಡೇ ಕಾರ್ತಿಕ ಮಾಸದ ಸೋಮವಾರ ರಾತ್ರಿ ದೀಪದಗಿರಿ ಒಡ್ಡುವಿನಲ್ಲಿ ಮಹಾಜ್ಯೋತಿ ಬೆಳಗಿಸಿ, ಮಹದೇಶ್ವರಸ್ವಾಮಿಯ ತೆಪ್ಪೋತ್ಸವದೊಂದಿಗೆ ಜಾತ್ರೆಗೆ ತೆರೆ ಎಳೆಯಲಾಯಿತು.

ಕಾರ್ತಿಕ ಜಾತ್ರೆಯ ಅಂಗವಾಗಿ ಶನಿವಾರದಿಂದಲೇ ಬೆಟ್ಟದಲ್ಲಿ ವಿಶೇಷ ಪೂಜಾ ಕಾರ್ಯ ಆರಂಭವಾಗಿದ್ದವು. ಸೋಮವಾರ ಬೆಳಗ್ಗೆ ಮಹದೇಶ್ವರಬೆಟ್ಟ ಅಭಿವೃದ್ಧಿ ಪ್ರಾಧಿಕಾರದಿಂದ ಸ್ವಾಮಿಗೆ ವಿಶೇಷ ಪೂಜೆ ಅಭಿಷೇಕ, ಮಹಾಮಂಗಳಾರತಿ ನೆರವೇರಿಸಲಾಯಿತು.

ಮಹಾಜ್ಯೋತಿ ದರ್ಶನ: ಸೋಮವಾರ ಸಂಜೆ ದೇಗುಲದಲ್ಲಿ ಸ್ವಾಮಿಗೆ ವಿಶೇಷ ಪೂಜೆ ಸಲ್ಲಿಸಲಾಯಿತು. ಬಳಿಕ ಮೂರ್ತಿಯನ್ನು ವಿವಿಧ ಪುಷ್ಪಗಳಿಂದ ಸಿಂಗರಿಸಿದ ಬಸವ ವಾಹನದಲ್ಲಿ ಪ್ರತಿಷ್ಠಾಪಿಸಿ ಸತ್ತಿಗೆ, ಸೂರಿಪಾನಿ, ಜಾಗಟೆ ಹಾಗೂ ವಾದ್ಯಗಳದೊಂದಿಗೆ ದೇಗುಲದ ಸುತ್ತ ಪ್ರದಕ್ಷಿಣೆ ಹಾಕಿ ನೈವೇದ್ಯ ನೆರವೇರಿಸಲಾಯಿತು.

ಮಂಗಳಾರತಿ ನಂತರ ಉತ್ಸವ ಮೂರ್ತಿಯನ್ನು ಮೆರವಣಿಗೆ ಮೂಲಕ ದೀಪದಗಿರಿ ಒಡ್ಡುಗೆ ತೆರಳಿ ಸ್ವಾಮಿಗೆ ಬಿಲ್ವಾರ್ಚನೆ, ದೀವಟಿಗೆ ಹಾಗೂ ಧೂಪ ದೀಪದಾರತಿ ಸೇವೆ ನೆರವೇರಿಸಿ ಮಹಾಜ್ಯೋತಿ ಬೆಳಗಿಸಲಾಯಿತು. ಇದೇ ವೇಳೆ ಲಕ್ಷಾಂತರ ಭಕ್ತರು ಮಹಾಜ್ಯೋತಿಯ ದರ್ಶನ ಪಡೆದು, ಉಘೇ... ಮಾದಪ್ಪ, ಉಘೇ... ಉಘೇ... ಎಂದು ಜಯಘೋಷ ಮೊಳಗಿಸಿದರು. ಮಹದೇಶ್ವರ ಸ್ವಾಮಿಯ ಭಕ್ತಿ ಹಾಗೂ ಭಾವ ಗೀತೆಗಳನ್ನು ಹಾಡಿ ದೇವರ ಕೃಪೆಗೆ ಪಾತ್ರರಾದರು. ಮಹಾಜ್ಯೋತಿ ಉತ್ಸವದಲ್ಲಿ ಭಕ್ತರು, ಎಣ್ಣೆ ಎರೆದು ಹರಕೆ ತೀರಿಸಿದರು.

ಮಹಾಜ್ಯೋತಿ ಬಳಿಕ ದೇಗುಲಕ್ಕೆ ತೆರಳಿ ಸ್ವಾಮಿಗೆ ನೈವೇದ್ಯ ಅರ್ಪಿಸಿ, ಭಕ್ತರಿಗೆ ತೀರ್ಥ ಪ್ರಸಾದ ವಿತರಿಸಲಾಯಿತು. ನಂತರ ಕಾರ್ತಿಕ ತೆಪ್ಪೋತ್ಸವದೊಂದಿಗೆ ಜಾತ್ರೆಗೆ ತೆರೆ ಎಳೆಯಲಾಯಿತು. ಪೊಲೀಸ್ ಇಲಾಖೆಯಿಂದ ಕೆಎಸ್‌ಆರ್‌ಪಿ ತುಕಡಿ, ಜಿಲ್ಲೆಯ ವಿವಿಧೆಡೆಯಿಂದ ಪೊಲೀಸ್ ಅಧಿಕಾರಿಗಳು ಹಾಗೂ ಹೋಂಗಾರ್ಡ್ಸ್‌ಗಳನ್ನು ಭದ್ರತೆಗೆ ನಿಯೋಜಿಸಲಾಗಿತ್ತು. ಭಕ್ತರಿಗೆ ಅಲ್ಲಲ್ಲಿ ಕುಡಿಯುವ ನೀರು, ಶೌಚಗೃಹದ ವ್ಯವಸ್ಥೆ ಮಾಡಲಾಗಿತ್ತು. ಜೊತೆಗೆ ಭಕ್ತರಿಗೆ 4–5 ಲಕ್ಷ ಲಾಡು ಪ್ರಸಾದದ ವ್ಯವಸ್ಥೆ ಮಾಡಲಾಗಿತ್ತು.

ವಿಶೇಷ ದೀಪಾಲಂಕಾರ

ಮಾದಪ್ಪನ ದೇವಸ್ಥಾನದ ಮುಖ್ಯದ್ವಾರ ಸೇರಿದಂತೆ ದೊಡ್ಡ ಗೋಪುರ, ಆಲಂಬಾಡಿ ಬಸವೇಶ್ವರನಿಗೆ ದೊಡ್ಡ ಕೊಳದ ಸುತ್ತ ಹಾಗೂ ದೇವಾಲಯದ ವಿವಿಧೆಡೆ ವಿದ್ಯುತ್ ದೀಪಾಲಂಕಾರಗಳಿಂದ ಸಿಂಗರಿಸಲಾಗಿತ್ತು ಕಡೇ ಕಾರ್ತಿಕ ಮಾಸದ ಅಂಗವಾಗಿ ನಡೆದ ಪೂಜಾ ಕಾರ್ಯ ರಾತ್ರಿಯಿಂದ ಬೆಳಗಿನವರೆಗೆ ಜರುಗಿದವು. ಹರಕೆ ಹೊತ್ತ ಭಕ್ತರಿಂದ ಹುಲಿ ವಾಹನ, ಬಸವ ವಾಹನ ಉತ್ಸವ, ಬೆಳ್ಳಿ ಕಿರಿಟ ಮತ್ತು ಬಂಗಾರದ ರಥೋತ್ಸವ ಸೇರಿದಂತೆ ವಿವಿಧ ಉತ್ಸವಗಳು ನಡೆದವು. ನಂತರ ದೊಡ್ಡ ಕೊಳದಲ್ಲಿ ವಿದ್ಯುತ್ ದೀಪಾಲಂಕಾರಗಳಿಂದ ವಿಶೇಷವಾಗಿ ಸಿಂಗರಿಸಿದ್ದ ಪಲ್ಲಕ್ಕಿಯಲ್ಲಿ ಮಹದೇಶ್ವರಸ್ವಾಮಿಯ ಉತ್ಸವ ಮೂರ್ತಿಯನ್ನಿಟ್ಟು ಮೆರವಣಿಗೆ ಮಾಡಲಾಯಿತು.

ಚಾ.ನಗರ ಜಿಲ್ಲೆಯಲ್ಲಿ ರಕ್ತದ ಅವಶ್ಯಕತೆ ಹೆಚ್ಚಾಗಿದೆ



ಚಾಮರಾಜನಗರ, ಡಿ.11–ಜಿಲ್ಲೆಯಲ್ಲಿ ಆಸ್ಪತ್ರೆಗಳಿಗೆ ಅಪಘಾತ, ಶಸ್ತ್ರ ಚಿಕಿತ್ಸೆಗಳ ಸಂದರ್ಭದಲ್ಲಿ ರಕ್ತದ ಅವಶ್ಯಕತೆ ಹೆಚ್ಚಾಗಿದ್ದು, ದಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ರಕ್ತದಾನ ಮಾಡಬೇಕು ಎಂದು ಚಾಮರಾಜನಗರ ವೈದ್ಯಕೀಯ ವಿಜ್ಞಾನ ಸಂಸ್ಥೆಗಳ (ಸಿಮ್ಸ್) ಡೀನ್ ಮತ್ತು ನಿರ್ದೇಶಕ ಡಾ. ಮಂಜುನಾಥ್ ಮನವಿ ಮಾಡಿದರು.

ನಗರದ ಬಿ.ರಾಚಯ್ಯ ರಸ್ತೆಯ ಎಚ್‌ಡಿಎಫ್‌ಸಿ ಬ್ಯಾಂಕ್ ಸಭಾಂಗಣದಲ್ಲಿ ನಡೆದ ರಕ್ತದಾನ ಶಿಬಿರಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ರಕ್ತ ಹೀನತೆಯಿಂದ ಬಳಲುವವರು ಬಹಳಷ್ಟಿದ್ದಾರೆ. ಕನಿಷ್ಠ 10ರಷ್ಟು ಆದ್ರೂ ಹಿಮೋಗ್ಲೋಬಿನ್ ಇರಬೇಕು. ಆದರೆ. ಜಿಲ್ಲೆಯಲ್ಲಿ 4–5ರಷ್ಟಿರುವ ಜನರು ತುಂಬಾ ಇದ್ದಾರೆ. ಸಿಮ್ಸ್ ಮತ್ತು ಜಿಲ್ಲಾಸ್ಪತ್ರೆಗೆ ಬರುವ ರೋಗಿಗಳಲ್ಲಿ ಬಹುತೇಕರು ರಕ್ತಹೀನತೆಯಿಂದ ಬಳಲುವವರೇ ಆಗಿರುತ್ತಾರೆ ಎಂದರು.

ರಕ್ತಹೀನತೆಯಿಂದ ಬಳಲುವವರಿಗೆ ತಕ್ಷಣ ರಕ್ತ ಕೊಡಬೇಕು ಎಂದಾಗ ಅದು ಸಾಧ್ಯವಾಗುವುದಿಲ್ಲ. ರಕ್ತದಾನಕ್ಕೆ ಮುಂದೆ ಬರುವವರಿಗೆ ಹಲವಾರು ಪರೀಕ್ಷೆ ಮಾಡಬೇಕು. ಅದರ ವರದಿ ಬರಲು ಕನಿಷ್ಠ 24 ಗಂಟೆ ಬೇಕು. ಆದ್ದರಿಂದ ನಿಮಗೆ ಅವಕಾಶವಾದಾಗ ರಕ್ತದಾನ ಮಾಡಿ, ಅದನ್ನು ರಕ್ತನಿಧಿ ಕೇಂದ್ರದಲ್ಲಿ ಶೇಖರಿಸಿಟ್ಟುಕೊಳ್ಳಲು ಅನುಕೂಲವಾಗುತ್ತದೆ ಎಂದು ಹೇಳಿದರು.

ಜಿಲ್ಲಾಸ್ಪತ್ರೆ ಸ್ಥಾನಿಕ ವೈದ್ಯಾಧಿಕಾರಿ ಡಾ.ಮಹೇಶ್ ಮಾತನಾಡಿ, ದಾನ ಮಾಡಿದ್ದು ಇನ್ನೊಬ್ಬರಿಗೆ ತಿಳಿಯಬಾರದು ಎನ್ನುತ್ತಾರೆ. ಹಾಗೆ ರಕ್ತ ಪಡೆದವನಿಗೆ ಯಾರಿಂದ ದಾನ ಪಡೆದೆ ಎನ್ನುವುದು ತಿಳಿಯುವುದಿಲ್ಲ. ರಕ್ತದಾನ ಮೂಲಕ ಜನ್ಮದಿನ, ವಿವಾಹ ವಾರ್ಷಿಕೋತ್ಸವ ವನ್ನು ಆಚರಿಸಿಕೊಳ್ಳಬಹುದು. ರಕ್ತ ನೀಡುವುದರಿಂದ ಯಾವುದೇ ಪರಿಣಾಮ ಉಂಟಾಗುವುದಿಲ್ಲ ಎಂದರು.

ಎಚ್‌ಡಿಎಫ್‌ಸಿ ಬ್ಯಾಂಕ್ ವ್ಯವಸ್ಥಾಪಕ ಎಚ್.ಬಿ.ಚಿತ್ತರಂಜನ್ ಮಾತನಾಡಿ, ಪ್ರತಿವರ್ಷ ದೇಶದ ಎಲ್ಲಾ ಎಚ್‌ಡಿಎಫ್‌ಸಿ ಬ್ಯಾಂಕ್ ಶಾಖೆಗಳಲ್ಲೂ ಏಕ ಕಾಲಕ್ಕೆ ರಕ್ತದಾನ ಶಿಬಿರ ಆಯೋಜಿಸಲಾಗುತ್ತಿದೆ. 2013ರಲ್ಲಿ ಎಚ್‌ಡಿಎಫ್‌ಸಿಯಿಂದ ದೇಶದ ವಿವಿಧೆಡೆ 709 ಸ್ಥಳಗಳಲ್ಲಿ 61,902 ಜನ ಒಂದೇ ದಿನ ರಕ್ತದಾನ ಮಾಡಿದ್ದು ಗಿನ್ನೆಸ್ ದಾಖಲೆಯಾಗಿದೆ ಎಂದು ತಿಳಿಸಿದರು.

ಇದೇ ವೇಳೆ ಬ್ಯಾಂಕ್‌ನ ಸಿಬ್ಬಂದಿ ಸೇರಿದಂತೆ ಸಾರ್ವಜನಿಕರು ಸೇರಿ 73 ಜನ ರಕ್ತದಾನ ಮಾಡಿದರು. ಎಚ್‌ಡಿಎಫ್‌ಸಿ ಬ್ಯಾಂಕ್ ಕಾರ್ಯಾಚರಣೆ ವ್ಯವಸ್ಥಾಪಕ ಜನಾರ್ದನ್ ದಾಸ್, ಸಿಮ್ಸ್ ರಕ್ತನಿಧಿ ಕೇಂದ್ರದ ವೈದ್ಯ ಹಾಗೂ ಬ್ಯಾಂಕ್ ಸಿಬ್ಬಂದಿ ಹಾಜರಿದ್ದರು.

ಕಾಗಲವಾಡಿಯಲ್ಲಿ 101 ಹಾಲರವೆ ಪೂಜಾ ಮಹೋತ್ಸವ



ಚಾಮರಾಜನಗರ, ಡಿ.11– ತಾಲೂಕಿನ ಕಾಗಲವಾಡಿಯಲ್ಲಿ ಶ್ರೀ ಮಲೆಮಹದೇಶ್ವರ ಸ್ವಾಮಿಯ 15ನೇ ವಾರ್ಷಿಕೋತ್ಸವ ಹಾಗೂ ಕಡೇ ಕಾರ್ತಿಕ ಸೋಮವಾರ ಪ್ರಯುಕ್ತ 101 ಹಾಲರವೆ ಪೂಜಾ ಮಹೋತ್ಸವ ವಿಜೃಂಭಣೆಯಿಂದ ನಡೆಯಿತು. ಸೋಮವಾರ ಬೆಳಗ್ಗೆ 6.30ಕ್ಕೆ ಮಹದೇಶ್ವರ ದೇವಸ್ಥಾನದಿಂದ ಸತ್ತಿಗೆ, ಸೂರಿಪಾನಿ, ಮಂಟೇಸ್ವಾಮಿ ದೇವರ ವಿಗ್ರಹಗಳನ್ನು ಗ್ರಾಮದ ಸರ್ಕಾರಿ ಶಾಲಾವರಣಕ್ಕೆ ತೆಗೆದುಕೊಂಡು ಹೋಗಿ ಅಲ್ಲಿ ದೇವರ ವಿಗ್ರಹ, ಸತ್ತಿಗೆ, ಸೂರಿಪಾನಿಗಳನ್ನು ಶುಚಿಗೊಳಿಸಿ, ಪೂಜೆ ಸಲ್ಲಿಸಲಾಯಿತು. ನಂತರ ಅಲ್ಲಿಂದ ಗ್ರಾಮದ ಪ್ರಮುಖ ಬೀದಿಗಳಲ್ಲಿ ಕಂಸಾಳೆ, ಗೊರವರ ಕುಣಿತ, ವಾದ್ಯಗೋಷ್ಠಿಯೊಂದಿಗೆ 101 ಹಾಲರವೆ, ಪಂಜಿನ ಪೂಜಾ ಮಹೋತ್ಸವ ನಡೆಯಿತು.

ಬಳಿಕ ಮಹದೇಶ್ವರ ದೇವಸ್ಥಾನದಲ್ಲಿ ರುದ್ರಾಭಿಷೇಕ, ಬಿಲ್ವಾರ್ಚನೆ ಮಹಾಮಂಗಳಾರತಿ ನಡೆಯಿತು. ಮಹಾಪ್ರಸಾದ ವಿತರಿಸಲಾಯಿತು. ಇದೇ ವೇಳೆ ಗ್ರಾಮದ ಪ್ರಮುಖ ಸ್ಥಳಗಳಲ್ಲಿ ಹಸಿರು ತೋರಣ, ವಿದ್ಯುತ್ ದೀಪಾಲಂಕಾರ ಮಾಡಲಾಗಿತ್ತು. ಮೆರವಣಿಗೆಯ ರಸ್ತೆಯಲ್ಲಿ ಬಣ್ಣಬಣ್ಣದ ಚಿತ್ತಾರ ಬಿಟ್ಟು ಸ್ವಾಗತಿಸಲಾಯಿತು. ಮೆರವಣಿಗೆಯಲ್ಲಿ ಕಾಗಲವಾಡಿ ಗ್ರಾಮಸ್ಥರು, ನಾಡುದೇಶದ ಯುಜಮಾನರು, ದೇವರಗುಡ್ಡ ಮುಖಂಡರು ಹಾಗೂ ಅಕ್ಕಪಕ್ಕದ ಗ್ರಾಮಸ್ಥರು ಭಾಗವಹಿಸಿದ್ದರು.

ಇಂದು ಜನಸಂಪರ್ಕ ಸಭೆ

ಗುಂಡ್ಲುಪೇಟೆ, ಡಿ.11–ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮದ ಬೇಗೂರು ಮತ್ತು ಗುಂಡ್ಲುಪೇಟೆ ವಿದ್ಯುತ್ ವಿತರಣೆ ಉಪವಿಭಾಗದ ಬೇಗೂರಿನಲ್ಲಿ ಡಿ.12ರಂದು ಬೆಳಗ್ಗೆ 10.30ಕ್ಕೆ ಹಾಗೂ ಗುಂಡ್ಲುಪೇಟೆಯಲ್ಲಿ ಮಧ್ಯಾಹ್ನ 3ಕ್ಕೆ ಜನಸಂಪರ್ಕ ಸಭೆ ಏರ್ಪಡಿಸಲಾಗಿದೆ. ವಿದ್ಯುತ್ ಗ್ರಾಹಕರು ಕುಂದುಕೊರತೆ ಸಲ್ಲಿಸಬಹುದು ಎಂದು ಸೆಸ್ಕ್ ಸಹಾಯಕ ಕಾರ್ಯನಿವಾಹಕ ಇಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಇದ್ದಕ್ಕಿದ್ದಂತೆ ಹೊತ್ತಿ ಉರಿದ ಸ್ಕೂಟರ್

ಚಾಮರಾಜನಗರ, ಡಿ.11– ಮನೆಯ ಮುಂದೆ ನಿಲ್ಲಿಸಿದ್ದ ಎಲೆಕ್ಟ್ರಿಕ್ ಸ್ಕೂಟರ್ ಇದ್ದಕ್ಕಿದ್ದಂತೆ ಹೊತ್ತಿ ಉರಿದ ಘಟನೆ ನಗರದ ಮುಬಾರಕ್ ಮೊಹಲ್ಲಾದಲ್ಲಿ ಭಾನುವಾರ ತಡರಾತ್ರಿ ನಡೆದಿದೆ. ಮುಬಾರಕ್ ಮೊಹಲ್ಲಾದ ನಿವಾಸಿ ಅಸಾದುಲ್ಲಾ ಎಂಬುವರು ತಮ್ಮ ಮನೆಯ ಮುಂದೆ ನಿಲ್ಲಿಸಿದ್ದ ಎಲೆಕ್ಟ್ರಿಕ್ ಸ್ಕೂಟರ್‌ನಲ್ಲಿ ಇದ್ದಕ್ಕಿದ್ದಂತೆ ಬೆಂಕಿ ಕಾಣಿಸಿಕೊಂಡು ಸ್ಫೋಟಗೊಂಡಿದೆ. ನೋಡು ನೋಡುತ್ತಿದ್ದಂತೆ ಬೆಂಕಿಯ ಜ್ವಾಲೆ ಹೊತ್ತಿ ಉರಿದಿದೆ. ತಕ್ಷಣ ಸ್ಥಳೀಯರು ಬೆಂಕಿ ನಂದಿಸಿ, ಹೆಚ್ಚಿನ ಅನಾಹುತ ತಪ್ಪಿಸಿದರು. ಕೆಲ ತಿಂಗಳ ಹಿಂದೆ ತಾಲೂಕಿನ ಅರಕಲವಾಡಿ ಗ್ರಾಮದಲ್ಲಿ ಚಾರ್ಜ್ ಮಾಡಿ ನಿಲ್ಲಿಸಿದ್ದ ಇ–ಸ್ಕೂಟರ್‌ವೊಂದು ಹೊತ್ತಿ ಉರಿದು ಆತಂಕ ಸೃಷ್ಟಿಸಿತ್ತು.

ಕಾಂಗ್ರೆಸ್ ವಿರುದ್ಧ ಬಿಜೆಪಿ ಕಾರ್ಯಕರ್ತರ ಪ್ರತಿಭಟನೆ



ಚಾಮರಾಜನಗರ, ಡಿ.11–ಕಾಂಗ್ರೆಸ್ ಎಂದರೆ ಕರೆಪ್ಷನ್, ಇದಕ್ಕೆ ಜಾರ್ಖಂಡ್ ಕಾಂಗ್ರೆಸ್‌ನ ರಾಜ್ಯಸಭಾ ಸದಸ್ಯ ಧೀರಜ್ ಸಾಹು ಅವರಿಗೆ ಸೇರಿದ 300 ಕೋಟಿ ರೂ.ಗೂ ಹೆಚ್ಚು ಹಣವನ್ನು ಆದಾಯ ತೆರಿಗೆ ಅಧಿಕಾರಿಗಳು ವಶಪಡಿಸಿಕೊಂಡಿರುವುದೇ ಸಾಕ್ಷಿ. ಕಾಂಗ್ರೆಸ್ ಭ್ರಷ್ಟ ಪಕ್ಷ ಎಂದು ಆರೋಪಿಸಿ ಜಿಲ್ಲಾ ಬಿಜೆಪಿ ಕಾರ್ಯಕರ್ತರು ಸೋಮವಾರ ನಗರದಲ್ಲಿ ಪ್ರತಿಭಟನೆ ನಡೆಸಿದರು.

ನಗರದ ಚಾಮರಾಜೇಶ್ವರ ದೇವಸ್ಥಾನ ಮುಂಭಾಗದ ಜಮಾಯಿಸಿದ ಪ್ರತಿಭಟನಾಕಾರರು, ಕಾಂಗ್ರೆಸ್ ವಿರುದ್ಧ ಘೋಷಣೆ ಕೂಗಿದರು. ಕಾಂಗ್ರೆಸ್ ಹೆಸರಿನಲ್ಲೇ ಭ್ರಷ್ಟತೆ ತುಂಬಿದೆ, ಒಬ್ಬ ಕಾಂಗ್ರೆಸ್‌ನ ರಾಜ್ಯಸಭಾ ಸದಸ್ಯನ ಹತ್ತಿರ 300 ಕೋಟಿ ರೂ.ಗೂ ಹೆಚ್ಚು ಹಣ ಸಿಕ್ಕಿದೆ ಎಂದರೆ ಏನು? ಕಾಂಗ್ರೆಸ್‌ಗೆ ಭ್ರಷ್ಟಾಚಾರದ ಬಗ್ಗೆ ಮಾತನಾಡುವ ಯಾವುದೇ ನೈತಿಕತೆ ಇಲ್ಲ. ಇದು ಲೂಟಿ ಪಕ್ಷ ಎಂದು ಆರೋಪಿಸಿದರು.

ದೇಶದಲ್ಲಿ ಕರ್ನಾಟಕ ಸೇರಿದಂತೆ ಕಾಂಗ್ರೆಸ್ ಆಡಳಿತವಿರುವ ರಾಜ್ಯದಲ್ಲಿ ಭ್ರಷ್ಟಾಚಾರ ತುಂಬಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಐಟಿ ಅವರು ಕಾಂಗ್ರೆಸ್‌ನವರನ್ನು ಮಾತ್ರ ಟಾರ್ಗೆಟ್ ಮಾಡುತ್ತಿದ್ದಾರೆ. ಬಿಜೆಪಿ ನಾಯಕರ ಮೇಲೆ ದಾಳಿ ಮಾಡುತ್ತಿಲ್ಲ ಎನ್ನುತ್ತಿದ್ದಾರೆ. ಬಿಜೆಪಿ ನಾಯಕರು ಇಷ್ಟೊಂದು ಭ್ರಷ್ಟಾಚಾರ ನಡೆಸಿಲ್ಲ. ಕಳೆದ ಒಂಭತ್ತು ವರ್ಷಗಳಿಂದ ಕೇಂದ್ರದಲ್ಲಿ ಆಡಳಿತ ನಡೆಸುತ್ತಿರುವ ನರೇಂದ್ರ ಮೋದಿ ನೇತೃತ್ವದ ಸರ್ಕಾರದ ಒಬ್ಬ ಸಚಿವ, ಸಂಸದರ ಮೇಲೆ ಯಾವುದಾದರೂ ಭ್ರಷ್ಟಾಚಾರದ ಆರೋಪವಿದೆಯೇ ತಿಳಿಸಿ, ಜನರು ನಿಮ್ಮ ಸುಳ್ಳು ಗ್ಯಾರಂಟಿಗಳನ್ನು ನಂಬುವುದಿಲ್ಲ. ಮುಂದಿನ ಲೋಕಸಭಾ ಚುನಾವಣೆಯಲ್ಲಿ ನಿಮಗೆ ಮತ್ತಷ್ಟು ಪಾಠ ಕಲಿಸುತ್ತಾರೆ ಎಂದರು.

ಇದೇ ಧೀರಜ್ ಸಾಹು ನೋಟು ಅಮಾನ್ಯೀಕರಣವಾದಾಗ ಕಪ್ಪು ಹಣ ನಿರ್ಮೂಲನೆ ಆಗಿಲ್ಲ ಎಂಬ ನೋವು ಇದೆ. ಜನ ಕಪ್ಪು ಹಣ ಸಂಗ್ರಹಿಸುತ್ತಾರೆ ಎಂದಿದ್ದರು. ಹಿಂದೆ ಕಾಂಗ್ರೆಸ್ ಆಡಳಿತ ನಡೆಸಿದ ಎಲ್ಲಾ ರಾಜ್ಯಗಳಲ್ಲೂ ಭ್ರಷ್ಟಾಚಾರ ನಡೆದಿದ್ದು, ಯುಪಿಎ ಸರ್ಕಾರದ ಆಡಳಿತ ಅವಧಿಯಲ್ಲಿ ಲಕ್ಷಾಂತರ ಕೋಟಿ ಕೋಟಿ ರೂ. ಲೂಟಿ ನಡೆದಿದೆ. ಆದ್ದರಿಂದಲೇ ಈಗ ಇಂಡಿಯಾ ಎಂದು ಬದಲಾಯಿಸಿಕೊಂಡಿದ್ದಾರೆ ಎಂದು ವ್ಯಂಗ್ಯವಾಡಿದರು.

ಪ್ರತಿಭಟನೆಯಲ್ಲಿ ಮಾಜಿ ಶಾಸಕರಾದ ಎನ್.ಮಹೇಶ್, ಎಸ್.ಬಾಲರಾಜು, ಕೇಂದ್ರ ಪರಹಾರ ಸಮಿತಿ ಮಾಜಿ ಅಧ್ಯಕ್ಷ ಎಂ.ರಾಮಚಂದ್ರ, ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ನಾಗಶ್ರೀ ಪ್ರತಾಪ್, ಮಂಗಲ ಶಿವಕುಮಾರ್, ನಗರಸಭಾ ಸದಸ್ಯರಾದ ಮನೋಜ್ ಪಟೇಲ್, ಶಿವರಾಜ್, ಮುಖಂಡರಾದ ನೂರೊಂದುಶೆಟ್ಟಿ, ವೆಂಕಟೇಶ್, ಸುರೇಶ್ ನಾಯಕ, ಮಹದೇವ ನಾಯಕ, ದೊರೆಸ್ವಾಮಿ, ಕಲಾವತಿ, ಗೀತಾ, ರಾಜು, ಬಸವಣ್ಣ, ರಂಗಸ್ವಾಮಿ, ನಟರಾಜು, ಮೂಡ್ನಾಕೂಡು ಪ್ರಕಾಶ್, ವೇಣುಗೋಪಾಲ್, ಪ್ರಸನ್ನ, ಶಿವಣ್ಣ, ಸೂರ್ಯ, ಮಹದೇವಸ್ವಾಮಿ ಇತರರು ಭಾಗವಹಿಸಿದ್ದರು.

ಉಡುಪಿಯಲ್ಲಿ ಒಂದೇ ಕುಟುಂಬದ ನಾಲ್ವರ ಹತ್ಯೆ: ಆರೋಪಿ ಮೇಲೆ ಹಲ್ಲೆಗೆ ಯತ್ನಿಸಿದ 11 ಮಂದಿಗೆ ನೋಟಿಸ್

ಉಡುಪಿ: ಮೂವರು ಮಹಿಳೆಯರು ಸೇರಿದಂತೆ ಒಂದೇ ಕುಟುಂಬದ ನಾಲ್ವರನ್ನು ಹತ್ಯೆಗೈದ ಪ್ರಕರಣದಲ್ಲಿ ಆರೋಪಿ ಪ್ರವೀಣ್ ಚೌಗಲೆ ಮೇಲೆ ಹಲ್ಲೆಗೆ ಯತ್ನಿಸಿದ ಆರೋಪದ ಮೇಲೆ 11 ಮಂದಿಗೆ ಪೊಲೀಸರು ನೋಟಿಸ್ ಜಾರಿ ಮಾಡಿದ್ದಾರೆ.

ಆರೋಪಿ 37 ವರ್ಷದ ಪ್ರವೀಣ್ ಚೌಗಲೆ, ಹಸೀನಾ (46), ಅಫ್ನಾನ್ (23), ಐನಾಜ್ (21) ಮತ್ತು ಅಸೀಮ್ (12) ಎಂಬುವವರನ್ನು ಉಡುಪಿ ನಗರ ಸಮೀಪದ ನೆಜ್ಜಾರುವಿನ ಅವರ ನಿವಾಸದಲ್ಲಿ ಹತ್ಯೆ ಮಾಡಿದ್ದನು.

ನವೆಂಬರ್ 12 ರಂದು ಆಘಾತಕಾರಿ ಘಟನೆ ವರದಿಯಾಗಿದೆ. ಮಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣದ ಉದ್ಯೋಗಿಯಾಗಿರುವ ಆರೋಪಿ, ಸ್ನೇಹ, ಐನಾಜ್ ಮೇಲಿನ ಪ್ರೀತಿ ಮತ್ತು ಹಣಕಾಸಿನ ವಿಷಯಗಳಿಗೆ ಸಂಬಂಧಿಸಿದ ವಿಚಾರಗಳು ಈ ಘೋರ ಕೃತ್ಯ ಮಾಡಲು ಪ್ರೇರೇಪಿಸಿದೆ ಎಂದು ತಪ್ಪೊಪ್ಪಿಕೊಂಡಿದ್ದಾನೆ. ಆರೋಪಿಯನ್ನು ಪತ್ತೆ ಹಚ್ಚಿದ ನಂತರ ಪೊಲೀಸರು ನವೆಂಬರ್ 16 ರಂದು ಸಂತ್ರಸ್ತರ ನಿವಾಸಕ್ಕೆ ಕರೆತಂದಿದ್ದರು. ಈ ವೇಳೆ ಆಕ್ರೋಶಗೊಂಡ ಸ್ಥಳೀಯರು ಆತನ ಮೇಲೆ ಹಲ್ಲೆಗೆ ಯತ್ನಿಸಿದ್ದಾರೆ.

ಪೊಲೀಸರು ಬಹಳ ಕಷ್ಟಪಟ್ಟು ಪರಿಸ್ಥಿತಿಯನ್ನು ನಿಯಂತ್ರಿಸುವಲ್ಲಿ ಯಶಸ್ವಿಯಾದರು ಮತ್ತು ಉದ್ರಿಕ್ತ ಗುಂಪನ್ನು ಹತ್ತಿಕ್ಕಲು ಲಾಠಿ ಚಾರ್ಜ್ ಮಾಡಬೇಕಾಯಿತು. ಪೊಲೀಸರು ಈ ಬೆಳವಣಿಗೆಯನ್ನು ಗಂಭೀರವಾಗಿ ಪರಿಗಣಿಸಿದ್ದು, ಪೊಲೀಸ್ ಕಸ್ಟಡಿಯಲ್ಲಿದ್ದಾಗ ಆರೋಪಿ ಮೇಲೆ ಹಲ್ಲೆಗೆ ಯತ್ನಿಸಿದ 11 ಮಂದಿಗೆ ನೋಟಿಸ್ ಜಾರಿ ಮಾಡಿದ್ದಾರೆ.

ಈ ಭೀಕರ ಘಟನೆ ಕೋಮು ಸೂಕ್ಷ್ಮ ಕರಾವಳಿ ಪ್ರದೇಶದಲ್ಲಿ ಆತಂಕ ಮೂಡಿಸಿತ್ತು. ಹಿಂದೂ ವ್ಯಕ್ತಿಯಿಂದ ಮುಸ್ಲಿಂ ಕುಟುಂಬದವರ ಕೊಲೆ ಸಂಭ್ರಮಾಚರಣೆಗೆ ಮತ್ತು ಸಾಮಾಜಿಕ ಮಾಧ್ಯಮದಲ್ಲಿ ಆರೋಪಿಯನ್ನು ಪೊಲೀಸರು ಸಂತ್ರಸ್ತರ ನಿವಾಸಕ್ಕೆ ಕರೆತಂದಾಗ ಸ್ಥಳೀಯರು ಆತನ ಕೊಲೆ ಮಾಡುವ ಸುವರ್ಣಾವಕಾಶವನ್ನು ಕಳೆದುಕೊಂಡಿದ್ದಾರೆ ಎಂದು ಪೋಸ್ಟ್ ಮಾಡಿದ್ದಕ್ಕೆ ಸಂಬಂಧಿಸಿದಂತೆ ಪೊಲೀಸರು ಎಫ್ಐಆರ್‌ಗಳನ್ನು ದಾಖಲಿಸಿದ್ದಾರೆ.

ಕುಮಾರಸ್ವಾಮಿ ವೇಗ ನೋಡಿದರೆ ಬಿಜೆಪಿ ಅಧ್ಯಕ್ಷರಾದರೂ ಅಚ್ಚರಿ ಇಲ್ಲ

ವಿಜಯೇಂದ್ರಗೆ ಎಚ್ಚರಿಸಿದ ಕಾಂಗ್ರೆಸ್!

ಬೆಂಗಳೂರು, ಡಿ. 11)– ಜೆಡಿಎಸ್–ಎನ್‌ಡಿಎ ಜೊತೆ ಮೈತ್ರಿ ಮಾಡಿಕೊಂಡ ಬೆನ್ನಲ್ಲೇ ಇತ್ತ ಮಾಜಿ ಸಿಎಂ ಎಚ್.ಡಿ. ಕುಮಾರಸ್ವಾಮಿ ಅವರ ಧಾರ್ಮಿಕ ನಿಲುವುಗಳು ಸಹ ಬದಲಾಗಿವೆ. ಈ ಹಿನ್ನೆಲೆಯಲ್ಲಿ ಸಾಮಾಜಿಕ ಜಾಲತಾಣಗಳಲ್ಲಿ ಕುಮಾರಸ್ವಾಮಿ ಟ್ರೋಲ್ ಆಗುತ್ತಿದ್ದಾರೆ. ಇದೀಗ ಕಾಂಗ್ರೆಸ್ ಸಹ ಕುಮಾರಸ್ವಾಮಿ ಕಾಲೆಳೆದಿದ್ದು, ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಎಚ್.ಡಿ. ಕುಮಾರಸ್ವಾಮಿಯವರು ಕೋಮುವಾದದ ಕಡೆ ಹೋಗುತ್ತಿರುವ ವೇಗ ನೋಡಿದರೆ ಬಿಜೆಪಿ ಅಧ್ಯಕ್ಷರಾದರೂ ಅಚ್ಚರಿಯಾಗಬೇಕಿಲ್ಲ ಎಂದು ಲೇವಡಿ ಮಾಡಿದೆ.

ಈ ಬಗ್ಗೆ ಎಕ್ಸ್(ಟ್ವಿಟ್ಟರ್) ಪೋಸ್ಟ್ ಮಾಡಿರುವ ಕಾಂಗ್ರೆಸ್, ಕುಮಾರಸ್ವಾಮಿಯವರು ಬಿಜೆಪಿಯವರಿಗಿಂತ ಹೆಚ್ಚು ಆರ್‌ಎಸ್‌ಎಸ್ ಭಕ್ತಿ ಬೆಳೆಸಿಕೊಳ್ಳುತ್ತಿದ್ದಾರೆ. ಅವರು ಕೋಮುವಾದ ಕಡೆಗೆ ಹೋಗುತ್ತಿರುವ ವೇಗ ನೋಡಿದರೆ ಕಲವೇ ದಿನಗಳಲ್ಲಿ ಬಿಜೆಪಿಗಳನ್ನೇ ಓವರ್ ಟೇಕ್ ಮಾಡಿ ಬಿಜೆಪಿ ಅಧ್ಯಕ್ಷರಾದರೂ ಅಚ್ಚರಿ ಇಲ್ಲ ಎಂದು ಕುಮಾರಸ್ವಾಮಿ ಅವರ ಕಾಲೆಳೆದಿದೆ.

ಬಿಜೆಪಿಯವರ ಒಳಜಗಳ ಕುಮಾರಸ್ವಾಮಿಯವರಿಗೆ ವರದಾನವಾಗಲಿದೆ ಎಂದಿರುವ ಕಾಂಗ್ರೆಸ್, ಬಿಜೆಪಿ ಹೈಕಮಾಂಡ್ ಕುಮಾರಸ್ವಾಮಿಯವರನ್ನು ರಾಜ್ಯ ಬಿಜೆಪಿಗೆ ಪ್ರತಿಷ್ಠಾಪಿಸಿದರೂ ಅತಿಶಯೋಕ್ತಿ ಇಲ್ಲ ಎಂದು ಲೇವಡಿ ಮಾಡಿದೆ. ಅಲ್ಲದೇ ಎಚ್ಚರದಿಂದಿರಿ ಎಂದು ವಿರೋಧ ಪಕ್ಷದ ನಾಯಕ ಹಾಗೂ ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಅವರಿಗೆ ಹೇಳಿದೆ.

ಮೊನ್ನೇ ಅಷ್ಟೇ ಕುಮಾರಸ್ವಾಮಿ ಅವರು ದಕ್ಷಿಣ ಕನ್ನಡ ಜಿಲ್ಲೆಯ ಕಲ್ಲಡ್ಕದ ಆರ್‌ಎಸ್‌ಎಸ್ ಪ್ರಭಾಕರ್ ಭಟ್ ಅವರ ಶಿಕ್ಷಣ ಸಂಸ್ಥೆಯ ಕಾರ್ಯಕ್ರಮವೊಂದರಲ್ಲಿ ಪಾಲ್ಗೊಂಡಿದ್ದು, ಈ ವೇಳೆ ಇಲ್ಲಿಗೆ ಬಂದ ಬಳಿಕ ಮನಪರಿವರ್ತನೆಯಾಗಿದೆ ಎಂದು ಆರ್‌ಎಸ್‌ಎಸ್ ಹಾಗೂ ಪ್ರಭಾಕರ್ ಭಟ್ ಅವರನ್ನು ಹಾಡಿ ಹೊಗಳಿದ್ದರು. ದೇಶದ ಸಂಸ್ಕೃತಿ ಜತೆಗೆ ಗುರು ಹಿರಿಯರನ್ನು ಗೌರವಿಸುವ ಮಾನವೀಯ ಗುಣ, ರಾಷ್ಟ್ರಭಕ್ತಿಯನ್ನು ವಿದ್ಯಾರ್ಥಿಗಳಲ್ಲಿ ಮೈಗೂಡಿಸುವ ಇಂತಹ ಶಿಕ್ಷಣ ಸಂಸ್ಥೆಗಳ ಅಗತ್ಯವಿದೆ.

ಒಂದನೇ ಪುಟದಿಂದ

ಭರವಸೆಯ ಬೆಳಕು: ಪ್ರಧಾನಿ ಮೋದಿ

ಆಶ್ವಾಸನೆ ನೀಡುತ್ತೇವೆ ಎಂದರು. ಇದು ಭರವಸೆಯ ದಾರಿದೀಪವಾಗಿದೆ, ಉಜ್ವಲ ಭವಿಷ್ಯದ ಭರವಸೆ ಮತ್ತು ಬಲಿಷ್ಠ, ಅಖಂಡ ಭಾರತವನ್ನು ನಿರ್ಮಿಸುವ ನಮ್ಮ ಸಾಮೂಹಿಕ ಸಂಕಲ್ಪಕ್ಕೆ ಸಾಕ್ಷಿಯಾಗಿದೆ. NayaJammuKashmir ಎಂದು ಹ್ಯಾಶ್ ಟ್ಯಾಗ್ ನೀಡಿ ಪ್ರಧಾನಿ ಮೋದಿ ಟ್ವೀಟ್ ಮಾಡಿದ್ದಾರೆ.

ಆರ್ಟಿಕಲ್ 370 ರದ್ದತಿ ನಿರ್ಧಾರವನ್ನು ಎತ್ತಿಹಿಡಿದ ಭಾರತದ ಸುಪ್ರೀಂಕೋರ್ಟ್ ತೀರ್ಪನ್ನು ನಾನು ಸ್ವಾಗತಿಸುತ್ತೇನೆ.ಪ್ರಧಾನಿ ಮೋದಿಯವರು ಆರ್ಟಿಕಲ್ 370 ಅನ್ನು ರದ್ದುಗೊಳಿಸುವ ದೂರದೃಷ್ಟಿಯ ನಿರ್ಧಾರವನ್ನು ತೆಗೆದುಕೊಂಡರು. ಅಲ್ಲಿಂದೀಚೆಗೆ ಜಮ್ಮು–ಕಾಶ್ಮೀರದಲ್ಲಿ ಶಾಂತಿ ಮತ್ತು ಸಹಜತೆ ಮರಳಿದೆ. ಹಿಂಸಾಚಾರದಿಂದ ನಲುಗಿ ಹೋಗಿದ್ದ ಕಣಿವೆಯಲ್ಲಿ ಬೆಳವಣಿಗೆ ಮತ್ತು ಅಭಿವೃದ್ಧಿಯು ಮಾನವ ಜೀವನಕ್ಕೆ ಹೊಸ ಅರ್ಥವನ್ನು ತಂದಿದೆ. ಪ್ರವಾಸೋದ್ಯಮ ಮತ್ತು ಕೃಷಿ ಕ್ಷೇತ್ರಗಳಲ್ಲಿನ ಸಮೃದ್ಧಿಯು ಜಮ್ಮು, ಕಾಶ್ಮೀರ ಮತ್ತು ಲಡಾಖ್‌ನ ನಿವಾಸಿಗಳ ಆದಾಯ ಮಟ್ಟವನ್ನು ಹೆಚ್ಚಿಸಿದೆ. ಇಂದು, ಸುಪ್ರೀಂ ಕೋರ್ಟ್‌ನ ತೀರ್ಪು 370 ನೇ ವಿಧಿಯನ್ನು ರದ್ದುಗೊಳಿಸುವ ನಿರ್ಧಾರವು ಸಂಪೂರ್ಣವಾಗಿ ಸಾಂವಿಧಾನಿಕವಾಗಿದೆ ಎಂದು ಸಾಬೀತುಪಡಿಸಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ.

ಉಚ್ಛಾಟಿತ ನಾಯಕರ ಘೋಷಣೆ

ಗಾಂಧೀಜಿಯವರ ತತ್ವಗಳನ್ನು ಬಲಿ ಕೊಡುವುದು ಎಷ್ಟರ ಮಟ್ಟಿಗೆ ಸರಿ. ಈಗ ನಮ್ಮ ನೇತೃತ್ವದ ಪಕ್ಷವೇ ನಿಜವಾದ ಪಕ್ಷ. ಅವರು ಸಿದ್ಧಾಂತಗಳನ್ನು ಬಿಟ್ಟು ಹೋಗಿದ್ದಾರೆ, ಅವರಿಗೆ ಜಾತ್ಯತೀತ ಗುಣವೇ ಇಲ್ಲ, ಅದು ಇರುವುದು ನಮ್ಮಲ್ಲಿ ಮಾತ್ರ.

ಯಾರು ಏನೇ ಹೇಳಿದರೂ ನಾನು ಪಕ್ಷವನ್ನು ಬೇರೆಯವರಿಗೆ ಅಡ ಇಡುವುದಿಲ್ಲ ಮತ್ತು ಅದಕ್ಕೆ ಅವಕಾಶವನ್ನೂ ಕೊಡುವುದಿಲ್ಲ ಎಂದು ನಾಣು ಸ್ಪಷ್ಟಪಡಿಸಿದರು. ಮುಂಬರುವ ಲೋಕಸಭಾ ಚುನಾವಣೆಯಲ್ಲಿ 'ಇಂಡಿಯಾ' ಮೈತ್ರಿಕೂಟದೊಂದಿಗೆ ಚುನಾವಣಾ ಕಣಕ್ಕಿಳಿಯುವ ಇಂಗಿತ ವ್ಯಕ್ತಪಡಿಸಿದರು.

ಪಡಿತರ ಅಕ್ರಮ ತಡೆಗೆ ಎಲ್ಲಾ ಅಗತ್ಯ ಕ್ರಮ

ನ್ಯಾಯಾಲಯದಲ್ಲಿ ವಿಚಾರಣೆ ನಡೆಸಿ, ಮುಟ್ಟುಗೋಲು ದಾಸ್ತಾನನ್ನು ವಿಲೇ ಮಾಡಿ, ವಿಲೇ ಪಡಿಸಿದ ಪಡಿತರ ಮೊತ್ತವನ್ನು ಸರ್ಕಾರಕ್ಕೆ ಜಮೆ ಮಾಡಲಾಗುತ್ತಿದೆ.

ಇಂತಹ ಪ್ರಕರಣಗಳಲ್ಲಿ ತಪ್ಪಿತಸ್ಥರೆಂದು ಕಂಡುಬಂದ – ವ್ಯಕ್ತಿಗಳ ವಿರುದ್ಧ ಹಾಗೂ ಈ ಘಟನೆಗಳಿಗೆ ಕಾರಣಕರ್ತರಾದ ಅಧಿಕಾರಿ, ನೌಕರರ ವಿರುದ್ಧ ಸಂಬಂಧಪಟ್ಟ ಪೊಲೀಸ್ ಠಾಣೆಯಲ್ಲಿ ಎಫ್.ಐ.ಆರ್ ದಾಖಲಿಸಿ, ಆಪಾದನೆಗಳ ಬಗ್ಗೆ ದೋಷಾರೋಪಣೆ ಪಟ್ಟಿಯನ್ನು ಸಂಬಂಧಿಸಿದ ನ್ಯಾಯಾಲಯಗಳಲ್ಲಿ ದಾಖಲಿಸಲಾಗುತ್ತಿದ್ದು, ಕಾನೂನು ರೀತ್ಯ ಕ್ರಮ ಜರುಗಿಸಲಾಗುತ್ತಿದೆ ಎಂದರು.

ರಾಜ್ಯದಲ್ಲಿ ಏಪ್ರಿಲ್–2023 ರಿಂದ ನವೆಂಬರ್–2023 ರ ಅಂತ್ಯದವರೆಗೂ ಅಗತ್ಯ ವಸ್ತುಗಳ ಕಾಯ್ದೆ 1955 ರಡಿ ಪಡಿತರ ಆಹಾರಧಾನ್ಯ ಕಳ್ಳಸಾಗಾಣಿಕೆಯ ಒಟ್ಟು 251 ಪ್ರಕರಣಗಳನ್ನು ಪತ್ತೆ ಹಚ್ಚಲಾಗಿದೆ. ಈ ಪೈಕಿ 232 ಪ್ರಕರಣಗಳಲ್ಲಿ ಎಫ್.ಐ.ಆರ್ ದಾಖಲಿಸಿದ್ದು, ಒಟ್ಟು 31,32,08,215 ಮೌಲ್ಯದ ವಸ್ತುಗಳನ್ನು ವಶಪಡಿಸಿಕೊಂಡು, ಈ ಪ್ರಕರಣಗಳಲ್ಲಿ ಒಟ್ಟು 385 ಆರೋಪಿಗಳನ್ನು ಬಂಧಿಸಿ, 167 ವಾಹನಗಳನ್ನು ವಶಪಡಿಸಿಕೊಳ್ಳಲಾಗಿರುತ್ತದೆ ಎಂದರು.

ಕಂಬಿಯ ಬ್ಯಾರಿಕೇಡ್ ನಿರ್ಮಾಣ

ಕಿತ್ತು ಸ್ವಚ್ಛಗೊಳಿಸಿ ಅರಣ್ಯಕ್ಕೆ ಪೂರಕವಾದ ಹುಲ್ಲು ಬೆಳೆಯಲು ಅನುವು ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಕಾಡಾನೆಗಳು ಅರಣ್ಯ ಪ್ರದೇಶದಿಂದ ಹೊರಗೆ ಬಾರದಂತೆ ತಡೆಗಟ್ಟಲು ಅರಣ್ಯದಂಚಿನಲ್ಲಿ ಸೌರಶಕ್ತಿ ಬೇಲಿ ನಿರ್ಮಾಣ, ನಿರ್ವಹಣೆ, ಆನೆ ತಡೆ ಕಂದಕ ನಿರ್ಮಾಣ, ನಿರ್ವಹಣೆ ಮಾಡಲಾಗಿದೆ. ಹಾಗೆಯೇ ರೈಲ್ವೆ ಹಳಿಗಳನ್ನು ಉಪಯೋಗಿಸಿ ಬ್ಯಾರಿಕೇಡ್ ನಿರ್ಮಿಸುವ ಕಾಮಗಾರಿಯನ್ನು ಕೈಗೊಳ್ಳಲಾಗಿದೆ. ಕಾಡಾನೆ ಹಾವಳಿ ತುರ್ತು ನಿರ್ವಹಣೆಗಾಗಿ ಕ್ಷಿಪ್ರ ಕಾರ್ಯಪಡೆ ತಂಡಗಳನ್ನು ರಚಿಸಿ ನಿರ್ವಹಿಸಲಾಗುತ್ತಿದೆ. ಕಾಡಾನೆ ಹಿಮ್ಮೆಟ್ಟಿಸುವ ತಂಡಗಳನ್ನು ರಚಿಸಿ ಕಾಡಾನೆಗಳನ್ನು ಕಾಡಿಗೆ ಹಿಮ್ಮೆಟ್ಟಿಸುವ ಕಾರ್ಯ ಕೈಗೊಳ್ಳಲಾಗುತ್ತಿದೆ. ನಿಸ್ತಂತು ಜಾಲದ ಮೂಲಕ ಮಾಹಿತಿ ಸಂವಹನ ಮಾಡಲಾಗುತ್ತಿದೆ. ಕಾಡಾನೆಗಳ ಮಾಹಿತಿಯನ್ನು ಸಂಗ್ರಹಿಸಲು 24 ಗಂಟೆ ಕಾರ್ಯನಿರ್ವಹಿಸುವ ಮಾಹಿತಿ ಕೇಂದ್ರ ಸ್ಥಾಪಿಸಲಾಗಿದೆ.

ಕಾಡಾನೆ ಗುಂಪಿನಲ್ಲಿದ್ದ ವಯಸ್ಕ ಹೆಣ್ಣಾನೆಯನ್ನು ಗುರುತಿಸಿ ಅದಕ್ಕೆ ರೇಡಿಯೋ ಕಾಲರ್ ಅಳವಡಿಸಿ ಆನೆಗಳ ಚಲನ–ವಲನಗಳ ಬಗ್ಗೆ ಎಸ್.ಎಂ.ಎಸ್ ಹಾಗೂ ವಾಟ್ಸಾಪ್ ಮೂಲಕ ಜನರಿಗೆ ಮಾಹಿತಿಯನ್ನು ನೀಡಿ ಮಾನವ ಪ್ರಾಣಹಾನಿ ಹಾಗೂ ಮಾನವ ಹಾನಿ ತಪ್ಪಿಸಲು ಕ್ರಮ ವಹಿಸಲಾಗುತ್ತಿದೆ. ಸಾರ್ವಜನಿಕರಿಗೆ ಉಪಟಳ ನೀಡುತ್ತಿರುವ ಪುಂಡಾನೆಗಳನ್ನು ಗುರುತಿಸಿ, ಸೆರೆ ಹಿಡಿದು ಆಗ್ಗಿಂದಾಗ್ಗೆ ಸ್ಥಳಾಂತರಿಸಲಾಗುತ್ತಿದೆ. ಕಾಡಾನೆಗಳ ಹಾವಳಿ ಹೆಚ್ಚಾಗಿರುವ ಪ್ರದೇಶದಲ್ಲಿ ಜನಸಂಪರ್ಕ ಸಭೆಯನ್ನು ಕರೆದು ಜನರಲ್ಲಿ ಅರಿವು ಮೂಡಿಸಲಾಗುತ್ತಿದೆ ಎಂದರು.

ಕೂಚ್ ಬೆಹಾರ್ ಟ್ರೋಫಿ ರಾಷ್ಟ್ರೀಯ ಕ್ರಿಕೆಟ್ ಪಂದ್ಯಾವಳಿ

ಕರ್ನಾಟಕದ ವಿರುದ್ಧ ಉತ್ತರ ಪ್ರದೇಶ ಗೆಲುವು

● ಎರಡನೇ ಇನ್ನಿಂಗ್ಸ್‌ನಲ್ಲಿ 90 ರನ್‌ಗೆ ಕರ್ನಾಟಕ ಆಲೌಟ್ ● ಶುಭಂ ಮಿಶ್ರಾಗೆ 7 ವಿಕೆಟ್

ಮೈಸೂರು, ಡಿ.11(ಎಂಟಿವೈ)– ಮಾನಸ ಗಂಗೋತ್ರಿಯ ಶ್ರೀಕಂಠದತ್ತ ನರಸಿಂಹರಾಜ ಒಡೆಯರ್ ಕ್ರೀಡಾಂಗಣದಲ್ಲಿ ನಡೆದ ಕೂಚ್ ಬೆಹಾರ್ ಟ್ರೋಫಿ ರಾಷ್ಟ್ರೀಯ ಕ್ರಿಕೆಟ್ ಪಂದ್ಯಾವಳಿಯ ಕರ್ನಾಟಕ–ಉತ್ತರ ಪ್ರದೇಶದ ನಡುವಿನ ಪಂದ್ಯದಲ್ಲಿ ಉತ್ತರ ಪ್ರದೇಶದ ಬೌಲರ್ ಶುಭಂ ಮಿಶ್ರಾ ಮಾರಕ ದಾಳಿಗೆ ಆತಿಥೇಯ ಕರ್ನಾಟಕ ತತ್ತರಿಸಿ ಎರಡನೇ ಇನ್ನಿಂಗ್ಸ್‌ನಲ್ಲಿ ಕೇವಲ 90 ರನ್‌ಗೆ ಆಲೌಟ್ ಆಗಿ, ಉತ್ತರ ಪ್ರದೇಶದ ವಿರುದ್ಧ 92ರನ್‌ಗಳ ಸೋಲನುಭವಿಸಿದೆ.



ಬಿಸಿಸಿಐ ಆಯೋಜಿಸಿರುವ 19 ವರ್ಷದೊಳಗಿನವರ ಕೂಚ್ ಬೆಹಾರ್ ಟ್ರೋಫಿ ರಾಷ್ಟ್ರೀಯ ಕ್ರಿಕೆಟ್‌ಪಂದ್ಯಾವಳಿಯ ಕರ್ನಾಟಕ ಹಾಗೂ ಉತ್ತರ ಪ್ರದೇಶದ ವಿರುದ್ಧ ನಾಲ್ಕು ದಿನಗಳ ಹಿಂದೆ ಆರಂಭವಾದ ಪಂದ್ಯ ಅಂತಿಮ ದಿನ ಚಹಾ ವಿರಾಮಕ್ಕೂ ಮುನ್ನವೇ ಅಂತ್ಯಗೊಂಡಿತು. ಉತ್ತರ ಪ್ರದೇಶ ನೀಡಿದ 183 ರನ್ ಗೆಲುವಿನ ಗುರಿ ಬೆನ್ನತ್ತಿದ ಕರ್ನಾಟಕ ಮೂರನೇ ದಿನ (ಭಾನುವಾರ) ಅಂತ್ಯಕ್ಕೆ 13 ಓವರ್‌ನಲ್ಲಿ ಪ್ರಮುಖ 5 ವಿಕೆಟ್ ಕಳೆದುಕೊಂಡು 33 ರನ್‌ಗಳಿಸಿ, ಸಂಕಷ್ಟದ ಸ್ಥಿತಿಗೆ ಸಿಲುಕಿತ್ತು. ಪಂದ್ಯದ ಕೊನೆ ದಿನವಾದ ಇಂದು ಆಟ ಮುಂದುವರೆಸಿದ ಕರ್ನಾಟಕದ ಆಟಗಾರರು ಉತ್ತರ ಪ್ರದೇಶದ ಬೌಲರ್‌ಗಳನ್ನು ಎದುರಿಸುವಲ್ಲಿ ವಿಫಲರಾದರು. ಮೂರನೇ ದಿನದಲ್ಲಿ ನಾಲ್ಕು ವಿಕೆಟ್ ಕಬಳಿಸಿದ್ದ ಶುಭಂ ಮಿಶ್ರಾ ಇಂದು ಮುಂದುವರೆಸಿದ ಮಾರಕ ದಾಳಿಯಿಂದ ಮತ್ತೆ 3 ವಿಕೆಟ್ ಉರುಳಿಸಿ, ಕರ್ನಾಟಕವನ್ನು ಅಲ್ಪಮೊತ್ತಕ್ಕೆ ಕಟ್ಟಿಹಾಕಿ ಉತ್ತರ ಪ್ರದೇಶಕ್ಕೆ ಭಾರಿ ಅಂತರದ ಜಯ ತಂದಿತ್ತು.

ಇಂದು ಬೆಳಗ್ಗೆ ಎರಡನೇ ಇನ್ನಿಂಗ್ಸ್ ಮುಂದುವರೆಸಿದ ಕರ್ನಾಟಕ, ಕ್ರೀಸ್ ಕಾಯ್ದುಕೊಂಡಿದ್ದ ಸಮಿತ್ ದ್ರಾವಿಡ್ ಹಾಗೂ 7ನೇ ಕ್ರಮಾಂಕದ ಆಟಗಾರ ಧ್ರುವ್ ಪ್ರಭಾಕರ್ ಕರ್ನಾಟಕ ತಂಡಕ್ಕೆ ಚೇತರಿಕೆ ತಂದುಕೊಡುವ ಪ್ರಯತ್ನ ಮಾಡಿದರು. ಈ ವೇಳೆ ತಂಡದ ಮೊತ್ತ 28.2 ಓವರ್‌ನಲ್ಲಿ 71 ರನ್ ಆಗಿದ್ದಾಗ 58 ಎಸೆತದಲ್ಲಿ 5 ಬೌಂಡರಿಯೊಂದಿಗೆ 28 ರನ್ ಹೊಡೆದಿದ್ದ ಸಮಿತ್ ದ್ರಾವಿಡ್, ಆರುಶ್ ಗೋಲ್ ಬೌಲಿಂಗ್‌ನಲ್ಲಿ ಯಶು ಪ್ರಧಾನ್‌ಗೆ ಕ್ಯಾಚ್ ನೀಡಿ ಔಟಾದರು. ಮೊದಲ ಇನ್ನಿಂಗ್ಸ್‌ನಲ್ಲಿ ಅರ್ಧ ಶತಕ ಬಾರಿಸಿದ್ದ ಹಾರ್ದಿಕ್ ರಾಜ್ ಇಂದು 4 ರನ್ ಗಳಿಸಿದ್ದಾಗ ರನೌಟ್ ಆದರು. ಆಗ ತಂಡದ ಸ್ಕೋರ್ 33.5 ಓವರ್‌ನಲ್ಲಿ 7 ವಿಕೆಟ್‌ನಷ್ಟಕ್ಕೆ 78 ರನ್ ಆಗಿತ್ತು. ಬಳಿಕ 21 ರನ್‌ಗಳಿಸಿದ್ದ ಧ್ರುವ್ ಪ್ರಭಾಕರ್ ಶುಭಂ ಮಿಶ್ರಗೆ ಎಲ್‌ಬಿಡಬ್ಲ್ಯು ಬಲೆಗೆ ಬಿದ್ದರು. ಇದಾದ ನಂತರ ನಾಯಕ ಧೀರಜ್‌ಗೌಡ 6 ರನ್ ಗಳಿಸಿದ್ದಾಗ ಕ್ಲೀನ್ ಬೌಲ್ಡ್ ಆಗಿ ಶುಭಂ ಮಿಶ್ರಗೆ 6 ವಿಕೆಟ್ ಒಪ್ಪಿಸಿ ಹೊರ ನಡೆದರೆ, ಮರು ಎಸೆತದಲ್ಲೇ ನಿಶ್ಚಿತ್ ಎನ್ ಪೈ ಖಾತೆ ತೆರೆಯದೇ ಶುಭಂ ಮಿಶ್ರಾ ಬೌಲಿಂಗ್‌ನಲ್ಲಿ ಎಲ್‌ಬಿಡಬ್ಲ್ಯು ಬಲೆಗೆ ಬಿದ್ದು ನಿರ್ಗಮಿಸುವ ಮೂಲಕ ಕರ್ನಾಟಕ ಆಲೌಟ್ ಆದರೆ, ಬೌಲರ್ ಎಸ್. ಇಶಾನ್ ಅಜೇಯ 1 ರನ್‌ಗಳಿಸಿ ಹೊರ ನಡೆದರು. ಅಂತಿಮವಾಗಿ ಕರ್ನಾಟಕ ಎರಡನೇ ಇನ್ನಿಂಗ್ಸ್‌ನಲ್ಲಿ 38.5 ಓವರ್‌ನಲ್ಲಿ 90 ರನ್‌ಗೆ ಆಲೌಟ್ ಆಗಿ, ಉತ್ತರ ಪ್ರದೇಶದ ವಿರುದ್ಧ 92 ರನ್‌ಗಳ ಸೋಲನುಭವಿಸಿತು.

ಉತ್ತರ ಪ್ರದೇಶದ ಪರ ಬೌಲರ್ ಶುಭಂ ಮಿಶ್ರ 15.5 ಓವರ್‌ನಲ್ಲಿ 37 ರನ್ ನೀಡಿ 7 ವಿಕೆಟ್ ಕಬಳಿಸಿದರೆ, ಯಾಸೀರ್ ಖಾನ್ 6 ಓವರ್‌ನಲ್ಲಿ 17 ರನ್ ನೀಡಿ 1 ವಿಕೆಟ್ ಪಡೆದರು. ಹಿತೇಶ್ ಕುಮಾರ್ 4 ಓವರ್‌ನಲ್ಲಿ 18 ರನ್ ನೀಡಿದರು. ಆದಿತ್ಯ ಕುಮಾರ್ 8 ಓವರ್‌ನಲ್ಲಿ 8 ರನ್, ಆರುಷ್ ಗೋಲ್ 3 ಓವರ್‌ನಲ್ಲಿ 6 ರನ್ ನೀಡಿ 1 ವಿಕೆಟ್ ಪಡೆದರು.

ಈ ಪಂದ್ಯದಲ್ಲಿ ಪ್ರಣವ್ ಎಂ.ಜೋಶಿ ಹಾಗೂ ಅನಿಶ್ ಸಹಸ್ರಬುಧೆ ಫೀಲ್ಡ್ ಅಂಪೈರ್ ಆಗಿ ಕಾರ್ಯನಿರ್ವಹಿಸಿದರೆ, ರೆಫ್ರಿ ಆಗಿ ಶಕ್ತಿ ಸಿಂಗ್ ಕಾರ್ಯನಿರ್ವಹಿಸಿದರು.

ಸಂಕ್ಷಿಪ್ತ ಸ್ಕೋರ್

ಉತ್ತರ ಪ್ರದೇಶ ಮೊದಲ ಇನ್ನಿಂಗ್ಸ್ 77 ಓವರ್‌ನಲ್ಲಿ 239ಕ್ಕೆ ಆಲೌಟ್, ಎರಡನೇ ಇನ್ನಿಂಗ್ಸ್‌ನಲ್ಲಿ 97.3 ಓವರ್‌ನಲ್ಲಿ 177ಕ್ಕೆ ಆಲ್ ಔಟ್ (ಗೆಲುವಿನ ಗುರಿ 183 ರನ್).

ಕರ್ನಾಟಕ ಮೊದಲ ಇನ್ನಿಂಗ್ಸ್‌ನಲ್ಲಿ 78 ಓವರ್‌ನಲ್ಲಿ 234 ರನ್‌ಗೆ ಆಲೌಟ್, 2ನೇ ಇನ್ನಿಂಗ್ಸ್ 38.5 ಓವರ್‌ನಲ್ಲಿ 90 ರನ್‌ಗೆ ಆಲೌಟ್.

ಫಲಿತಾಂಶ: ಉತ್ತರ ಪ್ರದೇಶಕ್ಕೆ ಕರ್ನಾಟಕದ ವಿರುದ್ಧ 92 ರನ್‌ಗಳ ಗೆಲುವು

ಡಾ.ಬಾಬು ಜಗಜೀವನರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಎಂಡಿ ವರ್ಗಾವಣೆ ಮಾಡದಂತೆ ಆಗ್ರಹ



ಮೈಸೂರು, ಡಿ.11(ಜಿಎ)–ಡಾ.ಬಾಬು ಜಗಜೀವನರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದಲ್ಲಿ ಕೆಲಸ ಮಾಡುತ್ತಿರುವ ಫೇಸ್–1 ತಂಡವನ್ನು ರದ್ದುಪಡಿಸಬೇಕು ಹಾಗೂ ಇಲ್ಲಿ ಪ್ರಾಮಾಣಿಕವಾಗಿ ತಮ್ಮೆಲ್ಲ ಬೇಡಿಕೆಗಳಿಗೆ ಸ್ಪಂದಿಸುತ್ತಿರುವ ನಿಗಮದ ವ್ಯವಸ್ಥಾಪಕ ನಿರ್ದೇಶಕರಾದ ಕೆ.ಎಂ.ವಸುಂಧರ ಅವರನ್ನು ವರ್ಗಾವಣೆ ಮಾಡಬಾರದು ಎಂದು ಕರ್ನಾಟಕ ರಾಜ್ಯ ಡಾ.ಬಿ.ಆರ್. ಅಂಬೇಡ್ಕರ್ ಯುವ ಬ್ರಿಗೇಡ್ ಸರ್ಕಾರವನ್ನು ಒತ್ತಾಯಿಸಿತು.

ನಗರದ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ನಿಗಮದ ಮಾಜಿ ನಿರ್ದೇಶಕರಾದ ಕೆ. ರಾಮು ಮಾತನಾಡಿ, ಹಿಂದೆ ನಿಗಮದೊಡನೆ ಒಡಂಬಡಿಕೆ ಮಾಡಿಕೊಂಡಿರುವ ಫೇಸ್–1 ಟೀಂ ಎಂಬ ಸಂಸ್ಥೆಯ ಉದ್ದೇಶ ಚರ್ಮ ಕುಶಲ ಕಾರ್ಮಿಕರ ಹೊಟ್ಟೆಯ ಮೇಲೆ ಹೊಡೆಯುವುದೇ ಆಗಿದೆ. ಹೀಗಾಗಿ ಇದರ ಜೊತೆಗಿನ ಒಡಂಬಡಿಕೆ ರದ್ದುಪಡಿಸಬೇಕೆಂದು ಕೋರಿದರು.

ನಿಗಮಕ್ಕೆ ಕೆ.ಎಂ ವಸುಂಧರ ವ್ಯವಸ್ಥಾಪಕ ನಿರ್ದೇಶಕರಾಗಿ ನೇಮಕಗೊಂಡ ಮೂರ್‍ನಾಲ್ಕು ತಿಂಗಳಿನಲ್ಲಿಯೇ ಚರ್ಮ ಕುಶಲ ಕಾರ್ಮಿಕರ ಮತ್ತು ಪಾದರಕ್ಷೆಗಳ ಖರೀದಿ ಆದೇಶ ಪತ್ರ ನೀಡುವುದಕ್ಕೆ ಸಂಬಂಧಿಸಿದಂತೆ ಕರೆದಿದ್ದ ಸಭೆಯಲ್ಲಿ ನಿರಂತರವಾಗಿ ಪ್ರತಿ ತಿಂಗಳು ಖರೀದಿ ಆದೇಶ ಪತ್ರ ನೀಡಿ, ಸರಬರಾಜು ಮಾಡಿದ ಪಾದರಕ್ಷೆಗಳಿಗೆ ಮೂರು ದಿನಗಳ ಒಳಗೆ ಹಣ ಬಿಡುಗಡೆಗೊಳಿಸಿ, ಖರೀದಿ ದರ ಹೆಚ್ಚಳ ಮಾಡಿದರು. ನಿಗಮವು ಪಾದರಕ್ಷೆಗಳ ಮೇಲೆ ಶೇ. 100 ಲಾಭವಿರಿಸುವುದೇ ಮೊದಲಾದ ಬೇಡಿಕೆ ಈಡೇರಿಕೆಗೆ ಸಮ್ಮತಿಸಿದ್ದಾರೆ. ಹೀಗಾಗಿ ಕುಶಲಕರ್ಮಿಗಳ ಸಮಸ್ಯೆ ಬಗೆಹರಿದಿದೆ. ಆದರೆ ಕೆಲ ಪಟ್ಟಭದ್ರ ಹಿತಾಸಕ್ತಿಗಳು ಇವರನ್ನು ವಿರೋಧಿಸುತ್ತಿರುವುದು ಸರಿಯಲ್ಲ. ಅವರು ಉತ್ತಮ ಕೆಲಸವನ್ನು ಮಾಡುತ್ತಿದ್ದು, ಅವರ ಅವಧಿ ಪೂರ್ಣಗೊಳ್ಳುವವರೆಗೂ ಬೇರೆ ಸ್ಥಳಕ್ಕೆ ವರ್ಗಾವಣೆ ಮಾಡಬಾರದು ಎಂದು ಸಮಾಜ ಕಲ್ಯಾಣ ಇಲಾಖೆ ಸಚಿವ ಹೆಚ್.ಸಿ.ಮಹದೇವಪ್ಪ ಅವರಲ್ಲಿ ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಅನಿಲ್‌ಕುಮಾರ್, ಕುಮಾರ, ಸ್ವಾಮಿ, ಶ್ಯಾಂಸುಂದರ್ ಮೊದಲಾದವರು ಉಪಸ್ಥಿತರಿದ್ದರು.

ಮ್ಯಾನ್‌ಹೋಲ್‌ನಲ್ಲಿ ಮನುಷ್ಯರನ್ನು ಇಳಿಸಿ ಸ್ವಚ್ಛಗೊಳಿಸುವವರ ತಡೆ ಸಮಿತಿ ಸದಸ್ಯರಿಗೆ ಸನ್ಮಾನ



ಮೈಸೂರು, ಡಿ.11(ಜಿಎ)–ಮ್ಯಾನ್‌ಹೋಲ್‌ನಲ್ಲಿ (ಗಟಾರಗಳಲ್ಲಿ) ಮನುಷ್ಯರನ್ನು ಇಳಿಸಿ ಸ್ವಚ್ಛಗೊಳಿಸುವುದನ್ನು ತಡೆಗಟ್ಟಲು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ರಚನೆ ಮಾಡಿರುವ ವಿಚಕ್ಷಣಾ ಸಮಿತಿಗೆ ಆಯ್ಕೆಯಾದವರನ್ನು ಜಿಲ್ಲಾ ಪತ್ರಕರ್ತರ ಭವನದಲ್ಲಿ ರಾಜ್ಯ ನಗರಪಾಲಿಕೆ, ನಗರಸಭೆ, ಪುರಸಭೆಗಳ ಪೌರಕಾರ್ಮಿಕರ ಸಂಘದ ವತಿಯಿಂದ ನಡೆದ ಕಾರ್ಯಕ್ರಮದಲ್ಲಿ ಸಫಾಯಿ ಕರ್ಮಚಾರಿಗಳ ಆಯೋಗದ ಮಾಜಿ ಅಧ್ಯಕ್ಷ ನಾರಾಯಣ್ ಅಭಿನಂದಿಸಿದರು.

ನಂತರ ಮಾತನಾಡಿದ ಅವರು, ನೇಮಕಗೊಂಡ ನಗರದ ಅಶೋಕಪುರಂನ ಎನ್.ಪಿ. ಗುರುದತ್, ಇಲವಾಲ ಹೋಬಳಿ ಕೂರ್ಗಳ್ಳಿಯ ಎಸ್. ಮಂಜುನಾಥ್, ನಂಜನಗೂಡು ತಾಲೂಕಿನ ಚೆಲುವರಾಜು, ಕೆ.ಆರ್. ನಗರ ಐದನೇ ವಾರ್ಡ್‌ನ ಆರ್. ದೀಪ ಆದಿ ದ್ರಾವಿಡ ಸಮುದಾಯಕ್ಕೆ ಸೇರಿದವರಾಗಿದ್ದಾರೆ. ಇವರು ಅಂತಹ ಕೃತ್ಯಗಳ ಬಗ್ಗೆ ನಿಗಾ ಇರಿಸಲಿದ್ದಾರೆ ಎಂದರು.

ರಾಜ್ಯಾದ್ಯಂತ ಕ್ಲಿಷ್ಟಕರ ಹಾಗೂ ಅಪಾಯಕಾರಿ ಕೆಲಸ ನಿರ್ವಹಿಸುತ್ತಿರುವ ಕಾಯಂ, ನೇರ ಪಾವತಿ ಗುತ್ತಿಗೆ, ಹೊರಗುತ್ತಿಗೆ ಪೌರಕಾರ್ಮಿಕರು ಹಾಗೂ ಇತರೆ ಸ್ವಚ್ಛತಾ ಸಿಬ್ಬಂದಿಗೆ ಮಾಸಿಕ ಎರಡು ಸಾವಿರ ರೂ. ಸಂಕಷ್ಟ ಭತ್ಯೆ ನೀಡಬೇಕೆಂಬ ಬೇಡಿಕೆಗೆ ಸರ್ಕಾರ ಸ್ಪಂದಿಸಬೇಕೆಂದು ಮನವಿ ಮಾಡಿದರು.ಈ ವೇಳೆ ಪದಾಧಿಕಾರಿಗಳಾದ ಎಸ್.ಎಂ. ಪಳನಿಸ್ವಾಮಿ, ಆರ್ಟಿಸ್ಟ್ ನಾಗರಾಜು, ಆರ್.ಶಿವಣ್ಣ, ಆರ್.ದಾಸು, ಶಂಕರ್ ಉಪಸ್ಥಿತರಿದ್ದರು.

ಶಬ್ದ, ಚಿತ್ರಗಳ ಸಮ್ಮಿಲನವಾದಾಗ ಮಾತ್ರ ಕಾವ್ಯಗಳು ಮನುಷ್ಯನ ಅಂತರಂಗ ತಲುಪಲು ಸಾಧ್ಯ

ಹಿರಿಯ ಸಾಹಿತಿ ಸಿಪಿಕೆ ಅಭಿಮತ



ಮೈಸೂರು,ಡಿ.11(ಎಂಟಿವೈ)– ಕಾವ್ಯಗಳು ಮನುಷ್ಯನ ಅಂತರಂಗವನ್ನು ತಲುಪಬೇಕಾದರೆ ಕಾವ್ಯಗಳಲ್ಲಿ ಶಬ್ದ, ಚಿತ್ರಗಳ ಸಮ್ಮಿಲನವಾಗಿರಬೇಕು ಎಂದು ಸಾಹಿತಿ ಸಿ.ಪಿ. ಕೃಷ್ಣಕುಮಾರ್(ಸಿಪಿಕೆ) ಅಭಿಪ್ರಾಯಪಟ್ಟಿದ್ದಾರೆ.

ಮೈಸೂರಿನ ಕಾವಾ ಕಾಲೇಜು ಆವರಣದಲ್ಲಿ ಸೋಮವಾರ ಎಸ್.ಎನ್. ಸಿದ್ದರಾಮ್ ಅವರ ಅಷ್ಟಪದಿಗಳ ಅನಾವರಣ ಆಂತರ್ಯ ಪುಸ್ತಕ ಬಿಡುಗಡೆಗೊಳಿಸಿ ಮಾತನಾಡಿದ ಅವರು, ಮನುಷ್ಯನ ಅಂತರಂಗವನ್ನು ತಲುಪುವ ವಿಶೇಷ ಕಾವ್ಯಗಳನ್ನು ಸೃಷ್ಟಿಸುವ ಅಗತ್ಯವಿದೆ. ಕಾವ್ಯಗಳಲ್ಲಿ ಶಬ್ದ ಮತ್ತು ಚಿತ್ರಗಳ ಸಮ್ಮಿಲನವಾದಾಗ ಮಾತ್ರ ಅದು ವಿಶೇಷ ಕಾವ್ಯವಾಗಿ ರೂಪುಗೊಳ್ಳಲಿದೆ. ಯಾವಾಗಲೂ ವಿಶೇಷ ಕಾವ್ಯಗಳೆನಿಸಿಕೊಂಡ ಸಾಹಿತ್ಯಗಳು ಜನರ ಮನ ಮುಟ್ಟುತ್ತದೆ. ಎಸ್.ಎನ್.ಸಿದ್ದರಾಮ್ ಅವರ ಆಂತರ್ಯ ಪುಸ್ತಕವು ಕಾವ್ಯ, ಚಿತ್ರಕಲೆ ಸಂಯುಕ್ತ ಸಂಪುಟವಾಗಿದೆ. ಇದರಲ್ಲಿ ಶಬ್ದ, ಚಿತ್ರಕ ಶಕ್ತಿ ಮೇಳೈಸಿವೆ. ಅಲ್ಲದೆ, ಕವಿತೆಗೆ ರೇಖಾ ಚಿತ್ರಗಳ ಪೂರಕ ಬಳಕೆಯ ಹಿಂದೆ ಸಿದ್ದರಾಮ್ ಅವರ ಲೋಕಾನುಭವ ಪ್ರಯೋಗ ಮಾಡಲಾಗಿದೆ. ಸುಡುಗಾಡು ಸಿದ್ದ ಕಾವ್ಯದ ಅಂಕಿತ ವಿಲಕ್ಷಣವಿದ್ದರೂ ಮಾರ್ಮಿಕ ಅರ್ಥವನ್ನು ಹೊಂದಿದೆ. ಇದರಲ್ಲಿ ಚಿತ್ರಕಲೆ, ಕಾವ್ಯ ಕಲೆಯ ಉತ್ಸವ ಹೊರಟಿದ್ದಂತೆ ಕಂಡು ಬಂದಿದ್ದು, ಕವಿಯ ಶಬ್ದ ಕಾವ್ಯಕ್ಕೆ ಅರ್ಥ ನೀಡಲು ಚಿತ್ರಕಲೆ ಸ್ಪರ್ಧೆಗೆ ಬಿದ್ದಂತೆ ಭಾಸವಾಗುತ್ತಿದೆ ಎಂದು ತಿಳಿಸಿದರು.

ಈ ಪುಸ್ತಕದಲ್ಲಿ ವ್ಯಂಗ್ಯಚಿತ್ರಗಳು ಹಾಗೂ ಆಂತರ್ಯ ಎಂಬ ಶೀರ್ಷಿಕೆ ಅರ್ಥಪೂರ್ಣವಾಗಿವೆ. ಅಂತರಂಗವನ್ನು ಸ್ಪರ್ಶಿಸುವುದೇ ಚಿತ್ರಕಲೆಯ ವಿಶೇಷ ಗುಣ. ಅಲ್ಲದೇ ಬಹಿರಂಗಕ್ಕಿಂತ ಅಂತರಂಗ ಸತ್ಯವೇ ಮುಖ್ಯವಾಗಿದ್ದು ಲೇಖಕರು ಇದನ್ನು ಅಕ್ಷರಶಃ ತೋರಿಸಿದ ಗಾರುಡಿಗರಾಗಿದ್ದಾರೆ. ರೇಖಾಚಿತ್ರ ಒರಟಾಗಿದ್ದರೂ ಗ್ರಾಮೀಣ ವಾತಾವರಣವನ್ನು ಯಶಸ್ವಿಯಾಗಿ ಕಟ್ಟಿಕೊಟ್ಟಿದೆ. ಸಮಯ ಸೂಚಕವಾಗಿ ಇಲ್ಲಿ ಬಳಕೆಯಾಗಿರುವ ಕೋಳಿ ಚಿತ್ರ ಅರ್ಥಪೂರ್ಣವಾಗಿದೆ. ಕವಿ ಕುಕ್ಕುಟ ಕಲೆಯನ್ನು ಕವಿ ಇಲ್ಲಿ ಮೆರೆದಿದ್ದಾರೆ. ಸಂಕೀರ್ಣ ಸ್ವರೂಪದ ಕವಿತೆ, ಚಿತ್ರಗಳಿಗೆ ಆಧ್ಯಾತ್ಮಿಕ ರೂಪವಿದೆ ಎಂದು ಅಭಿಪ್ರಾಯಪಟ್ಟರು.


ಕಾರ್ಯಕ್ರಮದಲ್ಲಿ ಕಾವಾ ಡೀನ್ ಎ. ದೇವರಾಜು, ಕಲಾವಿದ ಡಾ.ಡಿ.ಎ. ಉಪಾಧ್ಯ ಕಲಾವಿದ ಬಾದಲ್ ನಂಜುಂಡಸ್ವಾಮಿ, ಶಿಲ್ಪಿ ಎ.ಆರ್. ಮಂಜುನಾಥ್, ಸ್ಪಂದನ ಸಾಂಸ್ಕೃತಿಕ ಪರಿಷತ್ ಸಂಸ್ಥಾಪಕ ಟಿ.ಸತೀಶ್ ಜವರೇಗೌಡ ಹಾಗೂ ಇತರು ಉಪಸ್ಥಿತರಿದ್ದರು.

ಡಿ.17ಕ್ಕೆ ಕರ್ನಾಟಕ ಸಾಂಸ್ಕೃತಿಕ, ಸಾಹಿತ್ಯ ಪರಿಷತ್‌ನಿಂದ ಫ್ಯಾಷನ್ ಶೋ



ಮೈಸೂರು, ಡಿ.11(ಜಿಎ)–ಮೈಸೂರಿನ ಚಾಮರಾಜ ಮೊಹಲ್ಲಾದ ನಾರಾಯಣಶಾಸ್ತ್ರಿ ರಸ್ತೆಯಲ್ಲಿರುವ ಕರ್ನಾಟಕ ಸಾಂಸ್ಕೃತಿಕ ಹಾಗೂ ಸಾಹಿತ್ಯ ಪರಿಷತ್ ವತಿಯಿಂದ ಡಿ.17 ರ ಮಧ್ಯಾಹ್ನ 3ರಿಂದ ರಾತ್ರಿ 8ರವರೆಗೆ ನಗರದ ಪುರಭವನದಲ್ಲಿ ಕನ್ನಡಕ್ಕೆ ಪ್ರಾಮುಖ್ಯತೆ ನೀಡುವ ಫ್ಯಾಷನ್ ಶೋ ಸ್ಪರ್ಧೆಯನ್ನು ಮಹಿಳೆಯರು ಹಾಗೂ ಮಕ್ಕಳಿಗಾಗಿ ಆಯೋಜಿಸಲಾಗಿದೆ ಎಂದು ತೀರ್ಪುಗಾರರು ಮತ್ತು ಕಾರ್ಯದರ್ಶಿಗಳಾದ ಪಿ.ಎನ್. ಶೋಭರಾಣಿ ತಿಳಿಸಿದರು.

ನಗರದ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮೈಸೂರಿನ ಹಿರಿಮೆ, ಗರಿಮೆ ಎತ್ತಿ ಹಿಡಿಯುವ ಉದ್ದೇಶ ಈ ಸ್ಪರ್ಧೆಯದ್ದಾಗಿದೆ. ಪಾಶ್ಚಿಮಾತ್ಯ ಉಡುಗೆ ಹಾಗೂ ಅಶ್ಲೀಲತೆಗೆ ನಿರ್ಬಂಧ ಹೇರಲಾಗಿದೆ. ಕೇವಲ ಕನ್ನಡವನ್ನೇ ಬಳಸಬೇಕೆಂದು ಸ್ಪರ್ಧಿಗಳಿಗೆ ತಿಳಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂ.ಸ.8867688676 ಸಂಪರ್ಕಿಸಿ ಎಂದರು. ಸುದ್ದಿಗೋಷ್ಠಿಯಲ್ಲಿ ಎಂ.ಕೆ. ಪೂರ್ಣಿಮಾ, ಮೌಲ್ಯ ಜಯಕುಮಾರ್, ಹೇಮಲತಾ, ಮೈಥಿಲಿ ಹಾಜರಿದ್ದರು.



ಕೆಪಿಸಿಸಿ ಕಾರ್ಮಿಕ ವಿಭಾಗದ ಅಧ್ಯಕ್ಷ ಕೆ. ಪುಟ್ಟಸ್ವಾಮಿಗೌಡ ಅವರನ್ನು ಮೈಸೂರು ಜಿಲ್ಲಾ ಕಾಂಗ್ರೆಸ್ ಕಾರ್ಯದರ್ಶಿ ಬೆಲವತ್ತ ಶಿವಕುಮಾರ್, ಗ್ರಾಪಂ ಸದಸ್ಯ ಬ್ಯಾತಹಳ್ಳಿ ಶಿವಣ್ಣ, ಕಾಂಗ್ರೆಸ್ ಮುಖಂಡ ಶಿವಣ್ಣೇಗೌಡ, ಕೆಪಿಸಿಸಿ ಕಾರ್ಮಿಕ ವಿಭಾಗದ ಉಪಾಧ್ಯಕ್ಷೆ ಹರಿಣಿಗೌಡ ಅವರು ಸನ್ಮಾನಿಸಿದರು.

ಪ್ರತಿಮೆ ಸ್ಥಾಪನೆ ವಿಚಾರದಲ್ಲಿ ವಿವಾದ ಸೃಷ್ಟಿ ಸರಿಯಲ್ಲ

ಮಾಜಿ ಮೇಯರ್ ಬಿ.ಎಲ್.ಭೈರಪ್ಪ



ಮೈಸೂರು, ಡಿ.11(ಜಿಎ)–ಮೈಸೂರಿನ ಗನ್‌ಹೌಸ್ ಬಳಿಯ ಜಗದ್ಗುರು ಶ್ರೀ ಶಿವರಾತ್ರಿ ರಾಜೇಂದ್ರ ವೃತ್ತದಲ್ಲಿ ರಾಜೇಂದ್ರ ಶ್ರೀಗಳ ಪ್ರತಿಮೆ ಸ್ಥಾಪಿಸಿರುವುದು ಸರಿ ಇದೆ. ಹೀಗಾಗಿ ಈಗ ಪ್ರತಿಮೆ ಸ್ಥಾಪನೆ ಬಗ್ಗೆ ವಿವಾದ ಉಂಟು ಮಾಡುವುದು ಸರಿಯಲ್ಲ ಎಂದು ಮಾಜಿ ಮೇಯರ್ ಬಿ.ಎಲ್. ಭೈರಪ್ಪ ಅಭಿಪ್ರಾಯಪಟ್ಟರು.

ನಗರದ ಪತ್ರಕರ್ತರ ಭವನದಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ವೃತ್ತಕ್ಕೆ 1988 ರ ಅಕ್ಟೋಬರ್ 19 ರಂದು ಪಾಲಿಕೆ ವತಿಯಿಂದ ಜಗದ್ಗುರು ಶ್ರೀ ಶಿವರಾತ್ರಿ ರಾಜೇಂದ್ರ ವೃತ್ತ ಎಂದು ನಾಮಕರಣ ಮಾಡಿ, ನಾಮಫಲಕ ಹಾಕಲಾಗಿತ್ತು. ನಂತರ 2017ರ ಸಂದರ್ಭದಲ್ಲಿ ಮಠದ ಭಕ್ತಾದಿಗಳ ಬೇಡಿಕೆಯಂತೆ ಈ ವೃತ್ತದಲ್ಲಿ ರಾಜೇಂದ್ರ ಶ್ರೀಗಳ ಪ್ರತಿಮೆ ಸ್ಥಾಪನೆಗೆ ಪಾಲಿಕೆಗೆ ಪ್ರಸ್ತಾವನೆ ಸಲ್ಲಿಸಲಾಯಿತು. ಅದಕ್ಕೆ ಪಾಲಿಕೆಯೂ ಅನುಮೋದನೆ ನೀಡಿತ್ತು. ಈ ಎಲ್ಲಾ ಪ್ರಕ್ರಿಯೆಗಳು ನಡೆಯುವಾಗ ನಾನು ಮೇಯರ್ ಆಗಿದ್ದೆ ಎಂದರು.

ಪಾಲಿಕೆಯಿಂದ ಅನುಮೋದನೆ ದೊರೆತ ನಂತರ 2017ರಲ್ಲಿ ಪ್ರತಿಮೆ ಕೂಡ ಸಿದ್ಧಗೊಂಡಿತು. ಪ್ರತಿಷ್ಠಾಪನೆ ಸಂದರ್ಭದಲ್ಲಿ ಈ ವಿಚಾರವಾಗಿ ವೃತ್ತದಲ್ಲಿ ರಾಜೇಂದ್ರ ಶ್ರೀಗಳ ಪ್ರತಿಮೆ ಸ್ಥಾಪನೆಯಿಂದ ಸಾರ್ವಜನಿಕ ಸ್ಥಳ ಒತ್ತುವರಿ ಆಗಲಿದೆ ಎಂಬ ವಿಷಯ ಕುರಿತಂತೆ ಹೈಕೋರ್ಟ್ ಆದೇಶದ ಮೇರೆಗೆ ಮುಡಾ, ಪೊಲೀಸ್ ಇಲಾಖೆ, ಪಾಲಿಕೆ, ಜಿಲ್ಲಾಧಿಕಾರಿ, ಅರಣ್ಯ ಇಲಾಖೆಯನ್ನು ಒಳಗೊಂಡ ಸಮಿತಿ ಸಭೆ ಸೇರಿತ್ತು. ಬಳಿಕ, ಡಾ. ಶಿವರಾತ್ರಿ ರಾಜೇಂದ್ರ ಸ್ವಾಮೀಜಿ ವೃತ್ತ ಆರು ರಸ್ತೆ ಮಾರ್ಗಗಳನ್ನು ಸಂಪರ್ಕಿಸುವ ಕೇಂದ್ರದಲ್ಲಿದೆ, ಅದು ಸುಪ್ರೀಂಕೋರ್ಟ್ ಆದೇಶದ ನಿಕಟಪೂರ್ವದಲ್ಲಿಯೂ ಅಸ್ತಿತ್ವದಲ್ಲಿತ್ತು. ಇದು ನೂತನವಾಗಿ ನಿರ್ಮಾಣ ಮಾಡುವ ವೃತ್ತವಾಗಿಲ್ಲ. ಹೀಗಾಗಿ ರಾಜೇಂದ್ರ ಶ್ರೀಗಳ ಪ್ರತಿಮೆ ಸ್ಥಾಪನೆಯಿಂದ ಸಾರ್ವಜನಿಕ ಸ್ಥಳ ಒತ್ತುವರಿ ಆಗುವುದಿಲ್ಲ ಎಂದು ಸಹಾ ಅಭಿಪ್ರಾಯ ವ್ಯಕ್ತಪಡಿಸಿದೆ ಎಂದರು.

ಹಾಗಾಗಿ ಇಲ್ಲಿ ರಾಜೇಂದ್ರ ಶ್ರೀಗಳ ಪ್ರತಿಮೆ ಸ್ಥಾಪನೆ ಮಾಡಿರುವುದರಿಂದ ಸುಪ್ರೀಂ ಕೋರ್ಟ್ ಆದೇಶ ಉಲ್ಲಂಘನೆ ಆಗುವುದಿಲ್ಲ. ಪ್ರತಿಮೆ ನಿರ್ಮಾಣದ ವಿಚಾರವಾಗಿ ಸುತ್ತೂರು ಶ್ರೀ ಶಿವರಾತ್ರಿ ದೇಶೀಕೇಂದ್ರ ಸ್ವಾಮೀಜಿಗಳಿಗೆ ರಾಜವಂಶಸ್ಥೆ ಪ್ರಮೋದಾದೇವಿ ಒಡೆಯರ್ ಬರೆದಿದ್ದ ಪತ್ರಕ್ಕೆ ಪ್ರತಿ ಉತ್ತರವಾಗಿ 2022ರ ಜುಲೈ 28 ರಂದು ಸ್ವಾಮೀಜಿ ಅವರು ಪತ್ರ ಬರೆದು ಈ ಎಲ್ಲಾ ಅಂಶಗಳನ್ನು ತಿಳಿಸಿ, ಜಯಚಾಮರಾಜೇಂದ್ರ ಒಡೆಯರ್ ಮತ್ತು ರಾಜೇಂದ್ರ ಶ್ರೀಗಳಿಗೂ ಇದ್ದ ನಿಕಟ ಸಂಬಂಧದ ಬಗ್ಗೆ ತಮಗೆ ತಿಳಿದಿದೆ, ಈ ಪ್ರತಿಮೆ ಅವರಿಬ್ಬರ ಆತ್ಮೀಯ ಬಾಂಧವ್ಯವನ್ನು ಗಟ್ಟಿಗೊಳಿಸುವ ಸಂಕೇತವೂ ಆಗಿದೆ. ಈ ಅಂಶಗಳನ್ನು ಗಮನಿಸಿ ಪ್ರತಿಮೆ ಅನಾವರಣ ನಿಮ್ಮ ಉಪಸ್ಥಿತಿಯಲ್ಲಿಯೇ ನೆರವೇರಲು ಸಮ್ಮತಿಸುತ್ತೀರೆಂಬ ಭರವಸೆಯಿದೆ ಎಂದು ತಿಳಿಸಿದ್ದಾರೆ ಎಂದು ವಿವರಿಸಿದರು.

ಶ್ರೀಕಂಠದತ್ತ ನರಸಿಂಹರಾಜ ಒಡೆಯರ್ ಅವರ ಪ್ರತಿಮೆಯನ್ನು ಮಹಾರಾಣಿ ಕಾಲೇಜು ವೃತ್ತ, ಇಲ್ಲವೇ ಪಾಲಿಕೆ ಬಳಿಯ ವೃತ್ತದಲ್ಲಿ ಸ್ಥಾಪಿಸಬಹುದಾಗಿದೆ ಎಂದು ಸಲಹೆ ನೀಡಿದರು. ಸುದ್ದಿಗೋಷ್ಠಿಯಲ್ಲಿ ವಿವಿಧ ಸಂಸ್ಥೆ ಪದಾಧಿಕಾರಿಗಳಾದ ಸಿದ್ದಲಿಂಗಪ್ಪ, ವೆಂಕಟೇಶ್, ವಾಸು, ಲೋಕೇಶ್ ಉಪಸ್ಥಿತರಿದ್ದರು.

ಉತ್ತರ ಕರ್ನಾಟಕ ಎದುರಿಸುತ್ತಿರುವ ಸಮಸ್ಯೆಗಳ ಚರ್ಚೆಗೆ ಸಿದ್ಧ



ಬೆಳಗಾವಿ: ವಿಧಾನ 'ಸಭೆಯಲ್ಲಿ ಉತ್ತರ ಕರ್ನಾಟಕ ಎದುರಿಸುತ್ತಿರುವ ಸಮಸ್ಯೆಗಳ ಚರ್ಚೆಗೆ ಸಂಪೂರ್ಣ ಬೆಂಬಲ ನೀಡುವುದಾಗಿ ಕರ್ನಾಟಕ ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಸೋಮವಾರ ಹೇಳಿದ್ದಾರೆ.

ಬೆಳಗಾವಿ ವಿಮಾನ ನಿಲ್ದಾಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 'ಆಡಳಿತ ಅಥವಾ ವಿರೋಧ ಪಕ್ಷದ ಯಾವುದೇ ಸದಸ್ಯರು ಎತ್ತುವ ಸಮಸ್ಯೆಗಳಿಗೆ ಸ್ಪಂದಿಸಲು ಸರ್ಕಾರ ಸಿದ್ಧವಿದೆ. ಉತ್ತರ ಕರ್ನಾಟಕದ ಬರ ಪರಿಸ್ಥಿತಿಗೆ ಸಂಬಂಧಿಸಿದ ಚರ್ಚೆಗೆ ನಮ್ಮ ಸಂಪೂರ್ಣ ಬೆಂಬಲವಿದೆ. ಉತ್ತರ ಕರ್ನಾಟಕ, ಕಿತ್ತೂರು ಕರ್ನಾಟಕ, ಹಳೇ ಮೈಸೂರು ಪ್ರದೇಶ ಇವೆಲ್ಲವೂ ಕರ್ನಾಟಕದ ಅವಿಭಾಜ್ಯ ಅಂಗಗಳಾಗಿದ್ದು, ಅವುಗಳ ಸಮಸ್ಯೆಗಳನ್ನು ಚರ್ಚಿಸಲು ನಾವು ಸದಾ ಮುಕ್ತರಾಗಿದ್ದೇವೆ ಎಂದರು.

ಬೆಳಗಾವಿ ಜಿಲ್ಲೆ ವಿಭಜನೆಗೆ ಸಂಬಂಧಿಸಿದಂತೆ ಕರೆ ನೀಡಲಾಗಿರುವ ಬಂದ್ ಕುರಿತು ಕೇಳಿದ ಪ್ರಶ್ನೆಗೆ ಉತ್ತರಿಸಿದ ಡಿಸಿಎಂ, ಸದನದಲ್ಲಿ ಆ ಪ್ರಸ್ತಾಪ ಮುಂದಿಟ್ಟರೆ ಮಾತ್ರ ಅದರ ಬಗ್ಗೆ ಖಂಡಿತವಾಗಿಯೂ ಯೋಚಿಸುತ್ತೇವೆ ಎಂದರು. ಸಾವರ್ಕರ್ ಭಾವಚಿತ್ರವನ್ನು ಸದನದಿಂದ ತೆಗೆದುಹಾಕುವ ಬಗ್ಗೆ ಅವರ ನಿಲುವಿನ ಬಗ್ಗೆ ಕೇಳಿದ ಪ್ರಶ್ನೆಗೆ, "ಎರಡೂ ಸದನಗಳ ಒಳಗೆ ಇದ್ದದ್ದು ಸ್ಪೀಕರ್ ಮತ್ತು ಅಧ್ಯಕ್ಷರಿಗೆ ಸೇರಿದ್ದು" ಎಂದು ಹೇಳಿದರು.

ಬಿಜೆಪಿ ಸದನದ ಸಮಯವನ್ನು ವ್ಯರ್ಥ ಮಾಡುತ್ತಿದೆಯೇ ಎಂಬ ಸುದ್ದಿಗಾರರ ಪ್ರಶ್ನೆಗೆ ಉತ್ತರಿಸಿದ ಡಿಸಿಎಂ, ಇತರ ಪಕ್ಷಗಳ ಬಗ್ಗೆ ಮಾತನಾಡಲು ನಾನು ಒಪ್ಪುವುದಿಲ್ಲ ಎಂದು ತಿಳಿಸಿದರು.

ಶೇಕ್ ಅಬ್ದುಲ್ಲಾ ಖುಷಿಪಡಿಸಲು 370ನೇ ವಿಧಿ ಜಾರಿಗೆ ತಂದಿದ್ದನ್ನು ಮೋದಿ ಧೈರ್ಯದಿಂದ ರದ್ದು ಮಾಡಿದ್ರು

ಬೆಳಗಾವಿ: ಶೇಕ್ ಅಬ್ದುಲ್ಲಾ ಖುಷಿ



ಪಡಿಸಲು ನೆಹರೂ ಅವರು ಆರ್ಟಿಕಲ್ 370 ಜಾರಿಗೆ ತಂದಿದ್ದರು. ಆದರೆ ಮೋದಿ ಅವರು ಧೈರ್ಯದಿಂದ ಆರ್ಟಿಕಲ್ 370 (Article 370) ರದ್ದು ಮಾಡಿದ್ದಾರೆ ಎಂದು ಬಿಜೆಪಿ ಶಾಸಕ ಬಸನಗೌಡ ಯತ್ನಾಳ್ ಹೇಳಿದ್ದಾರೆ.

ಬೆಳಗಾವಿ ಸುವರ್ಣ ಸೌಧದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಪಾಕಿಸ್ತಾನ ಏಜೆಂಟ್ ನಂತೆ ವರ್ತಿಸುತ್ತಿದ್ದ ಲೋಕಸಭೆ ಸದಸ್ಯನೊಬ್ಬ 370 ರದ್ದು ಪ್ರಶ್ನಿಸಿ ಸುಪ್ರಿಂಕೋರ್ಟಿಗೆ ಹೋಗಿದ್ದ. ಇಂದು ಸುಪ್ರಿಂಕೋರ್ಟ್ ಮೋದಿ ಸರ್ಕಾರ ರದ್ದು ಮಾಡಿದ್ದನ್ನ ಮಾನ್ಯ ಮಾಡಿದೆ. ಶ್ಯಾಮ್ ಪ್ರಸಾದ್ ಮುಖರ್ಜಿ ಕನಸು–ನನಸು ಮಾಡಿದ್ದಕ್ಕೆ ಮೋದಿಯವರಿಗೆ ಧನ್ಯವಾದ ಅರ್ಪಿಸುತ್ತೇನೆ ಎಂದರು.

ಜನ ಸಂಘ ಹುಟ್ಟಿದ್ದು ಆರ್ಟಿಕಲ್ 370 ತೆಗೆದುಹಾಕಬೇಕೆಂದು. ಯಾಕೆಂದರೆ ಒಂದು ದೇಶದಲ್ಲಿ ಎರಡು ಧ್ವಜ ಎರಡು ಸಂವಿಧಾನ ಇರಬಾರದು ಎಂದು ಹೇಳಿದರು.

ಇದೇ ವೇಳೆ ಮುಸ್ಲಿಂ ಸ್ಪೀಕರ್ ಕುರಿತು ಸಚಿವರ ಹೇಳಿಕೆಗೆ ಪ್ರತಿಕ್ರಿಯಿಸಿದ ಅವರು, ಜಮೀರ್ ಹೇಳಿಕೆ ಸಂವಿಧಾನಕ್ಕೆ ಮಾಡಿದ ಅವಮಾನ. ಸ್ಪೀಕರ್ ಅವರು ಪೀಠಕ್ಕೆ ಬಂದಾಗ ಎಲ್ಲರೂ ಗೌರವ ಕೊಡ್ತೀವಿ. ಅದು ಅಂಬೇಡ್ಕರ್ ಸಂವಿಧಾನ ಹೇಳಿದೆ. ಆದರೆ ಸ್ಪೀಕರ್ ಸ್ಥಾನವನ್ನ ಒಂದು ಜಾತಿಗೆ ಮಾತ್ರ ಸೀಮಿತ ಮಾಡಿದ್ದಾರೆ. ಜಮೀರ್ ಹೇಳಿಕೆ ತಪ್ಪು ಅಂತ ಒಂದು ಮಾತು ಕೂಡ ಸ್ಪೀಕರ್ ಹೇಳಿಲ್ಲ. ಅದು ತಪ್ಪು ಎಂದು ಜಮೀರ್ ರನ್ನ ಉಚ್ಛಾಟನೆ ಮಾಡಬೇಕಿತ್ತು ಉಚ್ಛಾಟನೆ ಮಾಡಿದ್ರೆ ಸ್ಪೀಕರ್ ಗೌರವ ಹೆಚ್ಚಾಗುತ್ತಿತ್ತು ಎಂದು ಹೇಳಿದರು.

370ನೇ ವಿಧಿ ತೀರ್ಪು ಸ್ವಾಗತಿಸಿದ ಉದ್ಧವ್

ಕಾಶ್ಮೀರಿ ಪಂಡಿತರು ಮರಳುವ ಬಗ್ಗೆ ಗ್ಯಾರಂಟಿ ನೀಡುವರೆ?

ನಾಗಪುರ: ಜಮ್ಮು ಮತ್ತು ಕಾಶ್ಮೀರಕ್ಕೆ



ವಿಶೇಷ ಸ್ಥಾನಮಾನ ಕಲ್ಪಿಸುವ ಆರ್ಟಿಕಲ್ 370 ರದ್ದುಗೊಳಿಸಿದ್ದ ಕೇಂದ್ರ ಸರ್ಕಾರದ ನಿರ್ಧಾರವನ್ನು ಎತ್ತಿಹಿಡಿದ ಸುಪ್ರೀಂಕೋರ್ಟ್ ತೀರ್ಪನ್ನು ಶಿವಸೇನೆ(ಯುಬಿಟಿ) ಮುಖ್ಯಸ್ಥ ಉದ್ಧವ್ ಠಾಕ್ರೆ ಅವರು ಸೋಮವಾರ ಸ್ವಾಗತಿಸಿದ್ದಾರೆ. ಆದರೆ ಕಾಶ್ಮೀರಿ ಪಂಡಿತರು ಸುರಕ್ಷಿತವಾಗಿ ತಾಯ್ನಾಡಿಗೆ ಮರಳುವ ಬಗ್ಗೆ ಪ್ರಧಾನಿ ನರೇಂದ್ರ ಮೋದಿ ಅವರು "ಗ್ಯಾರಂಟಿ" ನೀಡುತ್ತಾರೆಯೇ? ಎಂದು ಪ್ರಶ್ನಿಸಿದ್ದಾರೆ.

ಸುಪ್ರೀಂಕೋರ್ಟ್ ನಿರ್ದೇಶನದಂತೆ ಜಮ್ಮು ಮತ್ತು ಕಾಶ್ಮೀರದಲ್ಲಿ ಶೀಘ್ರವೇ ಚುನಾವಣೆ ನಡೆಸಬೇಕು ಎಂದು ಮಹಾರಾಷ್ಟ್ರ ಮಾಜಿ ಸಿಎಂ ಆಗ್ರಹಿಸಿದ್ದಾರೆ.

ಸುಪ್ರೀಂಕೋರ್ಟ್‌ನ ತೀರ್ಪನ್ನು ನಾವು ಸ್ವಾಗತಿಸುತ್ತೇವೆ. 370ನೇ ವಿಧಿಯನ್ನು ರದ್ದುಗೊಳಿಸಿದಾಗ ನಾವು ಕೇಂದ್ರದ ಕ್ರಮವನ್ನು ಬೆಂಬಲಿಸಿದ್ದೇವೆ. ಮುಂದಿನ ಸೆಪ್ಟೆಂಬರ್‌ನಲ್ಲಿ ಚುನಾವಣೆ ನಡೆಸುವಂತೆ ಸುಪ್ರೀಂ ಕೋರ್ಟ್ ನೀಡಿರುವ ನಿರ್ದೇಶನಗಳನ್ನು ನಾವು ಸ್ವಾಗತಿಸುತ್ತೇವೆ. ಶೀಘ್ರದಲ್ಲೇ ಚುನಾವಣೆಗಳು ನಡೆಯುತ್ತವೆ ಮತ್ತು ಜನರು ಮುಕ್ತ ವಾತಾವರಣದಲ್ಲಿ ಮತ ಚಲಾಯಿಸುತ್ತಾರೆ ಎಂದು ನಾವು ಭಾವಿಸುತ್ತೇವೆ ಎಂದು ಠಾಕ್ರೆ ವಿಧಾನ ಭವನದ ಆವರಣದಲ್ಲಿ ಸುದ್ದಿಗಾರರಿಗೆ ತಿಳಿಸಿದ್ದಾರೆ.

ರಾಜ್ಯದ ಎರಡನೇ ರಾಜಧಾನಿ ನಾಗ್ಪುರದಲ್ಲಿ ಮಹಾರಾಷ್ಟ್ರ ವಿಧಾನ ಸಭೆಯ ಚಳಿಗಾಲದ ಅಧಿವೇಶನ ನಡೆಯುತ್ತಿದೆ. ಪಿಒಕೆ(ಪಾಕಿಸ್ತಾನ ಆಕ್ರಮಿತ ಕಾಶ್ಮೀರ) ಭಾರತದಲ್ಲಿ ವಿಲೀನಗೊಳ್ಳುತ್ತದೆ ಎಂದು ನಾವು ಭಾವಿಸುತ್ತೇವೆ. ಇದರಿಂದಾಗಿ ನಮ್ಮ ದೇಶದ ಬೇರ್ಪಡಿಸಲಾಗದ ಭಾಗವಾಗಿರುವ ಕಾಶ್ಮೀರದಲ್ಲಿ ಚುನಾವಣೆಗಳು ನಡೆಯುತ್ತವೆ ಎಂದು ಠಾಕ್ರೆ ಹೇಳಿದ್ದಾರೆ.

ತರಬೇತಿಗೆ ಅರ್ಜಿ ಆಹ್ವಾನ

ಮೈಸೂರು, ಡಿ.11– ಆಯುಷ್ ಇಲಾಖೆ ವತಿಯಿಂದ ಸರ್ಕಾರಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆಯಲ್ಲಿ 2023–24 ನೇ ಸಾಲಿನಲ್ಲಿ ಎಸ್.ಸಿ.ಪಿ, ಟಿ.ಎಸ್.ಪಿ ಯೋಜನೆಯಡಿ ಎರಡು ತಿಂಗಳ ಅವಧಿಗೆ ಪಂಚಕರ್ಮ ಮಸಾಜಿಸ್ಟ್ ತರಬೇತಿ (ಸರ್ಟಿಫಿಕೇಟ್ ಕೋರ್ಸ್) ಆಯೋಜಿಸಲಾಗಿದೆ. ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುವ ಕನಿಷ್ಠ 18 ಹಾಗೂ ಗರಿಷ್ಠ 40 ವರ್ಷದೊಳಗಿನ ವಯೋಮಿತಿಯ ಪರಿಶಿಷ್ಟ ಜಾತಿಯ 20 ಫಲಾನುಭವಿಗಳಿಗೆ ಮತ್ತು ಪರಿಶಿಷ್ಟ ಪಂಗಡದ 20 ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಫಲಾನುಭವಿಗಳಿಗೆ ತರಬೇತಿ ಅವಧಿಯಲ್ಲಿ ತಿಂಗಳಿಗೆ ರೂ.5,000/–ಶಿಷ್ಯವೇತನ ನೀಡಲಾಗುವುದು. ಆಸಕ್ತರು ಸರ್ಕಾರಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ, ಮೈಸೂರು, ಇಲ್ಲಿನ ಕಛೇರಿಯ ಸಮಯದಲ್ಲಿ ಅರ್ಜಿಗಳನ್ನು ಪಡೆದು, ಭರ್ತಿ ಮಾಡಿದ ಅರ್ಜಿಯೊಂದಿಗೆ ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಫೋಟೋ, ಆಧಾರ್ ಕಾರ್ಡ್ ಪ್ರತಿ, ಜಾತಿ ಮತ್ತು ಆದಾಯದ ದೃಢೀಕರಣ ಪತ್ರ, ಎಸ್.ಎಸ್.ಎಲ್.ಸಿ ಅಂಕ ಪಟ್ಟಿಯನ್ನು ಲಗತ್ತಿಸಿ ಡಿಸೆಂಬರ್ 14 ರಂದು ಸಂಜೆ 4. ಗಂಟೆಯೊಳಗಾಗಿ ಕಛೇರಿಗೆ ಸಲ್ಲಿಸುವುದು. ನಿಗದಿತ ಅವಧಿಯ ನಂತರ ಸ್ವೀಕೃತಗೊಳ್ಳುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

ಆಸಕ್ತರು ಹೆಚ್ಚಿನ ಮಾಹಿತಿಗಾಗಿ ಕಛೇರಿ ದೂ.ಸಂ: 0821–2442205, ಪ್ರಾಧ್ಯಾಪಕರಾದ ಡಾ|| ಮೈತ್ರೇಯಿ ಆರ್.ಸಿ ದೂ.ಸಂ: 9480441974, ಡಾ| ಸಂಜಯ್ ಕುಮಾರ್ ಎಂ.ಡಿ, ದೂ.ಸಂ: 9986083244, ಡಾ|| ವರ್ಷಾ ಕುಲಕರ್ಣಿ, ದೂ.ಸಂ: 9480597527 ಸಂಪರ್ಕಿಸಬಹುದು ಎಂದು ಸರ್ಕಾರಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆಯ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೈಕೋರ್ಟ್ ನಿವೃತ್ತ ನ್ಯಾಯಮೂರ್ತಿ ಎನ್.ಕೆ.ಪಾಟೀಲ ನಿಧನ



ಬೆಂಗಳೂರು: ಸುಪ್ರೀಂ ಕೋರ್ಟ್ ಮತ್ತು ಹೈಕೋರ್ಟ್‌ನ ನ್ಯಾಯಮೂರ್ತಿಗಳ ವಲಯದಲ್ಲಿ 'ಅಜಾತಶತ್ರು' ಎಂದೇ ಹೆಸರು ಪಡೆದಿದ್ದ ಮತ್ತು 16 ವರ್ಷಗಳ ಕಾಲದ ತಮ್ಮ ಹೈಕೋರ್ಟ್ ನ್ಯಾಯಮೂರ್ತಿ ಹುದ್ದೆಯಲ್ಲಿ ಎಂದೂ ಆರೋಪಕ್ಕೆ ಒಳಗಾಗದೆ 'ಸಜ್ಜನ ನ್ಯಾಯಮೂರ್ತಿ' ಎಂದೇ ಹೆಸರಾಗಿದ್ದ ನಾಗನಾಥ ಕಂಟೆಪ್ಪ ಪಾಟೀಲ (70) ಸೋಮವಾರ ಹೈದರಾಬಾದ್‌ನ ಯಶೋದಾ ಆಸ್ಪತ್ರೆಯಲ್ಲಿ ನಿಧನರಾದರು. ಅವರಿಗೆ ಪತ್ನಿ, ಇಬ್ಬರು ಪುತ್ರರು ಇದ್ದಾರೆ. ಪುತ್ರ ನಿಶಾಂತ್ ಪಾಟೀಲ ಸದ್ಯ ಸುಪ್ರೀಂ ಕೋರ್ಟ್‌ನಲ್ಲಿ ಕರ್ನಾಟಕ ಹೈಕೋರ್ಟ್‌ನ ಹೆಚ್ಚುವರಿ ಅಡ್ವೋಕೇಟ್ ಜನರಲ್ ಆಗಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಬೀದರ್ ಜಿಲ್ಲೆಯ ಭಾಲ್ಕಿ ತಾಲ್ಲೂಕಿನ ನಿಡೆಬಾನ್ ಗ್ರಾಮದಲ್ಲಿ 1954ರ ಮೇ 2ರಂದು ಜನಿಸಿದ್ದ ಪಾಟೀಲರು ಬೆಂಗಳೂರಿನ ಶ್ರೀ ರೇಣುಕಾಚಾರ್ಯ ಕಾನೂನು ಕಾಲೇಜಿನಿಂದ ಕಾನೂನು ಪದವಿ ಪಡೆದಿದ್ದರು. 1982ರ ಏಪ್ರಿಲ್ 8ರಂದು ಸನ್ನದು ನೋಂದಣಿ ಮಾಡಿಸಿ 18 ವರ್ಷಗಳ ಕಾಲ ವಿವಿಧ ಸ್ತರಗಳ ನ್ಯಾಯಾಲಯದಲ್ಲಿ ವಕೀಲಿಕೆ ನಡೆಸಿದ್ದರು. 2000ರ ಡಿಸೆಂಬರ್ 11 ರಂದು ಹೈಕೋರ್ಟ್ ನ್ಯಾಯಮೂರ್ತಿಯಾಗಿ ನೇಮಕಗೊಂಡಿದ್ದರು.

ಗದ್ದಲದ ನಡುವೆ ಚರ್ಚೆ ಇಲ್ಲದೆಯೂ 5 ಮಸೂದೆ ಅಂಗೀಕಾರ



ವಿಧಾನಸಭೆ: ಮುದ್ರಾಂಕ ಶುಲ್ಕ ಹೆಚ್ಚಿಸುವ ಮತ್ತು ಬ್ಯಾಂಕ್ ಗ್ಯಾರಂಟಿಗಳ ಮೇಲಿನ ಶುಲ್ಕವನ್ನು ಪರಿಷ್ಕರಿಸುವ ಉದ್ದೇಶದ ಕರ್ನಾಟಕ ಸ್ಟಾಂಪು (ತಿದ್ದುಪಡಿ) ಮಸೂದೆ 2023 ಸೇರಿ ಒಟ್ಟು ಐದು ಮಸೂದೆಗಳನ್ನು ವಿರೋಧಪಕ್ಷಗಳ ಧರಣಿ ಮಧ್ಯೆ ಸೋಮವಾರ ಅಂಗೀಕರಿಸಲಾಯಿತು. ವಸತಿ ಜಮೀರ್ ಅಹಮದ್ ವಜಾಗೆ ಆಗ್ರಹಿಸಿ ಬಿಜೆಪಿ ಮತ್ತು ಜೆಡಿಎಸ್ ಸದಸ್ಯರು ಧರಣಿ ನಡೆಸುತ್ತಿದ್ದಾಗಲೇ ಸಭಾಧ್ಯಕ್ಷ ಯು.ಟಿ.ಖಾದರ್ ಅವರು ಮಸೂದೆಗಳನ್ನು ಪರ್ಯಾಲೋಚನೆಗೆ ಕೈಗೆತ್ತಿಕೊಂಡರು. ಮಸೂದೆಯ ಮೇಲಿನ ಚರ್ಚೆಯಲ್ಲಿ ಭಾಗವಹಿಸುವಂತೆ ಖಾದರ್ ಅವರು ಮನವಿ ಮಾಡಿದರೂ ವಿರೋಧ ಪಕ್ಷಗಳ ಸದಸ್ಯರು ಕಿವಿಗೆ ಹಾಕಿಕೊಳ್ಳಲಿಲ್ಲ. ಗದ್ದಲ ಮಧ್ಯೆಯೇ ಪರ್ಯಾಲೋಚನೆ ನಡೆಸಿದರು.

ನೋಂದಣಿ ದರ ಪರಿಷ್ಕರಣೆ ಇಲ್ಲ: ಕರ್ನಾಟಕ ಸ್ಟಾಂಪು (ತಿದ್ದುಪಡಿ) ಮಸೂದೆ ಕುರಿತು ವಿವರಣೆ ನೀಡಿದ ಕಂದಾಯ ಸಚಿವ ಕೃಷ್ಣಬೈರೇಗೌಡ, ಈ ಮಸೂದೆಯ ಉದ್ದೇಶ ನೋಂದಣಿ ದರ ಹೆಚ್ಚಿಸುವುದಕ್ಕಲ್ಲ. ಹಲವು ಬಗೆಯ ಮುದ್ರಾಂಕ ಶುಲ್ಕವನ್ನು ಪರಿಷ್ಕರಿಸುವುದಾಗಿದೆ. ಕೆಲವು ದರಗಳನ್ನು 1994, 2007 ಮತ್ತು 2011 ರಲ್ಲಿ ಪರಿಷ್ಕರಿಸಲಾಗಿತ್ತು. ಇನ್ನೂ ರೂ. 5, ರೂ. 6, ರೂ. 10 ಶುಲ್ಕಗಳಿವೆ. ಈಗಿನ ದಿನಮಾನಕ್ಕೆ ತಕ್ಕಂತೆ ಪರಿಷ್ಕರಿಸಬೇಕಾಗಿದೆ' ಎಂದು ಹೇಳಿದರು. ದತ್ತಕ ಪತ್ರ, ಬ್ಯಾಂಕ್ ಗ್ಯಾರಂಟಿ, ದೃಢೀಕರಣ ಪತ್ರ, ಒಪ್ಪಂದ ಪತ್ರ, ಲಿಖಿತಗಳ ರದ್ದತಿ, ಒಡಂಬಡಿಕೆ ಪತ್ರ. ಹೀಗೆ 54 ವಿಷಯಗಳಿಗೆ ಸಂಬಂಧಿಸಿದಂತೆ ಮುದ್ರಾಂಕ ಶುಲ್ಕವನ್ನು ಸಂಗ್ರಹಿಸಲಾಗುತ್ತಿದೆ. ಇಲಾಖೆಗೆ ಮುಂದ್ರಾಕದಿಂದ ಶೇ 10 ರಷ್ಟು ಮಾತ್ರ ಆದಾಯ ಬರುತ್ತಿದೆ. ನೋಂದಣಿಯಿಂದ ಶೇ.90ರಷ್ಟು ಆದಾಯ ಬರುತ್ತಿದೆ. ಮುದ್ರಾಂಕ ಶುಲ್ಕ ಸಂಗ್ರಹಣೆಯಲ್ಲಿ ಸೋರಿಕೆ ಆಗುತ್ತಿದ್ದು, ಅದನ್ನು ತಡೆಗಟ್ಟಲು ಕ್ರಮ ಕೈಗೊಳ್ಳಲಾಗುವುದು. ದರ ಗೊಂದಲ ನಿವಾರಣೆಯೂ ಮಸೂದೆಯ ಮತ್ತೊಂದು ಪ್ರಮುಖ ಉದ್ದೇಶ ಎಂದು ತಿಳಿಸಿದರು.

ಜನಸಂಖ್ಯೆ ಮಿತಿ ತಗ್ಗಿಸಲು ಕೊಡಗು ಶಾಸಕರ ಒತ್ತಾಯ: ಮಲೆನಾಡು ಮತ್ತು ಕೊಡಗು ಜಿಲ್ಲೆಗಳಲ್ಲಿ ಜಿಲ್ಲಾ ಪಂಚಾಯಿತಿ ಮತ್ತು ತಾಲೂಕು ಪಂಚಾಯಿತಿಗಳ ಪ್ರತಿ ಕ್ಷೇತ್ರದ ಜನಸಂಖ್ಯೆ ಕನಿಷ್ಠ ಮಿತಿ 18 ಸಾವಿರದ ಬದಲಿಗೆ 17 ಸಾವಿರಕ್ಕೆ ತಗ್ಗಿಸಬೇಕು ಎಂದು ಕಾಂಗ್ರೆಸ್‌ನ ಎ.ಎಸ್. ಪೊನ್ನಣ್ಣ, ಮಂಥರ್ ಗೌಡ ಮತ್ತು ಟಿ.ಡಿ. ರಾಜೇಗೌಡ ಒತ್ತಾಯಿಸಿದರು.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ತಿದ್ದುಪಡಿ ಮಸೂದೆ ಮೇಲಿನ ಚರ್ಚೆಯಲ್ಲಿ ಭಾಗವಹಿಸಿದ ಅವರು, ಮಲೆನಾಡು ಮತ್ತು ಕೊಡಗು ಭಾಗದಲ್ಲಿ ಕೆಲವು ಕ್ಷೇತ್ರಗಳ ವ್ಯಾಪ್ತಿ ನೂರು ಕಿ.ಮೀ ಹೆಚ್ಚು ವಿಸ್ತೀರ್ಣವನ್ನು ಹೊಂದಿವೆ. ಆದರೂ ಜನಸಂಖ್ಯೆ ಕಡಿಮೆ ಇರುತ್ತದೆ ಎಂದರು. ಈ ಮಸೂದೆ ಈಗಾಗಲೇ ಸುಗ್ರೀವಾಜ್ಞೆ ರೂಪದಲ್ಲಿ ಜಾರಿಯಲ್ಲಿದ್ದು, ಅದನ್ನು ಬದಲಿಸಲು ಮಸೂದೆ ತರಲಾಗಿದೆ. ಇದಕ್ಕೆ ಅಂಗೀಕಾರ ನೀಡಿ, ಮುಂದಿನ ದಿನಗಳಲ್ಲಿ ಬದಲಾವಣೆ ಮಾಡುವ ಬಗ್ಗೆ ಕ್ರಮ ಕೈಗೊಳ್ಳಲಾಗುವುದು ಎಂದು ಕಂದಾಯ ಸಚಿವ ಕೃಷ್ಣಬೈರೇಗೌಡ ತಿಳಿಸಿದರು.

ಕರಾವಳಿ ಅಭಿವೃದ್ಧಿ ಮಂಡಳಿ ಮಸೂದೆ 2023: ಕರಾವಳಿ ಪ್ರದೇಶದ ಸರ್ವತೋಮುಖ ಅಭಿವೃದ್ಧಿಗಾಗಿ ಕರಾವಳಿ ಮಂಡಳಿ ಸ್ಥಾಪಿಸಲು ಈ ಮಸೂದೆ ತರಲಾಗಿದೆ ಎಂದು ಯೋಜನಾ ಮತ್ತು ಸಾಂಖ್ಯಿಕ ಸಚಿವ ಡಿ.ಸುಧಾಕರ್ ತಿಳಿಸಿದರು. ಮಲೆನಾಡು ಪ್ರದೇಶದ ವ್ಯಾಖ್ಯಾನದೊಳಗಿನಿಂದ ಉತ್ತರ ಕನ್ನಡ ಮತ್ತು ದಕ್ಷಿಣ ಕನ್ನಡ ಜಿಲ್ಲೆಗಳನ್ನು ಹೊರಗಿಡಲು ಮಲೆನಾಡು ಪ್ರದೇಶ ಅಭಿವೃದ್ಧಿ ಮಂಡಳಿ ಅಧಿನಿಯಮಕ್ಕೆ ತಿದ್ದುಪಡಿ ಅಗತ್ಯ ಎಂದು ಹೇಳಿದರು. ಕರಾವಳಿ ಪ್ರದೇಶ ಅಭಿವೃದ್ಧಿ ಮಂಡಳಿ ರಚನೆಯ ಜತೆಗೆ ಒಂದು ಅನುಷ್ಠಾನ ಸಮಿತಿಯ ರಚನೆ, ವಿವಿಧ ಇಲಾಖೆಗಳ ಸಮನ್ವಯಕ್ಕೆ ಮಂಡಳಿಗೆ ಅಧಿಕಾರ ನೀಡಲಾಗುವುದು ಎಂದು ಸುಧಾಕರ್ ತಿಳಿಸಿದರು.

ಮುಂದಿನ ಬಜೆಟ್‌ನಲ್ಲಿ ಶಿಕ್ಷಣಕ್ಕೆ ಹೆಚ್ಚು ಅನುದಾನ

3 ಸಾವಿರ ಕೆಪಿಎಸ್ ಶಾಲೆ; ಸ್ಪೋಕನ್ ಇಂಗ್ಲಿಷ್ ತರಬೇತಿ

ಬೆಳಗಾವಿ: ಈ ಹಿಂದಿನ ಸರ್ಕಾರಗಳು ಉನ್ನತ ಶಿಕ್ಷಣಕ್ಕೆ ಅಲ್ಪಸ್ವಲ್ಪ ಅನುದಾನ ಮೀಸಲಿಟ್ಟಿದ್ದಕ್ಕೆ ಬೇಸರ ವ್ಯಕ್ತಪಡಿಸಿದ ಉನ್ನತ ಶಿಕ್ಷಣ ಸಚಿವ ಡಾ. ಎಂ.ಸಿ. ಸುಧಾಕರ್ ಅವರು, ಮುಂದಿನ ಬಜೆಟ್‌ನಲ್ಲಿ ಅನುದಾನ ಹೆಚ್ಚಿಸುವುದಾಗಿ ಸಿಎಂ ಸಿದ್ದರಾಮಯ್ಯ ಅವರು ಭರವಸೆ ನೀಡಿರುವುದಾಗಿ ಸದನಕ್ಕೆ ತಿಳಿಸಿದರು.



ಡಾ. ಸುಧಾಕರ್

ದೇಶದಲ್ಲಿ ಎನ್‌ಇಪಿ ಅನುಷ್ಠಾನದ ಕುರಿತು ಪ್ರತಿಪಕ್ಷ ಬಿಜೆಪಿ ಪ್ರಸ್ತಾಪಿಸಿದ ಚರ್ಚೆಗೆ ಉತ್ತರ ನೀಡಿದ ಉನ್ನತ ಶಿಕ್ಷಣ ಸಚಿವರು, ಉನ್ನತ ಶಿಕ್ಷಣಕ್ಕೆ ಒಟ್ಟು ಬಜೆಟ್‌ನಲ್ಲಿ ಶೇ.3ರಿಂದ ಶೇ.1ರಷ್ಟು ಮಾತ್ರ ಮೀಸಲಿಡಲಾಗಿದೆ ಎಂದರು.

ಈ ಸತ್ಯವನ್ನು ಮನಗಂಡ ನಾನು ಸಚಿವನಾಗಿ ಉನ್ನತ ಶಿಕ್ಷಣಕ್ಕೆ ಹೆಚ್ಚಿನ ಅನುದಾನ ಮೀಸಲಿಡುವ ಮಹತ್ವದ ಕುರಿತು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿ, ಮನವರಿಕೆ ಮಾಡಿಕೊಟ್ಟಿದ್ದೇನೆ. ಮುಂಬರುವ ಬಜೆಟ್‌ನಲ್ಲಿ ಅನುದಾನ ಹೆಚ್ಚಿಸಲು ಸಿಎಂ ಒಪ್ಪಿಗೆ ನೀಡಿದ್ದಾರೆ ಎಂದರು.

ಸರ್ಕಾರಿ ಶಾಲೆಗಳಲ್ಲಿ ಸ್ಪೋಕನ್ ಇಂಗ್ಲಿಷ್: ಉತ್ತಮ ಉದ್ಯೋಗಾವಕಾಶಕ್ಕಾಗಿ ಕರ್ನಾಟಕದ ವಿದ್ಯಾರ್ಥಿಗಳು ಇಂಗ್ಲಿಷ್ ಭಾಷೆ ಸುಧಾರಿಸಿಕೊಳ್ಳಬೇಕಾಗಿದೆ ಎಂದು ಹೇಳಿದ ಸಚಿವರು, ಸರ್ಕಾರಿ ಶಾಲಾ ವಿದ್ಯಾರ್ಥಿಗಳಿಗೆ ಸ್ಪೋಕನ್ ಇಂಗ್ಲಿಷ್ ಕಲಿಸಲು ರಾಜ್ಯ ಸರ್ಕಾರ ವಾಧ್ವಾನಿ ಫೌಂಡೇಶನ್ ಎಂಬ NGOನೊಂದಿಗೆ ಒಪ್ಪಂದ ಮಾಡಿ ಕೊಳ್ಳಲು ನಿರ್ಧರಿಸಿದೆ ಎಂದು ಹೇಳಿದರು. ಶೀಘ್ರದಲ್ಲೇ, ಸರ್ಕಾರಿ ಶಾಲಾ ವಿದ್ಯಾರ್ಥಿ ಗಳಿಗೆ ಉದ್ಯೋಗ ಹುಡುಕಲು ಇಂಗ್ಲಿಷ್ ಕಲಿಯಲು ಸಹಾಯ ಮಾಡುವ ಎಂಒಯುಗೆ ಸಹಿ ಹಾಕಲಾಗುವುದು ಎಂದು ಅವರು ಹೇಳಿದರು.

ರಾಷ್ಟ್ರೀಯ ಶಿಕ್ಷಣ ನೀತಿ ಬದಲಿಗೆ ರಾಜ್ಯ ಶಿಕ್ಷಣ ನೀತಿ ಜಾರಿಗೆ ತರುವ ನಿರ್ಧಾರವನ್ನು ಸಮರ್ಥಿಸಿಕೊಂಡ ಸಚಿವರು, ಎನ್‌ಇಪಿಯು ಕರ್ನಾಟಕಕ್ಕೆ ಹೊಂದಿಕೆಯಾಗದು, ಕೆಲವು ದೇಶಗಳಲ್ಲಿ ಜಾರಿಗೊಳಿಸಲಾದ ನೀತಿಯ ನಕಲು ಹೊರತು ಬೇರೇನೂ ಅಲ್ಲ ಎಂದು ಹೇಳಿದರು.

'ಕರ್ನಾಟಕದ ವಿದ್ಯಾರ್ಥಿಗಳಿಗೆ ಉತ್ತಮ ಶಿಕ್ಷಣ ಮತ್ತು ಉದ್ಯೋಗಗಳನ್ನು ಒದಗಿಸುವಲ್ಲಿ ನಾವು ಇನ್ನೂ ಹಿಂದುಳಿದಿದ್ದೇವೆ. ಇಂಜಿನಿಯರಿಂಗ್ ವಿಭಾಗದ ವಿವಿಧ ವಿಭಾಗಗಳ ಎಲ್ಲಾ ಸೀಟುಗಳನ್ನು ಭರ್ತಿ ಮಾಡಲು ನಮಗೆ ಇನ್ನೂ ಸಾಧ್ಯವಾಗುತ್ತಿಲ್ಲ. ಇಂಜಿನಿಯರಿಂಗ್ ಕಾಲೇಜುಗಳ ವಿವಿಧ ವಿಭಾಗಗಳಲ್ಲಿ ಪ್ರತಿ ವರ್ಷ ಹಲವು ಸೀಟುಗಳು ಖಾಲಿ ಉಳಿಯುತ್ತಿವೆ. ಆದ್ದರಿಂದ, ನಮ್ಮ ಆದ್ಯತೆಯು ಕಾಲೇಜುಗಳಲ್ಲಿ ಮೂಲ ಸೌಕರ್ಯಗಳನ್ನು ಸುಧಾರಿಸುವುದು ಮಾತ್ರವಲ್ಲದೆ ಉದ್ಯೋಗಾವಕಾಶವನ್ನು ಹೆಚ್ಚಿಸುವುದು ಎಂದು ಅವರು ಹೇಳಿದರು.

3 ವರ್ಷಗಳಲ್ಲಿ 3000 ಕೆ.ಪಿ.ಎಸ್ ಶಾಲೆ ಆರಂಭ: ಇದೇ ವಿಷಯದ ಕುರಿತು ವಿವರಗಳನ್ನು ಹಂಚಿಕೊಂಡ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವ ಮಧು ಬಂಗಾರಪ್ಪ ಅವರು, ಮುಂದಿನ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ 3 ಸಾವಿರ ಕರ್ನಾಟಕ ಪಬ್ಲಿಕ್ ಸ್ಕೂಲ್(ಕೆಪಿಎಸ್) ತೆರೆಯಲು ಸರ್ಕಾರ ನಿರ್ಧರಿಸಿದೆ ಎಂದು ಹೇಳಿದರು.

ಮಣ್ಣು ಜೀವಂತವಿದ್ದರೆ ರೈತರ ಬದುಕು ಹಸನು

ರೈತ ಕಲ್ಯಾಣ ಸಂಘದ ರಾಜ್ಯಾಧ್ಯಕ್ಷ ಭೂಮಿಪುತ್ರ ಸಿ.ಚಂದನ್‌ಗೌಡ



ಮೈಸೂರು,ಡಿ.11(ಪಿಎಂ)– ಮಣ್ಣು ಜೀವಂತವಾಗಿದ್ದರೆ ಮಾತ್ರ ರೈತರ ಬದುಕು ಹಸನಾಗಲು ಸಾಧ್ಯ ಎಂದು ರಾಜ್ಯ ರೈತ ಕಲ್ಯಾಣ ಸಂಘದ ರಾಜ್ಯಾಧ್ಯಕ್ಷ ಭೂಮಿಪುತ್ರ ಸಿ.ಚಂದನ್‌ಗೌಡ ಹೇಳಿದರು.

ಹುಣಸೂರು ತಾಲೂಕು ಹನಗೂಡು ಹೋಬಳಿಯ ಕರ್ಣಕುಪ್ಪೆ ಗ್ರಾಮದಲ್ಲಿ ನಡೆದ ರೈತ ಕಲ್ಯಾಣ ಸಂಘದ ನಾಮಫಲಕ ಉದ್ಘಾಟನೆ, ಮಣ್ಣಿಗೆ ಮರುಜೀವ ಮತ್ತು ಮಣ್ಣು ಸಂರಕ್ಷಣಾ ಅಭಿಯಾನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಇತ್ತೀಚಿನ ದಿನಗಳಲ್ಲಿ ಮಣ್ಣಿನ ಫಲವತ್ತತೆಗಾಗಿ ಹೋರಾಟ ಮಾಡಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ. ಇದು ಅತ್ಯಂತ ಬೇಸರದ ಸಂಗತಿ. ಮಣ್ಣಿನ ರಕ್ಷಣೆಗೆ ರೈತ ಸಮುದಾಯ ಒತ್ತು ನೀಡಬೇಕಿದೆ ಎಂದು ಹೇಳಿದರು. ಇದೇ ವೇಳೆ ಕೃಷಿಯನ್ನೇ ಉದ್ದಿಮೆ ಮಾಡಿ, ರೈತರನ್ನೇ ಉದ್ದಿಮೆದಾರರನ್ನಾಗಿ ಮಾಡುವ ಹಲವಾರು ವಿಚಾರಗಳ ಬಗ್ಗೆ ಮತ್ತು ಕೃಷಿಯ ಮಹತ್ವದ ಬಗ್ಗೆ ಗ್ರಾಮದ ಅನ್ನದಾತರಿಗೆ ವಿಶೇಷ ಮಾಹಿತಿಯನ್ನು ಅವರು ನೀಡಿ, ಅರಿವು ಮೂಡಿಸಿದರು. ಸಂಘದ ಗೌರವಾಧ್ಯಕ್ಷ ಹೇಮಂತ್, ಪತ್ರಿಕಾ ಕಾರ್ಯದರ್ಶಿ ಹರೀಶ್ ಪಿ.ಗೌಡ, ತಾಲೂಕು ಅಧ್ಯಕ್ಷ ಪ್ರತಾಪ್, ತಾಲೂಕು ಮಹಿಳಾ ಅಧ್ಯಕ್ಷೆ ಮೀನಾಕ್ಷಿ, ಮುಖಂಡರಾದ ಗಜೇಂದ್ರ ಬಸವರಾಜ್, ಕರಣಕುಪ್ಪೆ ಅಶೋಕ್, ಮಾದೇಶ್, ಯಜಮಾನರಾದ ಶಿವರಾಜ್, ಗ್ರಾಪಂ ಅಧ್ಯಕ್ಷ ಹರೀಶ್, ಮುಖಂಡ ಕೆ.ಎಂ.ರಾಜು ಸೇರಿದಂತೆ ಗ್ರಾಮಸ್ಥರು ಹಾಜರಿದ್ದರು.

370ನೇ ವಿಧಿ ರದ್ದು ಎತ್ತಿಹಿಡಿದ ಸುಪ್ರೀಂಕೋರ್ಟ್; ಇದು ಸತ್ಯಕ್ಕೆ ದೊರಕಿದ ಜಯ

ಮೈಸೂರು,ಡಿ.11(ಪಿಎಂ)– ಜಮ್ಮು



ಮತ್ತು ಕಾಶ್ಮೀರಕ್ಕೆ ಸಂವಿಧಾನದ 370ನೇ ವಿಧಿಯಡಿ ಕಲ್ಪಿಸಲಾಗಿದ್ದ ವಿಶೇಷ ಸ್ಥಾನಮಾನ ರದ್ದುಪಡಿಸಿದ ಕೇಂದ್ರ ಸರ್ಕಾರದ ನಿರ್ಧಾರವನ್ನು ಸುಪ್ರೀಂ ಕೋರ್ಟ್ ಎತ್ತಿಹಿಡಿದಿದ್ದು, ಇದು ಸತ್ಯಕ್ಕೆ ನ್ಯಾಯ ದೊರಕಿದಂತಾಗಿದೆ ಎಂದು ಮಾಜಿ ಶಾಸಕ ಎಲ್. ನಾಗೇಂದ್ರ ಹರ್ಷ ವ್ಯಕ್ತಪಡಿಸಿದ್ದಾರೆ.

ಪ್ರಧಾನಿ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ಅಚಲ ನಿರ್ಧಾರದಿಂದ ಜಮ್ಮು ಮತ್ತು ಕಾಶ್ಮೀರಕ್ಕೆ ಕಲ್ಪಿಸಿದ್ದ ವಿಶೇಷ ಸ್ಥಾನಮಾನ ರದ್ದುಗೊಂಡಿತ್ತು. ಕೇಂದ್ರದ ಈ ಕ್ರಮವನ್ನು ಸುಪ್ರೀಂ ಕೋರ್ಟ್ ಎತ್ತಿಹಿಡಿದಿರುವುದು ಸ್ವಾಗತಾರ್ಹ. ಇಂದು ಸಿಜೆಐ ಡಿ.ವೈ.ಚಂದ್ರಚೂಡ್ ಅವರನ್ನೊಳಗೊಂಡಂತೆ ಐವರು ನ್ಯಾಯಮೂರ್ತಿಗಳ ಸಂವಿಧಾನ ಪೀಠವು ನೀಡಿರುವ ಈ ತೀರ್ಪು ಪ್ರತಿಯೊಬ್ಬ ಭಾರತೀಯರಲ್ಲಿ ಸಂಭ್ರಮ ತಂದಿದೆ.

ಅಲ್ಲದೆ, ಜಮ್ಮು ಮತ್ತು ಕಾಶ್ಮೀರದ ರಾಜ್ಯ ಸ್ಥಾನಮಾನವನ್ನು ಶೀಘ್ರವೇ ಮರುಸ್ಥಾಪಿಸುವಂತೆ ಕೇಂದ್ರಕ್ಕೆ ನಿರ್ದೇಶನ ನೀಡಲಾಗುವುದು. ಹಾಗೆಯೇ ಅಲ್ಲಿನ ವಿಧಾನಸಭೆಗೆ 2024ರ ಸೆಪ್ಟೆಂಬರ್ 30ರೊಳಗೆ ಚುನಾವಣೆ ನಡೆಸಲು ಕ್ರಮ ಕೈಗೊಳ್ಳುವಂತೆ ಚುನಾವಣಾ ಆಯೋಗಕ್ಕೆ ಸೂಚಿಸಲಾಗುವುದು ಎಂದು ತೀರ್ಪು ಪ್ರಕಟಿಸುವ ವೇಳೆ ಸಿಜೆಐ ಹೇಳಿದ್ದಾರೆ. ಇದು ಕೇಂದ್ರ ಸರ್ಕಾರದ ನಿರ್ಧಾರಕ್ಕೆ ಸಂದ ಜಯವಾಗಿದೆ. ಈ ವಿಶೇಷ ಸ್ಥಾನಮಾನ ರದ್ದುಪಡಿಸಿದ ಮಾದರಿಯಲ್ಲೇ ಹಲವು ಉತ್ತಮ ಕ್ರಮಗಳನ್ನು ಕೇಂದ್ರ ಸರ್ಕಾರ ಕೈಗೊಂಡ ಹಿನ್ನೆಲೆಯಲ್ಲಿ ಪ್ರಧಾನಿ ನರೇಂದ್ರ ಮೋದಿಯವರು ದೇಶದಲ್ಲಿ ಮನೆ ಮಾತಾಗಿದ್ದಾರೆ. ಅವರು 2024ರಲ್ಲಿ ಮತ್ತೆ ಪ್ರಧಾನಿ ಆಗುವುದರಲ್ಲಿ ಸಂದೇಹವಿಲ್ಲ. ವಿಶ್ವ ನಾಯಕರಾಗಿ ಗುರುತಿಸಿಕೊಂಡು ಮೋದಿ ಮಾಡಿರುವ ಕೆಲಸಗಳು ಜನಮಾನಸದಲ್ಲಿ ಉಳಿದಿದೆ. ದೇಶದ ಹಿತದೃಷ್ಟಿಯ ವಿಚಾರದಲ್ಲಿ ಅವರು ತೆಗೆದುಕೊಳ್ಳುವ ದಿಟ್ಟ ನಿರ್ಧಾರ ದೇಶದ ಜನರನ್ನು ಒಗ್ಗೂಡಿಸುತ್ತದೆ. ಮೋದಿ–ಅಮಿತ್ ಶಾ ಅವರ ನಿರ್ಧಾರ ಎಂದೂ ತಪ್ಪಾಗಲಾರದು ಎಂಬ ಭಾವನೆ ಜನರ ಮನಸ್ಸಿನಲ್ಲಿ ಬೇರೂರಿದ್ದು, ಇದರ ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಮತ್ತೆ ಬಿಜೆಪಿ ದೇಶದ ಆಡಳಿತದ ಚುಕ್ಕಾಣಿ ಹಿಡಿಯಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಡಿ.13ರಂದು ಛತ್ತೀಸ್‌ಗಢ ನೂತನ ಮುಖ್ಯಮಂತ್ರಿ ವಿಷ್ಣು ದೇವ್ ಸಾಯಿ ಪ್ರಮಾಣವಚನ

ರಾಯ್‌ಪುರ: ಭಾರತೀಯ ಜನತಾ



ಪಕ್ಷದ ನಾಯಕ ವಿಷ್ಣು ದೇವ್ ಸಾಯಿ ಅವರು ತಮ್ಮ ಸಂಪುಟ ಸಹೋದ್ಯೋಗಿಗಳೊಂದಿಗೆ ಡಿ.13 ರಂದು ಛತ್ತೀಸ್‌ಗಢ ನೂತನ ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಲಿದ್ದಾರೆ.

ವಿಷ್ಣು ದೇವ್ ಸಾಯಿ ಅವರು ಬುಧವಾರ ರಾಯ್‌ಪುರದಲ್ಲಿ ಪ್ರಧಾನಿ ನರೇಂದ್ರ ಮೋದಿ ಮತ್ತು ಇತರ ಗಣ್ಯರ ಸಮ್ಮುಖದಲ್ಲಿ ಪ್ರಮಾಣ ವಚನ ಸ್ವೀಕರಿಸಲಿದ್ದಾರೆ ಎಂದು ಸೋಮವಾರ ಪ್ರಕಟಣೆಯಲ್ಲಿ ತಿಳಿಸಲಾಗಿದೆ. ಬಿಜೆಪಿಯ ಮೊದಲ ಬುಡಕಟ್ಟು ಸಿಎಂ ಆಗಲಿರುವ ಸಾಯಿ(59) ಜೊತೆಗೆ ಅವರ ಮಂತ್ರಿಮಂಡಲವೂ ಸಮಾರಂಭದಲ್ಲಿ ಪ್ರಮಾಣ ವಚನ ಸ್ವೀಕರಿಸಲಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

ಸಾಂವಿಧಾನಿಕ ನಿಯಮಗಳ ಪ್ರಕಾರ, 90 ಸದಸ್ಯ ಬಲ ಹೊಂದಿರುವ ಛತ್ತೀಸ್‌ಗಢದಲ್ಲಿ, ಸಿಎಂ ಸೇರಿದಂತೆ ಗರಿಷ್ಠ 13 ಸಚಿವರನ್ನು ಹೊಂದಬಹುದು. ರಾಜ್ಯ ರಾಜಧಾನಿಯ ವಿಜ್ಞಾನ ಕಾಲೇಜು ಮೈದಾನದಲ್ಲಿ ಡಿಸೆಂಬರ್ 13 ರಂದು ಮಧ್ಯಾಹ್ನ 2 ಗಂಟೆಗೆ ಪ್ರಮಾಣ ವಚನ ಸ್ವೀಕಾರ ಸಮಾರಂಭ ನಡೆಯಲಿದೆ ಎಂದು ರಾಜ್ಯ ಸಾರ್ವಜನಿಕ ಸಂಪರ್ಕ ಇಲಾಖೆ ಪ್ರಕಟಣೆ ತಿಳಿಸಿದೆ. ಸಮಾರಂಭದಲ್ಲಿ ಮೋದಿಯವರಲ್ಲದೆ, ಕೇಂದ್ರ ಗೃಹ ಸಚಿವ ಅಮಿತ್ ಶಾ, ಬಿಜೆಪಿ ಅಧ್ಯಕ್ಷ ಜೆಪಿ ನಡ್ಡಾ, ಕೆಲವು ರಾಜ್ಯಗಳ ಸಿಎಂಗಳು ಭಾಗವಹಿಸಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

ಮಳೆಗಾಲಕ್ಕೂ ಮುನ್ನ ಸುಯೇಜ್ ಫಾರಂ ಕಸ ವಿಲೇವಾರಿಗೆ ನಿವಾಸಿಗಳ ಆಗ್ರಹ

ಸರ್ಕಾರದ ಹಂತದಲ್ಲಿ ಪ್ರಸ್ತಾವನೆಗೆ ಅನುಮೋದನೆ ಸಾಧ್ಯತೆ

ಮೈಸೂರು, ಡಿ.11(ಎಸ್‌ಪಿಎನ್)– ಮೈಸೂರಿನ ವಿದ್ಯಾರಣ್ಯಪುರಂನಲ್ಲಿರುವ ಸುಯೇಜ್ ಫಾರಂ ಕಸ ಸಂಗ್ರಹಣಾ ಘಟಕದಲ್ಲಿ ಕಳೆದ 20 ವರ್ಷಗಳಿಂದ ವಿಲೇವಾರಿಯಾಗದೇ ಉಳಿದಿರುವ ಅಂದಾಜು 7 ಲಕ್ಷ ಟನ್(ಲೆಗಸಿ ವೇಸ್ಟ್) ತ್ಯಾಜ್ಯ ತೆರವುಗೊಳಿಸುವ ಟೆಂಡರ್ ಪ್ರಕ್ರಿಯೆ ಜಾರಿಯಲ್ಲಿದೆ. ಆದರೆ, ಈ ಭಾಗದ ನಿವಾಸಿಗಳು ಮಳೆಗಾಲ ಆರಂಭವಾಗುವ ಮೊದಲೇ ವಿಲೇವಾರಿ ಮಾಡುವಂತೆ ಸರ್ಕಾರದ ಮೇಲೆ ಒತ್ತಡ ಹಾಕಿದ್ದಾರೆ.

ಈ ತ್ಯಾಜ್ಯವನ್ನು ತೆರವುಗೊಳಿಸುವಂತೆ ಸರ್ಕಾರದಿಂದ ಅನುಮೋದನೆ ದೊರೆತು ಹಲವು ತಿಂಗಳೂ ಕಳೆದರೂ ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡಿಲ್ಲ. ಮೈಸೂರಿನಲ್ಲಿ ನಿತ್ಯವೂ 450 ಟನ್ ಕಸ ಉತ್ಪತ್ತಿಯಾಗುತ್ತಿದೆ. ಇದರಲ್ಲಿ 250 ಟನ್ ಕಸ ನಿತ್ಯ ವಿಲೇವಾರಿಯಾಗುತ್ತಿದೆ. ಇನ್ನುಳಿದ 200 ಟನ್ ಕಸ ಬಾಕಿ ಉಳಿಯುತ್ತಿದೆ. ಈ ಕಸವನ್ನು ವೈಜ್ಞಾನಿಕವಾಗಿ ವಿಲೇವಾರಿ ಮಾಡುವ ಬಗ್ಗೆ ಹಲವು ವರ್ಷಗಳಿಂದ ಪ್ರಯತ್ನ ನಡೆಯುತ್ತಿದೆ. ತ್ಯಾಜ್ಯ ವಿಲೇವಾರಿಗೆ ಸಂಬಂಧಿಸಿದಂತೆ ಈ ಹಿಂದೆ 14 ಕೋಟಿ ರೂ.ಗಳಿಗೆ ಕ್ರಿಯಾಯೋಜನೆ ಸಿದ್ಧಗೊಳಿಸಿ, ಟೆಂಡರ್ ಪ್ರಕ್ರಿಯೆಯನ್ನೂ ಪೂರ್ಣಗೊಳಿಸಲಾಗಿತ್ತು.



ಕಳೆದ 20 ವರ್ಷಗಳಿಂದ ವಿಲೇವಾರಿಯಾಗದೇ ಉಳಿದಿರುವ ಬೆಟ್ಟದಂತಿರುವ ಕಸವನ್ನು ತೆರವುಗೊಳಿಸುವ ಯೋಜನೆಯ ಟೆಂಡರ್ ಪ್ರಕ್ರಿಯೆ ಅಂತಿಮ ರೂಪ ಪಡೆಯುತ್ತಿದೆ. ಇದು 59 ಕೋಟಿ ರೂ.ಗಳ ಟೆಂಡರ್ ಪ್ರಕ್ರಿಯೆ ಆಗಿರುವುದರಿಂದ ಸರ್ಕಾರದ ಮಟ್ಟದಲ್ಲಿ ಪತ್ರ ವ್ಯವಹಾರ ನಡೆದು ಅಂತಿಮ ರೂಪ ಕೊಡಲು ಸಿದ್ಧತೆ ನಡೆಯುತ್ತಿದೆ. – ಅಸಾದ್ ಉರ್ ರೆಹಮಾನ್ ಷರೀಫ್, ಆಯುಕ್ತರು, ಮೈಸೂರು ನಗರ ಪಾಲಿಕೆ

ಸುಯೇಜ್ ಫಾರಂನಲ್ಲಿ ಸಂಗ್ರಹಣೆಯಾಗಿರುವ 7 ಲಕ್ಷ ಟನ್‌ಗೂ ಅಧಿಕ ತ್ಯಾಜ್ಯ ವಿಲೇವಾರಿಗೆ ಹಿಂದಿನ ಬಿಜೆಪಿ ಸರ್ಕಾರದ ಅವಧಿಯಲ್ಲೇ ಎಲ್ಲಾ ಪ್ರಕ್ರಿಯೆ ಮುಗಿದು ಕಸ ವಿಲೇವಾರಿ ಪ್ರಕ್ರಿಯೆ ಆರಂಭವಾಗಬೇಕಿತ್ತು. ಇದಕ್ಕೆ ಕೇಂದ್ರ ಸರ್ಕಾರದಿಂದ 49 ಕೋಟಿ, ರಾಜ್ಯ ಸರ್ಕಾರದಿಂದ 10 ಕೋಟಿ ಅನುದಾನ ದೊರೆತಿದೆ. ಈ ಯೋಜನೆ ಅಂತಿಮ ರೂಪ ಪಡೆಯಲು ಹಿಂದಿನ ವಸತಿ ಸಚಿವ ವಿ.ಸೋಮಣ್ಣ, ಜಿಲ್ಲಾ ಉಸ್ತುವಾರಿ ಸಚಿವ ಎಸ್.ಟಿ.ಸೋಮಶೇಖರ್ ಶ್ರಮವಿದೆ. ಅಲ್ಲದೆ, ಕೇಂದ್ರ ಸರ್ಕಾರದಿಂದ ಅನುದಾನ ಬಿಡುಗಡೆಗೊಳಿಸಲು ಮೈಸೂರು–ಕೊಡಗು ಸಂಸದರಾದ ಪ್ರತಾಪ ಸಿಂಹ ಅವರ ಶ್ರಮದ ಫಲವಾಗಿ, ಕೆ.ಆರ್.ಕ್ಷೇತ್ರದ ಮತದಾರರಿಗೆ ಇನ್ನೈದು ತಿಂಗಳಲ್ಲಿ ಕಸಮುಕ್ತ ಕ್ಷೇತ್ರವಾಗಿಸಲು, ಈ ಕ್ಷೇತ್ರದ ಜನರಿಗೆ ನೆಮ್ಮದಿ ಕಲ್ಪಿಸಲು ಸಾಧ್ಯವಾಗುತ್ತಿರುವುದು ಸಂತೋಷದ ಸಂಗತಿ. –ಟಿ.ಎಸ್.ಶ್ರೀವತ್ಸ, ಶಾಸಕರು, ಕೆ.ಆರ್.ಕ್ಷೇತ್ರ

ಬಾಕಿ ಉಳಿದಿರುವ ತ್ಯಾಜ್ಯವನ್ನು ವೈಜ್ಞಾನಿಕವಾಗಿ ವಿಲೇವಾರಿ ಆಗಬೇಕಿರುವ ಹಿನ್ನೆಲೆಯಲ್ಲಿ 59 ಕೋಟಿ ರೂ.ಗಳ ಪರಿಷ್ಕೃತ ಡಿಪಿಆರ್ ಸಿದ್ಧಪಡಿಸಿ ಅನುಮತಿಗಾಗಿ ರಾಜ್ಯ ಸರ್ಕಾರಕ್ಕೆ ಸಲ್ಲಿಸಲಾಗಿತ್ತು. ಈ ಪ್ರಸ್ತಾವನೆಗೆ ಚುನಾವಣೆ ನೀತಿ ಸಂಹಿತೆ ಜಾರಿಗೂ ಮುನ್ನಾ ಮುಖ್ಯ ಕಾರ್ಯದರ್ಶಿಗಳ ಸಮ್ಮುಖದಲ್ಲಿ ನಡೆದ ಸಭೆಯಲ್ಲಿ ಯೋಜನೆಗೆ ಅನುಮೋದನೆ ದೊರಕಿತ್ತು. ಇದರಿಂದಾಗಿ ಹತ್ತಾರು ವರ್ಷದಿಂದ ಪರಿಸರಕ್ಕೆ ಮಾರಕವಾಗಿರುವ ಈ ಸಮಸ್ಯೆಗೆ ಪರಿಹಾರ ದೊರಕಲಿದೆ ಎಂದು ಪಾಲಿಕೆ ಅಧಿಕಾರಿಗಳು 'ಮೈಸೂರು ಮಿತ್ರ'ನಿಗೆ ತಿಳಿಸಿದರು.

ಟೆಂಡರ್ ಪ್ರಕ್ರಿಯೆ ಹೇಗೆ?: 2 ಕೋಟಿ ರೂ. ವರೆಗಿನ ಟೆಂಡರ್ ಅನ್ನು ಜಿಲ್ಲಾಧಿಕಾರಿಗಳ ಹಂತದಲ್ಲಿ, 5 ಕೋಟಿ ರೂ. ವರೆಗಿನ ಟೆಂಡರ್ ಅನ್ನು ವಿಭಾಗೀಯ ಮಟ್ಟದಲ್ಲಿ ಅನುಮೋದನೆ ಪಡೆಯಬಹುದು. ಆದರೆ, ಈ ಯೋಜನೆ 59 ಕೋಟಿ ರೂ. ಆಗಿರುವುದರಿಂದ ಪಾಲಿಕೆ ಹಂತದಲ್ಲಿ ತಾಂತ್ರಿಕ ಹಾಗೂ ಆರ್ಥಿಕ ಟೆಂಡರ್ ಪ್ರಕ್ರಿಯ ನಡೆಸಿ, ಅದನ್ನು ರಾಜ್ಯ ಸರ್ಕಾರಕ್ಕೆ ಕಳುಹಿಸಿ, ಅನುಮತಿ ಪಡೆಯಬೇಕಾಗುತ್ತದೆ. ಹಾಗಾಗಿ ಕಳೆದ ಏಪ್ರಿಲ್‌ನಲ್ಲೇ ಹಿಂದಿನ ಸರ್ಕಾರ ಅನುಮೋದನೆ ನೀಡಿದರೂ ತದನಂತರ ಚುನಾವಣಾ ನೀತಿ ಸಂಹಿತೆ ಘೋಷಣೆಯಾಗಿದ್ದರಿಂದ ಈ ಯೋಜನೆಗೆ ಬ್ರೇಕ್ ಬಿದ್ದಿತ್ತು.

ಹೊಸ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಆರಂಭದಲ್ಲಿಯೇ, ಬಿಜೆಪಿ ಸರ್ಕಾರದ ಕಡೇ ಮೂರು ತಿಂಗಳ ತೀರ್ಮಾನಗಳ ತಡೆ ಹಿಡಿಯುವಂತೆ ಸೂಚನೆ ನೀಡಿತು. ಇದೀಗ ಮತ್ತೆ ಸ್ಥಳೀಯರಿಂದ ಒತ್ತಾಯ ಹೆಚ್ಚಾಗಿರುವುದರಿಂದ ಟೆಂಡರ್ ಪ್ರಕ್ರಿಯೆ ಆರಂಭವಾಗಿದೆ. ಎರಡು ದಿನಗಳ ಹಿಂದೆ ತಾಂತ್ರಿಕ ಟೆಂಡರ್ ಪೂರ್ಣಗೊಳಿಸಲಾಗಿದೆ. ಶೀಘ್ರವೇ ಆರ್ಥಿಕ ಟೆಂಡರ್ ಪ್ರಕ್ರಿಯೆಯನ್ನೂ ಪೂರ್ಣಗೊಳಿಸಿ ಸರಕಾರಕ್ಕೆ ಕಳುಹಿಸುವ ಪ್ರಕ್ರಿಯೆ ನಡೆಯುತ್ತಿದೆ ಎಂದು ಪಾಲಿಕೆ ಆಯುಕ್ತ ಅಸಾದ್ ಉರ್ ರೆಹಮಾನ್ ಷರೀಫ್ 'ಮೈಸೂರು ಮಿತ್ರ'ನಿಗೆ ತಿಳಿಸಿದರು.

ತ್ಯಾಜ್ಯ ವಿಗಂಡನೆ ಹೇಗೆ: ಈ ಯೋಜನೆಯಂತೆ 7 ಲಕ್ಷ ಮೆಟ್ರಿಕ್ ಟನ್ ಕಸದಲ್ಲಿರುವ ಗೊಬ್ಬರ, ಮಣ್ಣು, ಲೋಹ, ಪ್ಲಾಸ್ಟಿಕ್ ಅನ್ನು ಸಂಪೂರ್ಣವಾಗಿ ವಿಂಗಡಣೆ ಮಾಡಲಾಗುತ್ತದೆ. ನಂತರ ಉಪಯುಕ್ತವಾದ ಮರುಬಳಕೆ ವಸ್ತುಗಳನ್ನು ಉಪಯೋಗಿಸಲಾಗುವುದು. ಆದರೆ, ಈ ಕಸದ ರಾಶಿಯಲ್ಲಿ ಹೆಚ್ಚಾಗಿ ಪ್ಲಾಸ್ಟಿಕ್ ತ್ಯಾಜ್ಯ ಸೇರಿದೆ. ಇದನ್ನು ಸಿಮೆಂಟ್ ತಯಾರಿಕೆ ಕಾರ್ಖಾನೆಗೆ ಇಂಧನವಾಗಿ ಬಳಕೆ ಮಾಡಲು ನೀಡಲಾಗುತ್ತಿದೆ. ಈ ಮೂಲಕ ಕಸದ ರಾಶಿ ತೆರವುಗೊಳಿಸಲಾಗುತ್ತದೆ. ಆದರೆ, ಸುತ್ತಲು 300ರಿಂದ 400 ಕಿ.ಮೀ ವ್ಯಾಪ್ತಿಯಲ್ಲಿ ಸಿಮೆಂಟ್ ತಯಾರಿಕೆ ಕಾರ್ಖಾನೆಗಳಿಲ್ಲ. ಹೀಗಾಗಿ ಕಲ್ಯಾಣ ಕರ್ನಾಟಕ ಭಾಗದ ರಾಯಚೂರು, ಕಲಬುರಗಿವರೆಗೆ ಪ್ಲಾಸ್ಟಿಕ್ ಸಾಗಿಸಲು ಚಿಂತಿಸಲಾಗುತ್ತಿದೆ.

ಮೈಮುಲ್ ಬೆಳವಣಿಗೆಗೆ ರೈತರಷ್ಟೇ ಮಾರಾಟಗಾರರು ಮುಖ್ಯ

ಮೈಮುಲ್ ನಿರ್ದೇಶಕ ಆರ್.ಚೆಲುವರಾಜು ಅಭಿಪ್ರಾಯ



ತಿ.ನರಸೀಪುರ, ಡಿ.11– ಮೈಮುಲ್ ಬೆಳವಣಿಗೆಗೆ ಹಾಲು ಪೂರೈಕೆ ಮಾಡುವ ರೈತರಷ್ಟೇ ಮಾರಾಟಗಾರರೂ ಮುಖ್ಯ ಎಂದು ಮೈಮುಲ್ ನಿರ್ದೇಶಕ ಆರ್.ಚೆಲುವರಾಜು ತಿಳಿಸಿದರು.

ಪಟ್ಟಣದ ವಿವೇಕಾನಂದನಗರದ ವೀರಶೈವ ವಿದ್ಯಾರ್ಥಿ ನಿಲಯದಲ್ಲಿ ಸೋಮವಾರ ಮೈಮುಲ್ ವತಿಯಿಂದ ಆಯೋಜಿಸಿದ್ದ ತಾಲೂಕು ಮಟ್ಟದ ಹಾಲು ಮಾರಾಟಗಾರರ ಸಮಾಲೋಚನಾ ಸಭೆಯಲ್ಲಿ ಮಾತನಾಡಿದ ಅವರು, ಮೈಮುಲ್ ಇಂದು ಬೃಹದಾಕಾರವಾಗಿ ಬೆಳೆದಿದೆ ಎಂದರೆ ಅದಕ್ಕೆ ಹಾಲು ಸರಬರಾಜು ಮಾಡುವ ರೈತ, ಮಾರುಕಟ್ಟೆಯಲ್ಲಿ ಹಾಲು ಮಾರಾಟ ಮಾಡುವ ಮಾರಾಟಗಾರರು ಕಾರಣ. ಹಾಗೆಯೇ ಮಾರಾಟಗಾರರು ಹಾಗೂ ಹಾಲು ಉತ್ಪಾದಕರಿಗೆ ಎದುರಾಗುವ ಸಮಸ್ಯೆಗಳನ್ನು ಬಗೆಹರಿಸಬೇಕಾದ ಜವಾಬ್ದಾರಿ ನಮ್ಮದಾಗಿದೆ. ಹೀಗಾಗಿ ಒಕ್ಕೂಟದ ನಿರ್ದೇಶಕರು ಪ್ರತಿ ಸಭೆಯಲ್ಲಿ ಉತ್ಪಾದಕರು ಹಾಗೂ ಮಾರಾಟಗಾರರ ಪರ ಚರ್ಚೆ ಮಾಡಿ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವ ಪ್ರಾಮಾಣಿಕ ಪ್ರಯತ್ನ ಪಡುತ್ತಿದ್ದೇವೆ ಎಂದರು.

ನಾನು ಒಕ್ಕೂಟದಲ್ಲಿರುವವರೆಗೂ ನಿಮ್ಮ ಹಾಗುಹೋಗುಗಳಿಗೆ ಸ್ಪಂದಿಸಿ ಕೆಲಸ ಮಾಡುತ್ತೇನೆ ಎಂದು ಭರವಸೆ ನೀಡಿದ ಅವರು, ಮಾರಾಟಗಾರರು ನಂದಿನಿ ಹಾಲು ಮತ್ತು ಹಾಲಿನ ಉತ್ಪನ್ನ ಮಾರಾಟದ ಬಗ್ಗೆ ಹೆಚ್ಚು ಗಮನ ಕೊಡಬೇಕು. ನಿಮ್ಮಿಂದಲೇ ಒಕ್ಕೂಟ, ಒಕ್ಕೂಟದಿಂದಲೇ ನೀವು ಎಂಬುದನ್ನು ಮನಸ್ಸಿನಲ್ಲಿ ಮಾಡಿಕೊಂಡು ಕೆಲಸ ಮಾಡಿ ಎಂದು ಮನವಿ ಮಾಡಿದರು.

ಮೈಮುಲ್ ವ್ಯವಸ್ಥಾಪಕ ನಿರ್ದೇಶಕ ಬಿ.ಎನ್.ವಿಜಯಕುಮಾರ್ ಮಾತನಾಡಿ, ನಂದಿನಿ ಹಾಲು ಮತ್ತು ಉತ್ಪನ್ನಗಳು ಇನ್ನಿತರೆ ಬ್ರ್ಯಾಂಡ್ ಹಾಲುಗಳಂತೆ ಕಲಬೆರಕೆಯಿಂದ ಕೂಡಿಲ್ಲ, ಗುಣಮಟ್ಟ ಕಾಯ್ದುಕೊಂಡು ಬಂದಿದ್ದು, ಯಾವುದೇ ರಾಜಿಗೆ ಬಗ್ಗದೆ, ಆರೋಗ್ಯ ಪೂರ್ಣವಾಗಿ ಬೆಳೆದು ಬಂದಿದೆ. ಇಂದು ಮಾರುಕಟ್ಟೆಯಲ್ಲಿ ಇನ್ನಿತರೆ ಪ್ರೈವೇಟ್ ಕೊಡಲು ಹಲವು ಬ್ರ್ಯಾಂಡ್ ಹಾಲುಗಳು ಪ್ರವೇಶಿಸಿವೆ. ಮಾರಾಟಗಾರರು ಪ್ರಸ್ತುತ ಆರೋಗ್ಯ ಪೂರ್ಣವಾದ ನಂದಿನಿ ಹಾಲನ್ನು ಹೆಚ್ಚೆಚ್ಚು ಮಾರಾಟ ಮಾಡಲು ಮಾರ್ಗೋಪಾಯ ಕಂಡು ಹಿಡಿದು ನಂದಿನಿ ಹಾಲನ್ನು ಮೊದಲ ಸ್ಥಾನದಲ್ಲೇ ಇರಿಸುವ ನಿಟ್ಟಿನಲ್ಲಿ ಕಾರ್ಯ ಯೋಜನೆ ರೂಪಿಸಬೇಕೆಂದು ಸಲಹೆ ನೀಡಿದರು.

ಹೆಚ್ಚು ದರ ಪಡೆಯುವಂತಿಲ್ಲ: ಮಾರುಕಟ್ಟೆ ವ್ಯವಸ್ಥಾಪಕ ಜಯಶಂಕರ್ ಮಾತನಾಡಿ, ತಾಲೂಕಿನಾದ್ಯಂತ ಹಾಲಿಗೆ ಎಂಆರ್‌ಪಿ ದರಕ್ಕಿಂತ ಹೆಚ್ಚಿನ ಹಣ ಪಡೆಯಲಾಗುತ್ತಿದೆ ಎಂಬ ದೂರು ಕೇಳಿ ಬಂದಿವೆ. ಈ ಸಂಬಂಧ ಲೋಕ ಅದಾಲತ್‌ನಲ್ಲಿ ದೂರಿನ ಬಗ್ಗೆ ಉತ್ತರಿಸಿದ್ದೇನೆ. ಮಾರಾಟಗಾರರು ಯಾವುದೇ ಕಾರಣಕ್ಕೂ ನಿಗದಿತ ದರಕ್ಕಿಂತ ಹೆಚ್ಚು ಹಣ ಪಡೆಯಬಾರದು ಎಂದು ಸೂಚಿಸಿದರು.

ಮೈಮುಲ್ ಮಾಜಿ ಅಧ್ಯಕ್ಷ ಓಂಪ್ರಕಾಶ್, ಮಾರುಕಟ್ಟೆ ಅಧಿಕಾರಿ ಮನೋಜ್ ಕುಮಾರ್, ಕ್ಷೇತ್ರಾಧಿಕಾರಿ ಹೆಚ್.ಎಂ.ಮನೋಜ್, ಡೈರಿ ಗುರುಮೂರ್ತಿ, ಕೇತಹಳ್ಳಿ ಮಹದೇವಪ್ಪ, ಶಿವಕುಮಾರ್, ಬಾಬು, ಮನೋಜ್, ಸಿದ್ದಪ್ಪ ಮಜುನಾಥ್, ಬನ್ನೂರು ಹಾಗೂ ನರಸೀಪುರ ಹಾಲು ಮಾರಾಟಗಾರರು ಹಾಜರಿದ್ದರು.

ಮಾರಾಟಗಾರರಿಂದ ದೂರುಗಳ ಮಹಾಪೂರ!

ಸಭೆಯಲ್ಲಿದ್ದ ಹಾಲು ಮಾರಾಟಗಾರರು ನಿತ್ಯ ನಂಜನಗೂಡಿನಿಂದ ನಂದಿನಿ ಹಾಲನ್ನು ತರುವ ವಾಹನದಲ್ಲೇ ಜರ್ಸಿ ಹಾಲನ್ನು ತಂದು ಮಾರಾಟ ಮಾಡಲಾಗುತ್ತಿದೆ. ಅಲ್ಲದೇ ಡೈರಿಯಲ್ಲಿ ಕೊಡುವ ದರದಲ್ಲೇ ಹಾಲನ್ನು ನೀಡುತ್ತಿದ್ದು, ಇದರಿಂದ ಮಾರಾಟಗಾರರಿಗೆ ನಷ್ಟ ಉಂಟಾಗಿದ್ದು, ಇದನ್ನು ತಪ್ಪಿಸಬೇಕು ಎಂದು ದೂರಿದರು.

ಹಾಲು ಸರಬರಾಜು ಮಾಡುವ ಸಿಬ್ಬಂದಿ ಕೆಲವೊಮ್ಮೆ ಹಾಲು ಇಳಿಸುವಾಗ ಕಡಿಮೆ ಪ್ರಮಾಣದಲ್ಲಿ ಹಾಲು ಇಳಿಸಿ ಹೋಗುತ್ತಾರೆ. ಕೆಲವು ಫೋನ್ ಮಾಡಿದರೆ ಸಂಪರ್ಕಕ್ಕೆ ಸಿಗಲ್ಲ. ಕೆಲವೊಮ್ಮೆ ಸಿಕ್ಕರೂ ಸ್ಪಂದಿಸುವುದಿಲ್ಲ. ಲೀಕೇಜ್ ಪ್ಯಾಕೆಟ್ ಜಾಸ್ತಿ ಬರುತ್ತಿದೆ. ಹಾಲಿನ ವಾಹನ ಸಮಯದ ಬಗ್ಗೆ ದೂರಿದ ಮಾರಾಟಗಾರರು ಸಮಯ ಹೊಂದಾಣಿಕೆಯಾಗುವಂತೆ ಹಾಲು ಸರಬರಾಜಿಗೆ ಕ್ರಮ ಜರುಗಿಸುವಂತೆ ಮನವಿ ಮಾಡಿದರು.

ಹಾಲು ಮಾರಾಟಗಾರರಿಗೆ ಹೆಚ್ಚು ವಿದ್ಯುತ್ ಬಿಲ್ ಬರುತ್ತಿದ್ದು, ಈ ಬಗ್ಗೆ ಕ್ರಮ ಕೈಗೊಳ್ಳಬೇಕು. ಹಾಲು ಮಾರಾಟ ಮಾಡುವ ಅಧಿಕೃತ ಮಾರಾಟಗಾರರಿಗೆ ಗುರುತಿನ ಕಾರ್ಡ್ ನೀಡಬೇಕು, ಗುಂಪು ವಿಮೆಗೆ ಕ್ರಮ ವಹಿಸಬೇಕು. ಎಷ್ಟೇ ಬೇಡಿಕೆ ಇಟ್ಟರೂ ನಂದಿನಿ ಐಸ್ ಕ್ರೀಮ್ ಪೂರೈಕೆಯಾಗುತ್ತಿಲ್ಲ. ಕೆಲವೆಡೆ ಉತ್ಪನ್ನಗಳು ಸಮರ್ಪಕವಾಗಿ ಸರಬರಾಜಾಗುತ್ತಿಲ್ಲ. ಹಾಲಿನ ಬೇಡಿಕೆಗೆ ಹಣ ಜಮೆ ಮಾಡಲು ಆಗುತ್ತಿರುವ ಸಮಸ್ಯೆ ಸರಿಪಡಿಸುವುದು ಸೇರಿದಂತೆ ಮತ್ತಿತರ ದೂರುಗಳನ್ನು ಮಾರಾಟಗಾರರು ಸಭೆಯಲ್ಲಿದ್ದ ಅಧಿಕಾರಿಗಳ ಗಮನಕ್ಕೆ ತಂದರು.

ಮಾರಾಟಗಾರರ ದೂರು ಹಾಗೂ ಬೇಡಿಕೆ ಕ್ರೋಢೀಕರಿಸಿ ಮಾತನಾಡಿದ ವಿಜಯಕುಮಾರ್, ಕೆಲವೊಂದು ಸಮಸ್ಯೆ ಬಗೆಹರಿಸಲು ತಾಂತ್ರಿಕ ಸಮಸ್ಯೆ ಎದುರಾಗಿದೆ. ಕಾಲ ಕ್ರಮೇಣ ಎಲ್ಲಾ ಸಮಸ್ಯೆ ಬಗೆಹರಿಯಲಿದೆ. ಹಣ ಜಮೆ ಮಾಡಲು ಏಜೆಂಟರಿಗೆ ತೊಂದರೆಯಾಗುವುದನ್ನು ತಪ್ಪಿಸಲು ನೂತನ ತಂತ್ರಾಂಶ ಸಿದ್ಧವಾಗುತ್ತಿದ್ದು, ಸುಲಭವಾಗಿ ಮೊಬೈಲ್‌ನಲ್ಲೇ ಹಣ ಕಳುಹಿಸಲು ಕ್ರಮ ವಹಿಸಲಾಗುತ್ತಿದೆ ಎಂದರು.

ವಕೀಲರ ಸಂರಕ್ಷಣಾ ಕಾಯ್ದೆ ಜಾರಿಗೆ ಆಗ್ರಹಿಸಿ ಧರಣಿ



ಹುಣಸೂರು: ವಕೀಲರ ಸಂರಕ್ಷಣಾ ಕಾಯ್ದೆ ಜಾರಿಗೊಳಿಸುವಂತೆ ಕಳೆದ 3 ವರ್ಷಗಳಿಂದ ಹೋರಾಟ ಮಾಡುತ್ತಿದ್ದರೂ ಸರ್ಕಾರ ಗಮನ ಹರಿಸುತ್ತಿಲ್ಲ ಎಂದು ಆರೋಪಿಸಿ ವಕೀಲರು ನಗರದಲ್ಲಿ ಪ್ರತಿಭಟನೆ ನಡೆಸಿದರು. ನ್ಯಾಯಾಲಯದ ಆವರಣದಲ್ಲಿ ಜಮಾಯಿಸಿದ ವಕೀಲರು, ಪ್ರತಿಭಟನೆ ನಡೆಸಿ ಆಕ್ರೋಶ ವ್ಯಕ್ತಪಡಿಸಿದರು.

ವಕೀಲರ ಸಂಘದ ಅಧ್ಯಕ್ಷ ಯೋಗಣ್ಣೇಗೌಡ ಮಾತನಾಡಿ, ಕಳೆದ 3 ತಿಂಗಳ ಹಿಂದೆ ನಡೆದ ವಕೀಲರ ರಾಜ್ಯ ಮಟ್ಟದ ಸಮಾವೇಶದಲ್ಲಿ ಸಿಎಂ ಸಿದ್ದರಾಮಯ್ಯನವರು ನಮ್ಮ ಪಕ್ಷದ 6ನೇ ಭಾಗ್ಯವಾಗಿ ವಕೀಲರ ಸಂರಕ್ಷಣಾ ಕಾಯ್ದೆ ಜಾರಿಗೆ ತರುವುದಾಗಿ ಭರವಸೆ ನೀಡಿದ್ದರು. ಆದರೆ ಇದುವರೆಗೂ ಜಾರಿಗೊಳಿಸಿಲ್ಲ. ಮೊನ್ನೆ ನಡೆದ ಬೆಳಗಾವಿ ಅಧಿವೇಶನದ ವೇಳೆ ರಾಜ್ಯ ಸಮಿತಿ ಮುಖ್ಯಮಂತ್ರಿಗಳನ್ನು ಭೇಟಿ ಮಾಡಿ ಮನವಿ ಸಲ್ಲಿಸಿದ ವೇಳೆ ನಾವು ಕಾಯ್ದೆಯನ್ನು ಜಾರಿಗೊಳಿಸುತ್ತೇವೆ. ಗೃಹ ಮಂತ್ರಿಗಳನ್ನು ಭೇಟಿಯಾಗುವಂತೆ ತಿಳಿಸಿದ್ದರು. ಅದರಂತೆ ನಾವು ಗೃಹಮಂತ್ರಿ ಭೇಟಿಗೆ ಹೋದಾಗ ಅವರ ಭೇಟಿಗೆ ಅವಕಾಶ ಸಿಗಲಿಲ್ಲ. ಹೀಗಾಗಿ ವಕೀಲರ ಸಂರಕ್ಷಣಾ ಕಾಯ್ದೆ ಜಾರಿಗೊಳಿಸುವವರೆಗೂ ರಾಜ್ಯಾದ್ಯಂತ ವಕೀಲರ ಸಂಘ ಅನಿರ್ದಿಷ್ಟಾವಧಿ ಮುಷ್ಕರ ನಡೆಸಲಿದೆ ಎಂದು ಎಚ್ಚರಿಸಿದರು.

ಇತ್ತೀಚೆಗೆ ಕಲ್ಬುರ್ಗಿಯಲ್ಲಿ ವಕೀಲರೊಬ್ಬರ ಹತ್ಯೆಯಾಗಿರುವುದು ಇಡೀ ವಕೀಲರ ಸಮೂಹ ಆತಂಕಪಡುವ ವಿಷಯವಾಗಿದೆ. ಸಾರ್ವಜನಿಕ ಕ್ಷೇತ್ರದಲ್ಲಿ ಕೆಲಸ ಮಾಡುವ ನಮಗೆ ಜೀವನ ಭದ್ರತೆ ಬೇಕಾಗಿದ್ದು, ವಕೀಲರ ಸಂರಕ್ಷಣಾ ಕಾಯ್ದೆ ಜಾರಿಗೊಳಿಸಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆ ವಿಷಯ ತಿಳಿದು ಸ್ಥಳಕ್ಕಾಗಮಿಸಿದ ತಹಸೀಲ್ದಾರ್ ಮಂಜನಾಥ್ ಪ್ರತಿಭಟನಾಕಾರರಿಂದ ಮನವಿ ಸ್ವೀಕರಿಸಿ, ನಿಮ್ಮ ಮನವಿಯನ್ನು ಸರ್ಕಾರಕ್ಕೆ ಕಳುಹಿಸಿಕೊಡಲಾಗುವುದು ಎಂದು ತಿಳಿಸಿದರು.

ಪ್ರತಿಭಟನೆಯಲ್ಲಿ ವಕೀಲರ ಸಂಘದ ಉಪಾಧ್ಯಕ್ಷ ಸುರೇಶ್, ಕಾರ್ಯದರ್ಶಿ ಟಿ.ಶ್ರೀನಿವಾಸ್, ವಕೀಲರಾದ ಎಸ್.ಬಿ.ಮೂರ್ತಿ, ಎಂ.ಅರ್.ಹರೀಶ್, ಚನ್ನಬಸಪ್ಪ, ಸುರೇಶ್ ಕುಮಾರ್, ಪುಟ್ಟರಾಜು, ಮಲ್ಲೇಶ್, ಸೋಮಶೇಖರ್, ಗಣೇಶ್, ರಾಜಶೇಖರಮೂರ್ತಿ, ಪ್ರಕಾಶ್, ಉಷಾ, ಪವಿತ್ರ ಇನ್ನಿತರರಿದ್ದರು.

ಕಡೇ ಕಾರ್ತಿಕ ಸೋಮವಾರ ಪೂಜೆ ಹಿನ್ನೆಲೆ

ಶ್ರೀಕಂಠೇಶ್ವರನ ಸನ್ನಿಧಿಗೆ ಹರಿದು ಬಂದ ಭಕ್ತ ಸಾಗರ



ನಂಜನಗೂಡು, ಡಿ.11– ಕಡೇ ಕಾರ್ತಿಕ ಸೋಮವಾರ ಹಿನ್ನೆಲೆಯಲ್ಲಿ ಪುರಾಣ ಪ್ರಸಿದ್ಧ ದಕ್ಷಿಣ ಕಾಶಿ ಶ್ರೀಕಂಠೇಶ್ವರ ದೇವಾಲಯಕ್ಕೆ ಸಾವಿರಾರು ಭಕ್ತರು ಆಗಮಿಸಿ ವಿಶೇಷ ಪೂಜೆ ಸಲ್ಲಿಸಿ ದೇವರ ದರ್ಶನ ಪಡೆದು ಪುನೀತರಾದರು.

ಭಾನುವಾರ ಸಂಜೆಯಿಂದಲೇ ರಾಜ್ಯದ ವಿವಿಧ ಭಾಗಗಳಿಂದ ಆಗಮಿಸಿದ್ದ ಭಕ್ತರು, ಸೋಮವಾರ ಮುಂಜಾನೆ 4 ಗಂಟೆಯಿಂದಲೇ ಕಪಿಲಾ ನದಿಯಲ್ಲಿ ಮಿಂದು ಸರತಿ ಸಾಲಿನಲ್ಲಿ ನಿಂತು ದೇವರ ದರ್ಶನ ಪಡೆದು ಪುನೀತರಾದರು. ಅಲ್ಲದೆ ತುಲಾ ಭಾರ ಸೇವೆ, ಉರುಳುಸೇವೆ, ಈಡುಗಾಯಿ ಸೇವೆ, ಧೂಪದ ಸೇವೆ, ದೇವಿಗೆ ಕುಂಕುಮಾರ್ಚನೆ, ಶ್ರೀಕಂಠೇಶ್ವರಸ್ವಾಮಿಗೆ ಬೆಳ್ಳಿ ಅಂಗಾಂಗಳ ಹರಕೆಯನ್ನು ಹುಂಡಿಗೆ ಹಾಕಿ ಶ್ರದ್ಧಾಭಕ್ತಿಯಿಂದ ಸೇವೆ ಸಲ್ಲಿಸಿದರು.

ಕಡೇ ಕಾರ್ತಿಕ ಸೋಮವಾರ ಅಂಗವಾಗಿ ಶ್ರೀಕಂಠೇಶ್ವರಸ್ವಾಮಿಗೆ ಚಿನ್ನದ ಕೊಳಗ ತೊಡಿಸಿ, ವಿವಿಧ ಪುಷ್ಪಗಳಿಂದ ಅಲಂಕರಿಸಲಾಗಿತ್ತು. ಅಲ್ಲದೇ ಪಂಚ ತೀರ್ಥಗಳ ಅಭಿಷೇಕ, ಬಿಲ್ವಾರ್ಚನೆ, ಪಂಚಾಮೃತ ಅಭಿಷೇಕ, ಕ್ಷೀರಾಭಿಷೇಕ, ಶಾಲಾನ್ಯ ಅರ್ಪಣೆ, ಕಲ್ಲು–ಸಕ್ಕರೆ, ಪೂಜೆಗಳನ್ನು ಸಾಂಗೋಪವಾಗಿ ನೆರವೇರಿಸಲಾಯಿತು. ನಂತರ ಮಹಾಮಂಗಳಾರತಿ ಮಾಡಿ ಭಕ್ತರ ದರ್ಶನಕ್ಕೆ ಅನುವು ಮಾಡಿಕೊಡಲಾಯಿತು. ದಾಸೋಹ ಭವನದಲ್ಲಿ ಭಕ್ತರಿಗೆ ವಿಶೇಷವಾಗಿ ಅನ್ನ, ಸಾಂಬಾರ್, ಪಾಯಸ, ಪಲ್ಯದ ಭೋಜನದ ವ್ಯವಸ್ಥೆ ಮಾಡಲಾಗಿತ್ತು.

ಪ್ರಸನ್ನ ನಂಜುಂಡೇಶ್ವರ ಸನ್ನಿಧಿಯಲ್ಲೂ ವಿಶೇಷ ಪೂಜೆ: ತಾಲೂಕಿನ ಚಿಕ್ಕಯ್ಯನಛತ್ರ ಗ್ರಾಮದ ಶ್ರೀಪ್ರಸನ್ನ ನಂಜುಂಡೇಶ್ವರ ದೇವಾಲಯದಲ್ಲಿ ಕಡೇ ಕಾರ್ತಿಕ ಸೋಮವಾರದ ಪ್ರಯುಕ್ತ ವಿಶೇಷ ಪೂಜೆ ನಡೆಯಿತು. ಈ ವೇಳೆ ಸಾವಿರಾರು ಭಕ್ತರು ದೇವಾಲಯಕ್ಕೆ ಆಗಮಿಸಿ ವಿಶೇಷ ಪೂಜೆ ಸಲ್ಲಿಸಿ ದೇವರ ದರ್ಶನ ಪಡೆದು ಪುನೀತರಾದರು. ಇದೇ ವೇಳೆ ಮುಖ್ಯ ಅರ್ಚಕ ವೆಂಕಟೇಶ್ ನೇತೃತ್ವದಲ್ಲಿ ಶ್ರೀ ಪ್ರಸನ್ನ ನಂಜುಂಡೇಶ್ವರ ಹಾಗೂ ಪಾರ್ವತಮ್ಮ ಉತ್ಸವ ನೆರವೇರಿಸಲಾಯಿತು. ದೇವಾಲಯಕ್ಕೆ ಆಗಮಿಸಿದ್ದ ಭಕ್ತರಿಗೆ ಅನ್ನಸಂತರ್ಪಣೆ ಏರ್ಪಡಿಸಲಾಗಿತ್ತು.

ಅಪ್ರಾಪ್ತೆಗೆ ಲೈಂಗಿಕ ಕಿರುಕುಳ

ವ್ಯಕ್ತಿ ವಿರುದ್ಧ ಪೋಕ್ಸೊ ಪ್ರಕರಣ ದಾಖಲು

ತಿ.ನರಸೀಪುರ, ಡಿ.11– ಅಪ್ರಾಪ್ತೆಗೆ ಲೈಂಗಿಕ ಕಿರುಕುಳ ನೀಡಿದ ಹಿನ್ನೆಲೆಯಲ್ಲಿ ವ್ಯಕ್ತಿಯೊಬ್ಬರ ವಿರುದ್ಧ ಪಟ್ಟಣದ ಪೊಲೀಸ್ ಠಾಣೆಯಲ್ಲಿ ಪೋಕ್ಸೋ ಪ್ರಕರಣ ದಾಖಲಾಗಿದೆ.



ಪಟ್ಟಣದ ವಿದ್ಯಾನಗರದ ನಿವಾಸಿ, ನ್ಯಾಯಾಲಯದ ನಿವೃತ್ತ ಉದ್ಯೋಗಿ ಜಗದೀಶ್ ಮೂರ್ತಿ (63) ಎಂಬುವರ ವಿರುದ್ಧ ಪ್ರಕರಣ ದಾಖಲಾಗಿದ್ದು, ಆರೋಪಿಯನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ಬಾಲಕಿ ಪಟ್ಟಣದ ಖಾಸಗಿ ಶಾಲೆ ಯೊಂದರಲ್ಲಿ 4ನೇ ತರಗತಿಯಲ್ಲಿ ವ್ಯಾಸಾಂಗ ಮಾಡುತ್ತಿದ್ದ ಬಾಲಕಿಗೆ ಆರೋಪಿ ಜಗದೀಶ್ ಚಾಕೊಲೇಟ್ ಕೊಡಿಸುವ ಆಸೆ ತೋರಿಸಿ ಮನೆಯ ಮೇಲಿನ ಟೆರೆಸ್‌ಗೆ ಕರೆದೊಯ್ದು ದೌರ್ಜನ್ಯ ಎಸಗಿದ್ದಾನೆ ಎಂದು ಬಾಲಕಿ ತಂದೆ ಪಟ್ಟಣ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ.

ಈ ಸಂಬಂಧ ಪೋಕ್ಸೊ ಕಾಯ್ದೆಯಡಿ ಕೇಸು ದಾಖಲಿಸಿಕೊಂಡಿರುವ ಪಟ್ಟಣ ಠಾಣೆ ಎಸ್‌ಐ ಪ್ರಭಾಕರ್ ಆರೋಪಿ ಬಂಧಿಸಿ ವಿಚಾರಣೆಗೊಳಪಡಿಸಿದ್ದಾರೆ.

ವಿಜೃಂಭಣೆಯ ಬೇಲದಕುಪ್ಪೆ ಮಹದೇಶ್ವರ ಜಾತ್ರೆ



ಸರಗೂರು, ಡಿ.11– ತಾಲೂಕಿನ ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದಲ್ಲಿರುವ ಬೇಲದಕುಪ್ಪೆ ಮಹದೇಶ್ವರ ದೇವಸ್ಥಾನದಲ್ಲಿ ಕಡೇ ಕಾರ್ತಿಕ ಅಂಗವಾಗಿ ಜಾತ್ರಾ ಮಹೋತ್ಸವ ಸಾವಿರಾರು ಭಕ್ತರ ಸಮ್ಮುಖದಲ್ಲಿ ವಿಜೃಂಭಣೆಯಿಂದ ನೆರವೇರಿತು.

ಜಾತ್ರೆ ಅಂಗವಾಗಿ ದೇವಾಲಯವನ್ನು ತಳಿರು ತೋರಣಗಳಿಂದ ಅಲಂಕರಿಸಲಾಗಿತ್ತು. ಜಾತ್ರೆ ಹಿನ್ನೆಲೆಯಲ್ಲಿ ಮಹದೇಶ್ವರ ಕೊಳಗ, ಚನ್ನಗುಂಡಿ ಗ್ರಾಮದ ರುದ್ರಾಕ್ಷಿ ಮಂಟಪ ಹುಲಿವಾಹನ, ಮುತ್ತಿಗೆಹುಂಡಿ ಗ್ರಾಮದ ನಂದಿಧ್ವಜ, ಎತ್ತಿಗೆ ಗ್ರಾಮದ ಹುಲಿವಾಹನ, ಅರಳಹಳ್ಳಿ, ನಾಗಣಪುರ ಗ್ರಾಮದ ಹುಲಿವಾಹನ ಬಿರುದು ಸಮೇತ ಮೆರವಣಿಗೆಯೊಂದಿಗೆ ದೇವಾಲಯದ ಬಳಿ ತರಲಾಯಿತು.

ಇದೇ ವೇಳೆ ದೇವಾಲಯದ ಬಳಿಯ ಕೆರೆಯಿಂದ ಹಾಲರವಿ ಸೇವೆ ನಡೆಸಲಾಯಿತು. ಬಳಿಕ ಮಹದೇಶ್ವರಸ್ವಾಮಿಯ ಬಸವಗಳಿಂದ ಕೊಂಡೋತ್ಸವ ಹಾಯಿಸಲಾಯಿತು. ಬಳಿಕ ಭಕ್ತರು ಸಹ ಕೊಂಡ ಹಾಯ್ದರು. ದೇವಾಲಯದಲ್ಲಿ ಮುಂಜಾನೆಯಿಂದಲೇ ದೇವರಿಗೆ ರುದ್ರಾಭಿಷೇಕ ಸೇರಿದಂತೆ ವಿಶೇಷ ಪೂಜಾ ಕೈಂಕರ್ಯಗಳನ್ನು ನೆರವೇರಿಸಿ, ಬಗೆ ಬಗೆಯ ಹೂಗಳಿಂದ ಸ್ವಾಮಿಯವರನ್ನು ಅಲಂಕರಿಸಲಾಗಿತ್ತು. ಭಕ್ತರು ಸರತಿ ಸಾಲಿನಲ್ಲಿ ನಿಂತು ದೇವರ ದರ್ಶನ ಪಡೆದರು. ಈ ವೇಳೆ ಧಾರ್ಮಿಕ ದತ್ತಿ ಇಲಾಖೆ ಇಓ ರಘು, ಪಾರುಪತ್ತೇದಾರ ರಾಕೇಶ್‌ಗೌಡ, ಮಹದೇವಸ್ವಾಮಿ, ಅರ್ಚಕರು ಹಾಜರಿದ್ದರು.

ಮುಂಜಾಗ್ರತಾ ಕ್ರಮವಾಗಿ ಡಿವೈಎಸ್ಪಿ ಗೋಪಾಲಕೃಷ್ಣ, ಸಿಪಿಐ ಎಂ.ಲಕ್ಷ್ಮಿಕಾಂತ್, ಎಐ ನಂದೀಶ್ ಕುಮಾರ್ ನೇತೃತ್ವದಲ್ಲಿ 350 ಸಿಬ್ಬಂದಿಯನ್ನು ಬಿಗಿ ಬಂದೋ ಬಸ್ತ್‌ಗೆ ನಿಯೋಜಿಸಲಾಗಿತ್ತು. ಅಲ್ಲದೇ ಆರೋಗ್ಯ ಕೇಂದ್ರ ತೆರೆಯಲಾಗಿತ್ತು. ಭಕ್ತರ ಅನುಕೂಲಕ್ಕಾಗಿ 50 ಸಾರಿಗೆ ಬಸ್ ಬಿಡಲಾಗಿತ್ತು.

ಇದೇ ವೇಳೆ ಶಾಸಕ ಅನಿಲ್ ಚಿಕ್ಕಮಾದು ಕ್ಷೇತ್ರಕ್ಕೆ ಆಗಮಿಸಿ ದೇವರ ದರ್ಶನ ಪಡೆದರು. ಬಳಿಕ ಮಾತನಾಡಿದ ಅವರು, ಬೇಲದಕುಪ್ಪೆ ಮಹದೇಶ್ವರ ದೇವಸ್ಥಾನದಲ್ಲಿ ಸೋಮವಾರ ಕಾರ್ತಿಕ ಮಾಸದ ಜಾತ್ರಾ ಮಹೋತ್ಸವ ವಿಜೃಂಭಣೆಯಿಂದ ನಡೆದಿರುವುದು ಸಂತಸ ತಂದಿದೆ. ಕ್ಷೇತ್ರದ ಅಭಿವೃದ್ಧಿಗೆ ಮುಂದಿನ ದಿನಗಳಲ್ಲಿ ಶ್ರಮಿಸುತ್ತೇನೆ ಎಂದರು.

ಜೀತಮುಕ್ತ ನೇಪಾಳ ಕುಟುಂಬಕ್ಕೆ ಪುನರ್ವಸತಿಗೆ ಒತ್ತಾಯಿಸಿ ಧರಣಿ



ಹೆಚ್.ಡಿ.ಕೋಟೆ, ಡಿ.11– ಜೀತದಿಂದ ಮುಕ್ತಗೊಂಡ ನೇಪಾಳ ಮೂಲದ ಕುಟುಂಬಕ್ಕೆ ಪುನರ್ವಸತಿ ಕಲ್ಪಿಸಬೇಕು ಎಂದು ಒತ್ತಾಯಿಸಿ ಸೋಮವಾರ ಕರ್ನಾಟಕ ಜೀತದಾಳು ಮತ್ತು ಕೃಷಿ ಕಾರ್ಮಿಕರ ಒಕ್ಕೂಟ ವತಿಯಿಂದ ಪ್ರತಿಭಟನೆ ನಡೆಸಲಾಯಿತು.

ಪಟ್ಟಣದ ತಾಲೂಕು ಕಚೇರಿ ಆವರಣದಲ್ಲಿ ಜಮಾಯಿಸಿದ ಪ್ರತಿಭಟನಾಕಾರರು, ತಾಲೂಕಿನ ಕೈಲಾಸಪುರ ಗ್ರಾಮದ ವೀರೇಗೌಡರ ಮನೆಯಲ್ಲಿ ಕಳೆದ ಒಂದು ವರ್ಷದಿಂದ ಜೀತ ಮಾಡಿಕೊಂಡು ಬಂದಿದ್ದ ನೇಪಾಳ ಮೂಲದ ನಿರ್ಮಲಾ ಮತ್ತು ಕುಟುಂಬ ದೈಹಿಕ ಹಾಗೂ ಮಾನಸಿಕ ದೌರ್ಜನ್ಯಕ್ಕೆ ಒಳಗಾಗಿದೆ. ಹೀಗಾಗಿ ಜಿಲ್ಲಾಧಿಕಾರಿ ಉಪ ವಿಭಾಗಾಧಿಕಾರಿಗೆ ಸೂಕ್ತ ನಿರ್ದೇಶನ ನೀಡಿ ಅವರಿಗೆ ಜೀತ ವಿಮುಕ್ತ ಪತ್ರ ನೀಡುವುದರೊಂದಿಗೆ ಪುನರ್ವಸತಿ ಕಲ್ಪಿಸಬೇಕು ಎಂದು ಆಗ್ರಹಿಸಿದರು.

ಜೀವಿಕ ಸಂಘಟನೆ ಜಿಲ್ಲಾ ಸಂಚಾಲಕ ಬಸವರಾಜು ಮಾತನಾಡಿ, ಮಹಿಳೆ ನೇಪಾಳ ಮೂಲದವರಾಗಿದ್ದು, ದೇಶದ ಪೌರತ್ವ ಹೊಂದಿರದ ಹಿನ್ನೆಲೆಯಲ್ಲಿ ಕಾನೂನಿನ ಪ್ರಕಾರ ಅವರಿಗೆ ಜೀತ ಮುಕ್ತ ಪತ್ರ ನೀಡುವಲ್ಲಿ ಗೊಂದಲವಿದೆ. ತಜ್ಞರಿಂದ ಕಾನೂನು ಸಲಹೆ ಪಡೆದು ಕ್ರಮ ವಹಿಸುವುದಾಗಿ ಅಧಿಕಾರಿಗಳು ತಿಳಿಸಿದ್ದಾರೆ. ಒಂದು ವೇಳೆ ಆ ಮಹಿಳೆಗೆ ನ್ಯಾಯ ಕೊಡಿಸಲು ಅಧಿಕಾರಿಗಳು ಸಾಧ್ಯವಾಗದಿದ್ದರೇ, ಮುಂದಿನ ದಿನಗಳಲ್ಲಿ ಉಗ್ರ ಹೋರಾಟ ಮಾಡಲಾಗುವುದು ಎಂದು ಎಚ್ಚರಿಸಿದರು.

ಮಹಿಳಾ ಸಂಘಟನೆ ಅಧ್ಯಕ್ಷೆ ಅನುಷಾ ಮಾತನಾಡಿ, ನೇಪಾಳವಾಗಲೀ, ಭಾರತವಾಗಲೀ ಅನ್ಯಾಯಕ್ಕೆ ಒಳಗಾಗಿರುವುದು ಹೆಣ್ಣು ಮಗಳು. ಹೀಗಾಗಿ ಅವಳಿಗೆ ನ್ಯಾಯ ಕೊಡಿಸಬೇಕಾದುದು ನಾಗರಿಕ ಸಮಾಜದ ಕರ್ತವ್ಯ. ಈ ವಿಚಾರದಲ್ಲಿ ದೊಡ್ಡ ಮಟ್ಟದಲ್ಲಿ ತುಯಿಯಾಗಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನಾಕಾರರು ತಹಸೀಲ್ದಾರ್ ಮೂಲಕ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು. ಪ್ರತಿಭಟನೆಯಲ್ಲಿ ಉಮೇಶ್, ಅಕ್ಬರ್ ಪಾಷಾ, ಚಂದ್ರಶೇಖರ ಮೂರ್ತಿ, ಶಿವಣ್ಣ, ನಾಗಮ್ಮ, ದಸಂಸ ಸಣ್ಣಕುಮಾರ್, ದೇವರಾಜ್, ರವಿ, ಕಾಳಪ್ಪಾಜಿ, ಮಣಿಕಂಠ, ನಟರಾಜು, ಕುಮಾರ್, ಶೈಲಾ, ಸುಧಾಮಣಿ ಇದ್ದರು.

ರಾತ್ರೋರಾತ್ರಿ ಅಕ್ರಮ ಮಳಿಗೆ, ಕೌಂಪೌಂಡ್ ನಿರ್ಮಾಣ

ತೆರವಿಗೆ ಮುಂದಾದ ನಗರಸಭೆ ಅಧಿಕಾರಿಗಳು: ಮಾತಿನ ಚಕಮಕಿ



ಹುಣಸೂರು, ಡಿ.11– ನಗರದ ಕಲ್ಪತರು ವೃತ್ತ ಬಳಿಯ ಖಾಲಿ ನಿವೇಶನದಲ್ಲಿ ರಾತ್ರೋರಾತ್ರಿ ಅಕ್ರಮ ಮಳಿಗೆ ಮತ್ತು ಕಾಂಪೌಂಡ್ ನಿರ್ಮಿಸಲಾಗಿದೆ.

ಈ ಹಿಂದೆ ನಿವೇಶನ ಕೋಟ್ಯಾಂತರ ರೂ ಬೆಲೆ ಬಾಳುವ ಜೊತೆಗೆ ಹೆದ್ದಾರಿ ತಿರುವಿನಲ್ಲಿರುವುದರಿಂದ ಸುಗಮ ಸಂಚಾರಕ್ಕೆ ಅಡಚಣೆ ಅಲ್ಲದೇ ಖಾಸಗಿ ವ್ಯಕ್ತಿಗಳು ಅಕ್ರಮವಾಗಿ ಬೇಲಿ ಹಾಕುತ್ತಿದ್ದಾರೆ ಎಂದು ಲೋಕೋಪಯೋಗಿ ಇಲಾಖೆ ನಗರಸಭೆಗೆ ಪತ್ರಬರೆದಿತ್ತು.

ಈ ನಡುವೆ ಜಾಗದ ಮಾಲೀಕರೆಂದು ಹೇಳಿಕೊಳ್ಳುತ್ತಿರುವ ಹೆಬ್ಸೂರ್ ರೆಹಮಾನ್, ಷರೀಫ್ ಕಾಂಪೌಂಡ್ ನಿರ್ಮಿಸಲು ಮುಂದಾಗಿದ್ದರು. ಆಟೋ ಚಾಲಕರು ಹಾಗೂ ಕೆಲ ಸಂಘಟನೆಗಳು ಕಾಂಪೌಂಡ್ ನಿರ್ಮಿಸದಂತೆ ಎಚ್ಚರಿಕೆ ನೀಡಿದ್ದರೂ ಸಹ ಮತ್ತೆ ನಿರ್ಮಿಸಲು ಮುಂದಾಗಿದ್ದರಿಂದ ಈ ಸಂಬಂಧ ವಕೀಲರೊಬ್ಬರು ನ್ಯಾಯಾಲಯದಿಂದ ಖಾಯಂ ನಿರ್ಬಂಧಕಾಜ್ಞೆ (ತಡೆಯಾಜ್ಞೆ) ತಂದು ಹಾಜರುಪಡಿಸಿದ್ದರಿಂದಾಗಿ ಕಾಂಪೌಂಡ್ ಅನ್ನು ಹಿಂದಿನ ಪೌರಾಯುಕ್ತೆ ಮಾನಸ ಹಾಗೂ ಅಧಿಕಾರಿಗಳ ತಂಡ ತೆರವುಗೊಳಿಸಿ ಎಚ್ಚರಿಕೆ ನೀಡಿದ್ದರು. ಆದರೆ ಶನಿವಾರ ಮಧ್ಯರಾತ್ರಿ ಮತ್ತೆ ಆಟೋ ನಿಲ್ದಾಣದ ಬಳಿ ಜಂಕ್‌ಶೀಟ್‌ನ ದೊಡ್ಡ ಮಳಿಗೆ ಮತ್ತು ಕಾಂಪೌಂಡ್ ನಿರ್ಮಿಸಿದ್ದಾರೆ.

ವಿಷಯ ತಿಳಿದ ನಗರಸಭೆ ಪ್ರಭಾರ ಪೌರಾಯುಕ್ತೆ ಶರ್ಮಿಳಾ, ಆರ್‌ಐ ಮಧುಸೂಧನ್ ಸಿಬ್ಬಂದಿಗಳೊಂದಿಗೆ ಸ್ಥಳಕ್ಕಾಗಮಿಸಿ ಅಕ್ರಮ ನಿರ್ಮಾಣ ತೆರವುಗೊಳಿಸಲು ಮುಂದಾಗುತ್ತಿದ್ದಂತೆ ನಮ್ಮ ಜಾಗದಲ್ಲಿ ಮಳಿಗೆ, ಕಾಂಪೌಂಡ್ ನಿರ್ಮಿಸಿಕೊಂಡಿದ್ದೇವೆಂದು ಸುಮಾರು ಗಂಟೆಗೂ ಹೆಚ್ಚು ಕಾಲ ವಾದಿಸಿದರಲ್ಲದೆ ಮಾತಿನ ಚಕಮಕಿಯೂ ನಡೆಯಿತು.

ಬೆರಳೆಣಿಕೆಯಲ್ಲಿದ್ದ ಪೊಲೀಸರಿಂದ ನಿಯಂತ್ರಣ ಕಷ್ಟ ಸಾಧ್ಯವಾಗಿತ್ತು. ಈ ವೇಳೆ ನೂರಾರು ಮಂದಿ ಸ್ಥಳದಲ್ಲಿ ಜಮಾಯಿಸಿ ನೀವು ಯಾರದೋ ಮಾತು ಕೇಳಿ ಬಂದಿದ್ದೀರಾ, ಇಲ್ಲಿ ಹಣಕ್ಕಾಗಿ ಕೆಲವು ವ್ಯಕ್ತಿಗಳು ನಿತ್ಯ ಫೋನ್ ಮಾಡುತ್ತಿದ್ದಾರೆ, ಬೆದರಿಕೆ ಇದೆ. ಈ ನಡುವೆ ನಮ್ಮ ಆಸ್ತಿ ಉಳಿಸಿಕೊಳ್ಳುವುದು ತಪ್ಪಾ ಎಂದು ಕೆಲವರು ಅಧಿಕಾರಿಗಳನ್ನೇ ತರಾಟೆ ತೆಗೆದುಕೊಂಡು ಪಕ್ಕದಲ್ಲಿ ಅಕ್ರಮವಾಗಿ ನಿರ್ಮಿಸಿರುವ ಕಟ್ಟಡಗಳನ್ನು ತೆರವುಗೊಳಿಸಿರೆಂದು ಪಟ್ಟು ಹಿಡಿದರು.

ಈ ವೇಳೆ ಪೌರಾಯುಕ್ತೆ ಶರ್ಮಿಳಾ ನಿಮ್ಮಿಂದಲೇ ಅದು ಶುರುವಾಗಲಿ. ಇಷ್ಟಕ್ಕೆ ನಿಲ್ಲಿಸಿ, ಹಿರಿಯ ಅಧಿಕಾರಿಗಳ ಮಾರ್ಗದರ್ಶನ ಪಡೆದು ಕ್ರಮ ವಹಿಸಲಾಗುವುದೆಂದು ತಿಳಿಸಿದರು. ಕಾಂಪೌಂಡ್ ತೆರವುಗೊಳಿಸುವ ವಿಚಾರ ನಗರದಲ್ಲಿ ಹರಡುತ್ತಿದ್ದಂತೆ ಸ್ಥಳದಲ್ಲಿ ನೂರಾರು ಮಂದಿ ಜಮಾಯಿಸಿದ್ದರಿಂದಾಗಿ ಸಂಚಾರ ಅಸ್ತವ್ಯಸ್ತವಾಗಿತ್ತು. ಹೆಚ್ಚಿನ ಸಂಖ್ಯೆಯಲ್ಲಿ ಜನರು ನೆರೆದಿದ್ದರಿಂದಾಗಿ ನಗರಸಭೆ ಅಧಿಕಾರಿಗಳು ಸಹ ಯಾವುದೇ ಕ್ರಮ ಕೈಗೊಳ್ಳದೆ ವಾಪಸ್ಸಾದರು.

ಪೌರಾಯುಕ್ತೆ ಶರ್ಮಿಳಾ ಮಾತನಾಡಿ, ರಾತ್ರೋರಾತ್ರಿ ಅಕ್ರಮ ಮಳಿಗೆ ಮತ್ತು ಕಾಂಪೌಂಡ್ ನಿರ್ಮಿಸಿರುವ ಬಗ್ಗೆ ಸಾರ್ವಜನಿಕರಿಂದ ದೂರಿನ ಮೇರೆಗೆ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದೇನೆ. ಈ ಸಂಬಂಧ ಮಳಿಗೆ ಹಾಗೂ ಕಾಂಪೌಂಡ್ ನಿರ್ಮಿಸಿರುವ ವ್ಯಕ್ತಿಗೆ ನೋಟಿಸ್ ಜಾರಿ ಮಾಡಲಾಗಿದೆ. ಈ ಸಂಬಂಧ ಜಿಲ್ಲಾಧಿಕಾರಿ ಹಾಗೂ ಹಿರಿಯ ಅಧಿಕಾರಿಗಳ ಗಮನಕ್ಕೆ ತಂದು ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದರು.

ಲೋಕೋಪಯೋಗಿ ಇಲಾಖೆ ಅಧಿಕಾರಿ ಭೋಜರಾಜ್ ಮಾತನಾಡಿ, ಕಲ್ಪತರು ವೃತ್ತದಿಂದ ಕಿರಿಜಾಜಿ ಗ್ರಾಮಕ್ಕೆ ಸಂಪರ್ಕಿಸುವ ಈ ರಸ್ತೆ 2019ರಲ್ಲಿ ಲೋಕೋಪಯೋಗಿ ಇಲಾಖೆಯಿಂದ ನಗರಸಭೆ ವ್ಯಾಪ್ತಿಗೆ ಹಸ್ತಾಂತರಗೊಂಡ ಹಿನ್ನೆಲೆಯಲ್ಲಿ ಈ ಸ್ಥಳ ಲೋಕೋಪಯೋಗಿ ಇಲಾಖೆಗೆ ಸೇರುವುದಿಲ್ಲ. ಈ ಸ್ಥಳವನ್ನು ಉದ್ಯಾನವನ ನಿರ್ಮಾಣಕ್ಕೆ ಮೀಸಲಿಟ್ಟಿದ್ದು, ಇದೀಗ ಖಾಸಗಿ ವ್ಯಕ್ತಿಗೆ ಹೇಗೆ ಖಾತೆಯಾಗಿದೆ ಎಂಬುದು ತಿಳಿಯುತ್ತಿಲ್ಲ ಎಂದರು.

ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನ

ತಿ.ನರಸೀಪುರ ಡಿ.11– ತಾಲೂಕಿನ ನಿಲಸೋಗೆ ಗ್ರಾಮದ ಶ್ರೀಗುರು ಮಲ್ಲೇಶ್ವರ ಮಠದ ಶ್ರೀ ವೀರಕ್ತಸ್ವಾಮಿಗಳ ಸೇವಾ ಟ್ರಸ್ಟ್ ವತಿಯಿಂದ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿಯಲ್ಲಿ ಶೇ.95ಕ್ಕೂ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಮ್ಮಿಕೊಳ್ಳಲಾಗಿದೆ. ಅರ್ಜಿ ಸಲ್ಲಿಸಲು ಡಿ.18 ಕೊನೆ ದಿನ. ಹೆಚ್ಚಿನ ಮಾಹಿತಿಗೆ ಮೊ.9591259156 ಸಂಪರ್ಕಿಸಿ.

ನಾಗಮ್ಮ ನಿಧನ



ಮಲ್ಕುಂಡಿ, ಡಿ.11– ಮಲ್ಕುಂಡಿ ಗ್ರಾಮದ ನಿವಾಸಿ ನಾಗಮ್ಮ(81) ಸೋಮವಾರ ಸಂಜೆ ನಿಧನರಾದರು. ಮೃತರು 9 ಪುತ್ರರು, ಮೂವರು ಪುತ್ರಿಯರು ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಮಂಗಳವಾರ ಸ್ವಗ್ರಾಮದ ಮೃತರ ತೋಟದಲ್ಲಿ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	(ದೂ: 2521923)
ಜಪಾನ್ (ತ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ಬ್ಯಾಡ್ ಮ್ಯಾನರ್ಸ್ (ಕ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಅನಿಮಲ್ (ಹಿಂದಿ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಮರೀಚಿ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಎಕ್ಸ್‌ಟ್ರಾ (ತೆ)	4 ಪ್ರದರ್ಶನಗಳು
ರಾಜಕಮಲ್	
ಕಂಜೂರಿಂಗ್ ಕಣ್ಣಪ್ಪನ್ (ತ)	4 ಪ್ರದರ್ಶನಗಳು
ಸಂಗಂ	
ಮರೀಚಿ (ಕ) –2 ಪ್ರದರ್ಶನಗಳು, ಸಿಂಗಂ (ತ)	2 ಪ್ರದರ್ಶನಗಳು
ಲಿಡೋ	
ಕೈವಾ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ಜಪಾನ್ (ತ)	4 ಪ್ರದರ್ಶನಗಳು
ಪ್ರಭಾ	
ಪಾಲಿಟಿಕ್ಸ್ ಕಲ್ಯಾಣ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್

ದೂ : 4240422/4241800

ಸ್ಕ್ರೀನ್ 1	ಶುಗರ್ ಫ್ಯಾಕ್ಟರಿ (ಕ): ಮ.1.25ಕ್ಕೆ, ಸಂ.4.15ಕ್ಕೆ, ನೆಪೋಲಿಯನ್ (ಇಂ): ರಾ.7ಕ್ಕೆ, ರಾ.10.05ಕ್ಕೆ.
ಸ್ಕ್ರೀನ್ 2	ಬ್ಯಾಡ್ ಮ್ಯಾನರ್ಸ್ (ಕ): ಬೆ.10.45ಕ್ಕೆ, ಸಂ.4.30ಕ್ಕೆ, ರಾ.7.15ಕ್ಕೆ, ಸಪ್ತ ಸಾಗರದಾಚೆ ಎಲ್ಲೋ ಸೈಡ್–ಬಿ (ಕ): ಮ.1.20ಕ್ಕೆ, ಕಾಥಲ್ ದಿ ಕೋರ್ (ಮ): ರಾ.9.55ಕ್ಕೆ.
ಸ್ಕ್ರೀನ್ 3	ಕಾಥಲ್ ದಿ ಕೋರ್ (ಮ): ಬೆ.10.45ಕ್ಕೆ, ಫೆರ್ರಿ (ಹಿಂ): ಮ.1.05ಕ್ಕೆ, ವಿಶ್ (3ಡಿ) (ಇಂ): ಮ.3.20ಕ್ಕೆ, ಸಂ.5.25ಕ್ಕೆ, ಸ್ವಾತಿ ಮುತ್ತಿನ ಮಳೆ ಹನಿಯೇ (ಕ): ರಾ.7.30ಕ್ಕೆ, ಸಪ್ತ ಸಾಗರದಾಚೆ ಎಲ್ಲೋ ಸೈಡ್–ಬಿ (ಕ): ರಾ.9.45ಕ್ಕೆ.
ಸ್ಕ್ರೀನ್ 4	ಸಪ್ತ ಸಾಗರದಾಚೆ ಎಲ್ಲೋ 2 (ಕ): ಬೆ.10.20ಕ್ಕೆ, ಸಂ.4.05ಕ್ಕೆ, ರಾ.7ಕ್ಕೆ, ಬ್ಯಾಡ್ ಮ್ಯಾನರ್ಸ್ (ಕ): ಮ.1.30ಕ್ಕೆ, ರಾ.9.55ಕ್ಕೆ.

ಐನಾಕ್ಸ್ ಮೂವೀಸ್

INOX LIVE THE MOVIE

ದೂ : 2533444 / 2433456

ಸ್ಕ್ರೀನ್ 1	ಅನಿಮಲ್ (ಹಿಂ): ಬೆ.10.15ಕ್ಕೆ, ಮ.2.20ಕ್ಕೆ, ಸಂ.6.25ಕ್ಕೆ, ರಾ.10.30ಕ್ಕೆ.
ಸ್ಕ್ರೀನ್ 2	ಅನಿಮಲ್ (ಹಿಂ): ಬೆ.9.45ಕ್ಕೆ, ಮ.1.50ಕ್ಕೆ, ಸಂ.5.55ಕ್ಕೆ, ರಾ.10.30ಕ್ಕೆ.
ಸ್ಕ್ರೀನ್ 3	ಸ್ಯಾಮ್ ಬಹದ್ದೂರ್ (ಹಿಂ): ಬೆ.9.25ಕ್ಕೆ, ಮ.12.40ಕ್ಕೆ, ರಾ.7.05ಕ್ಕೆ, ರಾ.10.20ಕ್ಕೆ, ಸಪ್ತ ಸಾಗರದಾಚೆ ಎಲ್ಲೋ ಸೈಡ್–ಬಿ (ಕ): ಮ.3.55ಕ್ಕೆ.
ಸ್ಕ್ರೀನ್ 4	ಅನಿಮಲ್ (ಹಿಂ): ಬೆ.8.05ಕ್ಕೆ, ಮ.12.10ಕ್ಕೆ, ಅರ್ಧಂ ಬರ್ಧ ಪ್ರೇಮ ಕಥೆ (ಕ): ಸಂ.4.15ಕ್ಕೆ, ಬ್ಯಾಡ್ ಮ್ಯಾನರ್ಸ್ (ಕ): ರಾ.7.10ಕ್ಕೆ, ಪಾರ್ಕಿಂಗ್ (ತ): ರಾ.10ಕ್ಕೆ.

ಮೈಸೂರು ವಿಷನ್ ಸಿನಿಮಾ

ದೂ : 0821–2973519

ಸ್ಕ್ರೀನ್ 1	ದಿ ವೆಕೆಂಟ್ ಹೌಸ್ (ಕ): ಬೆ.11ಕ್ಕೆ, ಸಂ.4.10ಕ್ಕೆ, ರಾಜಯೋಗ (ಕ): ಮ.1.05ಕ್ಕೆ, ಸಂ.6.15ಕ್ಕೆ, ಟಗರುಪಲ್ಯ (ಕ): ರಾ.9.15ಕ್ಕೆ.
ಸ್ಕ್ರೀನ್ 2	ಸಪ್ತ ಸಾಗರದಾಚೆ ಎಲ್ಲೋ 2 (ಕ): ಬೆ.10ಕ್ಕೆ, ಮ.1.15ಕ್ಕೆ, ರಾ.7.30ಕ್ಕೆ, ಟೈಗರ್ 3 (ಹಿಂ): ಸಂ.4.20ಕ್ಕೆ.
ಸ್ಕ್ರೀನ್ 3	ಟೈಗರ್ 3(ಹಿಂ): ಬೆ.11ಕ್ಕೆ, ಸಪ್ತ ಸಾಗರದಾಚೆ ಎಲ್ಲೋ 2 (ಕ): ಮ.3.45ಕ್ಕೆ, ಸಂ.6.35ಕ್ಕೆ, ರಾ.9.30ಕ್ಕೆ.
ಸ್ಕ್ರೀನ್ 4	ಟಗರುಪಲ್ಯ (ಕ): ಬೆ.10.30ಕ್ಕೆ, ಸಂ.4.10ಕ್ಕೆ, ಸಂ.6.50ಕ್ಕೆ, ಟೈಗರ್ 3 (ಹಿಂ): ಮ.1.05ಕ್ಕೆ, ರಾ.9.30ಕ್ಕೆ.

ಪಿವಿಆರ್ ಸಿನಿಮಾಸ್

ಮೊ.ನಂ: 8951357139

ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ,

ಫೋಸ್ಟ್ (ಕ): ಬೆ.9ಕ್ಕೆ, ಬೆ.10.20ಕ್ಕೆ, ಮ.1.15ಕ್ಕೆ, ಮ.3.20ಕ್ಕೆ, ರಾ.7.35ಕ್ಕೆ, ರಾ.9.45ಕ್ಕೆ, ರಾ.10.30ಕ್ಕೆ, 12th ಫೇಲ್ (ಹಿಂ): ಮ.3.50ಕ್ಕೆ, ಭಗವಂತ್ ಕೇಸರಿ (ತೆ): ರಾ.7.05ಕ್ಕೆ, ಗಣಪತ್: ಎ ಹೀರೋ (ಹಿಂ): ಸಂ.4.10ಕ್ಕೆ, ಕಿಲ್ಲರ್ಸ್ ಆಫ್ ಫ್ಲವರ್ ಮೂನ್ (ಇಂ): ಬೆ.10ಕ್ಕೆ, ಮ.2.05ಕ್ಕೆ, ಸಂ.6.10ಕ್ಕೆ, ರಾ.10.15ಕ್ಕೆ, ಲಿಯೋ (ಕ): ಮ.12.45ಕ್ಕೆ, ಲಿಯೋ (ತ): ಬೆ.11.55ಕ್ಕೆ, ಸಂ.4.10ಕ್ಕೆ, ಸಂ.6.15ಕ್ಕೆ, ರಾ.9.40ಕ್ಕೆ, ರಾ.10.30ಕ್ಕೆ, ಮುಜಿಬ್ ದಿ ಮೇಕಿಂಗ್ ಆಫ್ ಎ ನೇಷನ್ (ಹಿಂ): ರಾ.10ಕ್ಕೆ, ಟಗರುಪಲ್ಯ (ಕ): ಮ.1ಕ್ಕೆ, ರಾ.7ಕ್ಕೆ, ತೇಜಸ್ (ಹಿಂ): ಬೆ.11.05ಕ್ಕೆ, ಮ.1.45ಕ್ಕೆ, ಸಂ.4.25ಕ್ಕೆ, ರಾ.7.05ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಸರ್ಕಾರ ಪತನಗೊಳ್ಳಲಿದೆ ಎಂಬುದು ಬಿಜೆಪಿ–ಜೆಡಿಎಸ್ ಭ್ರಮಾನಿರಸನದ ಹೇಳಿಕೆ

● ಮುಖ್ಯಮಂತ್ರಿ ಸಿದ್ದರಾಮಯ್ಯ ವ್ಯಂಗ್ಯೋಕ್ತಿ ● ಅಧಿಕಾರವಿಲ್ಲದೆ ವಿಲವಿಲ ಒದ್ದಾಡುತ್ತಿವೆ ● ಮೊದಲು ಬಿಜೆಪಿಯವರು ಸದನದಲ್ಲಿ ಸಮನ್ವಯ ಕಾಯ್ದುಕೊಳ್ಳಲಿ



ಬೆಳಗಾವಿ, ಡಿ.11(ಕೆಎಂಶಿ)– ಸರ್ಕಾರ ಪತನಗೊಳ್ಳಲಿದೆ ಎಂಬ ಭ್ರಮಾಲೋಕದಲ್ಲಿ ಬಿಜೆಪಿ–ಜೆಡಿಎಸ್ ತೇಲುತ್ತಿವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದಿಲ್ಲಿ ವ್ಯಂಗ್ಯವಾಡಿದ್ದಾರೆ.

ಬೆಳಗಾವಿಯ ಸುವರ್ಣಸೌಧದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅಧಿಕಾರ ಇಲ್ಲದೆ ಈ ಎರಡು ಪಕ್ಷಗಳು ವಿಲವಿಲ ಒದ್ದಾಡುತ್ತಿವೆ.

ಕುಮಾರಸ್ವಾಮಿ ಜನರ ಮತ್ತು ಶಾಸಕರ ದಿಕ್ಕುತಪ್ಪಿಸಲು ಸರ್ಕಾರ ಬೀಳುತ್ತದೆ, ನಮ್ಮವರೇ ಅದಕ್ಕೆ ಪ್ರೇರೇಪಿಸುತ್ತಾರೆ ಎಂಬ ಹೇಳಿಕೆಗಳನ್ನು ನೀಡುತ್ತಿದ್ದಾರೆ.

ಅಧಿಕಾರ ಇಲ್ಲದಿರುವುದು ಇಂತಹ ಹೇಳಿಕೆಗಳನ್ನು ನೀಡಲು ಪ್ರೇರೇಪಿಸುತ್ತದೆ. ಈ ಕಾರಣದಿಂದಲೇ ನಿನ್ನೆ ಪ್ರಭಾವೀ ಮಂತ್ರಿ ಒಬ್ಬರು 50 ರಿಂದ 60 ಶಾಸಕರನ್ನು ಕರೆದುಕೊಂಡು ಬಿಜೆಪಿಗೆ ಹೋಗುತ್ತಾರೆ ಎಂದಿದ್ದಾರೆ.

ಭ್ರಮನಿರಸನಗೊಂಡವರಿಗೆ ನಾವು ಏನನ್ನೂ ಹೇಳಲು ಸಾಧ್ಯವಿಲ್ಲ, ಬಿಜೆಪಿ ನಾಯಕರಲ್ಲೇ ಸಮನ್ವಯದ ಕೊರತೆ ಇದೆ, ಅದು ಕಲಾಪದ ವೇಳೆಯಲ್ಲೇ ಬಹಿರಂಗಗೊಂಡಿದೆ. ಅವರು ಎರಡು ಬಾರಿಯೂ ಆಪರೇಷನ್ ಕಮಲದ ಮೂಲಕವೇ ಅಧಿಕಾರಕ್ಕೆ ಬಂದವರು, ಈಗ ಮತ್ತೆ ಅಧಿಕಾರ ಹಿಡಿಯುವ ಅದೇ ಕನಸಿನಲ್ಲಿ ಇದ್ದಾರೆ. ಜನರು ಇವರಿಬ್ಬರನ್ನು ತಿರಸ್ಕರಿಸಿದರೂ ಇನ್ನೂ ಬುದ್ಧಿ ಬಂದಿಲ್ಲ. ಮೊದಲು ಅವರು ಸದನದ ಒಳಗೆ ಮತ್ತು ಹೊರಗೆ ನಾಯಕರ ನಡುವೆ ಸಮನ್ವಯ ಕಾಯ್ದುಕೊಳ್ಳಲಿ ಎಂದರು.

ವಿರೋಧ ಪಕ್ಷಗಳು ಯಾವುದೇ ವಿಚಾರ ಎತ್ತಿದರೂ ಉತ್ತರ ಕೊಡಲು ಸರ್ಕಾರ ಸಿದ್ಧವಿದೆ. ಯಾವುದನ್ನೂ ವಿಳಂಬ ಅಥವಾ ಕಾಲಹರಣ ಮಾಡುವುದಿಲ್ಲ. ಇವತ್ತಿನವರೆಗೆ ಬರಗಾಲದ ಚರ್ಚೆಯಾಯಿತು. ಈಗಾಗಲೇ ಪ್ರಸ್ತಾಪವಾಗಿರುವ ಬಗ್ಗೆ ಉತ್ತರ ನೀಡುತ್ತೇವೆ. ಇದೇ 13ರಂದು ವಿಧಾನಸಭೆ ಅಧಿವೇಶನ ಮುಗಿದ ನಂತರ ಬೆಳಗಾವಿಯಲ್ಲಿ ಪಂಚಮಸಾಲಿ ನಾಯಕರು ಹಾಗೂ ಸ್ವಾಮೀಜಿ ಅವರೊಂದಿಗೆ ಮಾತನಾಡುತ್ತೇನೆ. ಸುವರ್ಣ ಸೌಧದಲ್ಲಿರುವ ಸಾವರ್ಕರ್ ಚಿತ್ರ ತೆರವು ವಿಚಾರ ವಿಧಾನ ಸಭಾಧ್ಯಕ್ಷರಿಗೆ ಸಂಬಂಧಿಸಿದ್ದು. ಬೆಳಗಾವಿಯಲ್ಲಿ ಮಹಿಳೆಯೊಬ್ಬರ ಮೇಲೆ ದೌರ್ಜನ್ಯ ಎಸಗಿದ ಘಟನೆಗೆ ಸಂಬಂಧಿಸಿದಂತೆ ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ತೆಗೆದುಕೊಳ್ಳುತ್ತೇವೆ ಎಂದರು.

ಶಾಲಾ ಮಕ್ಕಳಿಗೆ ಗುಣಮಟ್ಟದ ಸಮವಸ್ತ್ರ ಸರಬರಾಜು

● ವಿಧಾನಪರಿಷತ್‌ನಲ್ಲಿ ಸಚಿವ ಮಧು ಬಂಗಾರಪ್ಪ ವಿವರಣೆ
● ಪ್ರತಿ ವಿದ್ಯಾರ್ಥಿಗೆ 397 ರೂ. ವೆಚ್ಚದಲ್ಲಿ ಪೂರೈಕೆ
● 55,43,828 ವಿದ್ಯಾರ್ಥಿಗಳಿಗೆ ಪಠ್ಯಪುಸ್ತಕ; 45,45,749 ವಿದ್ಯಾರ್ಥಿಗಳಿಗೆ ಸಮವಸ್ತ್ರ, ಶೂ–ಸಾಕ್ಸ್ ವಿತರಣೆ





ಬೆಳಗಾವಿ, ಡಿ.11(ಕೆಎಂಶಿ)– ರಾಜ್ಯದ ಶಾಲೆಗಳಿಗೆ ಗುಣಮಟ್ಟದ ಸಮವಸ್ತ್ರ ಸರಬರಾಜು ಮಾಡಲಾಗಿದೆ ಎಂದು ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವ ಎಸ್.ಮಧು ಬಂಗಾರಪ್ಪ ವಿಧಾನಪರಿಷತ್ತಿನಲ್ಲಿಂದು ತಿಳಿಸಿದರು. ಪ್ರಶ್ನೋತ್ತರ ವೇಳೆಯಲ್ಲಿ ಎನ್. ರವಿಕುಮಾರ ಪ್ರಸ್ತಾವಕ್ಕೆ ಉತ್ತರಿಸಿದ ಸಚಿವರು, 2023–24ನೇ ಸಾಲಿಗೆ ಪ್ರತಿ ವಿದ್ಯಾರ್ಥಿಗೆ ಪಠ್ಯ ಪುಸ್ತಕಕ್ಕೆ ಸರಾಸರಿ 397 ರೂ. ವೆಚ್ಚ ಮಾಡಲಾಗಿದೆ ಎಂದರು.

ಶೂ ಮತ್ತು ಸಾಕ್ಸ್‌ಗಳಿಗೆ 1 ರಿಂದ 5ನೇ ತರಗತಿ ವಿದ್ಯಾರ್ಥಿಗಳಿಗೆ ತಲಾ 265 ರೂ., 6 ರಿಂದ 8ನೇ ತರಗತಿ ವಿದ್ಯಾರ್ಥಿಗಳಿಗೆ 295 ರೂ., ಹಾಗೂ 9 ರಿಂದ 10ನೇ ತರಗತಿ ವಿದ್ಯಾರ್ಥಿಗಳಿಗೆ 325 ರೂ.ಗಳನ್ನು ವೆಚ್ಚ ಮಾಡಲಾಗಿದೆ. ಅದೇ ರೀತಿ 1 ರಿಂದ 10ನೇ ತರಗತಿವರೆಗೆ ಗಂಡು ಮಕ್ಕಳು ಮತ್ತು ಹೆಣ್ಣು ಮಕ್ಕಳಿಗೆ ತಲಾವಾರು ವೆಚ್ಚ ಮಾಡಲಾಗಿದೆ ಎಂದು ಮಾಹಿತಿ ನೀಡಿದರು. 2023–24ನೇ ಸಾಲಿಗೆ ರಾಜ್ಯದ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ 55,43,828 ವಿದ್ಯಾರ್ಥಿಗಳಿಗೆ ವಿದ್ಯಾವಿಕಾಸ ಯೋಜನೆಯಡಿಯಲ್ಲಿ ಉಚಿತವಾಗಿ ಪಠ್ಯಪುಸ್ತಕಗಳು ಹಾಗೂ 45,45,749 ವಿದ್ಯಾರ್ಥಿಗಳಿಗೆ ಸಮವಸ್ತ್ರ ಹಾಗೂ ಶೂ ಮತ್ತು ಸಾಕ್ಸ್‌ಗಳನ್ನು ವಿತರಿಸಲಾಗಿದೆ.

2023–24ನೇ ಸಾಲಿನಲ್ಲಿ ವಿದ್ಯಾವಿಕಾಸ ಯೋಜನೆಯಡಿಯಲ್ಲಿ 55,43,828 ಸರ್ಕಾರಿ ಶಾಲಾ ವಿದ್ಯಾರ್ಥಿಗಳಿಗೆ 4,47,17,051 ಪಠ್ಯಪುಸ್ತಕಗಳನ್ನು ಜನವರಿ 2023ರಿಂದ ಮಾರ್ಚ್ 2023ರವರೆಗೆ ಸರಬರಾಜು ಮಾಡಲಾಗಿದ್ದು ವಿದ್ಯಾರ್ಥಿಗಳಿಗೆ ಶಾಲೆಯ ಪ್ರಾರಂಭದ ದಿನದಂದು ವಿತರಿಸಲಾಗಿದೆ.

ಒಟ್ಟು 45,45,749 ವಿದ್ಯಾರ್ಥಿಗಳಿಗೆ ತಲಾ ಎರಡು ಜೊತೆ ಸಮವಸ್ತ್ರ ಒದಗಿಸಲಾಗಿದ್ದು ಮೊದಲ ಜೊತೆ ಸಮವಸ್ತ್ರಗಳನ್ನು ಮಾರ್ಚ್ 2023 ರಿಂದ ಜೂನ್ 2023ರವರೆಗೆ ಹಾಗೂ ಎರಡನೇ ಜೊತೆ ಸಮವಸ್ತ್ರಗಳನ್ನು ಜೂನ್ 2023ರಿಂದ ಸೆಪ್ಟೆಂಬರ್ 2023ರ ವರೆಗೆ ವಿತರಣೆ ಮಾಡಲಾಗಿದೆ.

ಶೂ ಮತ್ತು ಸಾಕ್ಸ್ ಖರೀದಿ ಮಾಡಲು ಶಾಲಾ ಅಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿಗಳಿಗೆ ಜೂನ್ 2023ರಲ್ಲಿ ಅನುದಾನ ಬಿಡುಗಡೆ ಮಾಡಲಾಗಿದೆ ಎಂದರು.

ಮಧ್ಯಪ್ರದೇಶದಲ್ಲಿ ಶಿವರಾಜ್‌ಸಿಂಗ್ ಚೌಹಾಣ್ ಯುಗ ಅಂತ್ಯ

ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ



ಭೋಪಾಲ್: ಮಧ್ಯ ಪ್ರದೇಶದ ಮುಖ್ಯಮಂತ್ರಿ ಸ್ಥಾನಕ್ಕೆ ಶಿವರಾಜ್ ಸಿಂಗ್ ಚೌಹಾಣ್ ಸೋಮವಾರ ರಾಜೀನಾಮೆ ಸಲ್ಲಿಸಿದ್ದಾರೆ. ಡಾ. ಮೋಹನ್ ಯಾದವ್ ಬಿಜೆಪಿ ಶಾಸಕಾಂಗ ಪಕ್ಷದ ನಾಯಕನಾಗಿ ಆಯ್ಕೆಯಾದ ನಂತರ ರಾಜಭವನಕ್ಕೆ ಭೇಟಿ ನೀಡಿದ ಚೌಹಾಣ್, ರಾಜ್ಯಪಾಲ ಮಂಗೂಭಾಯಿ ಪಟೇಲ್ ಅವರಿಗೆ ರಾಜೀನಾಮೆ ಪತ್ರ ಸಲ್ಲಿಸಿದರು.

ಒಬಿಸಿ ನಾಯಕ ಮತ್ತು ಮೂರು ಬಾರಿ ಶಾಸಕರಾಗಿರುವ ಮೋಹನ್ ಯಾದವ್ (58) ಅವರನ್ನು ಮಧ್ಯಪ್ರದೇಶದ ಮುಂದಿನ ಮುಖ್ಯಮಂತ್ರಿಯಾಗಿ ಬಿಜೆಪಿ ಆಯ್ಕೆ ಮಾಡಿದೆ ಎಂದು ಪಕ್ಷದ ರಾಜ್ಯಾಧ್ಯಕ್ಷ ವಿಡಿ ಶರ್ಮಾ ಹೇಳಿದರು. ಹೊಸದಾಗಿ ಚುನಾಯಿತರಾದ ಶಾಸಕರ ಸಭೆ ಮುಗಿದ ತಕ್ಷಣವೇ ರಾಜಭವನ ತಲುಪಿ ರಾಜೀನಾಮೆ ಸಲ್ಲಿಸಿದರು. ಈ ಮೂಲಕ ಮಧ್ಯಪ್ರದೇಶದಲ್ಲಿ ಮೂರು ಬಾರಿ ಸಿಎಂ ಆಗಿ ಆಡಳಿತ ನಡೆಸಿದ್ದ ಚೌಹಾಣ್ ಅವರ ಯುಗ ಅಂತ್ಯವಾಯಿತು.

ಮಧ್ಯಪ್ರದೇಶ ಚುನಾವಣೆಯ ಫಲಿತಾಂಶ ಪ್ರಕಟವಾದ ದಿನದಿಂದಲೂ ಚೌಹಾಣ್ ಅವರ ಭವಿಷ್ಯದ ಸುತ್ತ ಮಾತುಗಳು ಕೇಳಿ ಬರುತ್ತಲೇ ಇತ್ತು. ಫಲಿತಾಂಶ ಪ್ರಕಟವಾಗಿ 9 ದಿನ ಕಳೆದರೂ ಮುಖ್ಯಮಂತ್ರಿ ಆಯ್ಕೆ ಮಾಡಿರಲಿಲ್ಲ. ಕೊನೆಗೆ ಕೇಂದ್ರ ವೀಕ್ಷಕರು ಈ ವಿಷಯದ ಕುರಿತು ಸಭೆ ನಡೆಸುವ ಮೂಲಕ ಸಸ್ಪೆನ್ಸ್ ಅನ್ನು ಹಾಗೆಯೇ ಮುಂದುವರೆಸಿದರು. ಈ ಮಧ್ಯೆ ಶಿವರಾಜ್ ಸಿಂಗ್ ಚೌಹಾಣ್ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಮಾಡಿದ 'ರಾಮ್ ರಾಮ್' ಟ್ವೀಟ್ ಕೂಡಾ ವಿದಾಯದ ಪೋಸ್ಟ್ ರೀತಿಯ ಅನುಮಾನ ಮೂಡಿಸಿತ್ತು. ಈ ಹಿಂದೆ ಅಥವಾ ಈಗಲೂ ಮುಖ್ಯ ಮಂತ್ರಿ ಹುದ್ದೆಗೆ ತಾನು ಎಂದಿಗೂ ಸ್ಪರ್ಧಿ ಯಾಗಿರಲಿಲ್ಲ ಎಂದು ಚೌಹಾಣ್ ಈ ಹಿಂದೆ ಸ್ಪಷ್ಟಪಡಿಸಿದ್ದರು. ಪಕ್ಷದ ಕಾರ್ಯಕರ್ತನಾಗಿ ಬಿಜೆಪಿ ನೀಡಿದ ಯಾವುದೇ ಕೆಲಸವನ್ನು ಸಮರ್ಪಣಾ ಭಾವದಿಂದ ನನ್ನ ಸಾಮರ್ಥ್ಯ ಮತ್ತು ಪ್ರಾಮಾಣಿಕತೆಯಿಂದ ನಿರ್ವಹಿಸಿದ್ದೇನೆ ಎಂದು ಎಕ್ಸ್‌ನಲ್ಲಿ ವಿಡಿಯೋ ಸಂದೇಶದಲ್ಲಿ ಹೇಳಿದ್ದರು. ಈಗ ಮೋಹನ್ ಯಾದವ್ ನೂತನ ಮುಖ್ಯಮಂತ್ರಿಯಾಗಿ ಆಯ್ಕೆಯಾಗುವುದರೊಂದಿಗೆ ಎಲ್ಲಾ ಊಹಾಪೋಹಗಳಿಗೆ ತೆರೆ ಬಿದಿದ್ದು, ಶಿವರಾಜ್ ಸಿಂಗ್ ಚೌಹಾಣ್ ಯುಗ ಅಂತ್ಯವಾಗಿದೆ.

ಪೆಟ್ರೋಲ್, ಡೀಸೆಲ್ ಬೆಲೆ ಶೀಘ್ರದಲ್ಲೆ ಕಡಿತ



ನವದೆಹಲಿ, ಡಿ.11– ಪೆಟ್ರೋಲ್ ಹಾಗೂ ಡೀಸೆಲ್ ಬೆಲೆ ಏರಿಕೆಯಿಂದ ತೀವ್ರ ಟೀಕೆಗೊಳಗಾಗಿದ್ದ ಮೋದಿ ಸರ್ಕಾರ ಇದೀಗ ಜನಸಾಮಾನ್ಯರಿಗೆ ಶುಭ ಸುದ್ದಿ ನೀಡಲು ಸಜ್ಜಾಗಿದೆ. ಶೀಘ್ರದಲ್ಲೇ ಪೆಟ್ರೋಲ್ ಹಾಗೂ ಡೀಸೆಲ್ ಬೆಲೆ ಇಳಿಕೆಯಾಗಲಿದೆ. ಆಯಿಲ್ ಮಾರ್ಕೆಟಿಂಗ್ ಕಂಪನಿ(OMC) ಕೇಂದ್ರ ಸರ್ಕಾರದ ಜೊತೆ ಮಾತುಕತೆ ನಡೆಸಿದೆ. ಲೋಕಸಭಾ ಚುನಾವಣೆಗೂ ಮುನ್ನವೇ ಪೆಟ್ರೋಲ್ ಹಾಗೂ ಡೀಸೆಲ್ ಬೆಲೆ ಇಳಿಕೆ ಮಾತುಕತೆ ಆರಂಭಗೊಂಡಿರುವುದು, ಬಿಜೆಪಿ ಉತ್ಸಾಹ ಇಮ್ಮಡಿಗೊಳಿಸಿದೆ. ಈ ವರ್ಷದಲ್ಲಿ ಪೆಟ್ರೋಲ್ ಹಾಗೂ ಡೀಸೆಲ್ ಬೆಲೆ ಬಹುತೇಕ ಸ್ಥಿರವಾಗಿತ್ತು. ಅಂತಾರಾಷ್ಟ್ರೀಯ ಮಾರುಕಟ್ಟೆಯಲ್ಲಿ ಕಚ್ಚಾ ತೈಲದ ಬೆಲೆಯಲ್ಲಾದ ಏರಿಕೆಯಿಂದ ಕಳೆದ ವರ್ಷ ಪೆಟ್ರೋಲ್ ಲೀಟರ್ ಬೆಲೆ 115 ರೂಪಾಯಿಗೂ ಅಧಿಕವಾಗಿತ್ತು. ಆದರೆ ಕೇಂದ್ರ ಸರ್ಕಾರದ ತೆರಿಗೆ ಕಡಿತಗೊಳಿಸಿ ಬೆಲೆ ಏರಿಕೆ ಬಿಸಿಯನ್ನು ಕೊಂಚ ಮಟ್ಟಿಗೆ ತಣ್ಣಗೆ ಮಾಡಿತ್ತು. ಆದರೂ 100 ರೂಪಾಯಿ ಗಡಿ ದಾಟಿತ್ತು ಇದೀಗ ಪೆಟ್ರೋಲ್ ಹಾಗೂ ಡೀಸೆಲ್ ಬೆಲೆ ಗಣನೀಯವಾಗಿ ಇಳಿಕೆಯಾಗುವ ಸಾಧ್ಯತೆ ಇದೆ ಎಂದು ಮೂಲಗಳು ಹೇಳಿವೆ

ಇಂದು ರಾಜಸ್ಥಾನ ಮುಂದಿನ ಸಿಎಂ ಘೋಷಣೆ

ಜೈಪುರ: ರಾಜಸ್ಥಾನದಲ್ಲಿ ಹೊಸದಾಗಿ ಚುನಾಯಿತರಾದ ಬಿಜೆಪಿ ಶಾಸಕರು ಮಂಗಳವಾರ ಜೈಪುರದಲ್ಲಿ ಸಭೆ ಸೇರಲಿದ್ದು, ರಾಜ್ಯದ ಮುಂದಿನ ಮುಖ್ಯಮಂತ್ರಿಯನ್ನು ಆಯ್ಕೆ ಮಾಡಲಿದ್ದಾರೆ. ಬಿಜೆಪಿ ರಾಜ್ಯ ಕಚೇರಿಯಲ್ಲಿ ನಾಳೆ ಸಂಜೆ 4 ಗಂಟೆಗೆ ಬಿಜೆಪಿ ಶಾಸಕಾಂಗ ಪಕ್ಷದ ಸಭೆ ಕರೆಯಲಾಗಿದೆ.

ನೂತನವಾಗಿ ಆಯ್ಕೆಯಾಗಿರುವ ಬಿಜೆಪಿಯ ಎಲ್ಲಾ ಶಾಸಕರ ನೋಂದಣಿ ಕಾರ್ಯ ಮಧ್ಯಾಹ್ನ 1.30ಕ್ಕೆ ಆರಂಭವಾಗಲಿದೆ. ಹೊಸದಾಗಿ ಆಯ್ಕೆಯಾದ ಎಲ್ಲ ಶಾಸಕರು ಕಡ್ಡಾಯವಾಗಿ ಸಭೆಗೆ ಹಾಜರಾಗುವಂತೆ ತಿಳಿಸಲಾಗಿದೆ ಎಂದು ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಹಾಗೂ ಶಾಸಕ ಭಜನ ಲಾಲ್ ಶರ್ಮಾ ತಿಳಿಸಿದ್ದಾರೆ. ಕೇಂದ್ರ ವೀಕ್ಷಕರಾಗಿ ನೇಮಕಗೊಂಡಿರುವ ರಕ್ಷಣಾ ಸಚಿವ ರಾಜನಾಥ್ ಸಿಂಗ್, ಸರೋಜ್ ಪಾಂಡೆ ಮತ್ತು ವಿನೋದ್ ತಾವ್ಡೆ ಸಭೆಯಲ್ಲಿ ಉಪಸ್ಥಿತರಿರುವರು ಎಂದು ರಾಜಸ್ಥಾನದ ಬಿಜೆಪಿ ನಾಯಕ ಅರುಣ್‌ಸಿಂಗ್ ಸುದ್ದಿಗಾರರಿಗೆ ತಿಳಿಸಿದರು. ದಲಿತ ನಾಯಕರೊಬ್ಬರನ್ನು ಸಿಎಂ ಆಗಿ ಆಯ್ಕೆ ಮಾಡುವ ಸಾಧ್ಯತೆ ಕುರಿತು ಕೇಳಿದ ಪ್ರಶ್ನೆಗೆ ,ನಾಳೆ ಎಲ್ಲವೂ ಬಹಿರಂಗವಾಗಲಿದೆ ಎಂದು ಸಿಂಗ್ ಹೇಳಿದರು.

ಇತ್ತೀಚಿನ ಚುನಾವಣೆಯಲ್ಲಿ ಬಿಜೆಪಿ ಜಯಗಳಿಸಿದ ಮೂರು ರಾಜ್ಯಗಳ ಪೈಕಿ ಒಂದಾದ ರಾಜಸ್ಥಾನದಲ್ಲಿ ಮಾಜಿ ಮುಖ್ಯಮಂತ್ರಿ ವಸುಂಧರಾ ರಾಜೆ ಮತ್ತು ಕೇಂದ್ರ ಸಚಿವರಾದ ಅರ್ಜುನ್ ರಾಮ್ ಮೇಘವಾಲ್, ಗಜೇಂದ್ರ ಸಿಂಗ್ ಶೇಖಾವತ್ ಮತ್ತು ಅಶ್ವಿನಿ ವೈಷ್ಣವ್ ಅವರು ಸಿಎಂ ಸ್ಥಾನದ ಸ್ಪರ್ಧೆಯಲ್ಲಿದ್ದಾರೆ ಎಂದು ಹೇಳಲಾಗಿದೆ.


ನವೆಂಬರ್ 25 ರ ಚುನಾವಣೆಯ ಫಲಿತಾಂಶ ಬಂದ ಒಂಬತ್ತು ದಿನಗಳ ನಂತರ ಬಿಜೆಪಿಯ ಕೇಂದ್ರ ನಾಯಕತ್ವವು ಶಾಸಕಾಂಗ ಪಕ್ಷದ ಸಭೆಯ ಬಗ್ಗೆ ಸೋಮವಾರ ಶಾಸಕರಿಗೆ ಮಾಹಿತಿ ನೀಡಿದೆ.

ಕಾಂಗ್ರೆಸ್ ಸರ್ಕಾರದ ವೈಫಲ್ಯ ಖಂಡಿಸಿ ಬುಧವಾರ ಬೆಳಗಾವಿಯಲ್ಲಿ ಬೃಹತ್ ಪ್ರತಿಭಟನೆ

ಬೆಳಗಾವಿ: ಕಾಂಗ್ರೆಸ್ ಸರ್ಕಾರದ ವೈಫಲ್ಯಗಳನ್ನು ಖಂಡಿಸಿ ಡಿಸೆಂಬರ್ 13 ರಂದು ಬೆಳಗಾವಿಯಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ನೇತೃತ್ವದಲ್ಲಿ ಬೃಹತ್ ಪ್ರತಿಭಟನೆ ನಡೆಸಲಾಗುವುದು ಎಂದು ವಿಪಕ್ಷ ನಾಯಕ ಆರ್. ಅಶೋಕ್ ತಿಳಿಸಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಮರ್ಪಕವಾಗಿ ಬರ ನಿರ್ವಹಣೆ ಮಾಡದಿರುವುದು, ಡಿ.ಕೆ. ಶಿವಕುಮಾರ್ ಅವರ ವಿಷಯದಲ್ಲಿ ತೆಗೆದುಕೊಂಡ ನಿಲುವು ಮತ್ತು ಜಮೀರ್ ಅಹ್ಮದ್ ಅವರ ನಡೆ ಸೇರಿದಂತೆ ಸರ್ಕಾರದ ವೈಫಲ್ಯ ಖಂಡಿಸಿ ಪ್ರತಿಭಟನೆ ನಡೆಸಲಾಗುವುದು ಎಂದರು. ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಮಾತನಾಡಿ, ಜಮೀರ್ ಅಹ್ಮದ್ ಖಾನ್ ಸಚಿವರಾಗಿ ಸ್ಪೀಕರ್ ಸ್ಥಾನದ ಕುರಿತು ದುರಹಂಕಾರದ ಹೇಳಿಕೆ ನೀಡಿದ್ದು ಖಂಡನೀಯ. ಜಮೀರ್ ಅವರ ಹೇಳಿಕೆ ವಿರುದ್ಧ ಮುಖ್ಯಮಂತ್ರಿಯಾಗಲಿ, ಸ್ಪೀಕರ್ ಅವರಾಗಲಿ ಕ್ರಮ ತೆಗೆದುಕೊಳ್ಳಲಿಲ್ಲ. ಸಂವಿಧಾನ ಉಳಿಸಲು ಬಿಜೆಪಿ ಮತ್ತು ಜೆಡಿಎಸ್ ಜೊತೆಯಾಗಿ ಜಮೀರ್ ಅಹ್ಮದ್ ಅವರ ಹೇಳಿಕೆ ಖಂಡಿಸಿ ಸತ್ಯಾಗ್ರಹ ಮಾಡುತ್ತಿದ್ದೇವೆ ಎಂದು ತಿಳಿಸಿದರು.

ಹಿಮೋಫಿಲಿಯಾ ರೋಗ ಶೀಘ್ರ ಪತ್ತೆ ಹಚ್ಚಿ ಸೂಕ್ತ ಚಿಕಿತ್ಸಾ ವ್ಯವಸ್ಥೆ

● ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಭರವಸೆ
● ರೋಗ ಪತ್ತೆ ಹಚ್ಚುವ ಯಂತ್ರೋಪಕರಣ ಒದಗಿಸಲು ಅಗತ್ಯ ಕ್ರಮ





ಬೆಳಗಾವಿ, ಡಿ.11 (ಕೆಎಂಶಿ)–ರಾಜ್ಯದಲ್ಲಿ ಹಿಮೋಫಿಲಿಯಾ ರೋಗವನ್ನು ಶೀಘ್ರದಲ್ಲಿ ಪತ್ತೆ ಹಚ್ಚಿ ಸೂಕ್ತ ಚಿಕಿತ್ಸೆ ನೀಡಲು ಅನುಕೂಲವಾಗುವಂತೆ ಎಲ್ಲಾ ಜಿಲ್ಲಾ ಆಸ್ಪತ್ರೆಗಳಲ್ಲಿ ಹಿಮೋಫಿಲಿಯಾ ಪತ್ತೆ ಹಚ್ಚುವ ಯಂತ್ರೋಪಕರಣಗಳನ್ನು ಒದಗಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ವಿಧಾನ ಪರಿಷತ್‌ನಲ್ಲಿಂದು ತಿಳಿಸಿದರು.

ಎಸ್.ರುದ್ರೇಗೌಡ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಸಚಿವರು, ರಾಜ್ಯದಲ್ಲಿ ರಾಜ್ಯ ರಕ್ತಕೋಶ ಕಾರ್ಯಕ್ರಮದಡಿಯಲ್ಲಿ ಹಿಮೋಫಿಲಿಯಾ ರೋಗಿಗಳಿಗೆ ಉಚಿತ ಚಿಕಿತ್ಸೆಯನ್ನು ಮತ್ತು ಆರೈಕೆಯನ್ನು ಮಾಡಲಾಗುತ್ತಿದೆ. ಹಿಮೋಫಿಲಿಯಾ ರೋಗಿಗಳ ಚಿಕಿತ್ಸೆ ಮತ್ತು ಆರೈಕೆಗಾಗಿ ಎಲ್ಲಾ ಜಿಲ್ಲಾ ಆಸ್ಪತ್ರೆಗಳಲ್ಲಿ ಮತ್ತು ಕೆಲವು ವೈದ್ಯಕೀಯ ಆಸ್ಪತ್ರೆಗಳಲ್ಲಿ ಹಾಗೂ ತಾಲೂಕು ಆಸ್ಪತ್ರೆಗಳಲ್ಲಿ 6 ರಿಂದ 8 ಹಾಸಿಗೆಗಳ ದಿನದ ಆರೈಕೆ ಕೇಂದ್ರಗಳನ್ನು ಸ್ಥಾಪಿಸಲಾಗಿದೆ. ಈ ಆರೈಕೆ ಕೇಂದ್ರಗಳಲ್ಲಿ ಇಬ್ಬರು ಶುಶ್ರೂಷಕಿಯರಿಗೆ ರಕ್ತಸಂಬಂಧಿತ ಖಾಯಿಲೆಗಳ ರೋಗಿಗಳ ಚಿಕಿತ್ಸೆ ಮತ್ತು ಆರೈಕೆಯ ಆರಂಭಿಕ ತರಬೇತಿಯನ್ನು ನೀಡಲಾಗಿದೆ.

ಈ ಕೇಂದ್ರಗಳಲ್ಲಿ ಉಚಿತ ಆಂಟಿ ಹಿಮೋಫಿಲಿಯಾ, ಉಚಿತ ರಕ್ತ ನೀಡುವುದು,ಉಚಿತ ಸಮಾಲೋಚನೆ, ಉಚಿತ ಫಿಜಿಯೊಥೆರಪಿ, ಹೆಚ್ಚಿನ ಚಿಕಿತ್ಸೆ, ಉಚಿತ ರೋಗಪತ್ತೆ ಸೇವೆಗಳನ್ನು ಒದಗಿಸುತ್ತಿದ್ದು, ಒಬ್ಬ ಹಿಮೋಫಿ ಲಿಯಾ ರೋಗಿಗೆ ಪ್ರತಿ ವರ್ಷ ಅಂದಾಜು ರೂ. 3 ರಿಂದ 4 ಲಕ್ಷ ವೆಚ್ಚವಾಗಲಿದೆ ಎಂದರು. ಹಿಮೋಫಿಲಿಯಾ ರೋಗಕ್ಕೆ ಸರ್ಕಾರ ನೀಡು ತ್ತಿರುವ ಸೌಲಭ್ಯಗಳ ಬಗ್ಗೆ ಪ್ರತಿ ವರ್ಷ ಜಿಲ್ಲಾವಾರು ಕಾರ್ಯಾಗಾರಗಳನ್ನು ಹಿಮೋಫಿಲಿಯಾ ಸೊಸೈಟಿ ಸಹಭಾಗಿತ್ವದೊಂದಿಗೆ ಆಯೋಜಿಸಿ ಮಾಹಿತಿಯನ್ನು ನೀಡಲಾಗುತ್ತಿದೆ. ಎಲ್ಲಾ ಹಿಮೋಫಿಲಿಯಾ ರೋಗಿಗಳಿಗೆ IEC ಚಟು ವಟಿಕೆ ಮತ್ತು ತರಬೇತಿ ಮುಖಾಂತರ ಹಿಮೋಫಿ ಲಿಯಾ ಆರೈಕೆ ಮತ್ತು ಚಿಕಿತ್ಸೆ ಬಗ್ಗೆ ಮಾಹಿತಿಯನ್ನು ನೀಡಲಾಗುತ್ತಿದೆ.

ಪ್ರತಿ ವರ್ಷ 17ನೇ ಏಪ್ರಿಲ್‌ರಂದು ವಿಶ್ವ ಹಿಮೋಫಿಲಿಯಾ ದಿನಾಚರಣೆಯನ್ನು ಎಲ್ಲಾ ಜಿಲ್ಲೆಗಳಲ್ಲಿ ಆಚರಿಸಲಾಗುತ್ತಿದ್ದು, ರಾಜ್ಯದಲ್ಲಿ ಈವರೆಗೆ 2706 ಹಿಮೋಫಿಲಿಯಾ ರೋಗಿಗಳನ್ನು ಪತ್ತೆ ಹಚ್ಚಲಾಗಿದೆ. ಇವರಿಗೆ ಆಂಟಿ ಹಿಮೋ ಫಿಲಿಯಾ ಔಷಧಿಗಳನ್ನು ಉಚಿತವಾಗಿ ನೀಡ ಲಾಗುತ್ತಿದ್ದು, ಇದಕ್ಕಾಗಿ ವಾರ್ಷಿಕ 20 ರಿಂದ 30 ಕೋಟಿ ರೂ ವೆಚ್ಚ ಮಾಡಲಾಗುತ್ತಿದೆ ಎಂದರು.

ಆಯುಷ್ ಆಸ್ಪತ್ರೆಗಳಲ್ಲಿ ಒಳರೋಗಿಗಳ ದಾಖಲಾತಿ ವ್ಯವಸ್ಥೆ

ಬೆಳಗಾವಿ, ಡಿ.11(ಕೆಎಂಶಿ)–ಆಯುಷ್ ಆಸ್ಪತ್ರೆಗಳಲ್ಲಿ ಒಳರೋಗಿಗಳ ದಾಖಲಾತಿ ವ್ಯವಸ್ಥೆ ಸೇರಿದಂತೆ ಎಲ್ಲಾ ಸೂಕ್ತ ಮೇಲ್ವಿಚಾರಣೆ ಮಾಡಲಾಗುವುದು ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ವಿಧಾನಪರಿಷತ್‌ನಲ್ಲಿಂದು ತಿಳಿಸಿದ್ದಾರೆ.

ಪ್ರಶ್ನೋತ್ತರ ವೇಳೆಯಲ್ಲಿ ಪಿ.ಎಚ್.ಪೂಜಾರ್ ಪ್ರಸ್ತಾವಕ್ಕೆ ಉತ್ತರಿಸಿದ ಸಚಿವರು, ರಾಜ್ಯದಲ್ಲಿರುವ 80 ಆಸ್ಪತ್ರೆಗಳಲ್ಲಿ ಈಗಾಗಲೇ 55 ಆಯುಷ್ ಆಸ್ಪತ್ರೆಗಳಲ್ಲಿ ಒಳರೋಗಿಗಳ ದಾಖಲಾತಿ ಪ್ರಾರಂಭಿಸಲಾಗಿದ್ದು, ಉಳಿದ 25 ಆಯುಷ್ ಆಸ್ಪತ್ರೆಗಳಲ್ಲಿ ಒಳ ರೋಗಿಗಳ ದಾಖಲಾತಿಯನ್ನು ಪ್ರಾರಂಭಿಸಲು ಕ್ರಮ ವಹಿಸಲಾಗುತ್ತಿದೆ.

ಜಿಲ್ಲಾ ಆಯುಷ್ ಅಧಿಕಾರಿಗಳ ಪ್ರತಿ ಮಾಸಿಕ ಪ್ರಗತಿ ಪರಿಶೀಲನಾ ಸಭೆಯಲ್ಲಿ ಪ್ರತಿ ಆಸ್ಪತ್ರೆಗಳ ಒಳರೋಗಿಗಳ ದಾಖಲಾತಿ ಪ್ರಾರಂಭಿಸಲು ಸೂಚಿಸಲಾಗಿದೆ. ಆಯುಷ್ ಆಸ್ಪತ್ರೆಗಳಲ್ಲಿ ಮೂಲ ಸೌಕರ್ಯ ಕಲ್ಪಿಸುವಲ್ಲಿ ಕೊರತೆ ಇರುವ ಕಡೆ ಗಮನ ಹರಿಸಿ ಔಷಧಿ ಖರೀದಿ, ಸಿಬ್ಬಂದಿ ನೇಮಕ ಮತ್ತು ಆಯುಷ್ ತಜ್ಞ ವೈದ್ಯರ ನೇಮಕಕ್ಕೆ ಒತ್ತು ಕೊಡಲಾಗುತ್ತಿದೆ. ಕೇಂದ್ರ ಸರ್ಕಾರವು ಆಯುಷ್ ಆಸ್ಪತ್ರೆಗಳಿಗೆ ಔಷಧಿ, ಸಲಕರಣೆ ಮತ್ತು ಉಪಕರಣಕ್ಕೆ ನೀಡಿದ ಅನುದಾನದ ಸದ್ಬಳಕೆ ಮಾಡಲಾಗುತ್ತಿದೆ. ಎರಡು ತಿಂಗಳೊಳಗೆ ಅವಶ್ಯವಿರುವ ಸಿಬ್ಬಂದಿ ನೇಮಕಕ್ಕೆ ಕ್ರಮ ವಹಿಸಲಾಗುವುದು ಎಂದು ಸಚಿವರು ತಿಳಿಸಿದರು.